ಸಂಪುಟ: 21, ಸಂಚಿಕೆ: 181, ಪುಟಗಳು: 8, ಬುಧವಾರ, 10 ಏಪ್ರಿಲ್ 2024 RNI NO. KARKAN/2002/08054
epaper: www.sanjemugilu.com



ವೇಣು ಸಾರಥ್ಯದಲ್ಲಿ...

ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ

ಸುಭಾಷಿತ

ಸ್ವಲ್ಪ ಉಳ್ಳವನು ಬಡವನಲ್ಲ;
ಇನ್ನೂ ಬೇಕೆನ್ನುವವನು ಬಡವ

। ಸೆಬೇಕಾ

## ಪಂಚಾಂಗ

(ಬುಧವಾರ 10, ಏಪ್ರಿಲ್ -2024)

- ಶ್ರೀ ಶೋಭಕೃತ ನಾಮ ಸಂವತ್ಸರ,
- ಉತ್ತರಾಯಣ ,ಶಿಶಿರ ಋತು,
- ಫಾಲ್ಗುಣ ಮಾಸ, ಕೃಷ್ಣ ಪಕ್ಷ,
- ಪಂಚಮಿ, ಶತಭಿಷ ನಕ್ಷತ್ರ
- ರಾಹುಕಾಲ: 12 : 27 PM 01 : 53 PM
- ಗುಳಿಕಕಾಲ: 11 : 01 AM 12 : 27 PM
- ಯಮಗಂಡಕಾಲ : 08 : 10 AM 09 : 36 AM

## ಸಂಕ್ಷಿಪ್ತ ಸುದ್ದಿ

### ಕೇಜ್ರಿವಾಲ್‌ಗೆ ಜೈಲೇ ಗತಿ; ಬಂಧನ ಕ್ರಮ ಪ್ರಶ್ನಿಸಿ ಸಲ್ಲಿಸಿದ ಅರ್ಜಿ ವಜಾಗೊಳಿಸಿದ ಹೈಕೋರ್ಟ್



**ನವದೆಹಲಿ:** ದೆಹಲಿ ಮುಖ್ಯಮಂತ್ರಿ ಅರವಿಂದ್ ಕೇಜ್ರಿವಾಲ್ ಇಡಿಯಿಂದ ತಮ್ಮನ್ನು ಬಂಧಿಸಿರುವ ಕ್ರಮ ಪ್ರಶ್ನಿಸಿ ಸಲ್ಲಿಸಿದ ಅರ್ಜಿಯನ್ನು ದೆಹಲಿ ಹೈಕೋರ್ಟ್ ಇಂದು ಮಂಗಳವಾರ ವಜಾಗೊಳಿಸಿದೆ. ದೆಹಲಿ ಸರ್ಕಾರದ ಅಬಕಾರಿ ನೀತಿಯಲ್ಲಿ ಅವ್ಯವಹಾರ ಆಗಿದೆ ಎನ್ನುವ ಆರೋಪ ಮುಖ್ಯಮಂತ್ರಿಗಳ ಮೇಲಿದೆ. ಈ ಹಿನ್ನೆಲೆಯಲ್ಲಿ ಜಾರಿ ನಿರ್ದೇಶನಾಲಯವು ಅರವಿಂದ್ ಕೇಜ್ರಿವಾಲ್ ಅವರನ್ನು ಬಂಧಿಸಿದೆ. ಈ ಪ್ರಕರಣದಲ್ಲಿ ಯಾವುದೇ ಹುರುಳಿಲ್ಲ. ತಮ್ಮನ್ನು ಕಾನೂನು ಬಾಹಿರವಾಗಿ ಬಂಧಿಸಲಾಗಿದೆ ಎಂದು ಹೈಕೋರ್ಟ್ ನಲ್ಲಿ ಕೇಜ್ರಿವಾಲ್ ಪ್ರಶ್ನೆ ಮಾಡಿದ್ದರು. ಪುಟ 2

### ಅಭ್ಯರ್ಥಿಯ ಆಸ್ತಿಯ ವಿವರ ತಿಳಿಯುವ ಹಕ್ಕು ಮತದಾರನಿಗೆ ಇಲ್ಲ: ಸುಪ್ರೀಂಕೋರ್ಟ್ ತೀರ್ಪು

**ನವದೆಹಲಿ:** ಚುನಾವಣೆಗಳಲ್ಲಿ ಸ್ಪರ್ಧಿಸುವ ಅಭ್ಯರ್ಥಿಗಳಿಗೆ ನಿರಾಳ ತರುವಂತಹ ತೀರ್ಪೊಂದರಲ್ಲಿ ಸುಪ್ರೀಂಕೋರ್ಟ್, ಅಭ್ಯರ್ಥಿಯ ಪ್ರತಿಯೊಂದು ಆಸ್ತಿಯನ್ನು ತಿಳಿಯುವ ಹಕ್ಕು ಮತದಾರನಿಗೆ ಇರುವುದಿಲ್ಲ ಎಂದು ಅಭಿಪ್ರಾಯಪಟ್ಟಿದೆ. ಚುನಾವಣೆಯಲ್ಲಿ ಸ್ಪರ್ಧಿಸುವ ವಿಚಾರಕ್ಕೆ ಸಂಬಂಧಪಡದ



ಸಂಗತಿಯಲ್ಲಿ ಅಭ್ಯರ್ಥಿ ತಮ್ಮ ಖಾಸಗಿತನವನ್ನು ಕಾಪಾಡಿಕೊಳ್ಳುವ ಹಕ್ಕು ಇರುತ್ತದೆ ಎಂದು ಸರ್ವೋಚ್ಚ ನ್ಯಾಯಾಲಯ ಹೇಳಿದೆ. ಪುಟ 2

ಯುಗಾದಿ ದಿನವೇ ಕರ್ನಾಟಕದ ವಿವಿಧೆಡೆ ತಂಪೆರೆದ ಮಳೆರಾಯ

# ಬಿಸಿಲಿನಿಂದ ತತ್ತರಿಸಿದ್ದ ಜನ ಫುಲ್ ಖುಷ್

**ಕೊಪ್ಪಳ/ಹಾವೇರಿ:** ರಾಜ್ಯದಲ್ಲಿ ಈ ಭಾರಿಯ ಭೀಕರ ಬರಗಾಲ ಮತ್ತು ಸುಡು ಬಿಸಿಲಿನ ಝುಳಕ್ಕೆ ಜನರು ತತ್ತರಿಸಿ ಹೋಗಿದ್ದಾರೆ. ಮಳೆ ಯಾವಾಗ ಆಗುತ್ತೆ ಎಂದು ಜನ ಆಕಾಶದತ್ತ ಮುಖ ಮಾಡಿ ನೋಡುತ್ತಿದ್ದಾರೆ. ಆದ್ರೆ, ರಣ, ರಣ ಬಿಸಿಲಿನ ತಾಪಕ್ಕೆ ಬೆಂದಿದ್ದ ಕರ್ನಾಟಕದ ಜನತೆಗೆ ಮಳೆರಾಯ ತಂಪೆರೆದಿದ್ದಾನೆ. ಹೌದು.. ಯುಗಾದಿ ಹಬ್ಬದಂದು ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ಮಳೆಯಾಗಿದೆ. ಕೊಪ್ಪಳ, ವಿಜಯನಗರ, ಹಾವೇರಿ ಮತ್ತು ಬಾಗಲಕೋಟೆ ಜಿಲ್ಲೆಯಲ್ಲಿ ವರುಣ ತನ್ನ ಕೃಪೆ ತೋರಿಸಿದ್ದಾನೆ. ಇದರಿಂದ ಬಿಸಿಲಿನ ತಾಪಕ್ಕೆ ಸುಸ್ತಾಗಿದ್ದ ಜನಕ್ಕೆ ಮಳೆರಾಯ ಆಗಮನದಿಂದ ಕೊಂಚ ತಂಪೆರೆದಿದ್ದಾನೆ. ಇದರಿಂದ ಜನ ಕುಣಿದು ಕುಪ್ಪಳಿಸಿದ್ದಾರೆ.



ವಿಜಯನರದಲ್ಲಿ ಕುಣಿದು ಕುಪ್ಪಳಿಸಿದ ಜನ

ವಿಜಯನಗರ ಜಿಲ್ಲೆ ಹರಪ್ಪನಹಳ್ಳಿ ತಾಲೂಕಿನ ಉಚ್ಚಂಗಿದುರ್ಗದಲ್ಲಿ ಕೆಲ ಕಾಲ ಜಿಟಿ, ಜಿಟಿ ಮಳೆ ಸುರಿದಿದೆ. ಯುಗಾದಿ ಹಬ್ಬದ ಹಿನ್ನೆಲೆಯಲ್ಲಿ ಹರಪ್ಪನಹಳ್ಳಿ ತಾಲೂಕಿನ ಉಚ್ಚಂಗಿದುರ್ಗದಲ್ಲಿ ಉಚ್ಚಂಗೆಮ್ಮನ ಜಾತ್ರೆಯಿತ್ತು. ಜಾತ್ರೆ ಸಮಯದಲ್ಲಿ ಮಳೆ ಸುರಿದಿದ್ದು ಜನ ಫುಲ್ ಖುಷಿಯಾಗಿದ್ದಾರೆ. ಕಲ್ಲು ಗುಡ್ಡದಿಂದ ತುಂಬಿದ್ದ ಉಚ್ಚಂಗಮ್ಮ ಜಾಗದಲ್ಲಿ ವರುಣ ತಂಪೆರೆದಿದ್ದು, ಕೆಲ ಕಾಲ ಸುರಿದ ಮಳೆಯಲ್ಲಿ ಜನ ಕುಣಿದು ಕುಪ್ಪಳಿಸಿದ್ದಾರೆ.

ಇನ್ನು ಕೊಪ್ಪಳ ತಾಲೂಕಿನ ಕೆಲ ಗ್ರಾಮಗಳಲ್ಲಿ ಇಂದು ಕೆಲ ಕಾಲ ಉತ್ತಮ ಮಳೆಯಾಗಿದೆ. ಯುಗಾದಿ ಹಬ್ಬದ ದಿನವೇ ವರುಣ ಕೃಪೆ ತೋರಿದ್ದು ಸಂತಸಕ್ಕೆ ಕಾರಣವಾಗಿದೆ. ಕೊಪ್ಪಳ ತಾಲೂಕು ಸೇರಿದಂತೆ ಜಿಲ್ಲೆ ಹಲವು ಗ್ರಾಮಗಳಲ್ಲಿ ಮಳೆ ಸುರಿದಿದ್ದು, ಈ ವರ್ಷ ಮಳೆ ಸಮೃದ್ಧವಾಗಲಿ, ರೈತರ ಬಾಳು ಬೆಳಗಲಿ ಎಂದು ರೈತರು ಮಳೆರಾಯನಲ್ಲಿ ಬೇಡಿಕೊಂಡಿದ್ದಾರೆ. ಇನ್ನು ಹಲಗೇರಿ ಗ್ರಾಮದಲ್ಲಿ ಗಾಳಿ ಮಳೆಯಿಂದ ಮನೆಯ ತಗಡಿನ ಛಾವಣಿ ಹಾರಿ ಹೋಗಿದೆ. ಗ್ರಾಮದ ದೇವಪ್ಪ ಗುಡದಾನೂರು ಎಂಬುವವರಿಗೆ ಸೇರಿದ ಮನೆಯ ಮೇಲೆ ಹಾಕಲಾಗಿದ್ದ ತಗಡಿನ ಛಾವಣಿ ಹಾರಿ ಹೋಗಿದ್ದು, ಅದೃಷ್ಟವಶಾತ್ ಯಾವುದೇ ಅನಾಹುತ ಸಂಭವಿಸಿಲ್ಲ.

ಬಾಗಲಕೋಟೆಯಲ್ಲಿ ತುಂತುರು ಮಳೆ ಹಾಗೇ ಬಾಗಲಕೋಟೆಯ ವಾಂಬೆ ಕಾಲೋನಿಯಲ್ಲಿ ತುಂತುರು ಮಳೆಯಾಗಿದೆ. ಕಳೆದ 15 ನಿಮಿಷದಿಂದ ಜಿಟಿ ಜಿಟಿ ಮಳೆಯಾಗುತ್ತಿದ್ದು. ಬಿರು ಬಿಸಿಲಿನಿಂದ ತತ್ತರಿಸಿದ ಜನರಿಗೆ ತಂಪೆರೆದಿದ್ದಾನೆ.

ಹಾವೇರಿ ಜಿಲ್ಲೆ ಬ್ಯಾಡಗಿ ಪಟ್ಟಣ ಸೇರಿದಂತೆ ಸುತ್ತಮುತ್ತಲಿನ ಗ್ರಾಮಗಳಲ್ಲಿ ಪುಟ 2

ರಂಗೇರಿದ ಮಂಡ್ಯ ಲೋಕಸಭಾ ಅಖಾಡ, ಕುಮಾರಸ್ವಾಮಿಯನ್ನು ಸೋಲಿಸಲು

# ಕಾಂಗ್ರೆಸ್ ಮಾಸ್ಟರ್ ಪ್ಲ್ಯಾನ್

**ಮಂಡ್ಯ:** ಲೋಕಸಮರದ ಮಹಾಯುದ್ಧಕ್ಕೆ ಇನ್ನೇನೂ ಕೆಲವು ದಿನಗಳು ಬಾಕಿ ಇವೆ. ಈ ಮಧ್ಯೆ ಸಕ್ಕರೆ ನಗರಿ ಮಂಡ್ಯದಲ್ಲಿ ಚುನಾವಣಾ ಕಾವು ರಂಗೇರಿದೆ. ಅದರಲ್ಲೂ ಮೈತ್ರಿ ಅಭ್ಯರ್ಥಿಯಾಗಿ ಮಾಜಿ ಸಿಎಂ ಕುಮಾರಸ್ವಾಮಿ ಅಖಾಡಕ್ಕೆ ಧುಮುಕಿರುವುದು ಹೈ ವೋಲ್ಟೇಟ್ ಕದನ ಕಣವಾಗಿ ಮಾರ್ಪಟ್ಟಿದೆ. ಇನ್ನು ಜೆಡಿಎಸ್ ಕೋಟೆ ಮಂಡ್ಯದಲ್ಲೇ ಕುಮಾರಸ್ವಾಮಿಯನ್ನ ಮಣಿಸಲು ಕಾಂಗ್ರೆಸ್ ಮಾಸ್ಟರ್ ಪ್ಲ್ಯಾನ್ ರೂಪಿಸುತ್ತಿದೆ. ಅಷ್ಟೇ ಅಲ್ಲದೆ ದಳಪತಿ ವಿರುದ್ಧ ಮತಶಿಕಾರಿಗೆ ಘಟಾನುಘಟಿ, ಸ್ಟಾರ್ ನಾಯಕರನ್ನ ಪ್ರಚಾರಕ್ಕೆ ಕರೆಸುತ್ತಿದೆ. ಹೆಚ್ ಡಿಕೆ ವಿರುದ್ಧ ಸ್ಯಾಂಡಲ್ ವುಡ್ ಬ್ಯೂಟಿ ಕ್ವೀನ್, ನಟಿ, ಮಾಜಿ ಸಂಸದೆ ರಮ್ಯಾ ಮತಬೇಟೆಗೆ ಇಳಿಯಲಿದ್ದಾರೆ. ಇದೇ ತಿಂಗಳ ಏಪ್ರಿಲ್ 14 ಅಥವಾ 15ರಂದು ಮಂಡ್ಯ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಭರ್ಜರಿ ರೋಡ್ ಶೋ ನಡೆಸಲಿದ್ದಾರೆ. ಅಷ್ಟೇ ಅಲ್ಲದೆ ಏಪ್ರಿಲ್ 17ರಂದು ಮಂಡ್ಯದಲ್ಲಿ ಒಂದು ಲಕ್ಷ ಜನರನ್ನ ಸೇರಿಸಿ ಬೃಹತ್ ಸಮಾವೇಶ ಮಾಡಲು ಪ್ಲ್ಯಾನ್ ಮಾಡಿದ್ದು, ಮಂಡ್ಯ ಕೋಟೆಗೆ ಸ್ವತಃ ರಾಹುಲ್ ಗಾಂಧಿ ಲಗ್ಗೆ ಇಡುತ್ತಿದ್ದಾರೆ. ಇದರ ಜೊತೆಗೆ ಮಂಡ್ಯದ ಕೆ ಆರ್ ಪೇಟೆ ಹಾಗೂ ನಾಗಮಂಗಲದಲ್ಲಿ ಸಿಎಂ ಸಿದ್ದರಾಮಯ್ಯ ಮತ ಶಿಕಾರಿ ನಡೆಸಲಿದ್ದಾರೆ.

ಇನ್ನು ಸಂಸದೆ ಸುಮಲತಾ ಅಂಬರೀಶ್ ಈಗಾಗಲೇ ಬಿಜೆಪಿ ಸೇರ್ಪಡೆಯಾಗಿದ್ದಾರೆ. ಎನ್ ಡಿಎ ಭಾಗವಾಗಿರೋ ಮಂಡ್ಯದ ಅಭ್ಯರ್ಥಿ



ಕುಮಾರಸ್ವಾಮಿ ಪರ ಪ್ರಚಾರ ಕೂಡ ಮಾಡುತ್ತಾರೆ ಎನ್ನಲಾಗಿದೆ. ಈ ಬಗ್ಗೆ ಮಂಡ್ಯ ಕಾಂಗ್ರೆಸ್ ಶಾಸಕ ರವಿಕುಮಾರ್ ಗಣಿಗ ಲೇವಡಿ ಮಾಡಿದ್ದಾರೆ. ಅಣ್ಣ-ತಂಗಿ ಅಲ್ವಾ, ಮಾಜಿ ಸಿಎಂ ಹೆಚ್ ಡಿಕೆ ಪರ ಸುಮಲತಾ ಪ್ರಚಾರ ಮಾಡ್ತಾರೆ. ಅಕ್ಕ-ತಮ್ಮ ಒಂದಾಗಿದ್ದಾರೆ. ನಾವು ಯಾಕೆ ಮಾತನಾಡೋದು. ಕಳೆದ ಚುನಾವಣೆಯಲ್ಲಿಯೇ ಅಕ್ಕ-ತಮ್ಮ ಒಂದಾಗಿದ್ರೆ ಚೆನ್ನಾಗಿರೋದು. ಹೋದ ಎಲೆಕ್ಷನ್ ನಲ್ಲಿ ಕಾಂಗ್ರೆಸ್ ಬೆಂಬಲ ಕೊಟ್ಟಿಲ್ಲ ಎಂದು ಸುಮಲತಾ ಹೇಳ್ತಿದ್ದಾರೆ. ನಾನೇ ಗೆದ್ದೆ ಅಂತಿದ್ದಾರೆ, ಅದು ಮುಗಿದ ಅಧ್ಯಾಯ. ಈಗ ತಮ್ಮನ ಪರ ಅಕ್ಕ ಇದ್ದಾರೆ. ಅವರ ಚುನಾವಣೆ ಅವರದು, ನಮ್ಮ ಚುನಾವಣೆ ನಮ್ಮದು ಎಂದರು.

ಅಂಬರೀಶಣ್ಣನ ಅಭಿಮಾನಿಗಳ ರಕ್ತ, ದೇಹ, ಮನಸ್ಸು ಕಾಂಗ್ರೆಸ್. ಅವರ ಅಭಿಮಾನಿಗಳು ಕಾಂಗ್ರೆಸ್ ಪರ ಇದ್ದಾರೆ. ಅಂಬರೀಶ್ ಬದುಕಿರುವವರೆಗೂ ಕಾಂಗ್ರೆಸ್ ಆಗಿಯೆ ಇದ್ದರು. ಅವರನ್ನ ಕೇಂದ್ರ ಹಾಗೂ ರಾಜ್ಯದಲ್ಲಿ ಕಾಂಗ್ರೆಸ್ ಮಂತ್ರಿ ಮಾಡಿತ್ತು. ಕಳೆದ ಚುನಾವಣೆಯಲ್ಲಿ ಅಕ್ಕ-ತಮ್ಮಮ ನಡುವೆ ದಾಯಾದಿ ಕಲಹ ಮರೆತು ಹೋಗಿದ್ದಾರಾ. ತಮ್ಮ ಅಕ್ಕನಿಗೆ ಕೊಟ್ಟ ಕಾಟಾವನ್ನ ಅಂಬಿ ಅಭಿಮಾನಿಗಳು ಮರೆಯುತ್ತಾರಾ. ಅಂಬರೀಶ್ ಅಭಿಮಾನಿಗಳು ಕಾಂಗ್ರೆಸ್ ಪರ ಇರ್ತಾರೆ. ಪುಟ 2

ಕಾಂಗ್ರೆಸ್ ನಲ್ಲಿ ವಿಷ ತುಂಬಿದೆ, ರಾಮನ ಹೆಸರು ಕೇಳಿದರೆ ದ್ವೇಷ ಕಾರುತ್ತೆ

# ಮೋದಿ ವಾಗ್ದಾಳಿ

**ಪಿಲಿಭಿತ್:** ಕಾಂಗ್ರೆಸ್‌ನಲ್ಲಿ ವಿಷ ತುಂಬಿದೆ ಇಂಡಿಯಾ ಮೈತ್ರಿಕೂಟ ರಾಮನ ಹೆಸರು ಕೇಳಿದರೆ ಸಾಕು ದ್ವೇಷ ಕಾರುತ್ತದೆ ಎಂದು ಪ್ರಧಾನಿ ನರೇಂದ್ರ ಮೋದಿ ಹೇಳಿದ್ದಾರೆ. ಇಂಡಿಯಾ ಒಕ್ಕೂಟವು ರಾಮ ವಿರೋಧಿ ಮನಸ್ಥಿತಿಯನ್ನು ಹೊಂದಿದೆ, ಜಗತ್ತಿನಾದ್ಯಂತ ಲಕ್ಷಾಂತರ ಜನರು ಪೂಜಿಸುವ ಶಕ್ತಿಯನ್ನು ಅವಮಾನಿಸುತ್ತಿವೆ ಎಂದು ಆರೋಪಿಸಿದ್ದಾರೆ.

ಪಿಲಿಭಿತ್ ನಲ್ಲಿ ಬಿಜೆಪಿ ಅಭ್ಯರ್ಥಿ ಜಿತಿನ್ ಪ್ರಸಾದ್ ಅವರ ಪರವಾಗಿ ಮೋದಿ ಮತಯಾಚನೆ ಮಾಡಿದರು. ಕಾಂಗ್ರೆಸ್ ರಾಮಮಂದಿರ ನಿರ್ಮಾಣವನ್ನು ತಡೆಯುವ ಪ್ರಯತ್ನ ಮಾಡಿದ್ದು ಮಾತ್ರವಲ್ಲದೆ ಮಹಾಮಸ್ತಕಾಭಿಷೇಕ ಸಮಾರಂಭದ ಆಹ್ವಾನವನ್ನು ಕೂಡ ತಿರಸ್ಕರಿಸಿತ್ತು ಎಂದು ಹೇಳಿದರು. ಪುಟ 2



ಸಿಗ್ನಲ್‌ನಲ್ಲಿ ಸವಾರರಿಗೆ ನೆರಳಿನ ವ್ಯವಸ್ಥೆ

# ಜನರ ಮೆಚ್ಚುಗೆ

**ಗದಗ:** ಗದಗ-ಬೆಟಗೇರಿ ಅವಳಿ ನಗರದಲ್ಲಿ ಬಿಸಿಲಿನ ತಾಪ ಸಹಿಸಲಾಗದೆ ಜನರು ಹೊರಗಡೆ ತಿರುಗಾಡುವುದೇ ಬೇಡ ಅನ್ನುವಷ್ಟರ ಮಟ್ಟಿಗೆ ಬಿಸಿಲು ಬೆಂಕಿಯಾಗಿದೆ. ಬಿಸಿಲಿನ ತಾಪಮಾನಕ್ಕೆ ವಾಹನ ಸವಾರರು ಪಡುವ ಪಾಡು ಅಷ್ಟಿಷ್ಟಲ್ಲ. ಅದರಲ್ಲಂತೂ ದ್ವಿಚಕ್ರ ವಾಹನ ಸವಾರರ ಪರಿಸ್ಥಿತಿ ಹೇಳತೀರದು. ಬೈಕ್ ನಲ್ಲಿ ಹೋಗುವಾಗ ಮುಖಕ್ಕೆ ಹೊಡೆಯುವ ಬಿಸಿ ಗಾಳಿ, ತಲೆ ಮೇಲೆ ಸುಡುವ ಬಿಸಿಲು, ಹೆಲ್ಮೆಟ್ ಹಾಕಿಕೊಂಡರೆ ಬೆವರಿಗೆ ಕೂದಲಿನ ವಾಸನೆ, ತುರಿಕೆ ಹೇಳತೀರದು. ಪುಟ 2



# ಬಾಮೈದನಿಗೆ ಇರಿದು ಕೊಂದ ಬಾವ

**ಬೆಂಗಳೂರು:** ಕೌಟುಂಬಿಕ ಕಲಹ ಹಿನ್ನೆಲೆ ಭಾವನಿಂದ ಬಾಮೈದನನ್ನು ಹತ್ಯೆ ಮಾಡಿರುವಂತಹ ಘಟನೆ ವೆಂಕಟೇಶ್ವರಪುರದಲ್ಲಿ ನಡೆದಿದೆ. ಇಸ್ಪೀಟ್ ಎಲೆ ಮೇಲೆ ಬಾಮೈದ ಕಿರಣ್ ಕುಮಾರ್ ಹೆಣವಾಗಿಬಿದಿದ್ದಾನೆ. ಆರೋಪಿ ಲಕ್ಷ್ಮಣ ಮತ್ತು ಪತ್ನಿ ನಡುವೆ ಆಗಾಗ ಜಗಳ ನಡೆಯುತ್ತಿತ್ತು. ಇದೇ ವಿಚಾರಕ್ಕೆ ಭಾವ, ಬಾಮೈದನ ನಡುವೆ ಇಂದು ಗಲಾಟೆ ನಡೆದಿದೆ. ಯುಗಾದಿ ಹಬ್ಬದ ಪ್ರಯುಕ್ತ ವೆಂಕಟೇಶ್ವರಪುರದ ಗಲ್ಲಿಯಲ್ಲಿ ಇಸ್ಪೀಟ್ ಆಡುತ್ತಿದ್ದ ವೇಳೆ ಚಾಕು ಇರಿದು ಕೊಲೆ ಮಾಡಲಾಗಿದೆ. ಕಿರಣ್ ಕುಮಾರ್ ಹತ್ಯೆಗೆ ಲಕ್ಷ್ಮಣ ಮೊದಲೇ ಸಂಚು ರೂಪಿಸಿದ್ದ. ಹಾಗಾಗಿ ಚಾಕು ಇಟ್ಟುಕೊಂಡು ಬಂದಿದ್ದ. ಪುಟ 2



ಕೋಲಾರ ಲೋಕಸಭಾ ಕ್ಷೇತ್ರದಲ್ಲಿ ಮೈತ್ರಿ ಒಗ್ಗಟ್ಟು

# ಅಭ್ಯರ್ಥಿಗೆ ಸವಾಲು

**ಕೋಲಾರ:** ಲೋಕಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿಗೆ ಚುನಾವಣೆ ಸವಾಲಾಗಿ ಪರಿಣಮಿಸಿದೆ. ಒಂದೆಡೆ ಎದುರಾಳಿ ಬಿಜೆಪಿ ಮತ್ತು ಜೆಡಿಎಸ್ ಒಗ್ಗಟ್ಟು ಪ್ರದರ್ಶನ ಮಾಡುತ್ತಾ ಮೈತ್ರಿ ಅಭ್ಯರ್ಥಿ ಬಿರುಸಿನ ಪ್ರಚಾರದಲ್ಲಿ ತೊಡಗಿದ್ದರೆ, ಕಾಂಗ್ರೆಸ್ ಅಭ್ಯರ್ಥಿಗೆ ಕ್ಷೇತ್ರದಲ್ಲಿನ ಭಿನ್ನಮತ ಸುಧಾರಿಸಿಕೊಂಡು ಹೋಗುವುದೇ ಸವಾಲಾಗಿ ಪರಿಣಮಿಸಿದೆ. ಬಿಜೆಪಿ ಮತ್ತು ಜೆಡಿಎಸ್ ಮೈತ್ರಿ ಅಭ್ಯರ್ಥಿ



ಮಲ್ಲೇಶ್ ಬಾಬು, ಬಿಜೆಪಿ ಹಾಗೂ ಜೆಡಿಎಸ್ ಮುಖಂಡರೊಂದಿಗೆ ಈಗಾಗಲೇ ಕೋಲಾರ ಲೋಕಸಭಾ ಕ್ಷೇತ್ರದ ಎಂಟು ವಿಧಾನಸಭಾ ಕ್ಷೇತ್ರಗಳಲ್ಲಿ ಸಮನ್ವಯ ಸಭೆ ಮೂಲಕ ಕ್ಷೇತ್ರವನ್ನು ಒಂದು ಸುತ್ತು ಹಾಕಿದ್ದಾರೆ. ಈಗಾಗಲೇ ಹೋಬಳಿ ಮಟ್ಟದಲ್ಲಿ ಸಭೆಗಳನ್ನು ಮೂಲಕ ಭರ್ಜರಿ ಪ್ರಚಾರ ಕಾರ್ಯದಲ್ಲಿ ತೊಡಗಿದ್ದಾರೆ. ಪುಟ 2

ಬರದ ನಡುವೆಯೂ ಭರಪೂರ ಅಂತರ್ಜಲ

# ಆದರೂ ನೀರಿಗಾಗಿ ಗ್ರಾಮಸ್ಥರ ಪರದಾಟ

**ಬೀದರ್:** ಭೀಕರ ಬಿರುಬಿಸಿಲಿಗೆ ರಾಜ್ಯದ ಬಹುತೇಕ ಜಿಲ್ಲೆಯಲ್ಲಿ ಬಾವಿ, ಬೋರ್ ವೆಲ್ ನಲ್ಲಿ ನೀರು ಕಡಿಮೆಯಾಗಿದ್ದು, ಕುಡಿಯುವ ನೀರಿನ ಸಮಸ್ಯೆಯಿಂದ ಜನರು ಪರದಾಡುತ್ತಿದ್ದಾರೆ. ಗ್ರಾಮೀಣ ಪ್ರದೇಶದಲ್ಲಂತೂ ಒಂದು ಕೊಡ ನೀರಿಗಾಗಿ ಕೆಲಸ ಕಾರ್ಯಗಳನ್ನ ಬಿಟ್ಟು ಗಂಟೆ



ಗಟ್ಟಲೇ ಕಾಯಬೇಕಾದ ಸ್ಥಿತಿ ಇಲ್ಲಿ ನಿರ್ಮಾಣವಾಗಿದೆ. ಆದರೆ, ಬೀದರ್ ತಾಲೂಕಿನ ಗೊರನಳ್ಳಿ ಗ್ರಾಮದ ಸುತ್ತಮುತ್ತಲ್ಲಿನ ಎರಡು ಕಿಲೋಮೀಟರ್ ವ್ಯಾಪ್ತಿಯಲ್ಲಿನ ಬಾವಿ ಬೋರ್ ವೆಲ್ ನಲ್ಲಿ ನೀರು ಬರಪೂರ ಇದ್ದು, ತುಂಬಿ ತುಳುಕುತ್ತಿವೆ. ಆದರೆ, ಆ ನೀರು ಸಂಪೂರ್ಣ ವಿಷವಾಗಿದ್ದು, ನೀರನ್ನ ಜನರು, ಪ್ರಾಣಿ ಪಕ್ಷಿಗಳೂ ಕುಡಿಯಲಾಗುತ್ತಿಲ್ಲ.

ಒಂದು ವೇಳೆ ಈ ನೀರು ಕುಡಿದರೆ ಅನಾರೋಗ್ಯಕ್ಕೆ ತುತ್ತಾಗೋದು ಗ್ಯಾರಂಟಿ. ಹೀಗಾಗಿ ಬಾವಿ,ಬೋರ್ ವೆಲ್ ನಲ್ಲಿ ನೀರಿದ್ದರೂ. ಜನರ ದಾಹ ಇಂಗಿಸುತ್ತಿಲ್ಲ. ಈ ನೀರು ವಿಷವಾಗಲು ಕಾರಣ ಬೀದರ್ ತಾಲೂಕಿನ ಗೊರನಳ್ಳಿ ಪಕ್ಕದಲ್ಲಿ ಸೀವೇಜ್ ವಾಟರ್ ಟ್ರೀಟ್ ಮೆಂಟ್ ಪ್ಲಾಂಟ್



ಎಸ್ ಟಿಪಿ ಘಟಕವನ್ನ ಸ್ಥಾಪಿಸಲಾಗಿದೆ. ಇಲ್ಲಿ ನಿರ್ಮಾಣ ಮಾಡಿದ ಶುದ್ದೀಕರಣ ಘಟಕವು ಅವೈಜ್ಞಾನಿಕ ರೀತಿಯಿಂದ ಕೂಡಿದ್ದು, ಒಳಚರಂಡಿ ನೀರನ್ನ ಶುದ್ಧಿಕರಣ ಘಟಕದಲ್ಲಿ ದಿನಕ್ಕೆ ಲಕ್ಷಾಂತರ ಲೀಟರ್ ನೀರನ್ನ ಬಿಡಲಾಗುತ್ತಿದೆ.

ಆದರೆ, ಇಲ್ಲಿ ಬಿಟ್ಟಿರುವ ಒಳ್ಳಚರಂಡಿ ನೀರು ಭೂಮಿಯಲ್ಲಿ ಇಂಗಿಕೊಂಡು ಸುತ್ತಮುತ್ತ ಸುಮಾರು ಐದಾರು ಕಿಲೋಮೀಟರ್ ವ್ಯಾಪ್ತಿಯಲ್ಲಿರುವ ಬಾವಿ, ಬೋರವೆಲ್ ನಲ್ಲಿ ಸೇರಿಕೊಳ್ಳುತ್ತಿದೆ.

ಇದರಿಂದ ಬಾವಿ, ಬೋರವೆಲ್ ನಲ್ಲಿ ಸೇರಿಕೊಳ್ಳುತ್ತಿರುವ ವಿಷಕಾರಕ ಪದಾರ್ಥಗಳು ಜನರ ದೇಹ ಸೇರುತ್ತಿದೆ. ಇದರಿಂದ ಗ್ರಾಮಸ್ಥರು ಅನೇಕ ಖಾಯಿಲೆಯಿಂದ ಬಳಲುವಂತಾಗಿದ್ದು, ಸಾಕಷ್ಟು ಸಮಸ್ಯೆಯನ್ನ ಗ್ರಾಮಸ್ಥರು ಅನುಭವಿಸುತ್ತಿದ್ದಾರೆ. ಈಗಾಗಲೇ ಗ್ರಾಮದಲ್ಲಿ ಹತ್ತಾರು ಜಾನುವಾರುಗಳು ಇಂತಹದ್ದೇ ನೀರನ್ನ ಸೇವಿಸಿ ಅಸುನೀಗಿವೆ ಎಂದು ಇಲ್ಲಿನ ಜನರು ತಮ್ಮ ನೋವನ್ನ ತೋಡಿಕೊಳ್ಳುತ್ತಿದ್ದಾರೆ.

ಒಂದು ದಶಕದ ಹಿಂದೆ ಈ ಗೊರನಳ್ಳಿ ಗ್ರಾಮದಲ್ಲಿನ ಬಾವಿಯಲ್ಲಿನ ನೀರು ರುಚಿ ಹಾಗೂ ತಂಪು ತೆಂಗಿನ ಹಾಲಿನಂತೆ ಪವಿತ್ರವಾಗಿತ್ತು. ಅಷ್ಟೇ ರುಚಿಯೂ ಕೂಡ ಇತ್ತು. ಹೀಗಾಗಿ ಗೊರನಳ್ಳಿ ಗ್ರಾಮದ ಸುತ್ತಮುತ್ತಲಿನ ಗ್ರಾಮದ ಜನರು ಇಲ್ಲಿಗೆ ಬಂದು ಇಲ್ಲಿನ ಬಾವಿಯಲ್ಲಿನ ನೀರನ್ನ ತೆಗೆದುಕೊಂಡು ಹೋಗುತ್ತಿದ್ದರು. ಈಗ ಇದೆ ನೀರನ್ನ ಪಕ್ಕದ ಹಳ್ಳಿಯವರೆಲ್ಲ ಸ್ವಂತ ಗ್ರಾಮಸ್ಥರೇ ಕುಡಿಯುತ್ತಿಲ್ಲ, ಅಷ್ಟೊಂದು ನೀರು ಕಲ್ಮಶವಾಗಿದೆ. ಪುಟ 2

ಬಿಸಿಲಿನ ಹೊಡೆತಕ್ಕೆ ಅರಳದ ಹೂ

# ಬಾಡಿತು ಹೂ ಬೆಳೆಗಾರರ ಬದುಕು

**ಚಿಕ್ಕಬಳ್ಳಾಪುರ:** ಅತಿಯಾದ ತಾಪಮಾನದಿಂದ ಹೂಗಳು ಅರಳುವುದಿರಲಿ, ಸರಿಯಾಗಿ ಬೆಳೆಯುತ್ತಿಲ್ಲ. ಕಷ್ಟಪಟ್ಟು ಹೂ ಬೆಳೆದರೆ, ಬಿಸಿಲಿನ ಧಗೆಗೆ ಒಣಗಿ ಹೋಗುತ್ತಿವೆ. ಇದರಿಂದ ಡಿಮ್ಯಾಡ್ ಗೆ ತಕ್ಕಂತೆ ಮಾರುಕಟ್ಟೆಯಲ್ಲಿ ಹೂ ದೊರೆಯದೆ ಬೆಲೆ ಎರಡು ಪಟ್ಟು ಹೆಚ್ಚಾಗಿದೆ.

ಫಲ ಪುಷ್ಪ ಗಿರಿಧಾಮಗಳ ಜಿಲ್ಲೆ ಎಂದು ಚಿಕ್ಕಬಳ್ಳಾಪುರ ಖ್ಯಾತಿಗಳಿಸಿದೆ. ರಾಜ್ಯ ಮಾತ್ರವದಲ್ಲದೇ ಇತರೆ ದೇಶಕ್ಕೆ ರವಾನಿಸುವಷ್ಟು ವಿವಿಧ ಹೂ ಗಳನ್ನು ಬೆಳೆಯಲಾಗುತ್ತದೆ.

ಜಿಲ್ಲೆಯಲ್ಲಿ 10 ಸಾವಿರಕ್ಕೂ ಹೆಚ್ಚು ಹೆಕ್ಟರ್ ಪ್ರದೇಶಗಳಲ್ಲಿ ಹೂ ಬೆಳೆಯಲಾಗುತ್ತಿದೆ. ಆದರೆ ಈಗ ತಾಪಮಾನ ಹೆಚ್ಚಾದ ಕಾರಣ ಹೂ ಗಿಡಗಳನ್ನು ಬೆಳೆಯಲು ಕಷ್ಟಸಾಧ್ಯವಾಗಿದೆ. ಇದರಿಂದ ಮಾರುಕಟ್ಟೆಗೆ ಹೂ ಗಳೆ ಬರುತ್ತಿಲ್ಲ. ಹೀಗಾಗಿ ವ್ಯಾಪಾರಿಗಳು ಕಂಗಾಲಾಗಿದ್ದು, ಹೂ ತಂದು ಕೊಡಿ ಅಂತ ರೈತರನ್ನು ಬೇಡಿಕೊಳ್ಳುತ್ತಿದ್ದಾರೆ.



ಚಿಲ್ಲರೆ ಮಾರುಕಟ್ಟೆಯಲ್ಲಿ ಕೆಜೆ ಮಲ್ಲಿಗೆ ಹೂವಿನ ಬೆಲೆ 1000 ರೂ, ಕೆ.ಜಿ ಕನಕಾಂಬರ ಬೆಲೆ 1200 ರೂ, ಕೆ.ಜಿ ರೋಜ್ ಹೂ ಬೆಲೆ 600 ರೂ, ಕೆಜಿ ಸೇವಂತಿ ಹೂವಿನ ಬೆಲೆ 600 ರೂ., ಕೆಜಿ ಚೆಂಡು ಹೂವಿಗೆ 120 ರೂ., ಕೆ.ಜಿ ಸುಗಂದ ಹೂವಿನ ಬೆಲೆ 200 ರೂ. ಹಾಗಾಗಿ ಗ್ರಾಹಕರ ಜೇಬಿಕೆ ಕತ್ತರಿ ಬೀಳುತ್ತಿದೆ. ಇನ್ನೂ ಮಾರಾಟಗಾರರಿಗೆ ಹೂಗಳೆ ಸಿಗುತ್ತಿಲ್ಲ.

ತಾಪಮಾನ ಹೆಚ್ಚಾಗಿ ಹೂ ಬೆಳೆಯಲಾಗುತ್ತಿಲ್ಲ. ಹೂ ಬೆಳೆ ಹಾಗೂ ತಂಪಾದ ಹವಾಗುಣಕ್ಕೆ ಖ್ಯಾತಿಯಾಗಿದ್ದ ಚಿಕ್ಕಬಳ್ಳಾಪುರದ ಹೂ ಬೆಳೆಗಾರರು ಸೂರ್ಯನ ಶಾಕಕ್ಕೆ ಹಿಡಿ ಶಾಪ ಹಾಕುತ್ತಿದ್ದಾರೆ.

# ಒಕ್ಕಲಿಗರಿಗೆ ಬಿಜೆಪಿ ಅನ್ಯಾಯ: ತುಟಿ ಬಿಚ್ಚದ ಸಿ.ಟಿ.ರವಿ



**ಮೈಸೂರು:** ರಾಜ್ಯ ಬಿಜೆಪಿಯ ಹಲವು ಒಕ್ಕಲಿಗರಿಗೆ ಟಿಕೇಟ್ ತಪ್ಪಿದ್ದೇಕೆ? ಸಮುದಾಯದವರಿಗೆ ಟಿಕೇಟ್ ಹಂಚಿಕೆಯಲ್ಲಿ ಆದ ಅನ್ಯಾಯದ ಕುರಿತ ಮಾಧ್ಯಮದ ಪ್ರಶ್ನೆಗೆ ಮಾಜಿ ಸಚಿವ ಸಿ.ಟಿ.ರವಿ ಉತ್ತರಿಸದೇ ಮೌನದಲ್ಲೇ ಹೊರನಡೆದರು.

ಮೈಸೂರಿನ ಬಿಜೆಪಿ ಕಚೇರಿಯಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ಹಾಲಿ ಒಕ್ಕಲಿಗ ಸಂಸದರಿಗೆ ಟಿಕೇಟ್ ನೀಡದಿರುವುದೇಕೆ?, ರಾಜ್ಯದಲ್ಲಿ ಹಲವು ಒಕ್ಕಲಿಗ ನಾಯಕರಿಗೆ ಟಿಕೇಟ್ ತಪ್ಪಿದೆ. ಹೀಗಿರುವಾಗ ಬಿಜೆಪಿಗೆ ಒಕ್ಕಲಿಗರು ಯಾಕೆ ಮತ ಹಾಕಬೇಕೆಂಬ ಪ್ರಶ್ನೆಗೆ ಈ ಬಾರಿ ರಾಷ್ಟ್ರವಾದವನ್ನು ಬೆಂಬಲಿಸಿ ಮತ ಹಾಕುತ್ತಾರೆಂದರು.

ಒಂದೊಂದು ಚುನಾವಣೆ ವೇಳೆ ಒಂದೊಂದು ಆಧಾರದ ಮೇಲೆ ನಡೆಯುತ್ತದೆ. ಈಗ ಒಕ್ಕಲಿಗರಿಗೆ ಟಿಕೇಟ್ ಅನ್ಯಾಯ ವಿಚಾರ ಅಪ್ರಸ್ತುತ. ಈ ಬಾರಿ ಒಕ್ಕಲಿಗರು ರಾಷ್ಟ್ರವಾದ ಬೆಂಬಲಿಸಿ ಮತ ಹಾಕಲಿದ್ದಾರೆಂದು ಹೇಳುತ್ತಾ ಹೊರ ನಡೆದರು.

ಅಬಿವೃದ್ಧಿ ಚರ್ಚೆಗೂ ರೆಡಿ: ದೇಶದ ಇಷ್ಟು ವರ್ಷಗಳ ಇತಿಹಾಸದಲ್ಲಿ ರಾಜ್ಯಕ್ಕೆ ಮೋದಿ ಸರ್ಕಾರ ನೀಡಿದಷ್ಟು ಅನುದಾನವನ್ನು ಯಾವ ಸರ್ಕಾರವೂ ನೀಡಿಲ್ಲ. ಈ ಕುರಿತು ಚರ್ಚೆ ಮಾಡಲು ನಾವು ಸಿದ್ಧರಿದ್ದು, ಸಿದ್ದರಾಮಯ್ಯ ಸಿದ್ಧರಿದ್ದಾರೆಯೇ ಎಂದು ಮಾಜಿ ಸಚಿವ ಸಿ.ಟಿ.ರವಿ ಸವಾಲು ಹಾಕಿದರು.

ಬಿಜೆಪಿ ಕಚೇರಿಯಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಯುಪಿಎ ಅವಧಿಯಲ್ಲಿ ರಾಜ್ಯಕ್ಕೆ ಕೊಟ್ಟ ಕೊಡುಗೆ ಎಷ್ಟು, ಕಳೆದ 10 ವರ್ಷಗಳ ಅವಧಿಯಲ್ಲಿ ಮೋದಿ ಸರ್ಕಾರ ನೀಡಿದ ತೆರಿಗೆ ಪಾಲು, ಗ್ರ್ಯಾಂಟ್ ಮೂಲಕ ಎಷ್ಟು ಅನುದಾನ ನೀಡಿದೆ ಎಂಬುದರ ಕುರಿತು ಚರ್ಚೆ ಮಾಡಲು ನಾವು ಸಿದ್ಧರಿದ್ದೇವೆ. ಮೋದಿ ಇತರ ಪ್ರಧಾನಿಗಳಿಗಿಂತ ಹೆಚ್ಚಿನ ಅನುದಾನವನ್ನೇ ನೀಡಿದ್ದಾರೆ. ಈ ಕುರಿತು ದಾಖಲೆಗಳನ್ನೂ ಮುಂದಿಟ್ಟಿದ್ದೇವೆ. ನಿಮ್ಮ ದೃಷ್ಟಿಯಲ್ಲಿ ಹೆಚ್ಚು ಗ್ರ್ಯಾಂಟ್ ಕೊಟ್ಟವರು, ತೆರಿಗೆ ಪಾಲು ನೀಡಿದವರು ಅನ್ಯಾಯ ಮಾಡಿದ್ದಾರೆ ಎಂಬುದಾದರೆ ಮೊದಲು ನಿಮ್ಮ ದೃಷ್ಟಿ ದೋಷ ಸರಿಪಡಿಸಬೇಕಿದೆ ಎಂದು ವ್ಯಂಗ್ಯವಾಡಿದರು.

ಸಿದ್ದರಾಮಯ್ಯ, ಕೃಷ್ಣಬೈರೇಗೌಡ ಅವರ ಪ್ರಶ್ನೆಗೆ ಸೀತಾರಾಮನ್ ಅವರೇ ಉತ್ತರ ಕೊಟ್ಟಿದ್ದಾರೆ. ಆದರೆ, ಅವರು ಚರ್ಚೆ ಮಾಡದೆ ಏಕಪಾತ್ರಾಭಿನಯ ಮಾಡಿದರು. ನಾವು ಅನುದಾನ ಕೊಟ್ಟಿದ್ದು ಸುಳ್ಳಾದರೆ ಚಾಮುಂಡೇಶ್ವರಿ ಮುಂದೆ ಪ್ರಮಾಣ ಮಾಡಲಿ ಎಂದು ಸವಾಲು ಹಾಕಿದ್ದೆ, ಯಾರೂ ಸ್ವೀಕರಿಸಲಿಲ್ಲ. ಸಂಸತ್ತಿನಲ್ಲೇ ಸ್ಪಷ್ಟನೆ ನೀಡಿದರೂ ಕೋರ್ಟ್ ಮೊರೆ ಹೋಗಿದ್ದಾರೆ. ರಾಜ್ಯ ಸರ್ಕಾರ ಕೇರಳ ಹಾದಿಯಲ್ಲಿ ಸಾಗುತ್ತಿದ್ದು, ಅವರಂತೆ ದಿವಾಳಿಯಾಗುತ್ತಾರೆ ಎಂದು ಭವಿಷ್ಯ ನುಡಿದರು.

ಎನ್ಡಿಆರ್ ಎಫ್, ಎಸ್ಡಿಆರ್ ಎಫ್ ಅಡಿಯಲ್ಲಿ ರಾಜ್ಯಕ್ಕೆ 800 ಕೋಟಿ ಮುಂಗಡ ಅನುದಾನ ನೀಡಲಾಗಿದೆ. ನೀತಿ ಸಂಹಿತೆ ಇರುವುದರಿಂದ ಬಿಜೆಪಿ ಆಡಳಿತದಲ್ಲಿರುವ ರಾಜ್ಯಗಳಿಗೂ ಪರಿಹಾರ ನೀಡಿಲ್ಲ. ಇಷ್ಟು ದಿನ ರಾಜ್ಯ ಸರ್ಕಾರ ಬಿಡುಗಡೆ ಮಾಡಿ ನಂತರ ಹೊಂದಾಣಿಕೆ ಮಾಡಲಾಗುತ್ತಿತ್ತು. ಆದರೆ, ರಾಜ್ಯ ಸರ್ಕಾರ ಆ ರೀತಿ ಮಾಡಿಲ್ಲ. ಬೆಲೆ ಏರಿಕೆಯಿಂದ ಬಡ್ಡಿರಹಿತವಾಗಿ 8 ಸಾವಿರ ಕೋಟಿ ಸಾಲ ನೀಡಿದರೂ ಮೂಲ ಸೌಕರ್ಯ ಕಲ್ಪಿಸಲು ರಾಜ್ಯ ಸರ್ಕಾರಕ್ಕೆ ಸಾಧ್ಯವಾಗುತ್ತಿಲ್ಲ ಎಂದು ಟೀಕಿಸಿದರು.

ದೇಶ ವಿಭಜನೆಯ ರೋಗ ಆವರಿಸಿದೆ: ಕಾಂಗ್ರೆಸ್ ಪ್ರನಾಳಿಕೆಯಲ್ಲಿ ದೇಶ ವಿಭಜನೆಯ ರೋಗ ಆವರಿಸಿಕೊಂಡಿದೆ. ಸ್ವತಂತ್ರ ಪೂರ್ವದಲ್ಲಿ ಬ್ರಿಟಿಷರು, ಮುಸ್ಲಿಂ ಲೀಗ್, ಕಾಂಗ್ರೆಸ್ ಸಹಿ ಹಾಕಿ ಭಾರತ ವಿಭಜಿಸಿದರು. ಆ ವಿಭಜಿಸುವ ರೋಗ ಇಂದಿಗೂ ಕಾಂಗ್ರೆಸ್ ಗೆ ಕಡಿಮೆಯಾಗಿಲ್ಲ. ಜಾತಿ, ಪ್ರಾದೇಶಿಕತೆ ಹೆಸರಿನಲ್ಲಿ, ಮತೀಯವಾದಕ್ಕೆ ಕುಮ್ಮಕ್ಕು ಕೊಡುವ ನೀತಿಯ ಮೂಲಕ ಸಮಾಜ ವಿಭಜಿಸುತ್ತಿದ್ದಾರೆ. ಜತೆಗೆ ಪ್ರನಾಳಿಕೆ ಸಿದ್ಧಪಡಿಸಲು ನಗರ ನಕ್ಸಲರ ಸಹಾಯ, ತಾಲೀಬಾನಿಗಳ ಅಜೆಂಡಾದ ಪ್ರೇರಣೆ ಪಡೆದುಕೊಂಡಿದ್ದಾರೆ. ಸಮಾಧಾನದ ಸಂಗತಿ ಎಂದರೆ ಯಾವ ಸಮೀಕ್ಷೆಯೂ ಕಾಂಗ್ರೆಸ್ ಎರಡಂಕಿ ದಾಟುವ ವಿಶ್ವಾಸ ವ್ಯಕ್ತಪಡಿಸಿಲ್ಲ ಎಂದರು.

ಕಾಂಗ್ರೆಸ್ ಸ್ಥಾಪನೆ ಉದ್ದೇಶ ಸ್ವಾತಂತ್ರ್ಯವಲ್ಲ: ಕಾಂಗ್ರೆಸ್ ಸ್ಥಾಪನೆ ಉದ್ದೇಶ ಸ್ವಾತಂತ್ರ್ಯವಲ್ಲ.

ಕಾಂಗ್ರೆಸ್ ಸ್ಥಾಪನೆಯಿಂದ ಇಲ್ಲಿಯವರೆಗೆ ಕಾಲಕಾಲಕ್ಕೆ ನೀತಿ ಬದಲಿಸಿಕೊಂಡು ಬಂದಿದೆ. ಸ್ಥಾಪನೆಯಾದ ಎರಡು ವರ್ಷ ಕೇವಲ ಅರ್ಜಿ ಕೊಡುವ ಸಂಘಟನೆಯಾಗಿತ್ತು. ನಂತರ ಸುಭಾಷ್ ಚಂದ್ರಬೋಸ್, ಗಾಂಧೀಜೀ ಸೇರಿದಂತೆ ಹಲವರು ಆಂದೋಲನದ ರೂಪ ನೀಡಿದರು.

ನಂತರ ನೆಹರು ತನ್ನ ಕುಟುಂಬಕ್ಕೆ ಅಧಿಕಾರ ಸಿಗುವಂತೆ ತಳಪಾಯ ಮಾಡಿಕೊಂಡರು. ಅಂದಿನಿಂದ ಇಂದಿನವರೆಗೆ ಕಾಂಗ್ರೆಸ್ ಒಂದು ಕುಟುಂಬದ ಕಪಿಮುಷ್ಠಿಯಿಂದ ಹೊರಬಂದಿಲ್ಲ. ಕಟುಂಬದಿಂದ ದೂರ ಮಾಡಲು ಪ್ರಯತ್ನಿಸಿದ ನರಸಿಂಹರಾವ್ ಅವರನ್ನೂ ವಂದಿಮಾಗದರು ಬದಿಗೆ ಸರಿಸಿ ಕುಟುಂಬಕ್ಕೆ ಸೀಮಿತವಾಗುವಂತೆ ಮಾಡಿದರು ಎಂದರು.

ರಾಹುಲ್ ಗಾಂಧಿಗೆ ಕಡ್ಡಾಯ ನಿವೃತ್ತಿ: ದೇಶದಲ್ಲಿ ಕಾಂಗ್ರೆಸ್ ಗೆ ಉತ್ತಮ ನಾಯಕರೇ ಇಲ್ಲ. ತನ್ನ ವೈಫಲ್ಯ ಮುಚ್ಚಿಕೊಳ್ಳುವ ಸಲುವಾಗಿ ಬಿಜೆಪಿಯ ವಿರುದ್ಧ ಇಲ್ಲಸಲ್ಲದ ಆರೋಪ ಮಾಡಲಾಗುತ್ತಿದೆ. ಹೀಗಾಗಿ ರಾಹುಲ್ ಗಾಂಧಿಯೆ ಚುನಾವಣೆ ನಂತರ ದೇಶದ ಜನರೇ ಕಡ್ಡಾಯ ನಿವೃತ್ತಿ ನೀಡುತ್ತಾರೆ ಎಂದರು.

## ಅಂತಿಮ ಕಣದಲ್ಲಿ 18 ಅಭ್ಯರ್ಥಿಗಳು

**ಮೈಸೂರು:** ಮೈಸೂರು– ಕೊಡಗು ಲೋಕಸಭಾ ಕ್ಷೇತ್ರದ ಚುನಾವಣೆಯಲ್ಲಿ ಸ್ಪರ್ಧೆ ಬಯಸಿ ಉಮೇದುವಾರಿಕೆ ಸಲ್ಲಿಸಿರುವ ಅಭ್ಯರ್ಥಿಗಳ ನಾಮಪತ್ರ ಹಿಂಪಡೆಯಲು ಅಂತಿಮ ದಿನವಾಗಿದ್ದ ಇಂದು ಆರು ಅಭ್ಯರ್ಥಿಗಳು ನಾಮಪತ್ರ ವಾಪಸ್ ಪಡೆದಿದ್ದು, ಅಂತಿಮವಾಗಿ ಕಣದಲ್ಲಿ 18 ಅಭ್ಯರ್ಥಿಗಳು ಉಳಿದಿದ್ದಾರೆ.ಇಂದು ಪಕ್ಷೇತರ ಅಭ್ಯರ್ಥಿಗಳಾದ ಆರ್. ಮಹೇಶ್, ಎಸ್.ದೊರೆಸ್ವಾಮಿ ನಾಯಕ, ರಾಜಣ್ಣ, ಶಿವನಂಜಯ್ಯ, ಶ್ರೀನಿವಾಸ್ ಬೋಗಾದಿ ಹಾಗೂ ಸಣ್ಣ ನಾಯಕ ಇವರುಗಳು ನಾಮಪತ್ರ ವಾಪಸ್ ಪಡೆದುಕೊಂಡರು. ಈ ಹಿನ್ನೆಲೆಯಲ್ಲಿ ಅಂತಿಮ ಕಣದಲ್ಲಿ 18 ಅಭ್ಯರ್ಥಿಗಳು: ಸುನಿಲ್ ಟಿ. ಆರ್ (ಸೋಶಿಯಲಿಸ್ಟ್ ಯೂನಿಟಿ ಸೆಂಟರ್ ಆಫ್ ಇಂಡಿಯಾ ಪಕ್ಷ), ಎಂ.ಎಸ್ ಪ್ರವೀಣ್ (ಕರ್ನಾಟಕ ರಾಷ್ಟ್ರ ಸಮಿತಿ), ಎ.ಎಸ್ ಸತೀಶ್ (ಅಖಿಲ ಭಾರತ ಹಿಂದೂ ಮಹಾ ಸಭಾ ), ಪಿ.ಎಸ್ ಯಡಿಯೂರಪ್ಪ (ಪಕ್ಷೇತರ ), ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ (ಭಾರತೀಯ ಜನತಾ ಪಕ್ಷ), ಹೆಚ್. ಕೆ ಕೃಷ್ಣ (ಕರುನಾಡು ಪಾರ್ಟಿ ),ಲೀಲಾವತಿ ಜೆ ಎಸ್ (ಉತ್ತಮ ಪ್ರಜಾಕೀಯ ಪಕ್ಷ), ರಂಗಸ್ವಾಮಿ ಎಂ (ಪಕ್ಷೇತರ ), ರಾಮ ಮೂರ್ತಿ ಎಂ (ಪಕ್ಷೇತರ ), ಹರೀಶ್ ಎನ್ (ಸೋಶಿಯಲಿಸ್ಟ್ ಪಾರ್ಟಿ ), ಎಂ ಲಕ್ಷ್ಮಣ್ (ಭಾರತೀಯ ರಾಷ್ಟ್ರೀಯ ಕಾಂಗ್ರೆಸ್ ), ಕ್ರಿಸ್ಟೋಫರ್ ರಾಜಕುಮಾರ್ (ಇಂಡಿಯನ್ ಮೂವ್ಮೆಂಟ್ ಪಾರ್ಟಿ ), ಪಿ ಕೆ ದರ್ಶನ್ ಶೌರಿ (ಪಕ್ಷೇತರ ), ರಾಜು (ಪಕ್ಷೇತರ), ಹೆಚ್ .ಎಂ ನಂಜುಂಡಸ್ವಾಮಿ (ಸಮಾಜವಾದಿ ಜನತಾ ಪಾರ್ಟಿ –ಕರ್ನಾಟಕ ), ಎನ್.ಅಂಬರೀಷ್ (ಕರ್ನಾಟಕ ಜನತಾ ಪಕ್ಷ ), ಎ.ಜಿ ರಾಮಚಂದ್ರ ರಾವ್ (ಜಾತ್ಯತೀತ ಪ್ರಜಾಪ್ರಭುತ್ವ ಕಾಂಗ್ರೆಸ್ ), ಅಂಬೇಡ್ಕರ್ ಸಿ ಜೆ (ಪಕ್ಷೇತರ ) ಅಂತಿಮ ಕಣದ ಅಭ್ಯರ್ಥಿಗಳಾಗಿದ್ದಾರೆ.

# ಮೋದಿ ಮಾಡಿರುವ ಅನ್ಯಾಯ ಹೇಳಿದರೆ ಸಿದ್ದರಾಮಯ್ಯಗೆ ದುರಹಂಕಾರ ಅಂತಾರೆ



**ಬೆಂಗಳೂರು:** ನರೇಂದ್ರ ಮೋದಿ ಮಾಡಿರುವ ಅನ್ಯಾಯವನ್ನು ನಾನು ಪಟ್ಟಿ ಮಾಡಿ ಹೇಳಿದರೆ ಸಿದ್ದರಾಮಯ್ಯನಿಗೆ ದುರಹಂಕಾರ ಎನ್ನುತ್ತಾರೆ ಎಂದು ಸಿಎಂ ಸಿದ್ದರಾಮಯ್ಯ ಬಿಜೆಪಿ ನಾಯಕರ ವಿರುದ್ಧ ವಾಗ್ದಾಳಿ ನಡೆಸಿದರು.

ಪ್ರೊ.ರಾಜೀವ್ ಗೌಡ ಪರ ಸುಬ್ರಹ್ಮಣ್ಯಪುರ ಸರ್ಕಲ್‌ನಲ್ಲಿ ಮಾತನಾಡಿದ ಸಿದ್ದರಾಮಯ್ಯ, ಸತ್ಯ ಹೇಳಿದ್ರೆ ಎದ್ದು ಬಂದು ಎದೆಗೆ ಒದ್ರು ಅಂತಾರೆ. 15 ಲಕ್ಷ ಕೊಡ್ತೀವಿ ಅಂದ್ರು, ಕೊಡಲಿಲ್ಲ. ಎಲ್ಲ ಬೆಲೆ ಇಳಿಸುತ್ತೇವೆ ಅಂದ್ರು, ಇಳಿಸಲಿಲ್ಲ. ನಾನು 5 ಗ್ಯಾರಂಟಿ ಘೋಷಣೆ ಮಾಡಿದ್ದೆ. ನುಡಿದಂತೆ ನಡೆದಿದ್ದೇನೆ. ನರೇಂದ್ರ ಮೋದಿ ಮಾಡಿರುವ ಅನ್ಯಾಯವನ್ನು ನಾನು ಪಟ್ಟಿ ಮಾಡಿ ಹೇಳಿದರೆ ಸಿದ್ದರಾಮಯ್ಯನಿಗೆ ದುರಹಂಕಾರ ಎನ್ನುತ್ತಾರೆ ಎಂದು ಟೀಕಿಸಿದರು ಕರ್ನಾಟಕಕ್ಕೆ ಕೊಡಬೇಕಾದ ಹಣವನ್ನ ನೀಡಿದ್ದೇವೆ ಅಂತಾರೆ. ಆದರೆ ಅದನ್ನು ನೀಡಿಲ್ಲ. 15ನೇ ಹಣಕಾಸು ಆಯೋಗ ಶಿಫಾರಸು ಮಾಡಿದ ಹಣ ನೀಡಲಿಲ್ಲ. 5,300 ಕೋಟಿ ಹಣವನ್ನ ಭದ್ರ ಅಪ್ಪರ್ ಯೋಜನೆಗೆ ನೀಡ್ತಿವಿ ಅಂದ್ರು. ಒಂದು ರೂಪಾಯಿ ಬರಲಿಲ್ಲ. ಕರ್ನಾಟಕದಿಂದ 25 ಜನ ಹೋಗಿದ್ದಾರೆ. ಯಾರಾದ್ರೂ ಬಾಯಿ ಬಿಟ್ಟಿದ್ದೀರಾ? ಶೋಭಾ ಕರಂದ್ಲಾಜೆ ಅವರು ಬಾಯಿ ಬಿಟ್ಟಿದ್ದಾರಾ? ಇವ್ರು ಯಾರಾದ್ರೂ ನ್ಯಾಯ ಕೇಳಿದ್ದಾರಾ? ನಾನು ನ್ಯಾಯ ಕೇಳಿದ್ರೆ ಹಿಂದೂ ವಿರೋಧಿ ಅಂತಾರೆ. ಶ್ರೀರಾಮನ ವಿರೋಧಿ ಅಂತಾರೆ. ನಾನೇಕೆ ಹಿಂದೂ ವಿರೋಧಿ? ನಾನು ಹಿಂದೂನೆ. ನನ್ನ ಹೆಸರಿನಲ್ಲೇ ರಾಮ ಇದ್ದಾನೆ. ನಾನು ಸಿದ್ದರಾಮಯ್ಯ. ನಾನು ನ್ಯಾಯ ಕೇಳೋದು ತಪ್ಪಾ ಎಂದು ಕೇಳಿದರು.

ಕರ್ನಾಟಕಕ್ಕೆ ಆಗಿರುವ ಅನ್ಯಾಯ ವಿರೋಧ ಮಾಡ್ತಾರೆ. ಅಂತಹ ಅಭ್ಯರ್ಥಿಯನ್ನ ಆಯ್ಕೆ ಮಾಡೋದು ನಿಮ್ಮೆಲ್ಲರ ಕರ್ತವ್ಯ. ಉತ್ತರ ಲೋಕಸಭಾ ಕ್ಷೇತ್ರದ ಪ್ರೊ.ರಾಜೀವ್ ಗೌಡ ಅವರನ್ನ ಅಭ್ಯರ್ಥಿಯನ್ನಾಗಿ ಮಾಡಿದ್ದೇವೆ. ವಿದ್ಯಾವಂತರು, ಈ ದೇಶದ ರಾಜಕಾರಣದ ಬಗ್ಗೆ ಜ್ಞಾನ ಹೊಂದಿರುವ ವ್ಯಕ್ತಿ. ಇವರ ತಂದೆ ಎಸ್.ಎಂ.ಕೃಷ್ಣ ಕಾಲದಲ್ಲಿ ಸ್ಪೀಕರ್ ಆಗಿದ್ರು. 6 ವರ್ಷಗಳ ಕಾಲ ರಾಜ್ಯಸಭಾ ಸದಸ್ಯರಾಗಿ ಕೆಲಸ ಮಾಡಿದ್ದಾರೆ. ತಮ್ಮ ಸಾಮರ್ಥ್ಯ ರಾಜ್ಯಸಭೆಯಲ್ಲಿ ಸಾಬೀತು ಮಾಡಿದ್ದಾರೆ. ಇವರು ಅತ್ಯಂತ ಸಮರ್ಥ ಲೋಕಸಭಾ ಸದಸ್ಯರಾಗ್ತಾರೆ. ಕರ್ನಾಟಕಕ್ಕೆ ಅನ್ಯಾಯ ಆಗಿರುವ ಬಗ್ಗೆ ಧ್ವನಿ ಎತ್ತುವ ಶಕ್ತಿ ಇವರಿಗೆ ಇದೆ ಎಂದು ಜನರಿಗೆ ತಿಳಿಸಿದರು.

# ಕಾಂಗ್ರೆಸ್ ಅಭ್ಯರ್ಥಿ ಮತಭೇಟೆ

## ಲಕ್ಷ್ಮಣ್ ಪರ ಮರಿಗೌಡ, ವಿಜಯಕುಮಾರ್ ಪ್ರಚಾರ

**ಮೈಸೂರು:** ಮಹಾನಗರಪಾಲಿಕೆ ವ್ಯಾಪ್ತಿಯ ವಾರ್ಡ್ ನಂ.44, 45 ಹಾಗೂ 46 ನೇ ವಾರ್ಡಿನಲ್ಲಿ ಮೈಸೂರು–ಕೊಡಗು ಲೋಕಸಭಾ ಕ್ಷೇತ್ರದ ಅಭ್ಯರ್ಥಿ ಎಂ.ಲಕ್ಷ್ಮಣ್ ಕಾಂಗ್ರೆಸ್ ಮುಖಂಡರ ಜತೆಗೂಡಿ ಮತಯಾಚನೆ ನಡೆಸಿದರು.



44 ನೇ ವಾರ್ಡಿನ ಶ್ರೀ ಮಹದೇಶ್ವರ ದೇವಸ್ಥಾನಕ್ಕೆ ಭೇಟಿ ನೀಡಿ ದೇವರಿಗೆ ಪೂಜೆ ಸಲ್ಲಿಸಿ ಜನರ ಬಳಿ ಮತಯಾಚನೆ ಮಾಡಿದರು. ಈ ಸಂದರ್ಭದಲ್ಲಿ ಮುಡಾ ಅಧ್ಯಕ್ಷ ಕೆ.ಮರೀಗೌಡ ಮಾತನಾಡಿ ನಮ್ಮ ಪಕ್ಷದ ಅಭ್ಯರ್ಥಿ ಲಕ್ಷ್ಮಣ್ ನಿಮ್ಮ ಬಳಿ ಮತಯಾಚನೆ ಮಾಡಲು ಬಂದಿದ್ದಾರೆ. ಹಬ್ಬದ ಸಂದರ್ಭದಲ್ಲೂ ಕೂಡ ನಮ್ಮ ಪಕ್ಷದ ಯೋಜನೆ ಗಳನ್ನು ನೋಡಿ ಹೆಚ್ಚಿನ ಸಂಖ್ಯೆಯಲ್ಲಿ ನೀವು ಬಂದಿದ್ದೀರಾ. ಲಕ್ಷ್ಮಣ್ ರವರು ನಮ್ಮ ಪಕ್ಷದ ಒಬ್ಬ ನಿಷ್ಠಾವಂತ ಹೋರಾಟಗಾರ. ನಮ್ಮ ಸಿಎಂ ಡಿಸಿಎಂ ಸಾಮಾನ್ಯ ಕಾರ್ಯಕರ್ತರನ್ನು ನಿಮ್ಮ ಮುಂದೆ ನಿಲ್ಲಿಸಿದ್ದಾರೆ. ನಮ್ಮ ಪಕ್ಷದ ಲಕ್ಷ್ಮಣ್ ರವರಿಗೆ ಮತ ಕೇಳುವ ನೈತಿಕ ಹಕ್ಕು ಇದೆ. 5 ಗ್ಯಾರಂಟಿ ಯೋಜನೆಗಳನ್ನು ಅನುಷ್ಠಾನಕ್ಕೆ ತಂದಿದೆ.ಈ ಎಲ್ಲವೂ ಕೂಡ ನಿಮಗೆ ಉಪಯೋಗವಾಗಿದೆ. ರಾಜ್ಯದ ಜನರು ಸುಖವಾಗಿ ಬದುಕಲು ಗ್ಯಾರಂಟಿ ಯೋಜನೆ ಉಪಯೋಗವಾಗಿದೆ. ಇನ್ನು ಮುಂದೆ ಕೇಂದ್ರದಿಂದ ಗ್ಯಾರಂಟಿ ಯೋಜನೆಗಳು ಬರಲಿದೆ.

ಎಲ್ಲಾ ಮುಖಂಡರು ಪಕ್ಷದ ಸಂಘಟನೆ ಮಾಡಿದ್ದೇವೆ. ನಮ್ಮ ಪಕ್ಷದ ಗ್ಯಾರಂಟಿ ಯೋಜನೆಗಳನ್ನು ಮನೆ ಮನೆಗೆ ಹೋಗಿ ಯೋಜನೆಗಳ ಬಗ್ಗೆ ತಿಳಿಸಿದ್ದು, ಯುಗಾದಿ ಹಬ್ಬದಂದು ಪೂಜೆ ಸಲ್ಲಿಸಿದ್ದೇವೆ ಜನರು ನಮ್ಮ ಜೊತೆ ಇದ್ದಾರೆ ಲಕ್ಷ್ಮಣ್ ಗೆಲುವು ಖಚಿತ ಎಂದು ಹೇಳಿದ್ದರು.

ಗ್ರಾಮಾಂತರ ಅಧ್ಯಕ್ಷರು ಬಿ ಜೆ.ವಿಜಯಕುಮಾರ್ ರವರು ಮಾತನಾಡಿ,3 ಲಕ್ಷ ಮತದಾರರು ಈ ವಾರ್ಡಿನಲ್ಲಿ ಇದ್ದಾರೆ. ನಾನು ವಿದ್ಯಾರ್ಥಿಯಾಗಿದ್ದಾಗ ಚಿಕ್ಕಣ್ಣ ರವರ ಜೊತೆ ಕೆಲಸ ಮಾಡಿದ್ದೇವೆ. ನನಗೆ ಈ ಭಾಗದಲ್ಲಿ ಹೆಚ್ಚು ಒಡನಾಟವಿದೆ ಮತ್ತು ದೊಡ್ಡ ಮಟ್ಟದ ಸಂಪರ್ಕ ಇದೆ. ತಾವೇ ಜವಾಬ್ದಾರಿ ತೆಗೆದುಕೊಳ್ಳಬೇಕು. ಕೇಂದ್ರದ ಕಾಂಗ್ರೆಸ್ ಗ್ಯಾರಂಟಿ ಕಾರ್ಡ್ ಕೊಡಲು ಸಿದ್ಧತೆ ನಡೆದಿದೆ. ಹಳೆ ಯೋಜನೆ ಚಾಲ್ತಿಯಲ್ಲಿರುತ್ತೇವೆ ಮುಂದೆ ಹೊಸ ಯೋಜನೆಗಳು ಸೇರುತ್ತಾ ಹೋಗುತ್ತವೆ. ಈ ಚುನಾವಣೆಯಲ್ಲಿ ನಮ್ಮ ಲಕ್ಷ್ಮಣ್ ಗೆಲ್ಲಬೇಕು ಪಾರ್ಲಿಮೆಂಟಿಗೆ ಹೋಗಲೇಬೇಕು. ಈ ವಾರ್ಡಿನ ಜನರು ಅತ್ಯಂತ ಲೀಡ್ ಕೊಡಬೇಕೆಂದು ಮತಯಾಚನೆ ಮಾಡಿದ್ದರು.

ಈ ಸಂದರ್ಭದಲ್ಲಿ ಎಂ.ಲಕ್ಷ್ಮಣ್ ರವರು ಮಾತನಾಡಿ, ನಮ್ಮ ಸಿಎಂ ಮತ್ತು ಡಿಸಿಎಂ ಹಾಗೂ ಮಲ್ಲಿಕಾರ್ಜುನ್ ಖರ್ಗೆ ಸಾಹೇಬರೂ ನನ್ನನ್ನು ಅಭ್ಯರ್ಥಿಯಾಗಿ ಮಾಡಿದ್ದಾರೆ. ಕಳೆದ ಬಾರಿ ಶೇ. 67 ರಷ್ಟು ಮತದಾನ ವಾಗಿತ್ತು. ಈ ಬಾರಿ ಆ ರೀತಿ ನಡೆಯಬಾರದು. ನಮ್ಮ 5 ಗ್ಯಾರಂಟಿ ಯೋಜನೆ ಗಳನ್ನು ಜನರು ಉಪಯೋಗಿಸುತ್ತಿದ್ದಾರೆ. ಗ್ಯಾರಂಟಿ ಯೋಜನೆಗಳ ಪ್ರಣಾಳಿಕೆ ಬಿಡುಗಡೆಗೆ ಮುನ್ನವೆ ಪ್ರತಿ ಮನೆ ಮನೆಗೂ ಗ್ಯಾರಂಟಿ ಕಾರ್ಡ್ ತಲುಪಿಸಿದ್ದೇವು. ಗೆದ್ದ ನಂತರ ಗ್ಯಾರಂಟಿ ಯೋಜನೆ ಜಾರಿ ಮಾಡಿದ್ದೇವೆ.90ರಷ್ಟು ಜನರಿಗೆ ಗ್ಯಾರಂಟಿ ಯೋಜನೆ ತಲುಪಿದೆ.ಮಹಿಳೆಯರು ಫ್ರೀ ಬಸ್ ನಲ್ಲಿ ಓಡಾಟ ಮಾಡುತ್ತಿದ್ದಾರೆ.2 ಸಾವಿರ ದುಡ್ಡು ಬರ್ತಿದೆ. ನಾವು ಏನು ಆಶ್ವಾಸನೆ ಕೊಟ್ಟಿದ್ದೂ ಅದನ್ನು ಈಡೇರಿಸಿದ್ದೇವೆ. ಮತ್ತೆ 5 ನ್ಯಾಯ ಗಳನ್ನು ಕೇಂದ್ರದಲ್ಲಿ ಸಹಿ ಮಾಡಿರುವ ಗ್ಯಾರಂಟಿ ಕಾರ್ಡ್ಗಗಳನ್ನು ನಿಮ್ಮ ಮನೆಗೆ ತಲುಪಿಸುತ್ತೇವೆ. ಕೇಂದ್ರದಲ್ಲಿ ನಮ್ಮ ಪಕ್ಷ ಅಧಿಕಾರಕ್ಕೆ ಬಂದರೆ 5 ನ್ಯಾಯಗಳು ನಿಮ್ಮ ಮನೆಗೆ ತಲುಪಿಸುತ್ತೇವೆ. ಅದಕ್ಕೆ ನಾವು ಬದ್ಧರಾಗಿದ್ದೇವೆ. ಮಹಿಳೆಯರಿಗೆ 1 ಲಕ್ಷ ವರ್ಷಕ್ಕೆ ರೈತರಿಗೆ ಕೂಲಿ 400ಕ್ಕೆ ಏರಿಕೆ ಮಾಡುತ್ತೇವೆ. ನೀವು ಬಿಜೆಪಿ ಗೆಲ್ಲಿಸಿದ್ದರೆ ಈ ಗ್ಯಾರಂಟಿ ಯೋಜನೆ ನಿಲ್ಲುತ್ತದೆ. ನಮ್ಮ ಪಕ್ಷ ಯಾವಾಗಲೂ ದೀನದಲಿತರ ಪಕ್ಷ ಬಡವರ ಪರವಾಗಿ ನಿಂತಿರುವ ಪಕ್ಷ. ನೀವು ಬಿಜೆಪಿ ಯವರನ್ನು ಪ್ರಶ್ನೆ ಕೇಳಿದರೆ ಮೋದಿ ಮೋದಿ ಎಂದು ಹೇಳುತ್ತಾರೆ. ನಾನು ನಿಮ್ಮ ತರ ಸಾಮಾನ್ಯ ಕಾರ್ಯಕರ್ತ, ನಾನು ಬೀದಿಯಲ್ಲಿ ಇರುವ ವ್ಯಕ್ತಿ ಯಾವಾಗ ಬೇಕಾದರೂ ಸಿಗುವ ವ್ಯಕ್ತಿ. ನನಗೆ ಬೆಂಬಲ ನೀಡಿ ಎಂದು ಮನವಿ ಮಾಡಿಕೊಂಡು ಮತಯಾಚನೆ ಮಾಡಿದ್ದರು.

46ನೇ ವಾರ್ಡಿನ ಪ್ರಚಾರ: ದಟ್ಟಗಳ್ಳಿಯ ವಾರ್ಡ್ ನಂಬರ್ 46ರಲ್ಲಿ ಓಂ ಶ್ರೀ ಸಾಯಿ ಟ್ರಸ್ಟ್ ಗೆ ಭೇಟಿ ನೀಡಿ ಮತಯಾಚನೆ ಮಾಡಿದರು. ಮಹಾತ್ಮ ಗಾಂಧೀಜಿ ರವರ ಫೋಟೋಗೆ ಪುಷ್ಪಾರ್ಚನೆ ಮಾಡಿದ್ದರು ಮತದಾನದ ಮಹತ್ವ ತಿಳಿಸಿದರು. ಕಾಂಗ್ರೆಸ್ ಜಿಲ್ಲಾಧ್ಯಕ್ಷ ಬಿ.ಜೆ. ವಿಜಯ್ ಕುಮಾರ್ ಮಾತನಾಡಿ, ಚಾಮುಂಡೇಶ್ವರಿ ವ್ಯಾಪ್ತಿಗೆ ನಾಲ್ಕು ವಾರ್ಡಗಳು ಬರುತ್ತದೆ. ಈ ವಾರ್ಡಿನಲ್ಲಿ ಅತಿ ಹೆಚ್ಚು ಲೀಡ್ ಕೊಡುತ್ತೀರಿ ಎಂಬ ನಂಬಿಕೆಯಿದೆ. ಈ ಬಾರಿ ಎಲ್ಲಾ ಕ್ಷೇತ್ರದಲ್ಲೂ ನಮ್ಮ ಎಂಎಲ್ಎಗಳು ಇದ್ದಾರೆ. ಹೀಗಾಗಿ ಈ ಬಾರಿ ಅತ್ಯಂತ ಲೀಡ್ ನಲ್ಲಿ ಗೆಲ್ಲಿಸಬೇಕೆಂದು ನಿಮ್ಮಲ್ಲಿ ಮನವಿ ಮಾಡುತ್ತೇನೆ ಎಂದರು.

### 45ನೇ ವಾರ್ಡಿನಲ್ಲಿ ಪ್ರಚಾರ

**ಮೈಸೂರು ಕೊಡಗು ಲೋಕ ಸಭಾ ಅಭ್ಯರ್ಥಿ ಎಂ ಲಕ್ಷ್ಮಣ್ ವಾರ್ಡ್ ನಂಬರ್ 45 ನಿವೇದಿತಾ ನಗರದಲ್ಲಿ ಜನ ಸಂಪರ್ಕ ಸಭೆಗೆ ಭೇಟಿ ನೀಡಿದ್ದರು.ಈ ಸಂದರ್ಭದಲ್ಲಿ ಲಕ್ಷ್ಮಣ್ ಮಾತನಾಡಿ, ಜನರ ಬಳಿ ಕೈ ಮುಗಿದು ತಮ್ಮಲ್ಲಿ ಮತ ಕೇಳಿಕೊಳ್ಳುತ್ತೇನೆ. ಈ ಬಾರಿ ನನಗೊಂದು ಅವಕಾಶ ಮಾಡಿಕೊಡಿ ತಮ್ಮ ಸೇವೆಯಲ್ಲಿ ನಿರತನಾಗಿ ಕೆಲಸ ಮಾಡುತ್ತೇನೆ ಎಂದು ಮನವಿ ಮಾಡಿಕೊಂಡರು.**

## ಬೆಂಗೂರಲಿ ಕಾಲರಾ ಪತ್ತೆ ಬೆನ್ನಲ್ಲೇ ಪಿಜಿ ಅಸೋಸಿಯೇಷನ್ ನಿಂದ ಪ್ರತ್ಯೇಕ ಗೈಡ್‌ಲೈನ್ಸ್

**ಬೆಂಗಳೂರು:** ಸಿಲಿಕಾನ್ ಸಿಟಿಯ ಸರ್ಕಾರಿ ಕಾಲೇಜಿನ ಹಾಸ್ಟೆಲ್ ನಲ್ಲಿ ಕಾಲರಾ ಸೋಂಕು ಪತ್ತೆಯಾದ ಬೆನ್ನಲ್ಲೆ ಪಿಜಿಗಳ ಮಾಲೀಕರು ಮತ್ತು ವಾಸಿಗಳಿಗೆ ಆತಂಕ ಹೆಚ್ಚಾಗಿದೆ. ಸೋಂಕು ತಡೆಗಟ್ಟುವ ಹಿನ್ನೆಲೆ ಅಲರ್ಟ್ ಆಗಿರೋ ಪಿಜಿ ಮಾಲೀಕರ ಸಂಘ ನಗರದ ಎಲ್ಲಾ ಪಿಜಿಗಳಿಗೂ ಮುನ್ನೆಚ್ಚರಿಕೆ ವಹಿಸುವ ನಿಟ್ಟಿನಲ್ಲಿ ಅಗತ್ಯ ಕ್ರಮದ ಜೊತೆಗೆ ಗೈಡ್ ಲೈನ್ಸ್ ಹೊರಡಿಸಲು ಮುಂದಾಗಿದೆ. ಸದ್ಯ ಈ ವಿಚಾರಕ್ಕೆ ಸಂಬಂಧಪಟ್ಟಂತೆ ಈಗಾಗಲೇ ಎಲ್ಲಾ ಮಾಲೀಕರು ಮಾಹಿತಿ ನೀಡಿರುವ ಅಸೋಸಿಯೇಷನ್, ಮುಂದಿನ ಎರಡು ಮೂರು ವಾರದಲ್ಲಿ ತುರ್ತು ಸಭೆ ಮಾಡಿ ಗೈಡ್ ಲೈನ್ಸ್ ಹೊರಡಿಸಲಿದೆ.



**ಗೈಡ್ ಲೈನ್ಸ್ ಹೇಗಿರಲಿದೆ:** ಪಿಜಿಗಳಲ್ಲಿ ಔಟ್ ಸೈಡ್ ಫುಡ್ ನಾಟ್ ಅಲೌಡ್. ಕಡ್ಡಾಯ ಆರ್ ಓ. ವಾಟರ್ ಗಳ ಬಳಕೆಗೆ ಸೂಚನೆ. ಮೂರು ಹೊತ್ತೂ ಬಿಸಿ ಆಹಾರ ಸಿದ್ಧ ಮಾಡಿಯೇ ವಾಸಿಗಳಿಗೆ ನೀಡುವುದು. ಪಿಜಿ ವಾಸಿಗಳ ಆರೋಗ್ಯದ ಮೇಲೆ ಮಾಲೀಕರೇ ನಿಗಾ ವಹಿಸಬೇಕು. ಯಾವುದೇ ರೀತಿಯ ಆರೋಗ್ಯ ಏರುಪೇರಾದಲ್ಲಿ ಕೂಡಲೇ ಮಾಲೀಕರ ಗಮನಕ್ಕೆ ತರಬೇಕು. ಗಮನಕ್ಕೆ ಬಂದ ಕೂಡಲೇ ಮಾಲೀಕರು ಕುಟುಂಬಸ್ಥರ ಮೂಲಕ ಅಥವಾ ಮಾಲೀಕರೇ ಆಸ್ಪತ್ರೆಗೆ ಕಳುಹಿಸುವ ಕೆಲಸ ಮಾಡಬೇಕು. ಪಿಜಿಯನ್ನ ನಿತ್ಯ ಸ್ವಚ್ಛವಾಗಿಡುವುದು. ವಾಸಿಗಳು ಕೂಡ ಕಡ್ಡಾಯ ನಿಯಮ ಪಾಲನೆ ಮಾಡಲೇಬೇಕು.

## 10 ರಿಂದ ಮಹರ್ಷಿ ಶಾಲೆಯಲ್ಲಿ ಬೇಸಿಗೆ ಶಿಬಿರ

**ಮೈಸೂರು:** ನಗರದ ಕೈಗಾರಿಕಾ ಉಪ ನಗರದ ಆವರಣದಲ್ಲಿರುವ ಮಹರ್ಷಿ ಪಬ್ಲಿಕ್ ಶಾಲೆಯಲ್ಲಿ ಇದೇ ಏ. 10 ರಿಂದ 30 ರವರೆಗೆ ಒಲಿಂಪಿಕ್ ಮಹರ್ಷಿ ಟೇಬಲ್ ಟೆನ್ನಿಸ್ ಅಕಾಡೆಮಿ ವತಿಯಿಂದ ಉದಯೋನ್ಮುಖ ಟೇಬಲ್ ಟೆನ್ನಿಸ್ ಆಟಗಾರರಿಗಾಗಿ ಬೇಸಿಗೆ ತರಬೇತಿ ಶಿಬಿರ ಆಯೋಜಿಸಲಾಗಿದೆ. ಈ ಕುರಿತು ಜಿಲ್ಲಾ ಪತ್ರಕರ್ತರ ಭವನದಲ್ಲಿ ಆಯೋಜಕರಾದ ಅಕ್ಷಯ್ ಮಮಂತ್ ಶಿಬಿರ ಕುರಿತು ಮಾಹಿತಿ ನೀಡಿ, ನಿತ್ಯ ಬೆಳಗ್ಗೆ ಆರರಿಂದ ಹತ್ತರವರೆಗೆ, ಸಂಜೆ ನಾಲ್ಕರಿಂದ ಎಂಟರವರೆಗೆ ಶಿಬಿರ ನಡೆಯಲಿದೆ. ರಾಷ್ಟ್ರ ಮಟ್ಟದ ಪದಕ ವಿಜೇತರು, ಪರಿಣಿತ ತರಬೇತುದಾರರು ತರಬೇತಿ ನೀಡಲಿದ್ದಾರೆ. ಐದು ವರ್ಷಕ್ಕಿಂತ ಹೆಚ್ಚಿನ ವಯಸ್ಸಿನ ಮಕ್ಕಳು ಪಾಲ್ಗೊಳ್ಳಬಹುದಾಗಿದೆ. ಈ ವೇಳೆ ಟೇಬಲ್ ಟೆನ್ನಿಸ್ ಕೌಶಲ್ಯ ವೃದ್ಧಿಗೆ ಗಮನ ನೀಡಲಾಗುತ್ತದೆ. ಶುಲ್ಕ ಹಾಗೂ ನೋಂದಣಿ ಕುರಿತ ಮಾಹಿತಿಗೆ ದೂ. 96864 75604 ನ್ನು ಸಂಪರ್ಕಿಸಬಹುದಾಗಿದೆ ಎಂದರು. ಸಂಸ್ಥೆಯ ತೇಜಸ್ ಶಂಕರ್, ಪ್ರಸನ್ನ ಇದ್ದರು.



# ಪೋಷಕರೇ ಎಚ್ಚರ ಶುರುವಾಗ್ತಿದೆ ಕಾಲರಾ– ಮಕ್ಕಳ ಆರೋಗ್ಯದ ಕಡೆ ಇರಲಿ ಗಮನ

**ಬೆಂಗಳೂರು:** ಸಿಲಿಕಾನ್ ಸಿಟಿಯಲ್ಲಿ ಅಕ್ಷರಶಃ ಜಲಕ್ಷಾಮ ಶುರುವಾಗಿದೆ. ಸರ್ಕಾರ ಕೂಡ ನೀರು ಸರಬರಾಜು ಮಾಡೋದಕ್ಕೆ ನಾನಾ ಪ್ರಯತ್ನ ಮಾಡ್ತಿದೆ. ಮತ್ತೊಂದೆಡೆ ಸುಡುಸುಡು ಬಿಸಿಲಿನ ವಾತಾವರಣ. ನೀರಿಲ್ಲದೇ ಜನ ಬೇಸಿಗೆಯಲ್ಲಿ ಜನ ಪರದಾಟ ಮಾಡ್ತಿದ್ರೇ ಈಗ ಆರೋಗ್ಯದ ಸಮಸ್ಯೆ ಕೂಡ ಶುರುವಾಗಿದ್ದು, ಕಾಲರಾ ಕಾಟ ಕೊಡಲು ಸಜ್ಜಾಗಿದೆ.

ಬಿರು ಬಿಸಿಲನ ವಾತಾವರಣ, ವಾಡಿಕೆಗಿಂತ ತಾಪಮಾನ ಹೆಚ್ಚಾಗಿ ಜನ ತತ್ತರಿಸ್ತಿದ್ದಾರೆ. ನೀರೇ ಇಲ್ಲದೇ ಕರೆ–ಕುಂಟೆ ಬಾವಿ, ನದಿಗಳು ಬತ್ತಿವೆ. ನೀರಿನಿಂದಲೇ ಕಾಲರಾ ಬರ್ತಿದ್ದು, ಈಗಾಗಲೇ 6 ಕ್ಕೂ ಹೆಚ್ಚು ಕೇಸ್ ಸಿಲಿಕಾನ್ ಸಿಟಿಯಲ್ಲಿ ದಾಖಲಾಗಿದೆ. ಹಾಗಾದ್ರೆ, ಕಾಲರಾದಿಂದ ದೂರ ಇರೋದು ಹೇಗೆ, ನಾವು ನಮ್ಮ ಮಕ್ಕಳು ಹಿರಿಯರನ್ನ ರಕ್ಷಿಸಿಕೊಳ್ಳೋದು ಹೇಗೆ..? ಅಲ್ಲದೇ ಬೇಸಿಗೆಯಲ್ಲಿ ಹೇಗೆ ಆಹಾರ ಇರಬೇಕು, ಅದರಲ್ಲೂ ಮಕ್ಕಳ ಬಗ್ಗೆ ಹೇಗೆ ಎಚ್ಚರಿಕೆ ವಹಿಸಬೇಕು ಎಂಬುದನ್ನು ಇಲ್ಲಿ ತಿಳಿಸಲಾಗಿದೆ. ಮಕ್ಕಳಿಗೆ ನಿತ್ಯ 2 ರಿಂದ 3 ಲೀಟರ್ ನೀರು ಕುಡಿಸಿ, ಕುಡಿಯುವ ನೀರನ್ನ ಕಾಯಿಸಿ, ಆರಿಸಿದ ನಂತರ ನೀಡಿ, ಪ್ಲಾಸ್ಟಿಕ್ ಬಾಟಲ್ ಬಳಸೋದನ್ನ ನಿಲ್ಲಿಸಿ, ಸ್ಟೀಲ್ ಬಾಟಲ್ ಗಳಲ್ಲಿ ನೀರನ್ನು ಕೊಡಿ, ಕೋಲ್ಡ್ ವಾಟರ್ ನೀಡಲೇಬೇಡಿ, ಮಿತವಾದ ಮೃದುವಾದ ಆಹಾರ ನೀಡಿ. ಮಕ್ಕಳು ಮಾತ್ರವಲ್ಲ ಪೋಷಕರು ಮತ್ತು ಹಿರಿಯರು ಸಹ ತಿನ್ನೋ ಆಹಾರದ ಬಗ್ಗೆ ಗಮನವಹಿಸಬೇಕು. ಜೊತೆಗೆ ಮನೆಯಿಂದ ಹೊರಗೆ ಬಂದಾಗ ಕಾಟನ್ ಬಟ್ಟೆಯನ್ನ ಧರಿಸಿ, ಸೆಖೆ ಅಂತಾ ಎಸಿಯಲ್ಲೇ ಇದ್ರೂ ಸಮಸ್ಯೆಯಾಗಲಿದೆ ಎಂದು ಆಹಾರ ತಜ್ಞೆ ಡಾ. ಪ್ರೇಮ ಹೇಳುತ್ತಾರೆ. ಒಟ್ಟಿನಲ್ಲಿ ಈ ಬೇಸಿಗೆ ನೀರಿಲ್ಲದೇ ನಾನಾ ಸಮಸ್ಯೆ ಉಂಟು ಮಾಡ್ತಿದೆ. ನೀರಿಗಾಗಿ ಜನ ಬೀದಿ ಬೀದಿ ಸುತ್ತೋ ಪರಿಸ್ಥಿತಿ ನಿರ್ಮಾಣವಾಗಿದ್ರೇ, ನೀರಿನಿಂದಲೇ ಕಾಲರಾ ಕೂಡ ಜನರ ನಿದ್ದೆಗೆಡಿಸ್ತಿರೋದಂತೂ ಸತ್ಯ.

# ಮೃತ ವ್ಯಕ್ತಿಗೆ ಮರುಜೀವ ಬಂದು ಸಾವು; ಮತ್ತೆ ಬದುಕಬಹುದೆಂದು ಕಾದು ಕುಳಿತ ಜನ!

**ರಾಮನಗರ:** ಮೃತಪಟ್ಟಿದ್ದ ವ್ಯಕ್ತಿಯೊಬ್ಬರಿಗೆ ಮರು ಜೀವ ಬಂದು ನಂತರ ಸ್ವಲ್ಪ ಸಮಯದ ಬಳಿಕ ಪ್ರಾಣ ಹೋಗಿರುವ ಅಚ್ಚರಿಯ ಘಟನೆ ಜಿಲ್ಲೆಯ ಚನ್ನಪಟ್ಟಣ ತಾಲೂಕಿನ ಹುಚ್ಚಯ್ಯನದೊಡ್ಡಿಯಲ್ಲಿ ನಡೆದಿದೆ. ಮರು ಜೀವ ಬಂದಾಗ ವೈದ್ಯರು ಪರೀಕ್ಷಿಸಿದ ನಂತರ ಆಸ್ಪತ್ರೆಗೆ ಕರೆದೊಯ್ಯುತ್ತಿದ್ದಾಗ ವ್ಯಕ್ತಿ ಮೃತಪಟ್ಟಿದ್ದಾನೆ.

ಕೂಲಿ ಕಾರ್ಮಿಕ ಶಿವರಾಮು (55) ಎಂಬುವವರು ಸೋಮವಾರ ಬೆಳಗ್ಗೆ 6.30ಕ್ಕೆ ಮೃತಪಟ್ಟಿದ್ದರು. ಅವರಿಗೆ ಮಧ್ಯಾಹ್ನ 12 ಗಂಟೆಗೆ ಮರುಜೀವ ಬಂದಿದೆ. ಬಳಿಕ ಮಧ್ಯಾಹ್ನ 12.45ಕ್ಕೆ ಮತ್ತೆ ಮೃತಪಟ್ಟಿದ್ದಾರೆ.

ಬೆಳಗ್ಗೆ ಶಿವರಾಮು ಅವರು ಕುಸಿದುಬಿದ್ದಿದ್ದರು. ಹೀಗಾಗಿ ವೈದ್ಯರನ್ನು ಕರೆಸಿ ತಪಾಸಣೆ ಮಾಡಿದಾಗ ಹೃದಯಾಘಾತದಿಂದ ಮೃತಪಟ್ಟಿದ್ದಾರೆಂದು ತಿಳಿಸಿದ್ದರು. ನಂತರ ಶವಸಂಸ್ಕಾರಕ್ಕೆ ಮೃತದೇಹವನ್ನು ಕೊಂಡೊಯ್ಯುವಾಗ ಶಿವರಾಮು ಎದ್ದು ಕುಳಿತಿದ್ದಾರೆ. ಇದರಿಂದ ಜನ ಗಾಬರಿಯಾಗಿದ್ದಾರೆ.

ಶಿವರಾಮುಗೆ ಮತ್ತೆ ಜೀವ ಬಂದಿದ್ದರಿಂದ ಕುಟುಂಬಸ್ಥರು ವೈದ್ಯರಿಗೆ ಮಾಹಿತಿ ನೀಡಿದ್ದಾರೆ. ಕೂಡಲೇ ಸ್ಥಳಕ್ಕೆ ಬಂದ ವೈದ್ಯರು ಶಿವರಾಮುರನ್ನು ಪರೀಕ್ಷಿಸಿ ಹೃದಯಾಘಾತ ಆಗುತ್ತಿದೆ, ಕೂಡಲೇ ಆಸ್ಪತ್ರೆಗೆ ಕರೆದೊಯ್ಯುವಂತೆ ಸೂಚಿಸಿದ್ದಾರೆ. ಹೀಗಾಗಿ ವ್ಯಕ್ತಿಯನ್ನು ಜಯದೇವ ಆಸ್ಪತ್ರೆಗೆ ಕರೆದೊಯ್ಯುತ್ತಿರುವಾಗ ಮಾರ್ಗಮಧ್ಯೆ ಮತ್ತೆ ಜೀವ ಹೋಗಿದೆ.

ಹೀಗಾಗಿ ಶಿವರಾಮು ಮೃತದೇಹವನ್ನು ಮತ್ತೆ ಹುಚ್ಚಯ್ಯನದೊಡ್ಡಿಗೆ ಸಂಬಂಧಿಕರು ತಂದಿದ್ದು, ಮತ್ತೆ ಜೀವಬರಬಹುದೆಂದು ಮನೆ ಬಳಿ ಶವವಿಟ್ಟು ಸಂಬಂಧಿಕರು ಕಾಯುತ್ತಿದ್ದಾರೆ. ಮತ್ತೊಂದೆಡೆ ಗ್ರಾಮಸ್ಥರು ಶವಸಂಸ್ಕಾರಕ್ಕೆ ಸಿದ್ಧತೆ ಮಾಡಿದ್ದಾರೆ.

# ಕೋಮುವಾದಿ ದೂರ ಇರಿಸಲು ಬಿಜೆಪಿಗೆ ದಸಂಸ ಬೆಂಬಲ

**ಮೈಸೂರು:** ಈ ಬಾರಿಯ ಲೋಕಸಭಾ ಚುನಾವಣೆ ವೇಳೆ ಕೋಮುವಾದಿ ಬಿಜೆಪಿಯನ್ನು ಅಧಿಕಾರದಿಂದ ದೂರ ಇರಿಸಲು ಕಾಂಗ್ರೆಸ್ ಗೆಲುವು ಅನಿವಾರ್ಯವಾಗಿದೆ. ಹೀಗಾಗಿ ದಲಿತ ಸಂಘರ್ಷ ಸಮಿತಿ– ಕರ್ನಾಟಕವು ಮೈಸೂರು– ಕೊಡಗು ಲೋಕಸಭಾ ಕ್ಷೇತ್ರ ಮತ್ತು ಚಾಮರಾಜನಗರ ಕ್ಷೇತ್ರಗಳಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳಿಗೆ ಬೆಂಬಲ ನೀಡಲಿದೆ ಎಂದು ರಾಜ್ಯಾಧ್ಯಕ್ಷ ಮಂಜುನಾಥ್ ಅಣ್ಣಯ್ಯ ತಿಳಿಸಿದರು.



ಜಿಲ್ಲಾ ಪತ್ರಕರ್ತರ ಭವನದಲ್ಲಿ ಸುದ್ದಿಗಾರರೊಡನೆ ಮಾತನಾಡಿ, ಈಗಿರುವ ಪ್ರಜಾಪ್ರಭುತ್ವ ವ್ಯವಸ್ಥೆ ಬದಲಾಯಿತಿ ಹಿಂದೂ ಧರ್ಮದ ಹೆಸರಿನಲ್ಲಿ, ಧರ್ಮ ಸಂಸತ್ ಸ್ಥಾಪಿಸಿ ಅದರ ಮೇಲೆ ಹಿಡಿತ ಸಾಧಿಸುವುದು ಬಿಜೆಪಿ ಹಾಗೂ ಆರ್‌ಎಸ್‌ಎಸ್ ಗುರಿಯಾಗಿದೆ. ಹೀಗಾಗಿ ಸುಮಾರು 400 ಲೋಕಸಭಾ ಸ್ಥಾನ ಗೆಲ್ಲಬೇಕೆಂದು ಅಪಾರ ಅಕ್ರಮ ಹಣವನ್ನು ಸಂಗ್ರಹಿಸಿಕೊಂಡಿದ್ದಾರೆ. ಮಾಧ್ಯಮಗಳನ್ನು ನಿಯಂತ್ರಣಕ್ಕೆ ತೆಗೆದುಕೊಳ್ಳಲು ಯತ್ನಿಸುವುದರೊಡನೆ ಇಡಿ, ಐಟಿ, ಸಿಬಿಐ ದಾಳಿಗಳ ಮೂಲಕ ವಿರೋಧ ಪಕ್ಷಗಳ ಮೇಲೆ ದಾಳಿ ನಡೆಸುತ್ತಿದ್ದಾರೆಂದು ಆರೋಪಿಸಿದರು.

ಈ ನಡುವೆ ದೇಶದಲ್ಲಿ ಇದಕ್ಕೆ ಪ್ರತಿರೋಧವೂ ಬಲವಾಗಿದೆ. ದೇಶದ ದುಡಿಯುವ ಜನರು, ದಮನಿತ ಸಮುದಾಯಗಳು, ಅಲ್ಪಸಂಖ್ಯಾತರು, ಪ್ರಜ್ಞಾವಂತರು ಒಂದಾಗುವ ಮೂಲಕ ಷಡ್ಯಂತ್ರ ವಿಫಲಗೊಳಿಸಲು ಶ್ರಮಿಸುತ್ತಿದ್ದಾರೆ. ಹೀಗಾಗಿ ಕಾಂಗ್ರೆಸ್ ವಿರುದ್ಧದ ನಿಸ್ತೇಜ ಮಾತುಗಳನ್ನು ತಿರಸ್ಕರಿಸುವ ಮೂಲಕ ಅದಕ್ಕೆ ಬೆಂಬಲ ನೀಡಬೇಕು. ಈ ಮೂಲಕ ಸಂವಿಧಾನ ರಕ್ಷಣೆಗೆ ಮುಂದಾಗಬೇಕು. ಇನ್ನು, ರಾಜ್ಯದಲ್ಲಿ ದಲಿತ ಸಿಎಂ ವಿಷಯ ಈ ಸಂದರ್ಭದಲ್ಲಿ ಪ್ರಸ್ತುತವಲ್ಲ ಎಂದರು.

ಇನ್ನಿತರ ಪದಾಧಿಕಾರಿಗಳಾದ ವಸಂತ್, ಪ್ರಶಾಂತ್, ರವಿ, ವಿನೋದ್ ಚಾಕೋ, ಉಮೇಶ್ ಇದ್ದರು.

# ಸಾಹಿತಿ ಸಿಪಿಕೆಗೆ 85ರ ಸನ್ಮಾನ

**ಮೈಸೂರು:** 85 ರ ಹುಟ್ಟುಹಬ್ಬದ ಹಿನ್ನೆಲೆಯಲ್ಲಿ ಹಿರಿಯ ಸಾಹಿತಿ ಡಾ.ಸಿ.ಪಿ.ಕೆ. ಅವರನ್ನು ವಾಟಾಳ್ ನಾಗರಾಜ್ ಅಭಿಮಾನಿಗಳ ಸಂಘದ ವತಿಯಿಂದ ಜಿಲ್ಲಾ ಪತ್ರಕರ್ತರ ಭವನದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಕನ್ನಡಪರ ಹೋರಾಟಗಾರ ವಾಟಾಳ್ ನಾಗರಾಜ್ ಸನ್ಮಾನಿಸಿದರು.

ಈ ವೇಳೆ ಈ ಬಾರಿಯ ಲೋಕಸಭಾ ಚುನಾವಣೆ ಕುರಿತಂತೆ ಮಾತನಾಡಿ, ತಾವೂ ಸಹ ಈ ಚುನಾವಣೆಯಲ್ಲಿ ಸ್ಪರ್ಧಿಸಿದ್ದು, ಇದುವರೆಗೆ ಗೆದ್ದುದಕ್ಕಿಂತ ಸೋತಿರುವುದೇ ಹೆಚ್ಚಾಗಿದೆ. ಆದರೂ ಸಂಸತ್‌ನಲ್ಲಿ ಕನ್ನಡ ಪರ ಧ್ವನಿಯೆತ್ತಬೇಕೆಂದು ನಿರ್ಧರಿಸಿ ಸ್ಪರ್ಧಿಸಿದ್ದೇನೆ. ರಾಜ್ಯದ ಯಾವೊಬ್ಬ ಸಂಸದರೂ ನಾಡು, ನುಡಿ, ಜಲ, ಭಾಷೆ ಬಗ್ಗೆ ಧ್ವನಿಯೆತ್ತಿಲ್ಲ.

ಈಗ ಚುನಾವಣೆಗಳಿಗೆ ಅರ್ಥ ಹೋಗಿದೆ. ಕಾಯಂ ಆಗಿ ಜೈಲಿನಲ್ಲಿರಬೇಕಾದವರೆಲ್ಲ ಈಗ ಸ್ಪರ್ಧಿಸಿದ್ದಾರೆ. ಮುಂದೆ ಚುನಾಯಿತರೂ ಆಗಬಹುದಾಗಿದೆ. ಚುನಾವಣೆ ಈಗ ದರೋಡೆಯಾಗಿದೆ. ಹಣವುಳ್ಳವರು ಮಾತ್ರ ನಿಲ್ಲುವಂತಾಗಿದೆ. ಎಲ್ಲ ಪಕ್ಷಗಳಲ್ಲಿಯೂ ಟಿಕೆಟ್‌ಗಳನ್ನು ಮನೆಯವರುಗಳೇ ಹಂಚಿಕೊಂಡಿದ್ದಾರೆ. ಇನ್ನು, ಬೇಕಿದ್ದರೆ ಯದುವೀರ್ ಅವರಿಗೆ ರಾಜ್ಯಸಭಾ ಸ್ಥಾನ ನೀಡಬಹುದಾಗಿತ್ತು. ಆದರೆ ಅವರು ಚುನಾವಣೆಗೆ ಏಕೆ ಸ್ಪರ್ಧಿಸಿದರೋ ತಿಳಿಯದಾಗಿದೆ ಎಂದು ಬೇಸರ ವ್ಯಕ್ತಪಡಿಸಿದರು. ನಂತರ, ಲಾರಿಗಟ್ಟಲೆ ಹೂಗಳನ್ನು ಮೈಮೇಲೆ ಎರಚಿಸಿಕೊಳ್ಳುವ ಪ್ರವೃತ್ತಿ ಪ್ರಧಾನಿಗೆ ಶೋಭೆ ತರುವುದಿಲ್ಲ ಎಂದು ಟೀಕಿಸಿದರು.



## ಚೆಕ್ ಪೋಸ್ಟ್‌ಗಳಲ್ಲಿ ತಪಾಸಣೆ ವೇಳೆ 95.25 ಲೀ ಮದ್ಯ ವಶಕ್ಕೆ

**ರಾಮನಗರ:** ಜಿಲ್ಲೆಯಾದ್ಯಂತ ಕಟ್ಟುನಿಟ್ಟಾಗಿ ಮಾದರಿ ನೀತಿ ಸಂಹಿತೆ ಜಾರಿಗೊಳಿಸಿದ್ದು ಏ. 8ರ ಬೆಳಿಗ್ಗೆ 9 ಗಂಟೆಯ ವರೆಗೆ ಒಟ್ಟು 95.25ಲೀ. ಮದ್ಯ ಜಿಲ್ಲೆಯ ವಿವಿಧ ಚೆಕ್‌ಪೋಸ್ಟ್‌ಗಳಲ್ಲಿ ತಪಾಸಣೆ ವೇಳೆ ವಶಕ್ಕೆ ಪಡೆಯಲಾಗಿದೆ. ಅಬಕಾರಿ ಇಲಾಖೆ ಕಾರ್ಯಾಚರಣೆ ವೇಳೆ 33,209 ರೂ. ಮೌಲ್ಯದ 95.25 ಲೀ ಮದ್ಯ ಹಾಗೂ 3 ವಿವಿಧ ವಾಹನಗಳನ್ನು ವಶಕ್ಕೆ ಪಡೆದು ಪ್ರಕರಣಗಳನ್ನು ದಾಖಲಿಸಲಾಗಿದೆ.

## ಪರೀಕ್ಷೆಗೆ ಆಹ್ವಾನ

**ರಾಮನಗರ:** ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್, ರಾಮನಗರ ಸಂಸ್ಥೆಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಸಿ-03 ಮತ್ತು ಸಿ-09 ಪಠ್ಯಕ್ರಮಗಳಲ್ಲಿ ಪ್ರವೇಶ ಪಡೆದಿರುವ ಹಾಗೂ ಸಿ-15 ಪಠ್ಯಕ್ರಮದಲ್ಲಿ ಲ್ಯಾಟರಲ್ ಎಂಟ್ರಿ ಮುಖಾಂತರ (2017-18ನೇ ಶೈಕ್ಷಣಿಕ ಸಾಲಿನವರೆಗೆ) ಎರಡನೇ ವರ್ಷಕ್ಕೆ ಪ್ರವೇಶ ಪಡೆದಿರುವ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ 2023-24ನೇ ಶೈಕ್ಷಣಿಕ ಸಾಲಿನಲ್ಲಿ ನಡೆಯುವ ಮೇ-2024ರ ಡಿಪ್ಲೋಮಾ ಸೆಮಿಸ್ಟರ್ ಪರೀಕ್ಷೆಗೆ ಹಾಜರಾಗಲು 2023-24ನೇ ಸಾಲುಗಳಲ್ಲಿ ಪ್ರವೇಶ ಪಡೆದಿರುವ ವಿದ್ಯಾರ್ಥಿಗಳಿಗೆ ಮೇ 2024ರ ಡಿಪ್ಲೋಮಾ ಸೆಮಿಸ್ಟರ್ ಪರೀಕ್ಷೆಗೆ ಹಾಜರಾಗಲು ಕೊನೆಯ ಅವಕಾಶ ನೀಡಿರುತ್ತಾರೆ. ವಿದ್ಯಾರ್ಥಿಗಳು ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್, ರಾಮನಗರ ಸಂಸ್ಥೆಯ ಪ್ರಾಚಾರ್ಯರನ್ನು ಸಂಪರ್ಕಿಸುವಂತೆ ರಾಮನಗರ ಸರ್ಕಾರಿ ಮಹಿಳಾ ಪಾಲಿಟೆಕ್ನಿಕ್‌ನ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಬೆಂಕಿಯ ಕೆನ್ನಾಲಿಗೆಗೆ 300 ದಾಳಿಂಬೆ ಗಿಡಗಳು ಭಸ್ಮ

**ಹುಳಿಯಾರು:** ಆಕಸ್ಮಿಕವಾಗಿ ಬೆಂಕಿ ಬಿದ್ದು 300 ದಾಳಿಂಬೆ ಗಿಡಗಳು ಸುಟ್ಟು ಭಸ್ಮವಾಗಿ ಲಕ್ಷಾಂತರ ರೂ.ನಷ್ಟವಾಗಿರುವ ಘಟನೆ ಹುಳಿಯಾರು ಹೋಬಳಿಯ ಸೀಗೆಬಾಗಿಯಲ್ಲಿ ನಡೆದಿದೆ. ಸೀಗೇಬಾಗಿ ಸರ್ವೆ ನಂಬರ್ 106 ರಲ್ಲಿನ ಹಂದನಕೆರೆ ಹೋಬಳಿಯ ಲಕ್ಷ್ಮೀಪುರದ ದಾಸಪ್ಪ ಎಂಬುವವರಿಗೆ ಸೇರಿದ ಜಮೀನಿನಲ್ಲಿ ಈ ಬೆಂಕಿ ಅವಘಡ ಜರುಗಿದೆ. ಆಕಸ್ಮಿಕವಾಗಿ ಬಿದ್ದ ಬೆಂಕಿಯನ್ನು ಅಗ್ನಿ ಶಾಮಕ ಸಿಬ್ಬಂದಿ ನಂದಿಸುವಷ್ಟರಲ್ಲಿ 2 ಎಕರೆ ದಾಳಿಂಬೆಗೆ ಅಳವಡಿಸಿದ್ದ ಡ್ರಿಪ್ ಪೈಪು, ಬಳ್ಳಿಗಳು, ಪಿವಿಸಿ ಪೈಪ್‌ಗಳು, ಗೇಟ್ ವಾಲ್‌ಗಳು, ಪಕ್ಷಿ ನಿರೋಧಕ ಬಲೆ, ತಂತಿ, ಗುಜ್ಜು ಸೇರಿ ಇತರೆ ಎಲ್ಲಾ ಸಾಮಗ್ರಿಗಳು ಸುಟ್ಟು ಸುಮಾರು 3 ಲಕ್ಷ ರೂ. ನಷ್ಟವಾಗಿದೆ. ಘಟನಾ ಸ್ಥಳಕ್ಕೆ ಕಂದಾಯ, ತೋಟಗಾರಿಕೆ ಹಾಗೂ ಪೊಲೀಸ್ ಇಲಾಖೆಯ ಸಿಬ್ಬಂದಿಗಳು ಭೇಟಿ ನೀಡಿ ಘಟನೆಯ ವಿವರ ಪಡೆದು ಪ್ರಕರಣ ದಾಖಲಿಸಿಕೊಂಡಿವೆ.



## ವ್ಯಕ್ತಿತ್ವ ವಿಕಸನಕ್ಕಾಗಿ 21 ದಿನಗಳ ಉಚಿತ ಮಕ್ಕಳ ವಸಂತ ಶಿಬಿರ

**ಹುಳಿಯಾರು:** ಶ್ರೀ ಪತಂಜಲಿ ಯೋಗ ಅಧ್ಯಯನ ಮತ್ತು ಸಂಶೋಧನಾ ಕೇಂದ್ರ, ತುಮಕೂರು ಹಾಗೂ ಮೈಸೂರು ಇವರಿಂದ ಹುಳಿಯಾರಿನ ಶ್ರೀ ವಾಸವಿ ಕಲ್ಯಾಣ ಮಂಟಪದಲ್ಲಿ ಏ.12 ರ ಶುಕ್ರವಾರದಿಂದ ಬೆಳಿಗ್ಗೆ 6.30 ರಿಂದ 7.30 ರವರೆಗೆ ವ್ಯಕ್ತಿತ್ವ ವಿಕಸನಕ್ಕಾಗಿ 21 ದಿನಗಳ ಉಚಿತ ಮಕ್ಕಳ ವಸಂತ ಶಿಬಿರ ಆಯೋಜಿಸಲಾಗಿದೆ. ಶಿಬಿರದಲ್ಲಿ ಸರಳ ಯೋಗಾಸನಗಳು, ಪ್ರಾಣಾಯಾಮ, ದೇಶೀಯ ಆಟಗಳ ಮೂಲಕ ಶಾರೀರಿಕ ಶಿಕ್ಷಣ, ನೀತಿ ಕಥೆಗಳು, ದೇಶ ಭಕ್ತರ ಕಥೆಗಳ ಮೂಲಕ ನೈತಿಕ ಶಿಕ್ಷಣ. ಸರಳ ಹಾಗೂ ಸುಸಂಸ್ಕೃತ ಜೀವನ ಪದ್ಧತಿಯ ಮೂಲಕ ಪರಿಸರ ಸಂರಕ್ಷಣೆಯ ಮಹತ್ವ. ರಾಮಾಯಣ, ಮಹಾಭಾರತ, ಭಜನೆಗಳು ಭಕ್ತಿ ಗೀತೆ ಮೂಲಕ ಭವ್ಯ ಭಾರತ ನಿರ್ಮಾಣ, ಧ್ಯಾನ, ಅಗ್ನಿಹೋತ್ರ, ಅಮೃತವಚನ, ಪಂಚಾಂಗ ಪಠಣ ಮೂಲಕ ಆಧ್ಯಾತ್ಮಿಕ ಶಿಕ್ಷಣ. ಮಾತಾ ಪಿತೃ ಪೂಜನ, ಮಾತೃ ಭೋಜನ (ಕೈತುತ್ತು), ಪೌಷ್ಟಿಕ ಆಹಾರ ಪದ್ಧತಿ, ಅಭ್ಯಂಜನ ಸ್ನಾನ, ಇನ್ನಿತರ ಸಂಸ್ಕಾರಯುತ ಚಟುವಟಿಕೆಗಳು ನಡೆಯಲಿವೆ. ಶಿಬಿರ ಸಂಪೂರ್ಣ ಉಚಿತವಾಗಿದ್ದು ಹುಳಿಯಾರು ನಗರದ ಎಲ್ಲಾ ಯೋಗ ಬಂಧುಗಳು ಹಾಗೂ ಸಾರ್ವಜನಿಕ ಬಂಧುಗಳು ಈ ಶಿಬಿರದ ಸದುಪಯೋಗ ಪಡೆದುಕೊಳ್ಳಬೇಕಾಗಿ ಪ್ರಕಟಣೆಯಲ್ಲಿ ತಿಳಿಸಲಾಗಿದೆ. ಮಾಹಿತಿಗಾಗಿ 9008604156,9448533976 ಸಂಪರ್ಕಿಸಬಹುದಾಗಿದೆ.

## ಡಾ.ರವಿಕುಮಾರ್ ವರ್ಗಾವಣೆ

**ತಿಪಟೂರು:** ತಿಪಟೂರು ನಗರದ ಆರೋಗ್ಯ ಇಲಾಖೆಯ ತಾಲ್ಲೂಕು ವೈದ್ಯಾಧಿಕಾರಿಯಾಗಿ 9 ವರ್ಷಗಳ ಕಾಲ ಸೇವೆ ಸಲ್ಲಿಸಿದ ಡಾ.ರವಿಕುಮಾರ್ ವರ್ಗಾವಣೆಗೊಂಡಿದ್ದು ಹಿನ್ನಲೆಯಲ್ಲಿ ಬಯಲು ಸೀಮೆ ಸಾಂಸ್ಕೃತಿಕ, ಸಾಮಾಜಿಕ ಸಂಘದ ವತಿಯಿಂದ ಬೀಳ್ಕೊಡುಗೆ ಸಮಾರಂಭವನ್ನು ಹಮ್ಮಿಕೊಳ್ಳಲಾಗಿತ್ತು. ಈ ಸಂಧರ್ಭದಲ್ಲಿ ಸಂಘದ ಅಧ್ಯಕ್ಷ ಲಾಯರ್ ನಾಗರಾಜು, ಬಯಲುಸೀಮೆ ಸಹಕಾರ ಸಂಘದ ಅಧ್ಯಕ್ಷ ಕುಮಾರಸ್ವಾಮಿ, ಉದಯರವಿ ಸಹಕಾರ ಸಂಘದ ಅಧ್ಯಕ್ಷ ಕೆ.ಎಮ್.ರಾಜಣ್ಣ, ಹಳೇಪಾಳ್ಯಸದಣ್ಣ, ಪತ್ರಕರ್ತರಾದ ಬಾನುಪ್ರಶಾಂತ್, ಮಂಜುನಾಥ್‌ಹಾಲ್ಕುರಿಕೆ, ಡಿ.ಕುಮಾರ್, ರವೀಂದ್ರಕುಮಾರ್, ವೆಂಕಟೇಶ್, ಕೀರ್ತೀಶ್ ಹಾಜರಿದ್ದರು.

# ಮತ ಚಲಾಯಿಸಿ ಪ್ರಜಾಪ್ರಭುತ್ವ ಗೆಲ್ಲಿಸಿ: ಟಿ. ರಾಘವೇಂದ್ರ

**ರಾಮನಗರ:** ಭಾರತವು ವಿಶ್ವದ ಅತಿದೊಡ್ಡ ಪ್ರಜಾಪ್ರಭುತ್ವ ರಾಷ್ಟ್ರವಾಗಿದೆ. ಇಲ್ಲಿ 18 ವರ್ಷ ಮೇಲ್ಪಟ್ಟ ಎಲ್ಲರಿಗೂ ಮತದಾನದ ಹಕ್ಕಿದೆ. ದೇಶದ ಭವಿಷ್ಯಕ್ಕಾಗಿ ಪ್ರತಿಯೊಂದು ಮತ ಅತ್ಯಅಮೂಲ್ಯವಾದದ್ದು, ದೇಶದ ಸುಭದ್ರ ಭವಿಷ್ಯಕ್ಕಾಗಿ ಪ್ರತಿಯೊಬ್ಬರು ತಪ್ಪದೇ ಮತ ಚಲಾಯಿಸಿ ಪ್ರಜಾಪ್ರಭುತ್ವ ಗೆಲ್ಲಿಸಿ ಎಂದು ಸಹಾಯಕ ಚುನಾವಣಾಧಿಕಾರಿ ಟಿ. ರಾಘವೇಂದ್ರ, ಅವರು ಹೇಳಿದರು.

ಕನಕಪುರ ತಾಲ್ಲೂಕು ಸ್ವೀಪ್ ಸಮಿತಿ, ತಾಲ್ಲೂಕು ಪಂಚಾಯಿತಿ ವತಿಯಿಂದ ಸಾರ್ವತ್ರಿಕ ಲೋಕಸಭಾ ಚುನಾವಣೆ-2024ರ ಅಂಗವಾಗಿ ತಾಲೂಕು ಕಚೇರಿ ಆವರಣದಲ್ಲಿ ಮತದಾರರಲ್ಲಿ ಮತದಾನದ ಕುರಿತು ಜಾಗೃತಿ ಹಾಗೂ ಅರಿವು ಮೂಡಿಸಲು ಆಯೋಜಿಸಲಾಗಿದ್ದ ಬೈಕ್ ರ‍್ಯಾಲಿಗೆ ಚಾಲನೆ ನೀಡಿ ಮಾತನಾಡಿದರು.

ಉತ್ತಮ ನಾಳೆಗಳು ಬೇಕಾದರೆ ಮತದಾನ ಮಾಡುವ ಮೂಲಕ ಎಲ್ಲ ಅರ್ಹ ನಾಗರಿಕರು ಮತದಾನದ ಹಕ್ಕು ಚಲಾಯಿಸಬೇಕು. ಮತದಾನ ದೇಶದ ಉತ್ತಮ ಭವಿಷ್ಯಕ್ಕೆ ಬುನಾದಿ. ಮತದಾನ ಮಾಡುವ ಮೂಲಕ ಆ ಬುನಾದಿಯನ್ನು ಸದೃಢಗೊಳಿಸಿ ಎಂದರು. 18 ವರ್ಷ ಮೇಲ್ಪಟ್ಟ ಪ್ರತಿಯೊಬ್ಬ ಪ್ರಜೆಯು ಕಡ್ಡಾಯವಾಗಿ ಮತದಾನ ಮಾಡಬೇಕು. ವಿಶೇಷವಾಗಿ 80 ವರ್ಷ ಮೇಲ್ಪಟ್ಟವರಿಗೆ ಹಾಗೂ ವಿಕಲಚೇತನರಿಗೆ ಅಂಚೆ ಮತದಾನ ಮಾಡಲು ಅವಕಾಶ ಕಲ್ಪಿಸಲಾಗಿದೆ. ವಿಶೇಷ ಚೇತನರು ಹಿರಿಯ ನಾಗರಿಕರು ತಪ್ಪದೆ ಮತದಾನ ಮಾಡುವಂತೆ ತಿಳಿಸಿದರು.



ತಹಶೀಲ್ದಾರರಾದ ಸ್ಮಿತಾರಾಮು ಅವರು ಮಾತನಾಡಿ, ಪ್ರಜಾಪ್ರಭುತ್ವ ವ್ಯವಸ್ಥೆ ಭದ್ರಪಡಿಸಲು ಪ್ರತಿಯೊಬ್ಬರು ಮತ ಚಲಾಯಿಸಬೇಕು. ಮತದಾನ ನಮ್ಮ ಹಕ್ಕು, ಕಡ್ಡಾಯವಾಗಿ ಮತದಾನ ಮಾಡಿ, ಯಾರೊಬ್ಬರೂ ಮತಚಲಾಯಿಸದೆ ಹೊರಗುಳಿಯಬಾರದು 18 ವರ್ಷ ವಯಸ್ಸಿನ ಮೇಲ್ಪಟ್ಟ ಎಲ್ಲರೂ ಮತದಾರರ ಪಟ್ಟಿಯಲ್ಲಿ ಹೆಸರು ನೋಂದಾಯಿಸಿಕೊಳ್ಳಬೇಕು, ಮತದಾರರ ಪಟ್ಟಿಯಲ್ಲಿ ನಿಮ್ಮ ಹೆಸರನ್ನು ಓಟರ್ ಹೆಲ್ಪ್ ಲೈನ್ ಆಪ್ ಮೂಲಕ ಪರಿಶೀಲಿಸಿವ ಬಗ್ಗೆ ಹಾಗೂ ಮತದಾನದ ಮಹತ್ವ ಕುರಿತು ಮಾಹಿತಿ ನೀಡಿದರು.

ನಗರದ ಮುಖ್ಯ ರಸ್ತೆಗಳಲ್ಲಿ ಬೈಕ್ ರ‍್ಯಾಲಿ ನಡೆಸಿ ಕಡ್ಡಾಯ ಮತದಾನ ಮಾಡುವಂತೆ ಘೋಷಣೆ ಕೂಗಿ ಮತದಾನದ ಕುರಿತು ಜಾಗೃತಿ ಮೂಡಿಸಲಾಯಿತು. ಈ ಸಂದರ್ಭದಲ್ಲಿ ಕನಕಪುರ ತಾಲ್ಲೂದಕು ಕಾರ್ಯನಿರ್ವಾಹಕ ಅಧಿಕಾರಿ ಮೋಹನ್ ಬಾಬು, ನಗರಸಭೆ ಆಯುಕ್ತರಾದ ಮಹದೇವ, ವಿಕಲಚೇತನ (ವಿಶೇಷಚೇತನ) ಕಾರ್ಯಕರ್ತರು, ಪ್ರಥಮ ದರ್ಜೆ ಕಾಲೇಜು ವಿದ್ಯಾರ್ಥಿಗಳು ಸೇರಿದಂತೆ ತಾಲ್ಲೂಕು ಪಂಚಾಯತಿ ಹಾಗೂ ನಗರಸಭೆ ಸಿಬ್ಬಂದಿಗಳು ಉಪಸ್ಥಿತರಿದ್ದರು.

# ಅಭ್ಯರ್ಥಿಗಳ ಖರ್ಚು-ವೆಚ್ಚಗಳ ಮೇಲೆ ನಿಗಾ ವಹಿಸಿ: ಮುರಳಿ ಕುಮಾರ್

**ರಾಮನಗರ:** ಜಿಲ್ಲೆಯಾದ್ಯಂತ ಕಟ್ಟುನಿಟ್ಟಾಗಿ ಮಾದರಿ ನೀತಿ ಸಂಹಿತೆ ಜಾರಿಗೊಳಿಸಿದ್ದು ಲೋಕಸಭಾ ಸಾರ್ವತ್ರಿಕ ಚುನಾವಣೆಯಲ್ಲಿ ಸ್ಪರ್ಧಿಸುವ ಅಭ್ಯರ್ಥಿಗಳು ಪ್ರಚಾರಕ್ಕಾಗಿ ವೆಚ್ಚ ಮಾಡುವ ಹಣದ ಬಗ್ಗೆ ಪ್ರತಿ ದಿನ ನಿಗಾವಹಿಸಿ, ಸಭೆ, ಸಮಾರಂಭ, ವಾಹನಗಳ ತಪಾಸಣೆ, ಬ್ಯಾಂಕ್ ವಹಿವಾಟುಗಳ ಬಗ್ಗೆ ನಿಗಾ ವಹಿಸುವಂತೆ ವಿಶೇಷ ವೆಚ್ಚ ವೀಕ್ಷಕರಾದ ಮುರಳಿ ಕುಮಾರ್ ಅವರು ತಿಳಿಸಿದರು.

ಅವರು ಇಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಲೋಕಸಭಾ ಚುನಾವಣೆಗೆ ಸಂಬಂಧಿಸಿದಂತೆ ಜಿಲ್ಲೆಯ ಸಹಾಯಕ ಚುನಾವಣಾಧಿಕಾರಿಗಳು, ಆದಾಯ ತೆರಿಗೆ ಅಧಿಕಾರಿಗಳು, ವಾಣಿಜ್ಯ ತೆರಿಗೆ ಇಲಾಖೆ ಅಧಿಕಾರಿಗಳು, ಅಬಕಾರಿ ಇಲಾಖೆಯ ಅಧಿಕಾರಿಗಳನ್ನು ಉದ್ದೇಶಿಸಿ ನಡೆಸಿದ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಚುನಾವಣಾ ಕೆಲಸಕ್ಕಾಗಿ ನೇಮಕವಾಗಿರುವ ಎಫ್.ಎಸ್.ಟಿ, ಎಸ್.ಎಸ್.ಟಿ, ವಿವಿಟಿ ಹಾಗೂ ಇನ್ನಿತರ ತಂಡಗಳು ಜವಾಬ್ದಾರಿಯುತವಾಗಿ ಕೆಲಸ ನಡೆಸಿ ಅಭ್ಯರ್ಥಿಯು ಚುನಾವಣಾ ಆಯೋಗ ನೀಡಿರುವ ನಿರ್ದೇಶನಗಳನ್ನು ಪಾಲಿಸುತ್ತಿರುವ ಬಗ್ಗೆ ನಿಗಾವಹಿಸುವಂತೆ ತಿಳಿಸಿದರು.

ಒಬ್ಬ ವ್ಯಕ್ತಿ ಅನೇಕ ಬ್ಯಾಂಕ್ ಖಾತೆಗೆ ಹಣ ತುಂಬುವುದು, ಅತಿ ಹೆಚ್ಚು ಬ್ಯಾಂಕ್ ವಹಿವಾಟು ನಡೆಸುವ ವ್ಯಕ್ತಿ ಮತ್ತು ಬ್ಯಾಂಕ್‌ನಲ್ಲಿ ಅನೇಕ ಬಾರಿ ಹಣ ಡ್ರಾ ಮಾಡುವವರ ಮೇಲೆ ನಿಗಾ ವಹಿಸಬೇಕು. ಆದಾಯ ತೆರಿಗೆ ಇಲಾಖೆಯ ಅಧಿಕಾರಿಗಳು ಬ್ಯಾಂಕ್ ವಹಿವಾಟು ಮಾಡುವವರ ವಿವರಗಳನ್ನು ಪರಿಶೀಲಿಸಬೇಕು ಹಾಗೂ ಇವೆಲ್ಲವುಗಳ ವಿವರಗಳನ್ನು ವೆಚ್ಚ ವೀಕ್ಷಕರಿಗೆ ಸಲ್ಲಿಸಬೇಕು ಎಂದರು.



ಚೆಕ್ ಪೋಸ್ಟ್‌ಗಳಲ್ಲಿ ವಾಹನಗಳ ತಪಾಸಣೆಗೆ ನಾಕಬಂಧಿ ವ್ಯವಸ್ಥೆ ಸಮರ್ಪಕವಾಗಿದ್ದು, ಪ್ರತಿದಿನ ಓಡಾಡುವ ವಾಹನಗಳ ಮೇಲೆ ನಿಗಾ ಇಡಬೇಕು. ಅನುಮಾನ ಬಂದ ವಾಹನಗಳನ್ನು ವಶಕ್ಕೆ ಪಡೆದು ಪರಿಶೀಲಿಸಬೇಕು ಹೀಗಾಗಲೇ ವಶಪಡಿಸಿಕೊಂಡಿರುವ ವಾಹನಗಳ ಮತ್ತು ಮಾಲೀಕರ ಹಿನ್ನೆಲೆಯಲ್ಲಿ ಪರಿಶೀಲಿಸಿ ಮಾಹಿತಿಯನ್ನು ನೀಡಬೇಕು ಎಂದರು.

ಜಿಲ್ಲೆಯಲ್ಲಿ ಅಬಕಾರಿ ಇಲಾಖೆ ಕಾರ್ಯಾಚರಣೆ ವೇಳೆ ಇದುವರೆವಿಗೂ 439 ಪ್ರಕರಣಗಳು ದಾಖಲಾಗಿದ್ದು 1,47,46,920 ರೂ. ಮೌಲ್ಯದ 44033 ಲೀ ಭಾರತೀಯ ಮದ್ಯ ಮತ್ತು 205 ಲೀಟರ್ ಬಿಯರ್ ಹಾಗೂ 70.00 ಲಕ್ಷ ರೂ.ಬೆಲೆಯ 40 ವಿವಿಧ ವಾಹನಗಳನ್ನು ವಶಕ್ಕೆ ಪಡೆದು ಪ್ರಕರಣಗಳನ್ನು ದಾಖಲಿಸಲಾಗಿದೆ ಎಂದು ತಿಳಿಸಿದರು ಹಾಗೂ ವಶಪಡಿಸಿಕೊಂಡಿರುವ ವಾಹನಗಳ ಹಿನ್ನೆಲೆಯಲ್ಲಿ ಪರಿಶೀಲಿಸುವಂತೆ ತಿಳಿಸಿದರು.

11 ಅಬಕಾರಿ ಚೆಕ್ ಪೋಸ್ಟ್‌ಗಳು, 6 ಮೊಬೈಲ್ ತಪಾಸಣಾ ತಂಡ ಮತ್ತು ವಾಣಿಜ್ಯ ತೆರಿಗೆ ಇಲಾಖೆಯ 2 ಚೆಕ್‌ಪೋಸ್ಟ್‌ಗಳು ಕಾರ್ಯ ನಿರ್ವಹಿಸುತ್ತಿವೆ, ಕಂಟ್ರೋಲ್ ರೂಂ ನಲ್ಲಿರುವ ಸಿಬ್ಬಂದಿಗಳು ದೂರುಗಳು ದಾಖಲಾಗುವ ಬಗ್ಗೆ ಹಾಗೂ ಸಿಸಿಟಿವಿ ಅಳವಡಿಸಿರುವ ಕಡೆ ವಾಹನಗಳ ಚಲನವಲನದ ಬಗ್ಗೆ ಮಾಹಿತಿಯನ್ನು ವೆಚ್ಚ ವೀಕ್ಷಕರಿಗೆ ನೀಡಬೇಕು ಎಂದರು.

ವೆಚ್ಚ ವೀಕ್ಷಕರುಗಳಾದ ಜಯರಾಗವನ್, ಜೀತೇಂದ್ರ ಸಿಂಗ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ದಿಗ್ವಿಜಯ್ ಬೋಡ್ಕೆ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕಾರ್ತಿಕ ರೆಡ್ಡಿ, ಅಪರ ಜಿಲ್ಲಾಧಿಕಾರಿ ಶಿವಾನಂದ ಮೂರ್ತಿ, ಉಪವಿಭಾಗಾಧಿಕಾರಿ ಬಿನೋಯ್ ಸೇರಿದಂತೆ ಅನೇಕ ಅಧಿಕಾರಿಗಳು ಉಪಸ್ಥಿತರಿದ್ದರು.

# ಕವಿಕಾವ್ಯ ಗೋಷ್ಠಿ

**ಹುಳಿಯಾರು:** ಹುಳಿಯಾರು ಹೋಬಳಿ ಕನ್ನಡ ಸಾಹಿತ್ಯ ಪರಿಷತ್ ಘಟಕದಿಂದ 'ಮನೆಮನೆಗಳಲ್ಲಿ ಕವಿ ಕಾವ್ಯ ಗೋಷ್ಠಿ' ಕಾರ್ಯಕ್ರಮ ಶಿಕ್ಷಕ ಸಿದ್ದೇಶಯ್ಯ ಅವರ ಮನೆಯಲ್ಲಿ ನಡೆಯಿತು. ಕಾರ್ಯಕ್ರಮದಲ್ಲಿ ಡಾ.ವೈ.ಜಿ.ಸಿದ್ದರಾಮಯ್ಯ ಉಪನ್ಯಾಸ ನೀಡಿ, ಹೋಬಳಿ ಕಸಾಪ ಘಟಕ ಬಹಳ ಹಿಂದೆಯೇ ಆರಂಭಿಸಿದ ಮನೆ ಮನೆ ಕವಿ ಕಾವ್ಯ ಗೋಷ್ಠಿ ರಾಜ್ಯದಲ್ಲಿ ಹೆಸರು ಮಾಡಿದೆ. ಕಲಾ ಪ್ರಕಾರ, ಆರೋಗ್ಯ ಸಾಹಿತ್ಯದ ಬಗೆಗಿನ ಉಪನ್ಯಾಸ ಮಾಲಿಕೆಗಳು ಹೆಚ್ಚು ಪ್ರಯೋಜನಕಾರಿಯಾಗಿದೆ ಎಂದರು. ಹೋಬಳಿ ಕಸಾಪ ಘಟಕದ ಕೋಶಧ್ಯಕ್ಷ ಟಿ.ಜಯಣ್ಣ ಅಧ್ಯಕ್ಷತೆ ವಹಿಸದ್ದರು. ಡಾ.ಉಮಾ ಧ್ಯಾನ ಕುರಿತು ಉಪನ್ಯಾಸ ನೀಡಿದರು. ಹೋಬಳಿ ಕಸಾಪ ಅಧ್ಯಕ್ಷ ಟಿ.ನಾರಾಯಣಪ್ಪ, ಕಾರ್ಯದರ್ಶಿ ಜಯಣ್ಣ, ಗಜೇಂದ್ರಪ್ಪ, ಆಶ್ರಯದಾತರಾದ ಸಿದ್ದೇಶಯ್ಯ, ಸಂಚಾಲಕ ಎಂ.ದಯಾನಂದ, ಶಿಕ್ಷಕರಾದ ರೇವಣ್ಣ, ವಿದ್ಯಾ ಕುಂಚನೂರ್ ಸೇರಿದಂತೆ ಹೋಬಳಿ ಘಟಕದ ಪದಾಧಿಕಾರಿಗಳು, ಶಿಕ್ಷಕರು ಭಾಗವಹಿಸಿದ್ದರು.



**ಹುಳಿಯಾರು ಹೋಬಳಿ ಕನ್ನಡ ಸಾಹಿತ್ಯ ಪರಿಷತ್ ಘಟಕದಿಂದ 'ಮನೆಮನೆಗಳಲ್ಲಿ ಕವಿ ಕಾವ್ಯ ಗೋಷ್ಠಿ' ಕಾರ್ಯಕ್ರಮ ಶಿಕ್ಷಕ ಸಿದ್ದೇಶಯ್ಯ ಅವರ ಮನೆಯಲ್ಲಿ ನಡೆಯಿತು.**



**ತಿಪಟೂರಿನ ಇಂದಿರಾ ನಗರ ರಸ್ತೆಯ ರಂಭಾಪುರಿ ನಗರದ ಶ್ರೀ ಜಗದ್ಗುರು ರೇಣುಕಾಚಾರ್ಯರ ದೇವಸ್ಥಾನದಲ್ಲಿ ಅದ್ದೂರಿಯಾಗಿ ಶ್ರೀ ರೇಣುಕ ಜಯಂತಿ ನಡೆಯಿತು. ಬೆಳಿಗ್ಗೆಯಿಂದ ಮಂಗಳಮೂರ್ತಿಗೆ ರುದ್ರಾಭಿ?ೀಕ ಅ?ೋತ್ತರ ಬಿಲ್ವಾರ್ಚನೆ, ಮಧ್ಯಾಹ್ನ 1 ಗಂಟೆಗೆ ಮಹಾ ಮಂಗಳಾರತಿ ನಡೆಯಿತು, ಸಾವಿರಾರು ಭಕ್ತರು ಆಗಮಿಸಿದ್ದು ಎಲ್ಲ ಭಕ್ತರಿಗೂ ಪ್ರಸಾದ ವ್ಯವಸ್ಥೆ ಮಾಡಲಾಗಿತ್ತು, ಉಚಿತವಾಗಿ ದೇವಸ್ಥಾನಕ್ಕೆ ನಿವೇಶನ ನೀಡಿದ ಸಾಸಲು ಮರಳು ಸಿದ್ದಪ್ಪನವರ ಮಕ್ಕಳು ಸರ್ವೇಶ ಹಾಗೂ, ಶ್ರೀಮದ್ ವೀರಶೈವ ಸದ್ಬೋದನಾ ಸಂಸ್ಥೆ, ತಿಪಟೂರು ಘಟಕ, ಹಾಗೂ ವೀರಶೈವ ಸಮಾಜ ಬಂಧುಗಳು ಇದ್ದರು.**

# ಕಾಂಗ್ರೆಸ್ ಬಲವರ್ಧನೆಗೆ ಲೋಕಸಭೆ ಗೆಲುವು ಅನಿವಾರ್ಯ

**ಮಂಡ್ಯ:** ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಜಯಗಳಿಸಿದರೆ, ಮುಂದಿನ 20 ವರ್ಷಗಳ ಕಾಲ ಕಾಂಗ್ರೆಸ್ ಬಲವರ್ಧನೆ ಆಗುತ್ತದೆ. ಆ ಮೂಲಕ ಹಲವು ಕಾರ್ಯಕರ್ತರಿಗೆ ರಾಜಕೀಯ ಸ್ಥಾನಮಾನ ದೊರೆಯುತ್ತದೆ ಎಂಬುದನ್ನು ಮನಗಾಣಬೇಕು, ನಗರ ವ್ಯಾಪ್ತಿಯಲ್ಲಿ 25 ಸಾವಿರ ಬಹುಮತ ಕೊಡಿಸಲು ಶ್ರಮಿಸ ಬೇಕೆಂದು ಜಿಲ್ಲಾ ಉಸ್ತುವಾರಿ ಸಚಿವ ಎನ್. ಚಲುವರಾಯಸ್ವಾಮಿ ಕರೆ ನೀಡಿದರು.

ನಗರದ ಸುಮರವಿ ಸಮುದಾಯ ಭವನದಲ್ಲಿ ಆಯೋಜನೆಗೊಂಡಿದ್ದ ಮಂಡ್ಯ ನಗರಸಭೆ ವ್ಯಾಪ್ತಿಯ ಪಕ್ಷದ ಮುಖಂಡರು,ನಗರಸಭಾ ಸದಸ್ಯರ ಸಭೆಯನ್ನುದ್ದೇಶಿಸಿ ಮಾತನಾಡಿದ ಅವರು,ಮುಂದಿನ ದಿನಗಳಲ್ಲಿ ಪುರಸಭೆ,ನಗರಸಭೆ, ಜಿ.ಪಂ ಹಾಗೂ ತಾ.ಪಂ ಚುನಾವಣೆಗಳು ನಡೆಯಲಿದ್ದು,ಈ ಹಿನ್ನೆಲೆಯಲ್ಲಿ ಲೋಕಸಭಾ ಚುನಾವಣೆಯನ್ನು ಗಂಭೀರವಾಗಿ ಪರಿಗಣಿಸಬೇಕೆಂದು ಮನವಿ ಮಾಡಿದರು.

ಲೋಕಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಜಯಗಳಿಸಿದರೆ ಮುಂಬರುವ ಸ್ಥಳೀಯ ಸಂಸ್ಥೆ ಚುನಾವಣೆಗಳಲ್ಲಿ ಕಾಂಗ್ರೆಸ್ ಪಾರಮ್ಯ ಸಾಧಿಸಲಿದೆ ಎಂಬುದನ್ನು ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಅರ್ಥೈಸಿಕೊಂಡು ಸ್ಟಾರ್ ಚಂದ್ರು ಗೆಲುವಿಗೆ ಶ್ರಮಿಸಬೇಕೆಂದರು.

ನಮ್ಮ ಪಕ್ಷದ ಕೆಲವೇ ಮುಖಂಡರು, ಕಾರ್ಯಕರ್ತರು, ಚುನಾವಣೆ ಬಗ್ಗೆ ತಾತ್ಸಾರ ತೋರುತ್ತಿರುವುದು ಸರಿಯಲ್ಲ, ಜಿಲ್ಲೆಯ ಇತಿಹಾಸದಲ್ಲಿ ಕಾಂಗ್ರೆಸ್ ಪಕ್ಷ ಎಂದಿಗೂ ಲೋಕಸಭಾ ಚುನಾವಣೆಯನ್ನು ಇಷ್ಟೊಂದು ಗಂಭೀರವಾಗಿ ಪರಿಗಣಿಸಿರಲಿಲ್ಲ, ವ್ಯವಸ್ಥಿತ ಕಾರ್ಯವೈಖರಿಯಿಂದ ಗೆಲುವಿಗೆ ಶ್ರಮಿಸಬೇಕೆಂದರು.

ಹಿಂದುಳಿತ, ದಲಿತ, ಅಲ್ಪಸಂಖ್ಯಾತ ಮತದಾರರು ಸ್ವಯಂ ಪ್ರೇರಿತರಾಗಿ ಪಕ್ಷದ ಅಭ್ಯರ್ಥಿಗೆ ಮತ ನೀಡಲು ಮುಂದಾಗಿದ್ದಾರೆ. ಒಕ್ಕಲಿಗರು ಸಹ ತುಂಬು ಆಸಕ್ತಿ ವಹಿಸಿದ್ದು,ರಾಜ್ಯ ಸರ್ಕಾರದ ಗ್ಯಾರಂಟಿ ಯೋಜನೆ ಹಾಗೂ ಜಿಲ್ಲೆಯ ಅಭಿವೃದ್ದಿಯನ್ನು ಮುಂದೆ ಮಾಡಿ ಮತಯಾಚಿಸ ಬೇಕೆಂದು ಸಲಹೆ ನೀಡಿದರು.



ಹೆಚ್.ಡಿ.ದೇವೇಗೌಡರು ಮುಖ್ಯಮಂತ್ರಿ ಪ್ರಧಾನ ಮಂತ್ರಿಯಾಗಿದ್ದರು. ಕುಮಾರಸ್ವಾಮಿ 2 ಬಾರಿ ಮುಖ್ಯಮಂತ್ರಿ ಆಗಿದ್ದರು. ಜಿಲ್ಲೆಯ 8 ಕ್ಷೇತ್ರಗಳಲ್ಲಿ ಜೆಡಿಎಸ್ ಶಾಸಕರೇ ಆಯ್ಕೆಯಾಗಿದ್ದರು. ಆದರೂ ಜಿಲ್ಲೆಯ ನಿರೀಕ್ಷಿತ ಅಭಿವೃದ್ದಿಗೆ ಏಕೆ ಮುಂದಾಗಲಿಲ್ಲ ಎಂದು ಪ್ರಶ್ನಿಸಿದ ಅವರು, ಧರ್ಮಸಿಂಗ್ ಆಡಳಿತಾವಧಿಯಲ್ಲಿ ಜಿಲ್ಲಾ ಕೇಂದ್ರಕ್ಕೆ ಮೆಡಿಕಲ್ ಕಾಲೇಜು ಮಂಜೂರಾಗಿದೆ ಎಂದು ತಿಳಿಸಿದರು.

ಸಭೆಯಲ್ಲಿ ವಿಧಾನ ಪರಿಷತ್ ಸದಸ್ಯ ದಿನೇಶ್ ಗೂಳೀಗೌಡ, ಪಕ್ಷದ ಕಾರ್ಯಾಧ್ಯಕ್ಷ ಚಿದಂಬರ್, ಮಹಿಳೆ ಘಟಕದ ಅಧ್ಯಕ್ಷೆ ಅಂಜನಾ ಶ್ರೀಕಾಂತ್, ನಗರ ಘಟಕದ ಅಧ್ಯಕ್ಷ ರುದ್ರಪ್ಪ, ಎಸ್ಸಿ, ಎಸ್ಟಿ ಘಟಕದ ಅಧ್ಯಕ್ಷ ಶ್ರೀಧರ್, ಅಲ್ಪಸಂಖ್ಯಾತ ಘಟಕದ ಅಧ್ಯಕ್ಷ ಜಬೀ, ಡಿಸಿಸಿ ಬ್ಯಾಂಕ್ ನಿರ್ದೇಶಕ ಹಾಲಹಳ್ಳಿ ಅಶೋಕ್ ಇತರರು ಉಪಸ್ಥಿತರಿದ್ದರು. ಸ್ಥಳೀಯ ಸಂಸ್ಥೆಗಳಿಗೆ ಲೋಕಸಭೆ ಚುನಾವಣೆ ಬುನಾದಿ ಮುಂಬರುವ ನಗರಸಭೆ ಚುನಾವಣೆಗೆ ಬುನಾದಿಯಾಗಲಿರುವ ಲೋಕಸಭಾ ಚುನಾವಣೆಯನ್ನೂ ಪಕ್ಷದ ಮುಖಂಡರು ಹಾಗೂ ಕಾರ್ಯಕರ್ತರು ಗಂಭೀರವಾಗಿ ಪರಿಗಣಿಸಬೇಕು. ಆ ಮೂಲಕ ನಗರಸಭೆ ವ್ಯಾಪ್ತಿಯ 35 ವಾರ್ಡ್ ಗಳಲ್ಲಿ ಪಕ್ಷದ ಅಭ್ಯರ್ಥಿ ಜಯಗಳಿಸಲು ಲೋಕಸಭಾ ಚುನಾವಣೆಯ ಗೆಲುವು ಅನಿವಾರ್ಯವಾಗಿದೆ ಎಂದು ಶಾಸಕ ಪಿ.ರವಿಕುಮಾರ್ ತಿಳಿಸಿದರು.

ಮಂಡ್ಯನಗರದ ಯುಜಿಡಿ ಅನುಷ್ಠಾನಕ್ಕೆ 200 ಕೋಟಿ ಅನುದಾನ, ನಗರ ವ್ಯಾಪ್ತಿಯ ರಸ್ತೆ ಅಭಿವೃದ್ಧಿಗೆ 50 ಕೋಟಿ ವಿಶೇಷ ಅನುದಾನ ತರಲು ಪ್ರಯತ್ನಿಸಲಾಗುತ್ತಿದೆ. 33 ಕೋಟಿ ರೂ. ವೆಚ್ಚದಲ್ಲಿ ಎಂ.ಸಿ ರಸ್ತೆ, ಪಾದಾಚಾರಿ ಮಾರ್ಗ ಹಾಗೂ ವೃತ್ತಗಳ ಅಭಿವೃದ್ದಿಗೆ ಯೋಜನೆ ಕಾರ್ಯಗತಗೊಳ್ಳಲಿದೆ ಎಂದರು.

ಸಚಿವರ ಅಪೇಕ್ಷೆಯಂತೆ ಮಂಡ್ಯನಗರ ವ್ಯಾಪ್ತಿಯಲ್ಲಿ 25 ಸಾವಿರ ಹಾಗೂ ಗ್ರಾಮೀಣ ಪ್ರದೇಶದಲ್ಲಿ 15 ಸಾವಿರ ಬಹುಮತ ಗಳಿಸಿ, ಪಕ್ಷದ ಅಭ್ಯರ್ಥಿ ಗೆಲುವಿಗೆ ಶ್ರಮಿಸಲು ಸಹಕರಿಸಬೇಕೆಂದು ಮನವಿ ಮಾಡಿದರು.

# ಸರಗಳ್ಳತನ: ಒಂಟಿ ಮಹಿಳೆಯರೇ ಸರಗಳ್ಳರ ಗುರಿ

**ವಿಜಯಪುರ:** ಪಟ್ಟಣದಲ್ಲಿ ಕಳೆದ ಒಂದು ತಿಂಗಳಿನಲ್ಲಿ ಎರಡು ಸರಗಳ್ಳತನಗಳು ಕಂಡುಬಂದಿದ್ದು ಅಮಾಯಕ ವಯಸ್ಸಾದ ಹೆಂಗಸರೆ ಸರಗಳ್ಳರ ಗುರಿಯಾಗಿದ್ದು ವಯಸ್ಸಾದ ಹೆಂಗಸರುಗಳನ್ನು ಮೋಡಿ ಮಾಡಿ ಬೆದರಿಸಿ ಸರಗಳ್ಳತನ ಮಾಡುವುದು ಕಂಡುಬಂದಿರುತ್ತದೆ.

ಕಳೆದ ಒಂದು ತಿಂಗಳ ಹಿಂದೆ ಸುಮಾರು 70 ವರ್ಷದ ಪ್ರಮೀಳಮ್ಮ ಎಂಬಾಕೆಯನ್ನು ಸೋಮೇಶ್ವರ ಸ್ವಾಮಿ ದೇವಾಲಯದ ಬಳಿ ದೇವಸ್ಥಾನಕ್ಕೆ ಬರುವ ಭಕ್ತರಂತೆ ನಂಬಿಸಿ ಆಕೆಗೆ ತಿನ್ನಲು ಬಾಳೆಹಣ್ಣು ನೀಡಿ ಆಕೆಗೆ ಮತ್ತು ಬರುವಂತೆ ಮಾಡಿ, ಆಕೆಯನ್ನು ಮನೆಗೆ ಬಿಡುವುದಾಗಿ ತಿಳಿಸಿ ದ್ವಿಚಕ್ರ ವಾಹನದಲ್ಲಿ ಕುಳ್ಳಿರಿಸಿಕೊಂಡು ಊರೆಲ್ಲಾ ತಿರುಗಾಡಿಸಿ ಆಕೆಯಿಂದಲೇ ಕತ್ತಿನಲ್ಲಿರುವ ಸರ ತೆಗೆಸಿಕೊಂಡು ಆಕೆಯನ್ನು ಮುಖ್ಯರಸ್ತೆಯಲ್ಲಿ ಬಿಟ್ಟು ಹೋಗಿದ್ದ ಪ್ರಕರಣ ದಲ್ಲಿ ಆಕೆಗೆ ಏನು ಮಾಡಿದ್ದೇನೆಂಬ ಸ್ಥಿತಿ ಆಕೆಗೆ ತಿಳಿಯದಂತಾಗಿತ್ತು.

ಇದೀಗ ಬಸವೇಶ್ವರನಗರದಲ್ಲಿರುವ ಶಂಕರಮ್ಮ ಎಂಬ ಸುಮಾರು 70 ವರ್ಷದ ಮಹಿಳೆ ರೇಷ್ಮೆ ಕೆಲಸಕ್ಕಾಗಿ ಸರ್ಕಾರಿ ಕಿರಿಯ ಕಾಲೇಜಿನ ಆಟದ ಮೈದಾನದ ಮೂಲಕ ಮಂಡಿಬೆಲೆ ರಸ್ತೆಗೆ ಹೋಗುವ ಸಂದರ್ಭದಲ್ಲಿ ಆಟದ ಮೈದಾನದ ಬಳಿಯೇ ಆಕೆಯನ್ನು ಹಿಂಬಾಲಿಸಿಕೊಂಡು ಬಂದ ಕಳ್ಳರು ಆಕೆಯ ಕೈನಿಂದಲೇ ಸರವನ್ನು ಬಿಚ್ಚಿಸಿ ಮತ್ತೆ ವಾಪಸ್ಸು ನೀಡುವುದಾಗಿ ಬೆದರಿಸಿ ಸದಾ ಪಡೆದುಕೊಂಡು ಹೋಗಿರುವುದು ತಿಳಿದು ಬಂದಿರುತ್ತದೆ ಎರಡು ಪ್ರಕರಣಗಳು ವಿಜಯಪುರ ಪೊಲೀಸ್ ಠಾಣೆಯಲ್ಲಿ ದಾಖಲಾಗಿದ್ದು ಪೊಲೀಸರು ತನಿಖೆ ಕೈಗೊಂಡಿರುತ್ತಾರೆ. ಏರುತ್ತಿರುವ ಬಿಸಿಲಿನಲ್ಲಿ ಹೆಂಗಸರು ಮಕ್ಕಳು ಹಾಗೂ ವಯಸ್ಸಾದವರು ತಲೆ ಸುತ್ತುವಂತಹ ಪರಿಸ್ಥಿತಿಯಲ್ಲಿ ಬಿಸಿಲಿನಲ್ಲಿ ಓಡಾಡುತ್ತಿದ್ದು ಒಂಟಿಯಾಗಿ ದೊರೆತಾಗ ಇಂತಹ ಅವಗಡಗಳು ನಡೆಯಲು ಸಾಧ್ಯವಾಗಿದ್ದು ಸಾಧ್ಯವಾದಷ್ಟು ಬಿಸಿಲಿನಲ್ಲಿ ಒಬ್ಬಂಟಿಗರಾಗಿ ಓಡಾಡದಿರುವುದು ಒಳ್ಳೆಯದೆಂದು ಕೆಲವರ ಅನಿಸಿಕೆ.



# ಒಕ್ಕಲಿಗ ಸಮಾಜದ ಬೆಂಬಲ ಕೋರಿದ ಸ್ಟಾರ್ ಚಂದ್ರು

**ಕೆ.ಆರ್.ನಗರ:** ಎಲ್ಲಾಸಮುದಾಯದವರನ್ನು ಒಟ್ಟಿಗೆ ಕರೆದೊಯ್ಯುವ ಪಕ್ಷ ಕಾಂಗ್ರೆಸ್. ಈ ಚುನಾವಣೆಯಲ್ಲಿ ನಾನಾ ಸಮುದಾಯದ ಮುಖಂಡರು ನನ್ನನ್ನು ಬೆಂಬಲಿಸುತ್ತಿದ್ದು ಒಕ್ಕಲಿಗ ಸಮಾಜ ಕೂಡ ನನ್ನನ್ನು ಬೆಂಬಲಿಸಿ ಆಶೀರ್ವದಿಸಬೇಕೆಂದು ಮಂಡ್ಯ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಅಭ್ಯರ್ಥಿ ವೆಂಕಟರಮಣೇಗೌಡ (ಸ್ಟಾರ್ ಚಂದ್ರು) ಅವರು ಮನವಿ ಮಾಡಿದರು.

ಪಟ್ಟಣದ ಕೆ.ಆರ್.ನಗರ ಬ್ಲಾಕ್ ಕಾಂಗ್ರೆಸ್ ಹಾಗೂ ಸಾಲಿಗ್ರಾಮ ಬ್ಲಾಕ್ ಕಾಂಗ್ರೆಸ್ ಕಚೇರಿಯಲ್ಲಿ ಆಯೋಜಿಸಿದ್ದ ಒಕ್ಕಲಿಗ ಸಮಾಜದ ಮುಖಂಡರು ಹಾಗೂ ಕಾರ್ಯಕರ್ತರ ಸಭೆಯಲ್ಲಿ ಮಾತನಾಡಿದರು. ನಾನು ಮಂಡ್ಯ ಜಿಲ್ಲೆಯ ರೈತನ ಮಗ. ನಿಮ್ಮ ಸೇವೆ ಮಾಡಲು ಬಂದಿದ್ದೇನೆ. ಕಳೆದ ವಿಧಾನಸಭಾ ಚುನಾವಣೆಯಲ್ಲಿ ರವಿಶಂಕರ್ ಅವರನ್ನು ಬೆಂಬಲಿಸಿ ಆಶೀರ್ವದಿಸಿದಂತೆ ಈ ಚುನಾವಣೆಯಲ್ಲಿ ನನ್ನನ್ನು ಬೆಂಬಲಿಸಿ ನಿಮ್ಮ ಸೇವೆ ಮಾಡಲು ಅವಕಾಶ ಮಾಡಿಕೊಡಬೇಕೆಂದು ಕೇಳಿಕೊಂಡರು. ವಿಧಾನಪರಿಷತ್ ಸದಸ್ಯ ದಿನೇಶ್ ಗೂಳಿಗೌಡ ಮಾತನಾಡಿ, ಮಂಡ್ಯ ಲೋಕಸಭಾ ಚುನಾವಣೆ ದೇಶದ ಗಮನ ಸೆಳೆದಿದೆ. ಒಕ್ಕಲಿಗ ಸಮಾಜಕ್ಕೆ 8 ಸ್ಥಾನಗಳನ್ನು ಕೊಡುವ ಮೂಲಕ ಈ ಸಮಾಜಕ್ಕೆ ಶಕ್ತಿ ತುಂಬುವ ಕೆಲಸವನ್ನು ಕಾಂಗ್ರೆಸ್ ಮಾಡಿದೆ ಎಂದರು.



ವಿಧಾನಸಭಾ ಚುನಾವಣೆಯಲ್ಲಿ ರವಿಶಂಕರ್ ಅವರಿಗೆ ಒಕ್ಕಲಿಗರು ಬೆಂಬಲ ನೀಡಿದಂತೆ ಲೋಕಸಭಾ ಚುನಾವಣೆಯಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಒಕ್ಕಲಿಗ ಸಮಾಜ ಕೈ ಹಿಡಿಯಬೇಕು.ಒಕ್ಕಲಿಗ ಸಮಾಜದ ಜೊತೆಗೆ ಇತರೆ ಸಮುದಾಯಗಳು ಕೂಡ ಕಾಂಗ್ರೆಸ್ ಅನ್ನು ಬೆಂಬಲಿಸಬೇಕು ಎಂದು ಕರೆಕೊಟ್ಟರು.

ಕೆ.ಆರ್.ನಗರ ಕ್ಷೇತ್ರದ ಅಭಿವೃದ್ಧಿಗೆ ರವಿಶಂಕರ್ ಅವರು ಸರ್ಕಾರದಿಂದ 200 ಕೋಟಿ ಅನುದಾನವನ್ನು ತಂದಿದ್ದಾರೆ. 1000 ಕೋಟಿ ರೂ. ಅನುದಾನ ಬಿಡುಗಡೆಗೆ ಪ್ರಸ್ತಾವನೆ ಕೂಡ ಸಲ್ಲಿಸಿದ್ದಾರೆ.ಮುಂದಿನ ದಿನಗಳಲ್ಲಿ ವೆಂಕಟರಮಣೇಗೌಡ (ಸ್ಟಾರ್ ಚಂದ್ರು) ಅವರೂ ಅಭಿವೃದ್ಧಿಗೆ ಕೈಜೋಡಿಸಲಿದ್ದಾರೆ. ಅವರು ಹಣ ಮಾಡಲು ರಾಜಕೀಯಕ್ಕೆ ಬಂದಿಲ್ಲ. ಕೇಂದ್ರ ಸರ್ಕಾರದಿಂದ ಅನುದಾನ ತರುವುದು ಹೇಗೆಂದು ಬಲ್ಲರು. ಕ್ಷೇತ್ರದ ಸಮಗ್ರ ಅಭಿವೃದ್ಧಿಗೆ ಕಾಂಗ್ರೆಸ್ ಬೆಂಬಲಿಸಿ ಎಂದರು.

ಶಾಸಕ ರವಿಶಂಕರ್ ಮಾತನಾಡಿ, ಒಕ್ಕಲಿಗ ಸಮಾಜ ಕಾಂಗ್ರೆಸ್ ಬೆಂಬಲಿಸಿದ್ದರಿಂದ ಶಾಸಕನಾಗಿ ಆಯ್ಕೆಯಾದೆ. ವಿಧಾನಸಭೆಯಲ್ಲಿ ಬೆಂಬಲಿಸಿದಂತೆ ಲೋಕಸಭಾ ಚುನಾವಣೆಯಲ್ಲಿ ಸ್ಟಾರ್ ಚಂದ್ರು ಅವರನ್ನು ಬೆಂಬಲಿಸಬೇಕು. ಸರಳ ವ್ಯಕ್ತಿ, ರೈತ ಕುಟುಂಬದಿಂದ ಬಂದವರು ಎಂದು ಹೇಳಿದರು. ವಿಧಾನಪರಿಷತ್ ಮಾಜಿ ಸದಸ್ಯ ಮರಿತಿಬ್ಬೇಗೌಡ ಮಾತನಾಡಿದರು. ಕೆಪಿಸಿಸಿ ಕಾರ್ಯಕಾರಿಣಿ ಸಮಿತಿ ಸದಸ್ಯರಾದ ದೊಡ್ಡಸ್ವಾಮೇಗೌಡ ಸೇರಿದಂತೆ ಒಕ್ಕಲಿಗ ಸಮಾಜದ ಮುಖಂಡರು ಕಾರ್ಯಕರ್ತರು ಸಭೆಯಲ್ಲಿದ್ದರು.

# ನಾಳೆ ಶ್ರೀಭೂಮಿಸಿದ್ದೇಶ್ವರನ ಅಟ್ಟುಣ್ಣುವ ಜಾತ್ರೆ

**ಮಂಡ್ಯ:** ತಾಲ್ಲೂಕಿನ ಸಂತೆಕಸಲಗೆರೆಯ ಶ್ರೀಭೂಮಿಸಿದ್ದೇಶ್ವರ ಜಾತ್ರೆಯು ಇಡೀ ಜಿಲ್ಲೆಯಲ್ಲಿಯೇ ವಿಶಿಷ್ಠವಾಗಿ ನಡೆಯಲಿದ್ದು, ಇಲ್ಲಿ ಏ.11ರಂದು ನಡೆಯುವ ಅಟ್ಟುಣ್ಣುವ ಜಾತ್ರೆಯೆಂದೇ ಹೆಸರಾಗಿದ್ದು,ಅಂದು ಜಾತ್ರೆ ಮುಗಿದ ಬಳಿಕ ಕತ್ತಲು ಆವರಿಸುವುದರೊಳಗೆ ಒಂದು ನರಪಿಳ್ಳೆಯೂ ಇಲ್ಲಿರುವಂತಿಲ್ಲ. ಎಲ್ಲರೂ ಜಾಗ್ರತೆಯಿಂದ ವಾಪಸಾಗುವುದು ಇಲ್ಲಿನ ವೈಶಿಷ್ಟ್ಯ.



ಈ ಪದ್ಧತಿ ಬಹಳ ಹಿಂದಿನಿಂದಲೂ ನಡೆದುಕೊಂಡು ಬಂದಿದ್ದು, ಇದೀಗ ಶ್ರೀಭೂಮಿಸಿದ್ದೇಶ್ವರ ದೇವಸ್ಥಾನ ಸಮಿತಿಯು ಸುಮಾರು 6-8 ಕೋಟಿ ರೂ.ವೆಚ್ಚದಲ್ಲಿ ಸಂಪೂರ್ಣ ಶಿಲಾಮಯವಾದ ದೇವಾಲಯ ನಿರ್ಮಾಣಗೊಳಿಸುತ್ತಿದ್ದು, ಗೋಪುರ, ಗರ್ಭಗುಡಿ, ವಿಶಾಲ ಪ್ರಾಂಗಣ, ಕಲ್ಲಿನ ಕಂಬಗಳು ಶಿಲ್ಪಕಲೆಯನ್ನು ಬಿಂಬಿಸುವಂತೆ ಆಂಧ್ರಪ್ರದೇಶದ ಪ್ರಭಾಕರ್ ಕುಪ್ಪಂ ಎಂಬುವರು ನಿರ್ಮಿಸುತ್ತಿದ್ದಾರೆ. ಸಮಿತಿಯು 24 ಸದಸ್ಯರನ್ನು ಹೊಂದಿದ್ದು, ಸಂತೆಕಸಲಗೆರೆ, ಕೊತ್ತತ್ತಿ, ಮಂಗಲ, ಕಾರಸವಾಡಿ, ಮೊತ್ತಹಳ್ಳಿ, ಯತ್ತಗದಹಳ್ಳಿ, ಎ.ಹುಲ್ಲುಕೆರೆ, ಹನಿಯಂಬಾಡಿ, ಬೇವಿನಹಳ್ಳಿ, ದೇವಿಪುರ ಸೇರಿದಂತೆ ಒಟ್ಟು ಹತ್ತು ಗ್ರಾಮಗಳನ್ನು ಒಳಗೊಂಡಿದೆ.

26 ಎಕರೆ 20 ಕುಂಟೆ ವಿಸ್ತಾರ ಜಾಗ ಹೊಂದಿರುವ ಈ ದೇವಾಲಯಕ್ಕೆ ಹೊರ ಜಿಲ್ಲೆ, ರಾಜ್ಯ, ಹೊರ ರಾಜ್ಯಗಳಿಂದಲೂ ಭಕ್ತರು ಆಗಮಿಸುವುದು ವಿಶೇಷ. ಹಾಗಾಗಿ ಇಲ್ಲಿ ಅರಕೆರೆ ಹೋಬಳಿ ಬನ್ನಹಳ್ಳಿಯ ಜವರೇಗೌಡರು ದೇವಸ್ಥಾನದ ಸುತ್ತಲೂ ಆಲದ ಮರಗಳನ್ನು ನೆಟ್ಟು 15 ವರ್ಷಗಳ ಕಾಲ ಪೋಷಿಸಿದ್ದರಿಂದ ಇಲ್ಲಿ ನರಳಿಗೆ ಬರವಿಲ್ಲ.

ಅಭಿವೃದ್ಧಿ ಕಾರ್ಯಕ್ಕೈಗೊಂಡ ಸಮಿತಿಗೆ ಶ್ರೀರಂಗಪಟ್ಟಣ ಕ್ಷೇತ್ರದ ಶಾಸಕರಾಗಿದ್ದ ರವೀಂದ್ರ, ಶ್ರೀಕಂಠಯ್ಯ 20 ಲಕ್ಷ ರೂ. ಮಧು ಜಿ.ಮಾದೇಗೌಡರು 10 ಲಕ್ಷ ರೂ.ಗಳ ತಮ್ಮ ಶಾಸಕತ್ವದ ಅನುದಾನವನ್ನು ಒದಗಿಸಿದ್ದು, ಅದರಂತೆ ಅನೇಕ ಜನಪ್ರತಿನಿಧಿಗಳು, ಭಕ್ತಾದಿ ಮುಖಂಡರು ಸೇರಿದಂತೆ ಜನಸಾಮಾನ್ಯರೂ ಯಥಾಶಕ್ತಿ ಧನಸಹಾಯ ಮಾಡಿದ್ದರಿಂದ ಸಮಿತಿಯು 2003ರಲ್ಲಿ ಸಮುದಾಯ ಭವನ, 2012ರಲ್ಲಿ ಹೊಸ ಸಮುದಾಯ ಭವನ ಮತ್ತು ಮಿನಿ ಸಮುದಾಯ ಭವನಗಳೂ ನಿರ್ಮಾಣಗೊಳಿಸಿದೆ. ಪರಿಣಾಮ ಸುತ್ತಮುತ್ತಲ ಹಳ್ಳಿಗಳ ರೈತರಿಗೆ ವಿವಾಹ, ನಾಮಕರಣ, ಬೀಗರ ಔತಣ, ದೇವರ ಕಾರ್ಯ ಮುಂತಾದವನ್ನು ಮಾಡಲು ಅನುಕೂಲ ಕಲ್ಪಿಸಲಾಗಿದೆ.

ಪ್ರತಿವರ್ಷದಂತೆ ಯುಗಾದಿ ಹಬ್ಬದ ಮಾರನೇ ದಿನ (ಏ.10ರಂದು) ಗ್ರಾಮದ ನಡಕೇರಪ್ಪನ ಗುಡಿಯಲ್ಲಿ ಹರಕೆ ಕಟ್ಟಿಕೊಂಡು ಬಂದ ಭಕ್ತರಿಗೆ ಬಾಯಿಬೀಗ ಚುಚ್ಚುತ್ತಾರೆ. ತಮಟೆ, ಕಹಳೆ, ಛತ್ರಿ ಸಮೇತವಾಗಿ ಪತ್ತಿನ ಸೇವೆ ಮಾಡಿ ಭಕ್ತ ಸಮೂಹವು ಸಾಲಾಗಿ ಹೆಬ್ಬಾಗಿಲು ದಾಟಿ ಭೂಮಿಸಿದ್ದೇಶ್ವರ ದೇವಾಲಯ ತಲುಪುತ್ತಾರೆ. ಮಾರನೆ ದಿನ (ಏ.11) ದೇವಾಲಯದ ಅಂಗಳದಲ್ಲಿ ಏಳೂರಿನ ಜನರು ಸೇರಿ ನಡೆಸುವ ಜಾತ್ರೆಯೇ 'ಶ್ರೀಭೂಮಿಸಿದ್ದೇಶ್ವರ ಜಾತ್ರೆ' ಅಥವಾ 'ಅಟ್ಟುಣ್ಣುವ ಜಾತ್ರೆ' ಎಂದು ಜನಜನಿತವಾಗಿದೆ.

ವಾಸ್ತವದಲ್ಲಿ ಈ ಸ್ಥಳದಲ್ಲಿ ಮರಾಠರಿಗೂ ಮೈಸೂರಿನ ಸೈನಿಕರಿಗೂ ಯುದ್ಧ ನಡೆದ ಸ್ಥಳವಾದ್ದರಿಂದ ಈ ನೆಲಕ್ಕೆ ಶಾಂತಿ ಮಾಡುವುದಕ್ಕಾಗಿ ಅಂದು ಮರಿಯ ರಕ್ತ ಕೆಡವಿ ಶಾಂತಿ ಮಾಡುತ್ತಾರೆ. ಮಧ್ಯಾಹ್ನ ಪ್ರತಿ ಊರುಗಳಿಂದ ಅಸಿಟ್ಟಿನ ಹೆಡಿಗೆಯನ್ನು ತರುವ ಮಹಿಳೆಯರು ಮಾರಿಗುಡಿಯಲ್ಲಿ ಮಡಿಯಿಂದ ಹೆಡಿಗೆಯೊಳಗೆ ಅಡುಗೆ ಸಾಮಾನುಗಳನ್ನು ತಮಟೆ ಸಮೇತ ತರುತ್ತಾರೆ. ಮಾಂಸದಡುಗೆಯಾದ ನಂತರ ದಾಸಯ್ಯನನ್ನು ಕರೆದು ಎಡಕೊಟ್ಟು ನಂತರ ತಮ್ಮೊಂದಿಗೆ ಬಂದ ನೆಂಟರಿಷ್ಟರೊಂದಿಗೆ ಕೂತು ಉಂಡು ಕತ್ತಲಾಗುವುದರೊಳಗೆ ಊರಿಗೆ ವಾಪಸಾಗಿಬಿಡುತ್ತಾರೆ. ಯಾರೊಬ್ಬರೂ ರಾತ್ರಿ ಉಳಿಯುವಂತಿಲ್ಲ. ಸ್ವತಃ ಭೂಮಿಸಿದ್ದೇಶ್ವರ ಪಲ್ಲಕ್ಕಿಯಲ್ಲಿ ಕುಳಿತು ಅಂಗಳದ ಸುತ್ತ ಓಡಾಡಿಕೊಂಡು ಭಕ್ತರು ಉಂಡು ಎಸೆದ ಎಲೆಗಳನ್ನು ಎತ್ತಿಸಿ ಒಂದು ಗುಂಡಿಗೆ ಹಾಕಿಸುತ್ತಾನೆಂಬುದು ಜನಪದರ ನಂಬಿಕೆ. ಇಂದಿಗೂ ಊರ ಜನರು ಈ ಕಥೆಯನ್ನು ನಂಬುತ್ತಾರೆ. ಹಾಗಾಗಿ ಜಾತ್ರೆ ನಡೆದ ರಾತ್ರಿ ಯಾರೂ ಕೂಡ ಅಲ್ಲಿ ಸುಳಿದಾಡುವುದಿಲ್ಲ.

## ಈ ಚುನಾವಣೆ ಸಂವಿಧಾನ ಅಳಿವು ಉಳಿವಿನ ಪ್ರಶ್ನೆ

**ಚಾಮರಾಜನಗರ:** ಈ ಲೋಕಸಭೆ ಚುನಾವಣೆ ಸಂವಿಧಾನ ಅಳಿವು ಉಳಿವಿನ ಪ್ರಶ್ನೆಯಾಗಿದೆ. ಹೀಗಾಗಿ ಸಂವಿಧಾನ ಪರವಾಗಿರುವ ಕಾಂಗ್ರೆಸ್ ಪಕ್ಷವನ್ನು ಗೆಲ್ಲಿಸಿ, ಅಧಿಕಾರಕ್ಕೆ ತರುವಂತೆ ಸಮಾಜ ಕಲ್ಯಾಣ ಸಚಿವ ಡಾ. ಎಚ್.ಸಿ. ಮಹದೇವಪ್ಪ ಮನವಿ ಮಾಡಿದರು.

ನಗರದ ವರ್ತಕರ ಭವನದಲ್ಲಿ ಭಾನುವಾರ ನಡೆದ ಮಾದಿಗ ಸಮುದಾಯದ ಕಾಂಗ್ರೆಸ್ ಮುಖಂಡರ ಸಭೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು, ನಮ್ಮ ಸಂವಿಧಾನ ಆಶಯಗಳನ್ನು ಜಾರಿ ಮಾಡುವ ಕೆಲಸ ನಮ್ಮದಾಗಿದೆ. ನಿಮ್ಮ ಪರ ಧ್ವನಿ ಮಾಡುವ ಕಾಂಗ್ರೆಸ್ ಪಕ್ಷವನ್ನು ಗೆಲ್ಲಿಸಿ, ಈ ಚುನಾವಣಾ ಪ್ರಜಾಪ್ರಭುತ್ವ ಹಾಗೂ ಸಂವಿಧಾನವನ್ನು ಉಳಿಸುವ ಪ್ರಶ್ನೆ ಯಾಗಿದೆ ಎಂದರು.

» **ಮಾದಿಗ ಸಮುದಾಯದ ಕಾಂಗ್ರೆಸ್ ಮುಖಂಡರ ಸಭೆಯಲ್ಲಿ ಕೈ ಅಭ್ಯರ್ಥಿಯನ್ನು ಹೆಚ್ಚಿನ ಬಹುಮತದಿಂದ ಗೆಲ್ಲಿಸಲು ಮನವಿ**

ನಾವೆಲ್ಲರು ಅಂಬೇಡ್ಕರ್ ಅನುಯಾಯಿಗಳು, ಎಡಕೈ, ಬಲಗೈ ಎಂಬ ಬೇಧಬಾವ ಇಲ್ಲ. ನಮ್ಮದೇ ಒಂದೇ ಕೈ ಅದು ಅಂಬೇಡ್ಕರ್ ಕೈ ಆಗಿದೆ. ಡಾ. ಬಿ.ಆರ್. ಅಂಬೇಡ್ಕರ್ ಅವರ ಆಶಯದಂತೆ ಎಲ್ಲ ವರ್ಗದವರಿಗೂ ಸಾಮಾಜಿಕ ನ್ಯಾಯ ದೊರೆಬೇಕು ಎಂಬುವುದು ನಮ್ಮೆಲ್ಲರ ಒತ್ತಾಸೆಯಾಗಿದೆ. ಕಾಂಗ್ರೆಸ್ ಪಕ್ಷ ಅಂಬೇಡ್ಕರ್ ಅವರ ಸಂವಿಧಾನದಡಿಯಲ್ಲಿ ನಂಬಿಕೆಯನ್ನುಟ್ಟುಕೊಂಡು ಕೆಲಸ ಮಾಡುತ್ತಿದೆ. ಆದರೆ, ಬಿಜೆಪಿ ಸಂವಿಧಾನ ವಿರುದ್ದವಾಗಿದ್ದು, ಸಂವಿಧಾನ ಬದಲಾಯಿಸುವ ಮಾತುಗಳನ್ನಾಡುತ್ತಿದ್ದಾರೆ. ಇದರಿಂದ ಜಾಗೃತರಾಗಿ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸಿ, ಸಂವಿಧಾನದ ಸಂರಕ್ಷಣೆಗೆ ನಿಲ್ಲಬೇಕು ಎಂದರು.

ಎಸ್‌ಇಪಿ, ಟಿಎಸ್‌ಪಿ ಕಾಯ್ದೆ ಸಂವಿಧಾನ ಪೂರಕವಾಗಿದ್ದು, ಇದನ್ನು 2013ರಲ್ಲಿ ಸಚಿವನಾಗಿದ್ದಾಗ ಅಂಜನೇಯ ಅವರ ಸಹಕಾರದೊಂದಿಗೆ ಜಾರಿ ಮಾಡಿದೆವು. ಇದರಿಂದ ದಲಿತರ ಕಾಲೋನಿಗಳು ಅಭಿವೃದ್ದಿಯಾದವು. ಇಡೀ ದೇಶದಲ್ಲಿ ಮೊಟ್ಟ ಮೊದಲ ಅಂಬೇಡ್ಕರ್ ಜಾಗೃತಿ ಜಾಥಾವನ್ನು ಆಯೋಜನೆ ಮಾಡಿದ್ದು, ನಮ್ಮ ಸರ್ಕಾರ. ಇದು ಇತರೇ ರಾಜ್ಯಗಳಿಗೆ ಮಾದರಿಯಾಗಿದೆ. ಇದರ ಉದ್ದೇಶ ಸಮುದಾಯಗಳು ಗಟ್ಟಿಯಾಗಬೇಕೆಂಬದಾಗಿದೆ ಎಂದರು.

ದಲಿತರ, ಶೋಷಿತರ ಅಭಿವೃದ್ಧಿ ಕಾಂಗ್ರೆಸ್ ನಿಂದ ಸಾಧ್ಯ: ವಿಧಾನ ಪರಿಷತ್ ಸದಸ್ಯ ಡಾ. ತಿಮ್ಮಯ್ಯ ಮಾತನಾಡಿ, ಕಾಂಗ್ರೆಸ್ ಪಕ್ಷದ ನುಡಿದಂತೆ ನಡೆದ ಪಕ್ಷವಾಗಿದೆ. ಐದು ಗ್ಯಾರಂಟಿಗಳನ್ನು ಜಾರಿ ಮಾಡುವ ಮೂಲಕ ಎಲ್ಲಾ ವರ್ಗದವರಿಗೆ ಸಾಮಾಜಿಕ ನ್ಯಾಯವನ್ನು ಕಲ್ಪಿಸಿದೆ. ಮಾದಿಗ ಸಮುದಾಯಕ್ಕೆ ಕಾಂಗ್ರೆಸ್ ಕೊಡುಗೆ ಅಪಾರವಾಗಿದೆ. ನಾನು ವಿಧಾನ ಪರಿಷತ್ ಸದಸ್ಯನಾಗಲು ಕಾಂಗ್ರೆಸ್ ಕಾರಣ. ಅದೇ ರೀತಿ ಬಹಳಷ್ಟು ಯೋಜನೆಗಳನ್ನು ಮಾದಿಗ ಸಮುದಾಯ ಅಭಿವೃದ್ದಿಗೆ ನೀಡಿದೆ. ಹೀಗಾಗಿ ಮಾದಿಗ ಸಮುದಾಯದ ಬಂಧುಗಳು ಕಾಂಗ್ರೆಸ್ ಅಭ್ಯರ್ಥಿಯಾಗಿರುವ ಸಚಿವರಾದ ಎಚ್.ಸಿ. ಮಹದೇವಪ್ಪ ಅವರ ಪುತ್ರ ಸುನೀಲ್ ಬೋಸ್ ಅವರನ್ನು ಅತ್ಯಧಿಕ ಮತಗಳ ಅಂತರದಲ್ಲಿ ಗೆಲ್ಲಿಸಬೇಕೆಂದು ಮನವಿ ಮಾಡಿದರು.

ಸಭೆಯಲ್ಲಿ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಪಿ.ಮರಿಸ್ವಾಮಿ, ಬ್ಲಾಕ್ ಅಧ್ಯಕ್ಷರಾದ ಎ.ಎಸ್. ಗುರುಸ್ವಾಮಿ, ಮಹಮದ್ ಅಸ್ಗರ್,ಜಿ.ಪಂ. ಮಾಜಿ ಸದಸ್ಯ ಕೆ.ಪಿ. ಸದಾಶಿವಮೂರ್ತಿ, ರಾಜ್ಯ ಉಪಾಧ್ಯಕ್ಷ ಸಿ.ಎ. ಮಹದೇವಶೆಟ್ಟಿ, ಡಾ. ಬಿ.ಆರ್. ಅಂಬೇಡ್ಕರ್ ಅಭಿವೃದ್ಧಿ ನಿಮಗದ ಮಾಜಿ ನಿರ್ದೇಶಕ ಶಿವಮೂರ್ತಿ, ಮುಖಂಡರಾದ ಎಚ್.ಎಚ್. ನಾಗರಾಜು, ಎನ್. ವಿನೋಧ್, ಗುಂಡ್ಲುಪೇಟೆ ದೇವರಾಜು, ಸೇವಾದಳದ ಜಿಲ್ಲಾಧ್ಯಕ್ಷ ಹೊಂಗನೂರು ಜಯರಾಜ್, ಕೊಳ್ಳೇಗಾಲ ಬಾಲರಾಜು, ಸೋಮು, ಪಾಳ್ಯ ರಾಚಪ್ಪ, ಬೂದಬಾಳು ಮಹದೇವ್, ಸುರೇಶ್, ಹೂಗ್ಯಂ ಸಂಪತ್ತು, ವೀರಪ್ಪ, ಗುಂಡ್ಲುಪೇಟೆ ಪುರಸಭಾ ಮಾಜಿ ಅಧ್ಯಕ್ಷ ರಂಗಸ್ವಾಮಿ, ನಿಟ್ರೆ ಮಹದೇವ್, ಯಳಂದೂರು ರಾಜಣ್ಣ, ಬೂದಿತಿಟ್ಟು, ಇದ್ದರು



### ಬಿಸಲವಾಡಿ, ಹೊನ್ನಹಳ್ಳಿ ಗ್ರಾ.ಪಂ. ವ್ಯಾಪ್ತಿಯಲ್ಲಿ

## ಕೈ ಪರ ಪುಟ್ಟರಂಗಶೆಟ್ಟಿ ಪ್ರಚಾರ

**ಚಾಮರಾಜನಗರ:** ತಾಲೂಕಿನ ಬಿಸಲವಾಡಿ ಹಾಗೂ ಹೊನ್ನಹಳ್ಳಿ ಗ್ರಾಮ ಪಂಚಾಯಿತಿಯ ಗ್ರಾಮಗಳಲ್ಲಿ ಎಂಐಎಸ್‌ಎಲ್ ಅಧ್ಯಕ್ಷ ಹಾಗೂ ಶಾಸಕ ಸಿ. ಪುಟ್ಟರಂಗಶೆಟ್ಟಿ ಬೆಂಬಲಿಗರೊಂದಿಗೆ ತೆರಳಿ ಕಾಂಗ್ರೆಸ್ ಅಭ್ಯರ್ಥಿ ಸುನೀಲ್ ಬೋಸ್ ಪರ ಮತಯಾಚನೆ ಮಾಡಿದರು.



ಬಿಸಲವಾಡಿ ಗ್ರಾಮಪಂಚಾಯಿತಿ ವ್ಯಾಪ್ತಿಯ ಬಿಸಲವಾಡಿ, ಬಂದಿಗೌಡನಹಳ್ಳಿ, ಕೋಡಿಉಗನೆ, ಕಾಲೋನಿ, ಹಾಗು ಹೊನ್ನಹಳ್ಳಿ ಪಂಚಾಯಿತಿ ವ್ಯಾಪ್ತಿಯ ಚನ್ನಪ್ಪನಪುರ, ಹೊನ್ನಹಳ್ಳಿ , ನಿಜಲಿಂಗನಪುರ, ನರಸಮಂಗಲ, ಹೊನ್ನಹಳ್ಳಿ ಹುಂಡಿ ವಡ್ಗಲ್‌ಪುರ, ಬೋಕ್ಕೆಪುರ ಸೇರಿದಂತೆ ಅನೇಕ ಗ್ರಾಮಗಳಿಗೆ ತೆರಳಿ ಉರಿ ಬಿಸಿಲನ್ನು ಲೆಕ್ಕಿಸದೇ ಮತಯಾಚನೆ ಮಾಡಿದರು.

ಈ ಸಂದರ್ಭದಲ್ಲಿ ಶಾಸಕ ಸಿ.ಪುಟ್ಟರಂಗಶೆಟ್ಟಿ ಮಾತನಾಡಿ, ಚಾಮರಾಜನಗರ ಲೋಕಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಸುನೀಲ್ ಬೋಸ್ ಒಂದು ಲಕ್ಷಕ್ಕು ಹೆಚ್ಚಿನ ಬಹುಮತದಲ್ಲಿ ಗೆಲುವು ಸಾಧಿಸಲಿದ್ದಾರೆ. ಈ ಬಾರಿ ಚಾ.ನಗರ ಕ್ಷೇತ್ರದಲ್ಲಿಯ ಸಹ ಹೆಚ್ಚಿನ ಲೀಡ್ ಅನ್ನು ನನ್ನ ಕ್ಷೇತ್ರದ ಮತದಾರರು ನೀಡುತ್ತಾರೆ ಎಂಬ ವಿಶ್ವಾಸವನ್ನು ವ್ಯಕ್ತಪಡಿಸಿದರು.

ಕಳೆದ ವಿಧಾನಸಭಾ ಚುನಾವಣೆಯ ಸಂದರ್ಭದಲ್ಲಿ ನಾವು ಘೋಷಣೆ ಮಾಡಿದ್ದ ಗ್ಯಾರಂಟಿಯನ್ನು ನೋಡಿ ಮಹಿಳಾ ಮತದಾರರು ಹಾಗೂ ರೈತರು ಹೆಚ್ಚಿನ ಮತಗಳನ್ನು ನೀಡಿದ್ದರು. ಈಗ ನಮ್ಮ ಸರ್ಕಾರದ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ಹಾಗು ಡಿಸಿಎಂ ಶಿವಕುಮಾರ್ ಅವರು ಐದು ಗ್ಯಾರಂಟಿಗಳನ್ನು ಅನುಷ್ಠಾನ ಮಾಡಿ, ಪ್ರತಿ ಮನೆಯ ಯಜಮಾನಿಗೆ 2 ಸಾವಿರ ರೂ. ಗೃಹ ಲಕ್ಷಿ?ಮ ಯೋಜನೆ, ಉಚಿತ ವಿದ್ಯುತ್ ನೀಡುವ ಮೂಲಕ ಗೃಹ ಜ್ಯೋತಿ, ಶಕ್ತಿ ಯೋಜನೆಯಡಿಯಲ್ಲಿ ಎಲ್ಲಾ ಮಹಿಳೆಯರಿಗೆ ಕೆಎಸ್‌ಆರ್‌ಟಿಸಿ ಬಸ್‌ಗಳಲ್ಲಿ ಉಚಿತ ಬಸ್ ಪ್ರಯಾಣ, ಅನ್ನ ಭಾಗ್ಯ ಯೋಜನೆಯಡಿ 5 ಕೆಜಿ ಉಚಿತ ಅಕ್ಕಿ ಹಾಗು ಇನ್ನು 5 ಕೆಜಿಗೆ ಹಣವನ್ನು ಬ್ಯಾಂಕ್ ಖಾತೆಗೆ ಜಮಾ ಮಾಡಲಾಗುತ್ತಿದೆ. ಯುವ ನಿಧಿ ಯೋಜನೆಯಲ್ಲಿ ನಿರುದ್ಯೋಗಿಗಳಿಗೆ 3 ಸಾವಿರ ರೂ. ಪ್ರತಿ ತಿಂಗಳು ಉಚಿತವಾಗಿ ಕೆಲಸ ದೊರೆಯುವರೆಗೆ ನೀಡಲಾಗುತ್ತದೆ ಎಂದರು.

ಈಗ ರಾಷ್ಟ್ರೀಯ ಕಾಂಗ್ರೆಸ್ ಪಕ್ಷ ಬಿಡುಗಡೆ ಮಾಡಿರುವ ಚುನಾವಣೆ ಪ್ರಾಣಾಳಿಕೆಯಲ್ಲಿ ಪ್ರತಿ ಕುಟುಂಬದ ಮಹಿಳೆಯರಿಗೆ 1 ಲಕ್ಷ ರೂ. ಘೋಷಣೆ, ರೈತರ ಸಾಲ ಮನ್ನಾ ಸೇರಿದಂತೆ ಅನೇಕ ಗ್ಯಾರಂಟಿಗಳನ್ನು ನೀಡಿದ್ದಾರೆ. 10 ವರ್ಷಗಳ ಮೋದಿ ಆಡಳಿತದಿಂದ ರಾಜ್ಯಕ್ಕೆ ಹೆಚ್ಚಿನ ಅನ್ಯಾಯವಾಗಿದೆ. ಈಗ ಬಿಜೆಪಿಯವರು ಮೋದಿಯೇ ಗ್ಯಾರಂಟಿ ಎಂದು ಹೇಳುತ್ತಿದ್ದಾರೆ. ಇನ್ನು ಮೋದಿ ಗ್ಯಾರಂಟಿ ತೆಗೆದುಕೊಂಡು ಏನು ಮಾಡಲು ಸಾಧ್ಯ ಎಂದು ಪುಟ್ಟರಂಗಶೆಟ್ಟಿ ಟೀಕಿಸಿದರು. ಹೀಗಾಗಿ ರಾಜ್ಯದಲ್ಲಿ 20ಕ್ಕು ಹೆಚ್ಚು ಕ್ಷೇತ್ರಗಳಲ್ಲಿ ಕಾಂಗ್ರೆಸ್ ಅಭ್ಯರ್ಥಿಗಳು ಜಯಗಳಿಸಿದ್ದಾರೆ. ಸಿದ್ದರಾಮಯ್ಯ ಅವರ ನೇತೃತ್ವದ ಸರ್ಕಾರ ಮತ್ತಷ್ಟು ಗಟ್ಟಿಯಾಗಲಿದೆ. ಇನ್ನು ನಾಲ್ಕು ವರ್ಷಗಳ ಕಾಲ ಕಾಂಗ್ರೆಸ್ ಸರ್ಕಾರ ಅಧಿಕಾರದಲ್ಲಿರುತ್ತದೆ ಎಂದು ಪುಟ್ಟರಂಗಶೆಟ್ಟಿ ವಿಶ್ವಾಸ ವ್ಯಕ್ತಪಡಿಸಿದರು.

ಜಿಲ್ಲಾ ಕಾಂಗ್ರೆಸ್ ಉಪಾಧ್ಯಕ್ಷ ಬಿ.ಕೆ. ರವಿಕುಮಾರ್, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಅರಕಲವಾಡಿ ಗುರುಸ್ವಾಮಿ, ಮಹಮದ್ ಅಸ್ಗರ್, ಎಪಿಎಂಸಿ ನಿರ್ದೇಶಕ ಆಲೂರು ಪ್ರದೀಪ್, ಬಿಸಲವಾಡಿ ಗ್ರಾ.ಪಂ. ಅಧ್ಯಕ್ಷೆ ರಮ್ಯನಾಗರಾಜು, ಉಪಾಧ್ಯಕ್ಷ ಬೇಬಿ, ಮಾಜಿ ಅಧ್ಯಕ್ಷ ಮಹದೇವಪ್ಪ, ಮುಖಂಡರಾದ ಯಣಗುಂಬ ರಾಜೇಂದ್ರ, ಶಂಭಪ್ಪ, ಗೌಡಿಕೆ ಶೇಖರಪ್ಪ, ಗಿರಿಯಪಪ್, ಹೊನ್ನಹಳ್ಳೀ ಬಸವಣ್ಣ, ರವಿಬಿಸಲವಾಡಿ, ಹೊನ್ನಹಳ್ಳಿ ಪ್ರಕಾಶ್, ಶಂಕರಾಮ್, ಕಾಗಲವಾಡಿ ಶ್ರೀನಿವಾಸಶೆಟ್ಟಿ, ಮಹೇಶ್ ಚಿಕ್ಕಮೋಳೆ, ಮಲ್ಲಿಕಾರ್ಜುನಸ್ವಾಮಿ, ಸ್ವಾಮಿ ಕರಿನಂಜನಪುರ, ವಿನೋದ್ ಮೊದಲಾದವರು ಇದ್ದರು.

### ಕಾಂಗ್ರೆಸ್ ಪಕ್ಷದಿಂದ ಮಾತ್ರ ಸಾಮಾಜಿಕ ನ್ಯಾಯ ಸಾಧ್ಯ

**ಚಾಮರಾಜನಗರ ತಾಲೂಕಿನ ಬಂದಿಗೌಡನಹಳ್ಳಿ ಗ್ರಾಮದ ಅನೇಕ ಮುಖಂಡರು ಬಿಜೆಪಿ ತೊರೆದು ಶಾಸಕ ಪುಟ್ಟರಂಗಶೆಟ್ಟಿ ಸಮ್ಮುಖದಲ್ಲಿ ಕಾಂಗ್ರೆಸ್‌ಕ್ಕೆ ಸೇರ್ಪಡೆಯಾದರು.**

ನಗರದ ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ನಡೆದ ಪಕ್ಷ ಸೇರ್ಪಡೆ ಕಾರ್ಯಕ್ರಮದಲ್ಲಿ ಶಾಸಕ ಸಿ. ಪುಟ್ಟರಂಗಶೆಟ್ಟಿ, ಜಿಲ್ಲಾ ಕಾಂಗ್ರೆಸ್ ಉಪಾಧ್ಯಕ್ಷ ಬಿ.ಕೆ. ರವಿಕುಮಾರ್ ಅವರು ಪಕ್ಷದ ಶಾಲ್ಯ ಹಾಕಿ ಮುಖಂಡರನ್ನು ಸ್ವಾಗತಿಸಿದರು. ಗ್ರಾಮದ ಮುಖಂಡರಾದ ಸೋಮಶೇಖರ್, ಎನ್. ಮಲ್ಲೇಶ್, ಮಂಜುನಾಥ್, ಮಹೇಶ್, ಆನಂದ, ಬಿ.ಎಂ. ಮಲ್ಲೇಶ್, ಸೇರಿದಂತೆ ಅನೇಕರು ಬಿಜೆಪಿ ತೊರೆದು ಕಾಂಗ್ರೆಸ್ ಪಕ್ಷಕ್ಕೆ ಸೇರ್ಪಡೆಯಾದರು. ಎಲ್ಲಾ ಮುಖಂಡರನ್ನು ಪಕ್ಷಕ್ಕೆ ಸ್ವಾಗತಿಸಿ ಮಾತನಾಡಿದ ಶಾಸಕ ಸಿ. ಪುಟ್ಟರಂಗಶೆಟ್ಟಿ, ಬಿಜೆಪಿ ಕೇವಲ ಧರ್ಮ, ಜಾತಿ ಹೆಸರಿನಲ್ಲಿ ರಾಜಕಾರಣ ಮಾಡುವ ಮೂಲಕ ಗ್ರಾಮ ಹಾಗೂ ದೇಶದಲ್ಲಿ ಗೊಂದಲ ಮಾಡುತ್ತಾರೆ. ಆದರೆ, ಕಾಂಗ್ರೆಸ್ ತತ್ವ ಸಿದ್ಧಾಂತಗಳೊಂದಿಗೆ ಕಳೆದ 75 ವರ್ಷಗಳಿಂದ ರಾಜಕಾರಣ ಮಾಡುತ್ತಿದೆ. ದೀನ ದಲಿತರು, ಬಡವರು ಹಾಗೂ ಎಲ್ಲಾ ವರ್ಗವರಿಗೆ ಸಾಮಾಜಿಕ ನ್ಯಾಯ ಕಲ್ಪಿಸಿಕೊಡಲು ಹೋರಾಟ ಮಾಡಿದ ಪಕ್ಷವಾಗಿದೆ ಎಂದರು. ನೀವೆಲ್ಲರು ಕಾಂಗ್ರೆಸ್‌ಗೆ ಸೇರ್ಪಡೆಯಾಗಿದ್ದೀರಿ. ನಿಮ್ಮ ಗ್ರಾಮದ ಸಮಸ್ಯೆಗಳಿದ್ದರೆ ನೇರವಾಗಿ ನನಗೆ ತಿಳಿಸಿ. ಇಲ್ಲವೇ ನಿಮ್ಮ ಗ್ರಾಮದ ಮುಖಂಡರಾದ ಬಿ.ಕೆ. ರವಿಕುಮಾರ್ ಅವರಿಗೆ ಹೇಳಿ. ಈಗಾಗಲೇ ಬಂದಿಗೌಡನಹಳ್ಳಿ ಗ್ರಾಮಕ್ಕೆ ಹೆಚ್ಚಿನ ಅಭಿವೃದ್ಧಿ ಕೆಲಸವನ್ನು ಮಾಡುತ್ತಿದ್ದೇವೆ. ಸಮುದಾಯ ಭವನ ನಿರ್ಮಾಣ, ರಸ್ತೆಗಳ ಅಭಿವೃದ್ಧಿ, ಸೇತುವೆ ನಿರ್ಮಾಣ ಸೇರಿದಂತೆ ಅನೇಕ ಅಭಿವೃದ್ಧಿ ಕೆಲಸಗಳನ್ನು ಮಾಡಿದ್ದೇವೆ. ತಾವೆಲ್ಲರು ಲೋಕಸಭೆ ಚುನಾವಣೆಯಲ್ಲಿ ಹೆಚ್ಚಿನ ಬೆಂಬಲವನ್ನು ನೀಡಿ, ನಮ್ಮ ಅಭ್ಯರ್ಥಿ ಸುನೀಲ್ ಬೋಸ್ ಅವರನ್ನು ಗೆಲ್ಲಿಸಿಕೊಡಿ ಎಂದು ಮನವಿ ಮಾಡಿದರು. ಜಿಲ್ಲಾ ಕಾಂಗ್ರೆಸ್ ಉಪಾಧ್ಯಕ್ಷ ಬಿ.ಕೆ. ರವಿಕುಮಾರ್, ಪಕ್ಷದ ತತ್ವ ಸಿದ್ಧಾಂತಗಳನ್ನು ಒಪ್ಪಿ ಕಾಂಗ್ರೆಸ್ ಸೇರ್ಪಡೆಯಾದ ಗ್ರಾಮದ ಮುಖಂಡರನ್ನು ಸ್ವಾಗತಿಸಿ ಮಾತನಾಡಿ, ಕಾಂಗ್ರೆಸ್ ಸಮುದ್ರ ಇದ್ದಂತೆ, ಎಲ್ಲರಿಗೂ ಅವಕಾಶಗಳು ದೊರೆಯುತ್ತವೆ. ತಾಳ್ಮೆಯಿಂದ ಕಾಯಬೇಕು. ಕಾಂಗ್ರೆಸ್‌ದಲ್ಲಿ ತಾ.ಪಂ. ಅಧ್ಯಕ್ಷನಾಗಿ, ಎಪಿಎಂಸಿ ಅಧ್ಯಕ್ಷರಾಗಿ, ಜಿಲ್ಲಾ ಕಾಂಗ್ರೆಸ್ ಉಪಾಧ್ಯಕ್ಷನಾಗಿ ಅನೇಕ ಹುದ್ದೆಯಲ್ಲಿದ್ದು, ಪಕ್ಷದ ಸಂಘಟನೆಯ ಜೊತೆಗೆ ಶಾಸಕ ಸಿ.ಪುಟ್ಟರಂಗಶೆಟ್ಟರ ನೇತೃತ್ವದಲ್ಲಿ ಕ್ಷೇತ್ರದ ಅಭಿವೃದ್ದಿಗೆ ದುಡಿಯುತ್ತಿದ್ದೇವೆ. ಪಕ್ಷದ ಸೇರ್ಪಡೆಯಾಗಿರುವ ತಾವೆಲ್ಲರು ದುಡಿಯುವ ಮೂಲಕ ಇನ್ನು ಹೆಚ್ಚಿನ ರೀತಿಯಲ್ಲಿ ಬಿಸಲವಾಡಿ ಗ್ರಾ.ಪಂ. ವ್ಯಾಪ್ತಿಯಲ್ಲಿ ಪಕ್ಷವನ್ನು ಬಲಪಡಿಸಬೇಕು ಎಂದು ಮನವಿ ಮಾಡಿದರು. ಕಾರ್ಯಕ್ರಮದಲ್ಲಿ ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಚಿಕ್ಕಮಹದೇವ್, ಜಿಲ್ಲಾ ಎಸ್ಸಿ ಬ್ಲಾಕ್ ಅಧ್ಯಕ್ಷ ಸೋಮಣ್ಣ, ಕಾರ್ಮಿಕ ವಿಭಾಗದ ಅಧ್ಯಕ್ಷ ಮಹೇಶ್, ಎಪಿಎಂಸಿ ನಿರ್ದೇಶಕ ಆಲೂರು ಪ್ರದೀಪ್, ಬಿಸಲವಾಡಿ ಗ್ರಾ.ಪಂ. ಮಾಜಿ ಅಧ್ಯಕ್ಷ ಪ್ರಭುಸ್ವಾಮಿ, ಗ್ರಾ.ಪಂ. ಅಧ್ಯಕ್ಷ ರಮ್ಯ ನಾಗರಾಜು, ಮುಖಂಡರಾದ ಬಿಸಲವಾಡಿ ರವಿ, ಬಸವರಾಜು, ಪ್ರಭುಸ್ವಾಮಿ, ಲೋಕೇಶ್, ವೀರಣ್ಣ, ಪಿ. ಕುಮಾರ್, ಗಣೇಶ್, ಸ್ವಾಮಿ ಆರಾಧ್ಯ, ನಿಂಗರಾಜು, ರವಿಗೌಡ, ದೊಡ್ಡರಾಯಪೇಟೆ ಮೂರ್ತಿ, ಕೆಂಪರಾಜು, ಹೊಸಹಳ್ಳಿ ಮಧುಸೂಧನ್ ಮೊದಲಾದವರು ಇದ್ದರು.




## ಬರಗಾಲದಲ್ಲೂ ಯುಗಾದಿ ಆಚರಣೆಗೆ ಸಕಲ ಸಿದ್ಧತೆ

**ಮಂಡ್ಯ:**ಸಾಮಾನ್ಯವಾಗಿ ಹಬ್ಬಗಳ ಸಂದರ್ಭದಲ್ಲಿ ಮಾರುಕಟ್ಟೆಗಳಲ್ಲಿ ಖರೀದಿ ಭರಾಟೆ ಜೋರಾಗಿರುತ್ತದೆ. ಆದರೆ ಈ ಯುಗಾದಿಗೆ ಮಾರುಕಟ್ಟೆಗಳಲ್ಲಿ ಹೇಳಿಕೊಳ್ಳುವಷ್ಟು ಜನರಿಲ್ಲ.ರಾಜ್ಯಾದ್ಯಂತ ಬರಗಾಲ ಆವರಿಸಿದ್ದು, ದಿನದಿಂದ ದಿನಕ್ಕೆ ಬಿಸಿಲಿನ ಝಳ ಹೆಚ್ಚಾಗಿದೆ. ಕುಡಿಯಲು ನೀರಿಲ್ಲದೆ ಹಬ್ಬದ ಸಂಭ್ರಮ ಕಳೆಗುಂದಿದೆ. ಹಿಂದೂ ಪಂಚಾಂಗದ ಪ್ರಕಾರ, ಯುಗಾದಿ ಹೊಸವರ್ಷವನ್ನು ಎಲ್ಲರೂ ಸಂಭ್ರಮದಿಂದ ಆಚರಿಸುತ್ತಾರೆ. ಈ ಬಾರಿ ಬರಗಾಲ ಹಬ್ಬದ ಸಂಭ್ರಮ ಕಸಿದುಕೊಂಡಿದೆ. ಒಂದು ಕಡೆ ಬಿಸಿಲಿಗೆ ಹೆದರಿ ಜನರು ಮಾರುಕಟ್ಟೆಗೆ ಬರಲು ಹಿಂದೇಟು ಹಾಕುತ್ತಿದ್ದರೆ, ಮತ್ತೊಂದೆಡೆ ನೀರಿಲ್ಲದೆ ಹೂವು, ಹಣ್ಣು, ತರಕಾರಿ ಬೆಳೆ ಕಡಿಮೆಯಾಗಿದ್ದು, ಇವುಗಳ ಬೆಲೆ ಗಗನಕ್ಕೇರಿರುವುದರಿಂದ ಜನರು ಮಾರುಕಟ್ಟೆಯತ್ತ ಮುಖ ಮಾಡುತ್ತಿಲ್ಲ. ನೀರಿನ ಸಮಸ್ಯೆ ಹಾಗೂ ಬಿಸಿಲಿನ ತಾಪಕ್ಕೆ ಹೂವುಗಳ ಬೆಳೆ ಅಷ್ಟಾಗಿ ಚೆನ್ನಾಗಿ ಬಂದಿಲ್ಲ. ಜತೆಗೆ ಬಿಸಿಲಿನ ತಾಪಕ್ಕೆ ಹೂವುಗಳು ಬೇಗ ಬಾಡುತ್ತಿದ್ದು, ಮಾರುಕಟ್ಟೆಗೆ ಗುಣಮಟ್ಟದ ಹೂವುಗಳು ಸರಬರಾಜಾಗುತ್ತಿಲ್ಲ. ಆದರೂ ಸಹ ಬೆಲೆ ಮಾತ್ರ ಗಗನಕ್ಕೇರಿದೆ. ಮಲ್ಲಿಗೆ ಕೆಜಿಗೆ 500 ರಿಂದ 600ರೂ., ಸೇವಂತಿಗೆ 300 ರಿಂದ 350ರೂ., ಕನಕಾಂಬರ 900 ರಿಂದ 1000ರೂ., ತುಳಸಿ ಒಂದು ಮಾರಿಗೆ 100ರೂ., ಬೇವಿನ ಸೊಪ್ಪು ಒಂದು ಕಟ್ಟಿಗೆ 30ರೂ.ಗೆ ಮಾರಾಟವಾಗುತ್ತಿದೆ. ಕೆಲವು ದಿನಗಳ ಹಿಂದೆ 100ರೂ. ಗಡಿ ದಾಟಿದ್ದ ಏಲಕ್ಕಿ ಬಾಳೆ 50ರೂ.ಗೆ ಮಾರಾಟವಾಗುತ್ತಿದೆ. ಏಕೆಂದರೆ ಬಿಸಿಲಿಗೆ ಹಣ್ಣುಗಳು ಕಪ್ಪಾಗುತ್ತಿದ್ದು, ಕೇಳುವವರಿಲ್ಲದಂತಾಗಿದೆ. ತರಕಾರಿ ಬೆಲೆಯಲ್ಲೂ ಸಹ ಏರಿಕೆಯಾಗಿದ್ದು, ನಾಟಿ ಬೀನ್ಸ್ ಕೆಜಿ 80ರೂ., ಮೂಲಂಗಿ 40ರೂ., ಬೆಂಡೆಕಾಯಿ 50ರೂ., ಹಾಗಲಕಾಯಿ 60ರೂ., ಹೀರೇಕಾಯಿ 50ರೂ.ಗೆ ಮಾರಾಟವಾಗುತ್ತಿದೆ. ಬೆಲೆ ಹೆಚ್ಚಾದರೂ ಸರಿಯೇ ನಮ್ಮ ಸಂಪ್ರದಾಯವನ್ನು ಮುಂದುವರೆಸಿಕೊಂಡು ಹೋಗಬೇಕಲ್ಲ ಎಂದು ಬೆಲೆ ಏರಿಕೆ ನಡುವೆಯೂ ಹಬ್ಬವನ್ನು ಆಚರಿಸುತ್ತಿದ್ದಾರೆ.



## ದೇಶ, ಧರ್ಮ ಮನುಷ್ಯನ ಕಣ್ಣು

**ಹುಬ್ಬಳ್ಳಿ:** ದೇಶ ಮತ್ತು ಧರ್ಮ ಮನುಷ್ಯನ ಎರಡು ಕಣ್ಣು. ದೇಶ ಉಳಿದರೆ ಧರ್ಮ ಸಂಸ್ಕೃತಿ ಉಳಿದು ಬೆಳೆದು ಬರಲು ಸಾಧ್ಯ. ದೇವರ ಮೇಲಿನ ನಂಬಿಕೆ ಬಾಳಿಗೆ ಶಾಶ್ವತ ಆಶಾದೀಪ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು. ಸೋಮವಾರ ತಾಲೂಕಿನ ಪಾಲಿಕೊಪ್ಪ ಗ್ರಾಮದಲ್ಲಿ ಶ್ರೀ ದುರ್ಗಾದೇವಿ ಮತ್ತು ಶ್ರೀ ಕರಿಯಮ್ಮದೇವಿ ನೂತನ ದೇವಸ್ಥಾನದ ಲೋಕಾರ್ಪಣೆ, ನೂತನ ಗೋಪುರ ಕಳಸಾರೋಹಣ, ಪ್ರಾಣ ಪ್ರತಿಷ್ಠಾಪನೆ, ಶ್ರೀ ನಂದೀಶ್ವರ ಸ್ವಾಮಿ ಮಹಾರಥೋತ್ಸವ ಅಂಗವಾಗಿ ಜರುಗಿದ ಧರ್ಮ ಜಾಗೃತಿ ಸಮಾರಂಭದ ಸಾನ್ನಿಧ್ಯ ವಹಿಸಿ ಆಶೀರ್ವಚನ ನೀಡುತ್ತಿದ್ದರು ಭಾವೈಕ್ಯತೆ ಮತ್ತು ಅಧ್ಯಾತ್ಮ ಜ್ಞಾನ ಭಾರತದ ಉಸಿರು. ಆಧುನಿಕ ಯುಗದಲ್ಲಿ ಪ್ರಗತಿಪರ ವಿಚಾರ ಧಾರೆಗಳ ಹೆಸರಿನಲ್ಲಿ ಭಾರತೀಯ ಉತ್ಕೃಷ್ಟ ಸಂಸ್ಕೃತಿ ನಾಶ ಮಾಡುವ ಸಂಚು ನಡೆಯುತ್ತಿದೆ. ದೇಹವನ್ನು ದುಡಿಮೆಗೆ ಮನಸ್ಸನ್ನು ಭಗವಂತನಿಗೆ ಅರ್ಪಿಸಿ ನಡೆದಾಗ ಜೀವನ ಸಾರ್ಥಕ. ಸುಖದ ಮೂಲ ಧರ್ಮ ಪರಿಪಾಲನೆಯಲ್ಲಿದೆ. ಮಾನವ ಪರಿಪೂರ್ಣದೆಡೆಗೆ ಪಯಣಿಸುವುದೇ ನಿಜವಾದ ಧರ್ಮ. ಶ್ರೀ ಜಗದ್ಗುರು ರೇಣುಕಾಚಾರ್ಯರು ಬೋಧಿಸಿದ ಅಹಿಂಸಾ ಸತ್ಯ, ಅಸ್ತೇಯ, ಬ್ರಹ್ಮಚರ್ಯ, ದಯಾ, ಕ್ಷಮಾ, ದಾನ, ಪೂಜಾ ಮತ್ತು ಧ್ಯಾನ ಎಂಬ ದಶಸೂತ್ರಗಳು ಎಲ್ಲರ ಬಾಳಿಗೆ ದಾರಿದೀಪ. ವೀರಶೈವ ಧರ್ಮ ಕಾಯಕ ಮತ್ತು ದಾಸೋಹದ ಮೂಲಕ ಭಾವೈಕ್ಯತೆ ಸಾಮರಸ್ಯ ಬೆಳೆಸಲು ಪ್ರಯತ್ನಿಸಿದೆ. ಶುದ್ಧ ಹೃದಯವು ಭಗವಂತನ ದರ್ಶನಕ್ಕೆ ಹೋಗುವ ಹೆಬ್ಬಾಗಿಲು. ಮನುಷ್ಯನಲ್ಲಿರುವ ಅಸುರೀ ಗುಣಗಳು ನಾಶವಾಗಿ ದೈವೀ ಗುಣಗಳು ಬಲಗೊಳ್ಳಬೇಕು. ಪ್ರಾಪಂಚಿಕ ಸ್ನೇಹ ಸಂಬಂಧಗಳು ಕಾಲಾಂತರದಲ್ಲಿ ಶಿಥಿಲಗೊಳ್ಳಬಹುದು. ಆದರೆ ಗುರು ಶಿಷ್ಯರ ಸಂಬಂಧ ಅದು ನಿರಂತರ ಮತ್ತು ಚಿರಂತನವಾದುದು. ಲಿಂ.ಶ್ರೀಮದ್ ರಂಭಾಪುರಿ ವೀರಗಂಗಾಧರ ಜಗದ್ಗುರುಗಳು ಸಾರಿದ ಮಾನವ ಧರ್ಮಕ್ಕೆ ಜಯವಾಗಲಿ ಧರ್ಮದಿಂದಲೇ ವಿಶ್ವಕ್ಕೆ ಶಾಂತಿ ಎಂಬ ಸಂದೇಶ ಎಂದೆಂದಿಗೂ ಪ್ರಸ್ತುತವಾಗಿದೆ. ಗ್ರಾಮದಲ್ಲಿ ಅಭಿವೃದ್ಧಿ ಕಾರ್ಯಗಳು ನಡೆದಿರುವುದು ಸಮಾಧಾನ ತಂದಿದೆ ಎಂದರು. ಮುಕ್ತಿಮಂದಿರ ಕ್ಷೇತ್ರದ ವಿಮಲ ರೇಣುಕ ವೀರಮುಕ್ತಿಮುನಿ ಶಿವಾಚಾರ್ಯ ಸ್ವಾಮಿಗಳು ಸಮಾರಂಭದ ನೇತೃತ್ವ ವಹಿಸಿದ್ದರು. ಕಲಾದಗಿಯ ಗಂಗಾಧರ ಶಿವಾಚಾರ್ಯರು ಸಮ್ಮುಖ ವಹಿಸಿದ್ದರು. ಶಿವಾನಂದಸ್ವಾಮಿ ಹಿರೇಮಠ, ಕುಮಾರಸ್ವಾಮಿ ಹಿರೇಮಠ, ದೇವನಗೌಡ ಪಾಟೀಲ, ಗಂಗನಗೌಡ ಪಾಟೀಲ, ಶಿವನಗೌಡ ಧರ್ಮಗೌಡ್ರ, ನಾಗರಾಜ ಅಂಗಡಿ, ಶ್ರೀಕಂಠಗೌಡ್ರು ಹಿರೇಗೌಡ್ರ, ಮುದಕಪ್ಪ ಹರಕುಣಿ, ಬಿ.ಸಿ.ಕರಿಯಣ್ಣನವರ, ಭರಮಪ್ಪ ಮುಗಳಿ, ಸಿ.ವೈ.ಹಿರೇಗೌಡ್ರ, ಚನ್ನಪ್ಪ ಕಮಡೊಳ್ಳಿ ಸಮಾರಂಭದಲ್ಲಿ ಪಾಲ್ಗೊಂಡು ಶ್ರೀ ರಂಭಾಪುರಿ ಜಗದ್ಗುರುಗಳ ಆಶೀರ್ವಾದ ಪಡೆದರು.



## ಎಸ್.ಎಂ.ಕೃಷ್ಣ ಭೇಟಿಯಾಗಿ ಚರ್ಚೆ ನಡೆಸಿದ ಕುಮಾರಸ್ವಾಮಿ

**ಬೆಂಗಳೂರು:** ಮಂಡ್ಯ ಲೋಕಸಭೆ ಕ್ಷೇತ್ರದ ಜೆಡಿಎಸ್, ಬಿಜೆಪಿ ಮೈತ್ರಿಕೂಟ (ಎನ್ ಡಿಎ) ಅಭ್ಯರ್ಥಿಯಾದ ಮಾಜಿ ಮುಖ್ಯಮಂತ್ರಿ ಹೆಚ್.ಡಿ.ಕುಮಾರಸ್ವಾಮಿ ಅವರು, ಮಾಜಿ ಮುಖ್ಯಮಂತ್ರಿ, ಕೇಂದ್ರದ ಮಾಜಿ ಸಚಿವರು, ಬಿಜೆಪಿ ಹಿರಿಯ ನಾಯಕರೂ ಆಗಿರುವ ಎಸ್.ಎಂ.ಕೃಷ್ಣ ಅವರನ್ನು ಸೌಹಾರ್ದ ಭೇಟಿ ಮಾಡಿ ಮಾತುಕತೆ ನಡೆಸಿದರು. ಸೋಮವಾರ ಸಂಜೆ ಸದಾಶಿವನಗರದಲ್ಲಿರುವ ಎಸ್.ಎಂ.ಕೃಷ್ಣ ಅವರ ನಿವಾಸಕ್ಕೆ ಭೇಟಿ ನೀಡಿದ ಕುಮಾರಸ್ವಾಮಿ ಅವರೊಂದಿಗೆ ಪ್ರತಿಪಕ್ಷ ನಾಯಕ ಆರ್.ಅಶೋಕ್, ಮಾಜಿ ಉಪ ಮುಖ್ಯಮಂತ್ರಿ ಡಾ.ಸಿ.ಎನ್. ಅಶ್ವತ್ಥ ನಾರಾಯಣ, ಮಾಜಿ ಸಚಿವರಾದ ಶ್ರೀ ಪುಟ್ಟರಾಜು, ಯುವ ಜನತಾದಳ ರಾಜ್ಯಾಧ್ಯಕ್ಷರಾದ ನಿಖಿಲ್ ಕುಮಾರಸ್ವಾಮಿ, ಬಿಜೆಪಿ ನಾಯಕರಾದ ಇಂಡುವಾಳು ಸಚ್ಚಿದಾನಂದ, ಉಮೇಶ್ ಅವರು ಇದ್ದರು. ಲೋಕಸಭೆ ಚುನಾವಣೆ ಹಾಗೂ ರಾಜ್ಯದ ರಾಜಕೀಯ ಬೆಳವಣಿಗೆಗಳ ಬಗ್ಗೆ ನಾಯಕರು ಮಾತುಕತೆ ನಡೆಸಿದರು. ನಂತರ ಮಾಧ್ಯಮಗಳ ಜತೆ ಮಾತನಾಡಿದ ಕುಮಾರಸ್ವಾಮಿ ಅವರು; ಹಿರಿಯರಾದ ರಾಜ್ಯದ ಮುಖ್ಯಮಂತ್ರಿಗಳಾಗಿ, ಕೇಂದ್ರ ಸಚಿವರಾಗಿ ಕೃಷ್ಣ ಅವರು ನಾಡಿಗೆ ಉತ್ತಮ ಸೇವೆ ಸಲ್ಲಿಸಿದ್ದಾರೆ. ಅವರು ನಮ್ಮ ತಂದೆಯವರ ಸಮಕಾಲೀನರು. ತಂದೆಯವರಿಗಿಂತ ಆರು ತಿಂಗಳು ದೊಡ್ಡವರು. ನಾನು ನಾಮಪತ್ರ ಸಲ್ಲಿಸುವ ಮುನ್ನವೇ ಅವರ ಆಶೀರ್ವಾದ ಪಡೆಯಬೇಕಿತ್ತು. ಇವತ್ತು ಅವರನ್ನು ಭೇಟಿ ಮಾಡಿ ಆಶೀರ್ವಾದ ಪಡೆದಿದ್ದೇನೆ ಎಂದರು. ನಾನು ಪ್ರಥಮವಾಗಿ ರಾಜಕೀಯಕ್ಕೆ ಸ್ಪರ್ಧೆ ಮಾಡಿದಾಗ ಕೃಷ್ಣ ಅವರು ಆಶೀರ್ವಾದ ಮಾಡಿದ್ದರು. ಆ ಸಂಗತಿಯನ್ನು ಮಾತುಕತೆಯ ವೇಳೆ ಹಿರಿಯರಾದ ಕೃಷ್ಣ ಅವರೇ ನೆನೆಸಿಕೊಂಡರು. ನನ್ನನ್ನು ಆಶೀರ್ವಾದ ಮಾಡಿ ನಾಡಿನ ಅಭಿವೃದ್ಧಿಗಾಗಿ ಕೆಲಸ ಮಾಡಿ ಎಂದು ಹೇಳಿದ್ದಾರೆ ಎಂದರು ಕುಮಾರಸ್ವಾಮಿ ಅವರು. ಕೃಷ್ಣ ಅವರನ್ನು ಭೇಟಿ ಮಾಡಿ ಆಶೀರ್ವಾದ ಪಡೆದದ್ದು ನನಗೆ ಬಹಳ ಸಂತೋಷ ಉಂಟು ಮಾಡಿದೆ ಎಂದು ಮಾಜಿ ಮುಖ್ಯಮಂತ್ರಿ ಅವರು ತಿಳಿಸಿದರು. ಚುನಾವಣೆಯ ಪ್ರಚಾರದ ರೋಡ್ ಶೋ ಕಾರ್ಯಕ್ರಮದಲ್ಲಿ ಪಿಸ್ತೂಲು ಹೊಂದಿದ್ದ ವ್ಯಕ್ತಿಯೊಬ್ಬ ಮುಖ್ಯಮಂತ್ರಿ ಅವರಿಗೆ ಸನ್ಮಾನ ಮಾಡಿರುವ ಘಟನೆ ಭದ್ರತಾ ಲೋಪ. ಇಂಥ ಅಚಾತುರ್ಯ ನಡೆಯಬಾರದಿತ್ತು ಎಂದು ಕುಮಾರಸ್ವಾಮಿ ಅವರು ಕಳವಳ ವ್ಯಕ್ತಪಡಿಸಿದರು.



ಈ ಬಗ್ಗೆ ಮಾಧ್ಯಮಗಳು ಕೇಳಿದ ಪ್ರಶ್ನೆಗೆ ಉತ್ತರ ನೀಡಿದ ಅವರು; ಇಲ್ಲಿ ಯಾರು ಯಾರನ್ನೂ ತಪಾಸಣೆ ಮಾಡಲ್ಲ. ಸಿಎಂ ಕಾರ್ಯಕ್ರಮದಲ್ಲಿ ಭದ್ರತಾ ಲೋಪ ಆಗಬಾರದು. ಮುಂಜಾಗ್ರತಾ ಕ್ರಮ ತೆಗೆದುಕೊಳ್ಳಬೇಕು ಎಂದು ಅವರು ಹೇಳಿದರು. ಮಂಡ್ಯ ಕ್ಷೇತ್ರದಲ್ಲಿ ಕಾಂಗ್ರೆಸ್ ನವರು ಅಪಪ್ರಚಾರ ನಡೆಸುತ್ತಿದ್ದಾರೆ. ಅವರು ಸಾಮಾಜಿಕ ಜಾಲತಾಣದಲ್ಲಿ ಕೆಲ ಪ್ರಶ್ನೆಗಳನ್ನು ಕೇಳಿದ್ದಾರೆ. ಅವರಿಗೆ ಉತ್ತರ ನೀಡಲು ನಾವು ಸಮರ್ಥನಿದ್ದೇನೆ. ನಾನು ಎಲ್ಲೂ ಕಾಣೆ ಆಗಿಲ್ಲ. ನಾನು ಇಲ್ಲೇ ಇದ್ದೇನೆ. ಈ ರೀತಿ ಅಪಪ್ರಚಾರ ಮಾಡಿ ಚುನಾವಣೆ ಯಶಸ್ವಿ ಆಗಲ್ಲ. ಅವರು ಇಂಥ ಪರೋಕ್ಷವಾಗಿ ಸೆಣಸುವ ಬದಲು ನೇರವಾಗಿ ಚುನಾವಣೆ ಮಾಡಲಿ ಎಂದು ವಾಗ್ದಾಳಿ ನಡೆಸಿದರು.

## ದಲಿತರ ಅನುದಾನ ಕಿತ್ತುಕೊಳ್ಳುತ್ತಿರುವ ಕಾಂಗ್ರೆಸ್

**ಮಳವಳ್ಳಿ:**ದಲಿತ ಸಮುದಾಯ ಅಭಿವೃದ್ಧಿಗೆ ಎಚ್.ಡಿ.ದೇವೇಗೌಡ, ಪ್ರಧಾನಿ ನರೇಂದ್ರ ಮೋದಿ ಅವರು ನೀಡಿದ ಅನೇಕ ಕೊಡುಗೆಗಳನ್ನು ಅರಿತು ಲೋಕಸಭೆ ಚುನಾವಣೆಯಲ್ಲಿ ಮೈತ್ರಿ ಅಭ್ಯರ್ಥಿ ಎಚ್.ಡಿ.ಕುಮಾರಸ್ವಾಮಿ ಅವರಿಗೆ ದಲಿತ ಸಮುದಾಯ ಮತ ನೀಡಬೇಕು' ಜೆಡಿಎಸ್ ಪರಿಶಿಷ್ಟ ಜಾತಿ ವಿಭಾಗದ ರಾಜ್ಯ ಘಟಕದ ಅಧ್ಯಕ್ಷ ಕೆ.ಅನ್ನದಾನಿ ಕರೆ ನೀಡಿದರು.



ಪಟ್ಟಣದ ಕನಕಪುರ ರಸ್ತೆಯ ಒಕ್ಕಲಿಗರ ಸಮುದಾಯ ಭವನದಲ್ಲಿ ಸೋಮವಾರ ನಡೆದ ಎಸ್ಸಿ- ಎಸ್ಟಿ ಕಾರ್ಯಕರ್ತರ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಬಿಜೆಪಿ ಮತ್ತು ಜೆಡಿಎಸ್‌ನ ವಿರೋಧ ಮಾಡುವುದಕ್ಕೆ ಕಾಂಗ್ರೆಸ್ಗೆ ಏನೂ ಇಲ್ಲ. ಯಾರೂ ಸಂವಿಧಾನ ಬದಲಾವಣೆ ಬಗ್ಗೆ ಹೇಳಿರುವ ಮಾತನ್ನೇ ಜನರಲ್ಲಿ ದಿಕ್ಕು ತಪ್ಪಿಸುವ ಕೆಲಸ ಮಾಡುತ್ತಿದೆ. ಕಳೆದ 10 ತಿಂಗಳಲ್ಲಿ ಕಾಂಗ್ರೆಸ್ ಸರ್ಕಾರ ದಲಿತರಿಗೆ ಒಂದೇ ಒಂದು ವಿಶೇಷ ಯೋಜನೆ ನೀಡಿಲ್ಲ, ದಲಿತರ ಅಭಿವೃದ್ಧಿಗೆ ಇಟ್ಟಿರುವ ?11 ಸಾವಿರ ಕೋಟಿ ಅನುದಾನವನ್ನು ಬೇರೆಕಡೆಗೆ ವರ್ಗಾವಣೆ ಮಾಡಿಕೊಂಡು ದಲಿತರಿಗೆ ಕಾಂಗ್ರೆಸ್ ಅನ್ಯಾಯ ಮಾಡುತ್ತಿದೆ ಎನ್ನುವುದನ್ನು ದಲಿತ ಸಮುದಾಯ ಅರ್ಥ ಮಾಡಿಕೊಳ್ಳಬೇಕಿದೆ' ಎಂದರು.

ಡಾ.ಬಿ.ಆರ್.ಅಂಬೇಡ್ಕರ್ ಅವರಿಗೆ ಮೋಸ ಮಾಡಿದ್ದ ಕಾಂಗ್ರೆಸ್ಸಿಗರಿಗೆ ದಲಿತರ ಮತ ಕೇಳುವ ಹಕ್ಕಿಲ್ಲ. 60 ವರ್ಷ ದೇಶವನ್ನಾಳಿದ ಕಾಂಗ್ರೆಸ್ 94 ಬಾರಿ ಸಂವಿಧಾನದ ತಿದ್ದುಪಡಿ ಮಾಡಿದೆ. ದಲಿತರ ಬಗ್ಗೆ ಅಪಾರ ಪ್ರೀತಿ ಇರುವಂತೆ ನಾಟಕವಾಡುವ ಶಾಸಕ ಮಲ್ಲಿಕಾರ್ಜುನ್ ಖರ್ಗೆ ಹಾಗೂ ಪರಮೇಶ್ವರ್ ಅವರಿಗೆ ಮುಖ್ಯಮಂತ್ರಿ ಸ್ಥಾನ ತಪ್ಪಿದಾಗ ಧ್ವನಿ ಎತ್ತಲಿಲ್ಲ ಎಂದು ಶಾಸಕರ ಹೆಸರು ಹೇಳದೆಯೇ ವಾಗ್ದಾಳಿ ನಡೆಸಿದರು.

ವಿಧಾನ ಪರಿಷತ್ ಮಾಜಿ ಸದಸ್ಯ ಡಿ.ಎಸ್. ವೀರಯ್ಯ ಮಾತನಾಡಿ, ದಲಿತರ ಅಭಿವೃದ್ಧಿಗೆ ಪ್ರಧಾನಿ ನರೇಂದ್ರ ಮೋದಿ ಅವರು ಅನೇಕ ಕಾರ್ಯಕ್ರಮಗಳನ್ನು ರೂಪಿಸಿದ್ದಾರೆ. ಮಂಡ್ಯದಲ್ಲಿ ಮೈತ್ರಿ ಅಭ್ಯರ್ಥಿ ಎಚ್.ಡಿ.ಕುಮಾರಸ್ವಾಮಿ ಅವರು ಗೆದ್ದು ಕೇಂದ್ರದಲ್ಲಿ ಸಚಿವ ಸ್ಥಾನ ಅಲಂಕರಿಸಲಿದ್ದಾರೆ. ಜಿಲ್ಲೆಯ ಎಲ್ಲ ಸಮುದಾಯಗಳ ಜನರು ಮೈತ್ರಿಯ ಪರವಾಗಿದ್ದು, ಸರಳ ವ್ಯಕ್ತಿತ್ವದ ಉತ್ತಮ ಆಡಳಿತಗಾರ ಕುಮಾರಸ್ವಾಮಿ ಅವರನ್ನು ಎಲ್ಲರೂ ಬೆಂಬಲಿಸಬೇಕು ಎಂದು ಮನವಿ ಮಾಡಿದರು. ಜೆಡಿಎಸ್ ಯುವ ಘಟಕದ ಅಧ್ಯಕ್ಷ ಬಿ.ರವಿ ಕಂಸಾಗರ ಮಾತನಾಡಿ, 'ಕಾಂಗ್ರೆಸ್ ಪಕ್ಷವು ದಲಿತರನ್ನು ಬರೀ ಮತವಾಗಿ ಮಾತ್ರ ಪರಿಗಣಿಸುತ್ತಿದ್ದಾರೆ ಎಂದು ಹೇಳಿದರು.

ಬಿಜೆಪಿ ತಾಲ್ಲೂಕು ಘಟಕದ ಅಧ್ಯಕ್ಷ ಎಂ.ಎನ್. ಕೃಷ್ಣ, ಜೆಡಿಎಸ್ ಎಸ್ಸಿ ವಿಭಾಗದ ಜಿಲ್ಲಾ ಘಟಕದ ಅಧ್ಯಕ್ಷ ಸಾತನೂರು ಜಯರಾಮು, ಕಾಂತರಾಜು, ಚಿಕ್ಕಣ್ಣ, ದೇವರಾಜು, ಸಿ.ಕೆ.ಪಾಪಯ್ಯ, ಸುಹಾಷ್ ಮಹದೇವಯ್ಯ, ದೋರನಹಳ್ಳಿ ಕುಮಾರಸ್ವಾಮಿ, ಚಿಕ್ಕಣ್ಣ, ಸಿದ್ದರಾಜು, ಟಿ.ನಂದಕುಮಾರ್ ಇದ್ದರು.

# ಸಂಜೆ ಟಿಪ್ಸ್



## ಕೈಗೊಂಡ ಪರಿಮ್ಯಾಚ್ ಸ್ಪೋರ್ಟ್ಸ್ ಮತ್ತು ಬೆಂಗಳೂರು ಎಫ್ಸಿ ಸಹಭಾಗಿತ್ವ

ವಿಶ್ವದ ಅಗ್ರಮಾನ್ಯ ಅಥ್ಲೀಟ್ಗಳಿಂದ ಪ್ರೇರಣೆ ಪಡೆದಿರುವ ಉಡುಪುಗಳ ಬ್ರ್ಯಾಂಡ್ – ಪರಿಮ್ಯಾಚ್ ಸ್ಪೋರ್ಟ್ಸ್, ಇಂಡಿಯನ್ ಸೂಪರ್ ಲೀಗ್ನಲ್ಲಿ ಸ್ಪರ್ಧಿಸುತ್ತಿರುವ ಭಾರತದ ಮುಂಚೂಣಿಯ ಫುಟ್ಬಾಲ್ ಕ್ಲಬ್ಗಳಲ್ಲಿ ಒಂದಾದ ಬೆಂಗಳೂರು ಎಫ್ಸಿ ಸಹಯೋಗದೊಂದಿಗೆ ವಿಶೇಷ ಭೇಟಿಯ (ಮೀಟ್ ಮತ್ತು ಗ್ರೀಟ್) ಕಾರ್ಯಕ್ರಮವನ್ನು ಆಯೋಜಿಸಿತ್ತು. ಬೆಂಗಳೂರು ಎಫ್ಸಿಯ ಪ್ರಧಾನ ಪ್ರಾಯೋಜಕರಾಗಿರುವ ಪರಿಮ್ಯಾಚ್ ಸ್ಪೋರ್ಟ್ಸ್ ಅಭಿಮಾನಿಗಳನ್ನು ಕ್ರೀಡೆಯ ಸಾಹಸಕ್ಕೆ ಹತ್ತಿರವಾಗಿಸಿತ್ತು. ಈ ಭೇಟಿ ಫುಟ್ಬಾಲ್ ಮತ್ತು ಅಥ್ಲೆಟಿಕ್ ಶ್ರೇಷ್ಠತೆಯನ್ನು ಸಂಭ್ರಮಿಸುವ ಮರೆಯಲಾಗದ ಅನುಭವ ಸೃಷ್ಟಿಸಿತ್ತು. ಬೆಂಗಳೂರಿನ ಸೌತ್ ಯುನೈಟೆಡ್ ಎಫ್ಸಿ ಕ್ರೀಡಾಂಗಣದಲ್ಲಿ ನಡೆದ ಈ ಕಾರ್ಯಕ್ರಮವು ಅಭಿಮಾನಿಗಳೊಂದಿಗೆ ಹಂಚಿಕೊಂಡರು. ಬೆಂಗಳೂರು ಎಫ್ಸಿ ಆಟಗಾರರೊಂದಿಗಿನ ವಿಶೇಷ ತರಬೇತಿ ಕಾರ್ಯಕ್ರಮಗಳಿಗಾಗಿ ಅಭಿಮಾನಿಗಳನ್ನು ಎರಡು ತಂಡಗಳಾಗಿ ವಿಂಗಡಿಸಲಾಗಿತ್ತು. ನಂತರ ಒಂದು ಗಂಟೆಯ ಕಾಲ ಅಥ್ಲೀಟ್ಗಳ ಬೆಂಬಲದೊಂದಿಗೆ ಅಭಿಮಾನಿಗಳ ಉತ್ಸಾಹಪೂರ್ಣ ಪೈಪೋಟಿ ನಡೆಯಿತು. ಹೆಚ್ಚುವರಿ ಬೋನಸ್ ಆಗಿ, ಭಾಗವಹಿಸಿದ ಎಲ್ಲರಿಗೂ ಹೊಚ್ಚಹೊಸ ಕ್ರೀಡಾ ಕಿಟ್ಗಳನ್ನು ನೀಡಲಾಯಿತು.

ಗೋಲ್ಕೀಪರ್ ಗುರುಪ್ರೀತ್ ಸಿಂಗ್ ಸಂಧು, ಡಿಫೆಂಡರ್ ಅಲೆಕ್ಸಾಂಡರ್ ಜೊವಾನೊವಿಕ್, ಮಿಡ್ಫೀಲ್ಡರ್ ಜೇವಿ ಹೆರ್ನಾಂಡೆಜ್ ಮತ್ತು ಫಾರ್ವರ್ಡ್ಗಳಾದ ಆಲಿವರ್ ಡ್ರೋಸ್ಟ್ ಮತ್ತು ರಿಯಾನ್ ವಿಲಿಯಮ್ಸ್ ಸೇರಿದಂತೆ ಬೆಂಗಳೂರು ಎಫ್ಸಿ ಆಟಗಾರರೊಂದಿಗೆ ಸಂವಾದ ನಡೆಸುವ ಅವಕಾಶ ಸಾದರಪಡಿಸಿತು. ಅಭಿಮಾನಿಗಳಿಗೆ ತಮ್ಮ ನೆಚ್ಚಿನ ಬೆಂಗಳೂರು ಎಫ್ಸಿ ಆಟಗಾರರೊಂದಿಗೆ ತೊಡಗಿಸಿಕೊಳ್ಳಲು ಮೀಟ್ ಗ್ರೀಟ್ ಕಾರ್ಯಕ್ರಮ ಅನನ್ಯ ಅವಕಾಶ ಪೂರೈಸಿತ್ತು. ಅವರು ಮೈದಾನದ ಒಳಗೆ ಮತ್ತು ಹೊರಗಿನ ಒಳನೋಟಗಳನ್ನು

## ಸೌತೇಕಾಯಿ ಮಸಾಲಾ

### ಪಾಕ ಶಾಲೆ



### ಬೇಕಾಗಿರುವ ಪದಾರ್ಥ

ಸೌತೇಕಾಯಿ ಎರಡು (ಫ್ರೆಶ್ ಆಗಿರಬೇಕು), ಹಸಿ ದ್ರಾಕ್ಷಿ ಒಂದು ಹಿಡಿ, ಹಸಿ ಮೆಣಸಿನಕಾಯಿ ಎರಡು, ಈರುಳ್ಳಿ ಒಂದು, ಕರಿಬೇವು ಸ್ವಲ್ಪ, ಕೊತ್ತೊಂಬರಿ ಸ್ವಲ್ಪ, ಶುಂಠಿ ಕಾಲ್ ಚಮಚ, ಬೆಳ್ಳುಳ್ಳಿ ಒಂದು ಎಸಳು, ಜೀರಿಗೆ ಅರ್ಧ ಚಮಚ, ಎಣ್ಣೆ ಸ್ವಲ್ಪ, ಉಪ್ಪು ರುಚಿಗೆ ತಕ್ಕಷ್ಟು, ಅರಿಶಿಣ ಚಿಟಿಕೆ

### ಮಾಡುವ ವಿಧಾನ

ಮೊದಲಿಗೆ ಸೌತೇಕಾಯಿ ಸಿಪ್ಪೆ ತೆಗೆದು ಅದರೊಳಗಿರುವ ಬೀಜವನ್ನು ತೆಗೆದಯ ಸಣ್ಣದಾಗಿ ಹೆಚ್ಚಿಕೊಳ್ಳಬೇಕು. ಒಂದು ಹಿಡಿ ದ್ರಾಕ್ಷಿ ತೆಗೆದುಕೊಂಡು ಚೆನ್ನಾಗಿ ತೊಳೆದು ಒಂದರಲ್ಲಿ ನಾಲ್ಕು ಅಥವಾ ಆರು ಭಾಗಗಳನ್ನಾಗಿ ಮಾಡಿ ಕತ್ತರಿಸಿಕೊಳ್ಳಿ. ಒಲೆಯ ಮೇಲೆ ಒಂದು ಪಾತ್ರೆ ಇಟ್ಟು ಅದಕ್ಕೆ ಎಣ್ಣೆ ಹಾಕಿ ಬಿಸಿ ಮಾಡಿದ ತಕ್ಷಣ ಜೀರಿಗೆ ಹಾಕಿ ಚಟಪಟ ಅನ್ನೋವರೆಗೂ ಹುರಿದುಕೊಳ್ಳಿಬಳಿಕ ಇದಕ್ಕೆ ಸಣ್ಣಕೆ ಹೆಚ್ಚಿದ ಮೆಣಸಿನಕಾಯಿ ಹಾಕಿ ಹುರಿದುಕೊಳ್ಳಬೇಕು, ನಂತರ ಚಿಕ್ಕದಾಗಿ ಹೆಚ್ಚಿದ ಈರುಳ್ಳಿ, ಕತ್ತರಿಸಿದ ಕರಿಬೇವು ಹಾಕಿ ಹಸಿ ವಾಸನೆ ಹೋಗುವವರೆಗೂ ಹುರಿದುಕೊಳ್ಳಿ.ಒಂದು ಮಿಕ್ಸಿ ಜಾರ್ಗೆ ಶುಂಠಿ, ಹಸಿ ಮೆಣಸಿನಕಾಯಿ, ಬೆಳ್ಳುಳ್ಳಿ, ಕೊತ್ತಂಬರಿ ಸೊಪ್ಪು ಹಾಕಿ ತರಿತರಿಯಾಗಿ ರುಬ್ಬಿಕೊಂಡು ಒಗ್ಗರಣೆಗೆ ಹಾಕಿ ಚೆನ್ನಾಗಿ ಹುರಿಯಿರಿ.ಬಳಿಕ ಇದಕ್ಕೆ ಉಪ್ಪು, ಅರಿಶಿನ ಹಾಕಿ ಚೆನ್ನಾಗಿ ಕಲಸಿ ಗ್ಯಾಸ್ ಆಫ್ ಮಾಡಿ ಆರಲು ಬಿಡಿ.ಒಗ್ಗರಣೆ ಆರಿದ ಬಳಿಕ ಇದಕ್ಕೆ ಚಿಕ್ಕದಾಗಿ ಹೆಚ್ಚಿದ ಸೌತೇಕಾಯಿ ಹಾಗೂ ದ್ರಾಕ್ಷಿ ಹಾಕಿ ಮಿಕ್ಸ್ ಮಾಡಿದರೆ ರುಚಿ ರುಚಿಯಾದ ಸೌತೇಕಾಯಿ ಮಸಾಲಾ ಸವಿಯಲು ಸಿದ್ಧ.



## ಚರ್ಚ್‌ನಲ್ಲಿ ದಿ ಕೇರಳ ಸ್ಟೋರಿ ಪ್ರದರ್ಶನ

ದಿ ಕೇರಳ ಸ್ಟೋರಿ ಸಿನಿಮಾವನ್ನು ದೂರದರ್ಶನದಲ್ಲಿ ಪ್ರಸಾರ ಮಾಡುವ ಕುರಿತು ಕೇರಳದಲ್ಲಿ ಭಾರೀ ಗದ್ದಲ ನಡೆಯುತ್ತಿದ್ದರೂ ಈ ನಡುವೆ ಕೇರಳದ ಚರ್ಚ್ ಒಂದು ಸಿನಿಮಾವನ್ನು ಪ್ರದರ್ಶಿಸಿದೆ. ಚರ್ಚ್‌ನ ನಡೆಗೆ ಬಿಜೆಪಿ ನಾಯಕರೊಬ್ಬರು ಸೋಮವಾರ ಶ್ಲಾಘನೆ ವ್ಯಕ್ತಪಡಿಸಿದ್ದಾರೆ.

10, 11 ಮತ್ತು 12 ನೇ ತರಗತಿಯ ಕ್ಯಾಟೆಕಿಸಂ ವಿದ್ಯಾರ್ಥಿಗಳಿಗೆ ಕ್ರೈಸ್ತ ಸಮುದಾಯದ ಹಬ್ಬದ ಅಂಗವಾಗಿ ಇಡುಕ್ಕಿ ಧರ್ಮಪ್ರಾಂತ್ಯದ ಚರ್ಚ್‌ನಲ್ಲಿ ಭಾನುವಾರ ದಿ ಕೇರಳ ಸ್ಟೋರಿ ಸಿನಿಮಾವನ್ನು ಪ್ರದರ್ಶಿಸಲಾಯಿತು. ಸಿನಿಮಾ ಪ್ರದರ್ಶನದೊಂದಿಗೆ ಚರ್ಚ್‌ನಲ್ಲಿ ಲವ್ ಜಿಹಾದ್ ಬೆದರಿಕೆಗಳನ್ನು ಎತ್ತಿ ತೋರಿಸುವ ಕುರಿತು ಕಿರುಪುಸ್ತಕವನ್ನು ಕೂಡಾ ಬಿಡುಗಡೆ ಮಾಡಲಾಯಿತು.

ಚರ್ಚ್‌ನಲ್ಲಿ ದಿ ಕೇರಳ ಸ್ಟೋರಿ ಚಿತ್ರ ಪ್ರದರ್ಶನ ಮಾಡಿದ ಕುರಿತು ಸುದ್ದಿಗಾರರೊಂದಿಗೆ ಮಾತನಾಡಿದ ರಾಜ್ಯ ಬಿಜೆಪಿ ಮುಖ್ಯಸ್ಥ ಕೆ ಸುರೇಂದ್ರನ್, ಈ ಸಿನಿಮಾ ಇಸ್ಲಾಂ ಧರ್ಮವನ್ನು ಸ್ವೀಕರಿಸಲು ಬ್ರೈನ್ ವಾಶ್ ಮಾಡಿ ಸಿರಿಯಾಕ್ಕೆ ಕಳುಹಿಸಲಾದ ರಾಜ್ಯದ ಹಿಂದೂ ಮಹಿಳೆಯ ಕಥೆಯನ್ನು ಆಧರಿಸಿದೆ. ಜನರು ಒಟ್ಟಾಗಿ ಚಿತ್ರವನ್ನು ವೀಕ್ಷಿಸಿದ್ದಾರೆ. ಏಕೆಂದರೆ ಇದು ನಿಜವಾದ ಘಟನೆಯಾಗಿದೆ. ಕೇರಳದಲ್ಲಿ ಲವ್ ಜಿಹಾದ್ ಎಂಬುದು ಅನೇಕ ಬಾರಿ ಆಗಿದ್ದು, ಕಣ್ಣೂರು ಸೇರಿದಂತೆ ಹಲವು ಜಿಲ್ಲೆಗಳಲ್ಲಿ ನಡೆದಿದೆ. ಇದಕ್ಕೆ ನೂರಾರು ಹೆಣ್ಣುಮಕ್ಕಳು ಬಲಿಯಾಗಿದ್ದಾರೆ ಎಂದು ಅವರು ಹೇಳಿದರು.

ಕೇರಳದ ಆಡಳಿತಾರೂಢ ಲೆಫ್ಟ್ ಡೆಮಾಕ್ರಟಿಕ್ ಫ್ರಂಟ್ (ಐಆಈ) ಮತ್ತು ಕಾಂಗ್ರೆಸ್ ನೇತೃತ್ವದ ಯುನೈಟೆಡ್ ಡೆಮಾಕ್ರಟಿಕ್ ಫ್ರಂಟ್ (ಗಆಈ) ದಿ ಕೇರಳ ಸ್ಟೋರಿ ಗೆ ವಿರುದ್ಧವಾಗಿದೆ. ಅವರು ಅಭಿವ್ಯಕ್ತಿ ಸ್ವಾತಂತ್ರ್ಯದ ವಿರುದ್ಧ ಮತ್ತು ಮತಬ್ಯಾಂಕ್ ರಾಜಕಾರಣ ಮಾಡುತ್ತಿದ್ದಾರೆ. ಆದರೆ ಕೇರಳದ ಜನರು ಈ ಚಿತ್ರವನ್ನು ಪೂರ್ಣ ಹೃದಯದಿಂದ ಸ್ವಾಗತಿಸುತ್ತಿದ್ದಾರೆ ಎಂದು ವಯನಾಡ್ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಸುರೇಂದ್ರನ್ ಹೇಳಿದ್ದಾರೆ.

## ಕಾಲರಾ ತಡೆಗೆ ಕೈಗೊಳ್ಳಬೇಕಾದ ಮುನ್ನೆಚ್ಚರಿಕೆ ಕ್ರಮಗಳು

ಕುದಿಸಿ, ಹಾರಿಸಿದ ನೀರನ್ನು ಕುಡಿಯುವುದು. ಸಾರ್ವಜನಿಕ ನೀರಿನ ಕೊಳಾಯಿ ಮತ್ತು ಸ್ಥಳವನ್ನು ಸ್ವಚ್ಚವಾಗಿಡುವುದು. ತಾಜಾ ಆಹಾರವನ್ನು ಸೇವಿಸಬೇಕು. ತಾಜಾ ಹಣ್ಣು, ತರಕಾರಿ ಮತ್ತು ಆಹಾರ ಪದಾರ್ಥಗಳನ್ನೇ ಉಪಯೋಗಿಸಬೇಕು. ಸಿದ್ದಪಡಿಸಿದ ಆಹಾರ ಪದಾರ್ಥಗಳ ಮೇಲೆ ಕ್ರಿಮಿ ಕೀಟಗಳು ಕುಳಿತುಕೊಳ್ಳದಂತೆ ಸದಾ ಮುಚ್ಚಳದಿಂದ ಮುಚ್ಚಿಡುವುದು. ನಿಮ್ಮ ಮನೆ ಮತ್ತು ಸುತ್ತಮುತ್ತಲಿನ ಪರಿಸರವನ್ನು ಸ್ವಚ್ಚವಾಗಿಡುವುದು. 15 ದಿನಕೊಮ್ಮೆ ಕುಡಿಯುವ ನೀರಿನ ತೊಟ್ಟಿಯನ್ನು ಬ್ಲೀಚಿಂಗ್ ಪೌಡರ್ ನಿಂದ ಸ್ವಚ್ಚಗೊಳಿಸುವುದು.

**ಹೀಗೆ ಮಾಡಬಾರದು:** ಸೋರಿಕೆ ಇರುವ ಕೊಳಾಯಿ ನೀರನ್ನು ಕುಡಿಯದಿರುವುದು. ಪಾದಚಾರಿ ರಸ್ತೆಗಳಲ್ಲಿ, ರಸ್ತೆ ಬದಿಗಳಲ್ಲಿ ಮಾರಾಟ ಮಾಡುವ ತಿನಿಸುಗಳು, ತಳ್ಳು ಗಾಡಿಗಳಲ್ಲಿ ಮಾರುವ ಹಾಗೂ ಕತ್ತರಿಸಿದ ಹಣ್ಣುಗಳನ್ನು ತಿನ್ನಬಾರದು. ಧೂಳು, ನೊಣ, ಜಿರಳೆಗಳು ಇತರ ಕೀಟಗಳು ಮುಟ್ಟುವಂತೆ ತೆರೆದಿಟ್ಟಿರುವ ಆಹಾರ ಪದಾರ್ಥಗಳನ್ನು ಸೇವಿಸಬಾರದು. ಕಸ ಮತ್ತು ಇತರೆ ತ್ಯಾಜ್ಯ ವಸ್ತುಗಳನ್ನು ರಸ್ತೆ ಬದಿ, ಪಾದಾಚಾರಿ ರಸ್ತೆ, ಮೋರಿಯಲ್ಲಿ ಹಾಕಬಾರದು. ಹಾಕಿದಲ್ಲಿ ಕ್ರಿಮಿಕೀಟಗಳು ಆಕರ್ಷಿಸಿ ಕರಳು ಬೇನೆ / ಕಾಲರಾ ಬರುವ ಸಂಬವಿರುತ್ತದೆ.




ಹೆಚ್ಚಿನ ಮಾಹಿತಿಗಾಗಿ ಹತ್ತಿರದ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ ಹಾಗೂ ಉಚಿತ ಆರೋಗ್ಯ ಸಹಾಯವಾಣಿ 104 ಕ್ಕೆ ಕರೆಮಾಡಿ

## ಯುಗಾದಿ ಜೀವನದ ವಿಜಯೋತ್ಸವಕ್ಕೆ ಆದಿ

ಎಲ್ಲಾ ಹಿಂದೂಗಳು ಖುಷಿಯಾಗಿ ಹೊಸಬಟ್ಟೆಗಳನ್ನು ಧರಿಸುವುದರೊಂದಿಗೆ ಹೊಸ ವರ್ಷ ಯುಗಾದಿಯನ್ನು ಆಚರಿಸುತ್ತಾರೆ. ಯುಗಾದಿಯ ಅರ್ಥವೇ 'ಯುಗದ ಆದಿ' ಯುಗವೆಂದರೆ ಸೃಷ್ಟಿಯ ಕಾಲಮಾನ ಆದಿ ಅಂದರೆ ಆರಂಭ. ಆ ದಿನವೇ ಬ್ರಹ್ಮನು ವಿಶ್ವವನ್ನು ಸೃಷ್ಟಿ ಮಾಡಿದನೆಂದು ನಂಬಿದ್ದೇವೆ. ಅಂದಿನಿಂದಲೇ ಬ್ರಹ್ಮನ ಲೆಕ್ಕಾಚಾರವಾದ ವರ್ಷ ತಿಥಿ ಕಾಲಗಣನೆ ಋತು ವರ್ಷ ಮತ್ತು ನಕ್ಷತ್ರ ಎಲ್ಲವನ್ನೂ ನಮ್ಮ ಪಂಚಾಗದಲ್ಲಿ ನೋಡಿ ಹೇಳುತ್ತೇವೆ. ಅಂದಿನ ದಿನ ಪಂಚಾಗವನ್ನು ಓದಿ ಜೀವನ ಆಗುಹೋಗುಗಳನ್ನು ವರ್ಷದ ಭವಿಷ್ಯವನ್ನು ತಿಳಿದುಕೊಳ್ಳುತ್ತೇವೆ.

ಕಷ್ಟ ನಷ್ಟ, ಸುಖ ದುಖಃ ಸೋಲು-ಗೆಲುವುಗಳ ಬಡವ, ಸಿರಿವಂತ ಹಗಲು ರಾತ್ರಿಗಳ ಸಂಕೇತವೇ ಬೇವು ಬೆಲ್ಲ, ಇವೆಲ್ಲವೂ ಜೀವನದಲ್ಲಿ ಬಂದೇ ಬರುತ್ತವೆ. ಅವುಗಳನ್ನು ಸಂತೋಷದಿಂದ ಬರಮಾಡಿಕೊಳ್ಳಬೇಕು. ಗೌರವಿರಬೇಕು. ಇದು ಪ್ರಕೃತಿ ನಿಯಮವೂ ಕೂಡ ಆಗ ಜೀವನ ಚೆನ್ನಾಗಿ ಆನಂದವಾಗಿರುತ್ತದೆ. ವರಕವಿ ಬೇಂದ್ರೆಯವರು ಹೇಳಿದಂಗೆ ಯುಗ ಯುಗಾದಿ ಕಳೆದರೂ ಯುಗಾದಿ ಮರಳಿ ಬರುತ್ತಿದೆ. ಯುಗಾದಿ ಮರಳಿ ಬರುತ್ತಿದೆ. ಅದರ ಆನಂದವನ್ನು ಸವಿಯುತ್ತಿದ್ದೇವೆ. ಇದೇ ರೀತಿ ಜೀವನವೆಂಬ ಪ್ರಯಾಣದಲ್ಲಿ ಬೇವು ಬೆಲ್ಲದರ ಘಟನೆಗಳು ಸನ್ನಿವೇಶಗಳು ಬರುತ್ತಿವೆ. ಹೋಗುತ್ತಿವೆ. ಇವುಗಳನ್ನು ಸಹ ಯುಗಾದಿಯಷ್ಟೇ ಸಂಭ್ರಮದಿಂದ ಸ್ವಾಗತ ಮಾಡಿದಾಗ ನಮಗೆ ಎಲ್ಲಾ ಕೆಲಸಗಳು ಆಗುತ್ತವೆ. ಮನ ಮನೆಗಳಲ್ಲಿ ನೆಮ್ಮದಿ ವಾತಾವರಣ ನಿತ್ಯವೂ ಇರುತ್ತದೆ.

ಯುಗಾದಿ ನಮ್ಮೆಲ್ಲರಿಗೂ ಬಹಳ ಮುಖ್ಯವಾದ ಹಬ್ಬ ಅದರಲ್ಲೂ ಹಿಂದೂಗಳಿಗೆ ಯುಗದ (ವರ್ಷದ) ಆದಿಯಲ್ಲಿ ಬರುವ ವಿಶೇಷವಾದ ಹಬ್ಬ ಯುಗಾದಿ. ಯುಗಾದಿ ಎಂದರೆ ಯುಗದ ಆದಿ ಅಂದರೆ ವರ್ಷದ ಪ್ರಾರಂಭ ಹಿಂದುಗಳಿಗೆ ಯುಗಾದಿಯಿಂದಲ್ಲೇ ಹೊಸ ವರ್ಷ ಪ್ರಾರಂಭವಾಗುತ್ತದೆ. ಯುಗಾದಿಯ ವಿಶೇಷವೇನೆಂದರೆ ವರ್ಷಾರಾಂಭ ಕಾಲಚಕ್ರ ತನಗೆ ಅರಿವಿಲ್ಲದಂತೆ ತಿರುಗುತ್ತಿರುತ್ತದೆ. ಚಳಿಗಾಲ, ಮಳೆಗಾಲ, ಬೇಸಿಗೆಕಾಲ ಹೀಗೆ ಪ್ರಕೃತಿಯಲ್ಲಿ ನಿರಂತರವಾಗಿ ನಡೆಯುತ್ತಿರುತ್ತದೆ. ಮಾನವರಿಗೆ ಒಂದೊಂದುಕಾಲದಲ್ಲಿ ಒಂದೊಂದು ಅನುಭವದೊಂದಿಗೆ ಕಷ್ಟನಷ್ಟ ಸುಖ ದುಖಃ ಸರಿತಪ್ಪು ಕಹಿಸಿಹಿ, ಅನುಭವವಾಗುತ್ತಿದೆ. ಜೀವನದಲ್ಲಿ ಏನೇ ಆದರೂ ಅದನ್ನು ತಡೆಯುವ ಶಕ್ತಿ ಬುದ್ಧಿ ನಮಗೆ ಸಿಗಲಿ, ಏನೇಬಂದರೂ ಸಂತೋಷದಿಂದ ಬರಮಾಡಿಕೊಂಡು ಅದರೊಂದಿಗೆ ಆನಂದದಿಂದ ಜೀವನ ನೆಡೆಸಲು ಅಡಿಪಾಯವೇ ಯುಗಾದಿ ಹಬ್ಬ. ವರ್ಷದ ಪ್ರಾರಂಭದಲ್ಲಿ ಎಲ್ಲಾ ಗಿಡ ಮರಗಳು ಚಿಗರೊಡೆದು ವಸಂತ ಋತುವಿನ ಆಗಮವಾಗಿ ಇಂಪಾದ ಕೋಗಿಲ ದ್ವನಿಯೊಂದಿಗೆ ಪ್ರಕೃತಿ ಮಾತೆ ಶಿಂಗರಿಸಿಕೊಂಡು ಆನಂದದಿಂದ ಆಹ್ವಾನವನ್ನು ಎಲ್ಲರಿಗೂ ನೀಡುತ್ತೆದೆ. ಎಲ್ಲಾ ಕಾಲಗಳಲ್ಲಿ ನೊಂದು ಬಂದ ಪ್ರಕೃತಿ ಮಾತೆ, ಎಲ್ಲವನ್ನು ಮರೆತು ಸಿಹಿಕಹಿಯನ್ನು ಸಮಾನವಾಗಿ ಸ್ವೀಕರಿಸಿ ಯುಗದ ಆದಿ ಯುಗಾದಿ ಹಬ್ಬವನ್ನು ಆಚರಿಸಿಕೊಳ್ಳುತ್ತಾಳೆ. ಇದೇ ರೀತಿ ಮಾನವರಾದ ನಾವು ಏನೇ ಕಷ್ಟವಿದ್ದರೂ ಸಾಲಮಾಡಿಯಾದರೂ ಹೊಸ ಬಟ್ಟೆಗಳನ್ನು ತಂದು ಮನೆಯನ್ನು ಸಿಂಗರಿಸಿ, ರಂಗೋಲೆ ಮಾವಿನ ತೋರಣ ಬೇವಿನಸೊಪ್ಪುಗಳಿಂದ ಆಲಂಕರಿಸಿ, ಆನಂದಿಸಿ ಮನೆ ಮಕ್ಕಳೆಲ್ಲರೂ ಮೈಗೆಲ್ಲಾ ಎಣ್ಣೆ ಹಚ್ಚಿಕೊಂಡು ಎಲ್ಲಾ ರೀತಿಯಾ ವಿನೋದ ಆಟಗಳಾಡಿ ನಮ್ಮಲ್ಲಿರುವ ಸ್ವಾರ್ಥ ಆಹಂಕಾರವನ್ನು ಹೊರಗಿಟ್ಟು ಹಬ್ಬವನ್ನು ಆಚರಿಸಿ ಹೊಬ್ಬಟ್ಟು ಸಿಹಿಯನ್ನು ತಿಂದು ಒಳ್ಳೆಯ ಮಾತು ಗಳನ್ನಾಡಿ ಮಾರನೇದಿನ ಕಾರವನ್ನು ತಿಂದು ಸಹಿ ಕಾರ ಸವಿಯನ್ನು ಸವಿಯುತ್ತೇವೆ. ಯುಗಾದಿಯ ವಿಶೇಷ ಪ್ರಸಾದ ಬೇವು ಬೆಲ್ಲ. ಬೇವು ಕಹಿಯ ಸಂಕೇತ ಮತ್ತು ಬೆಲ್ಲ ಸಿಹಿಯ ಸಂಕೇತ, ಆರ್ಯವೇದದಲ್ಲಿ ಬೇವಿಗೆ ವಿಶೇಷ ಸ್ಥಾನ ಮಾನವಿದೆ. ಬೇವಿನ ಮರದ ಎಲ್ಲವೂ ಸಹ ಔಷದಿ ಗುಣವನ್ನು ಹೊಂದಿದೆ ದೇಹದಲ್ಲಿನ ನಾನಾ ಕಾಯಿಲೆಗಳಿಗೆ ಬೇವಿನ ಮರ ರಾಮಬಾಣವಾಗಿದೆ. ಆಧ್ಯಾತ್ವಿಕೆಯಲ್ಲಿಯೂ ಸಹ ಬೇವಿನ ಮರಕ್ಕೆ ವಿಶೇಷ ಸ್ಥಾನವಿದೆ. ಬೇವಿನ ಮರವನ್ನು ಪ್ರದಕ್ಷಣೆ ಮಾಡಿ ಪೂಜೆ ಮಾಡಿದರೆ ಮನಸ್ಸಿನ ನಾನಾ ಮರ್ಮಗಳು ಕಾಯಿಲೆಗಳು ಮಾಯವಾಗಿ ಜೀವನದಲ್ಲಿ ಆನಂದ ಸಿಗುತ್ತದೆ. ಆದ್ದರಿಂದಲೇ ಯುಗಾದಿಯಲ್ಲಿ ಪ್ರಧಾನವಾಗಿ ಬೇವು ಬೆಲ್ಲ ಪ್ರಸಾದಕೊಡುತ್ತಾರೆ. ಸ್ವಪ್ರರೇಣೆಯಿಂದ ಪ್ರಸಾದವನ್ನು ತಿನ್ನುವುದ್ದರಿಂದ ದೇಹದಲ್ಲಿನ ಕಾಯಿಲೆಗಳು ತಾನಾಗಿಯೇ ವಾಸಿಯಾಗುತ್ತವೆ. ಜೀವನದಲ್ಲಿ ಬರುವ ಕಹಿ, ಸಿಹಿ, ಕಷ್ಟ, ನಷ್ಟ, ಸುಖ, ದುಖಃ ಸರಿ ತಪ್ಪು ಹಗಲು ರಾತ್ರಿ ಇದಂಗೆ ಇವೆಲ್ಲವೂ ಜೀವನದಲ್ಲಿದ್ದರೆ ಮಾತ್ರ ಅವುಗಳ ಮಹತ್ವ ಗೋಚರವಾಗುತ್ತದೆ.



ಇವುಗಳಿಗೆಲ್ಲಾ ಮೂಲ ಸತ್ಯ ಧರ್ಮ ಜೀವನ. ಜೀವನದಲ್ಲಿ ಇವೆಲ್ಲವೂ ಬೇಕೇಬೇಕು. ಆನಂದದಿಂದ ಆಹ್ವಾನಿಸಿ ಆಚರಿಸಲು ಶಕ್ತಿ ಪಡೆಯಲು ಈ ಯುಗಾದಿಯೇ ಮೂಲ, ಅಂತ್ಯಕ್ಕೆ ಆರಂಭವೇ ಯುಗಾದಿ. ಸಿಹಿಕಹಿ ಒಂದೇ ನಾಣ್ಯದ ಎರಡು ಮುಖ ಗಳಿದಂತೆ ಎರಡು ಜೀವನಕ್ಕೆ ಬೇಕು. ''ಯುಗಯುಗಾದಿ ಕಳೆದರು ಯುಗಾದಿ ಮರಳಿ ಬರುತ್ತಿದೆ'' ಎಂದು ವರಕವಿ ಬೇಂದ್ರೆಯವರು ಹೇಳಿದರು. ಕಾಲಚಕ್ರ ಉರಳಿದಂತೆ ಜೀವನದಲ್ಲಿ ಬರುವ ಸಿಹಿ ಕಹಿಗಳು ಪುನಾರ್ವತನೆಯಾಗುತ್ತಿವೆ. ಹಳೇ ಯುಗ ಕಳೆದಂತೆ ಹೊಸ ಯುಗ ಬರುತ್ತಿರುತ್ತದೆ. ಇದು ನಿರಂತರ ಕಾಲಚಕ್ರದಲ್ಲಿ ನಡೆಯುತ್ತಿದೆ. ವಿಶ್ವವನ್ನು ಸೃಷ್ಟಿಸಿದ ಬ್ರಹ್ಮ ಕಾಲಗತಿಯನ್ನು ನಾಲ್ಕು ಯುಗಗಳಾಗಿ ಮಾಡಿದ ತ್ರೇತಾ ಯುಗದಲ್ಲಿ ರಾಮನಿದ್ದು ದ್ವಾಪರಯುಗ ದಲ್ಲಿ ಶ್ರೀಕೃಷ್ಣನಿದ್ದು ಧರ್ಮ ಅಧರ್ಮಗಳಿಗೆ ಘರ್ಷಣೆಯಾಗಿ ಕೊನೆಯಲ್ಲಿ ಸತ್ಯಕ್ಕೆ ಜಯಸಿಕ್ಕಿದೆ. ಪ್ರತಿಯುಗದಲ್ಲೂ ಸತ್ಯದ ಹೊಳಪು ಬೇರೆಯಾಗಿದ್ದರೂ ಶಕ್ತಿಮಾತ್ರ ಸದಾ ಅಮರು ಅಚಲವಾಗಿದೆ. ಕಲಿಯುಗದಲ್ಲಿ ನಾವು ಸತ್ಯದ ಅರಿವಿಲ್ಲದೆ ಸುಳ್ಳೇ ಸತ್ಯವೆಂದು ತಿಳಿದು ಆಚರಿಸಿ ಅದೋಗತಿಗೆ ಜೀವನವನ್ನು ಕೊಡ್ಯಯಿ ದಿದ್ದೇವೆ. ಯಾವುದು ನಂಬವುದು, ಯಾವುದು ಬಿಡುವುದು, ಯಾವುದು ಸತ್ಯ, ಯಾವುದು ಸುಳ್ಳು ಎಂಬ ಗೊಂದಲ ಒತ್ತಡದಲ್ಲಿ ಮನಸ್ಸು ನರಳುತ್ತಿದೆ. ಕಲಿಯುಗದಲ್ಲಿ ಅಸತ್ಯಕ್ಕೆ ಬೇಗ ಜಯವೆನಿಸಿದರೂ ಅದು ಶಾಶ್ವತವಾಗಿ ಉಳಿಯುವುದಿಲ್ಲ. ''ಸತ್ಯಮೇವ ಜಯತೆ'' ಸತ್ಯಕ್ಕೆ ಯಾವಾಗಲೂ ಜಯ ಇದ್ದೇ ಇರುತ್ತದೆ. ಈ ಸತ್ಯದ ಅರಿವು ಯುಗದ ಆದಿಯಲ್ಲಿ ನಮ್ಮ ಪೂರ್ವಿಕರು ಸತ್ಯದಿಂದ ಜೀವನ ಮಾಡಿ ತೋರಿಸಿ, ಅನುಭವಿಸಿ ನಮಗೆ ಬಿಟ್ಟುಹೋಗಿದ್ದಾರೆ. ಆದರೆ ನಾವು ಮೂಲಸತ್ಯ ಅರಿವಿಲ್ಲದೆ ಅಸತ್ಯದಿಂದ ಜೀವನ ಮಾಡುತ್ತಿದ್ದೇವೆ. ಕೋಟಿ ಕೋಟಿ ಕಾಚಾಣಾವಿದ್ದರೂ ನೆಮ್ಮದಿ ಸಿಗುತ್ತಿಲ್ಲ. ನೆಮ್ಮದಿ ಭೋಗವಸ್ತುಗಳಲ್ಲಿಲ್ಲ ನಾವು ಮಾಡುವ ಕಾಯಕದಲ್ಲಿದೆ. ಬಸವಣ್ಣ ಹೇಳಿದಂಗೆ ''ಕಾಯಕವೇ ಕೈಲಾಸ'' ವಾಗಬೇಕು. ಕಷ್ಟಪಟ್ಟು ಬೆವರು ಸುರಿಸಿ ಭೂ ತಾಯಿಗೆ ನಮಸ್ಕರಿಸಿ ದುಡಿಯಬೇಕು. ಆಗ ನಮಗೆ ಯಾವುದೇ ವಿಧವಾದ ಕಾಯಿಲೆ, ಸಮಸ್ಯೆಗಳಿಲ್ಲದೆ ಪ್ರತಿಕ್ಷಣ ಮಾಡುವ ಕಾರ್ಯದಲ್ಲಿ ಆನಂದವನ್ನು ಅನುಭವಿಸಬಹುದು. ಈ ಕೆಲಸ ಉಗಮ ಯುಗಾದಿ ಹಬ್ಬದಿಂದ ಪ್ರಾರಂಭ ವಾಗಬೇಕು. ಪ್ರಕೃತಿ ಮಾತೆಗೆ ಪೂಜೆ ಸಲ್ಲಿಸಿ ಪ್ರಕೃತಿಯೊಂದಿಗೆ ಹೊಂದಿ ಕೊಂಡು ಇಡೀ ವರ್ಷ ಜೀವನ ಮಾಡಿದರೆ ವರ್ಷ ಪೂರ್ತಿ ಮಳೆ, ಬೆಳೆ ಸಮೃದ್ಧಿಯಾಗಿ ವಿಶ್ವವೆಲ್ಲಾ ಶಾಂತಿಯಾಗಿ ಸದಾ ಹಸಿರುನೊಂದಿಗೆ ಜೀವನ ಆನಂದಮಯವಾಗುತ್ತದೆ. ಯುಗಾದಿ ಹಬ್ಬವೂ ಸಾರ್ಥಕವಾಗುತ್ತದೆ.

ಯುಗಾದಿ ಹಬ್ಬಕ್ಕೆ ಸಹ ಒಂದು ಪೌರಾಣಿಕ ಹಿನ್ನೆಲೆಯಿದೆ. ಪಾಲ್ಗುಣ ಬಹುಲ ಅಮಾವಾಸ್ಯೆಯ ಕೊನೆಯಲ್ಲಿ ರಾವಣನ ಸಂಹಾರವನ್ನು ರಾಮ ಮಾಡಿದ ಪುರುಷೋತ್ತಮ ಶ್ರೀರಾಮ ಚಂದ್ರ ಚೈತ್ರಶುದ್ಧ ಪಾಡ್ಯಮಿ ಯಂದು ಸಕಲ ಸೈನ್ಯ ಬಳಗಕ್ಕೆ ವಿಜಯೋತ್ಸವ ಮಾಡಲು ಕರೆ ನೀಡಿದ ದಿನವೇ ಯುಗಾದಿಯ ಹಬ್ಬದಾಚರಣೆ. ರಾವಣನೆಂಬ ದುಷ್ಟಶಕ್ತಿಯ ವಿರುದ್ಧ ವಿಜಯ ಸಂಕೇತವೇ ಯುಗಾದಿಹಬ್ಬದ ಮೂಲ.

।ಡಾ. ಪೋಸ್ಟ್ ನಾರಾಯಣಸ್ವಾಮಿ

## ಹುಬ್ಬುಗಳ ಬಗ್ಗೆ ಇರಲಿ ಕಾಳಜಿ.!

ನಿಮ್ಮ ಮುಖದ ಸೌಂದರ್ಯವನ್ನು ಕಾಪಾಡುವಲ್ಲಿ ಹುಬ್ಬಿನ ಪಾತ್ರವೂ ದೊಡ್ಡದಿದೆ. ದಪ್ಪನೆಯ ಕಪ್ಪಾದ ಹುಬ್ಬುಗಳು ನಿಮ್ಮ ಮುಖಕ್ಕೆ ವಿಶೇಷ ಮೆರುಗನ್ನು ನೀಡುತ್ತವೆ. ಒಮ್ಮೆ ಐ ಬ್ರೋ ಶೇಪ್ ಮಾಡಿಕೊಂಡ ಎರಡರಿಂದ ಮೂರು ವಾರಗಳಲ್ಲಿ ಮತ್ತೆ ಹುಬ್ಬಿನ ಕೂದಲು ಹುಟ್ಟಿಕೊಳ್ಳುತ್ತದೆ. ನಿತ್ಯ ಅದನ್ನು ಗಮನಿಸುತ್ತಾ ಪ್ಲಕ್ಕರ್ ಸಹಾಯದಿಂದ ಕೀಳುತ್ತಿದ್ದರೆ ಪದೇ ಪದೇ ಬ್ಯೂಟಿ ಪಾರ್ಲರ್ ಗೆ ಹೋಗಬೇಕಿಲ್ಲ. ಹುಬ್ಬುಗಳನ್ನು ಟ್ರಿಮ್ ಮಾಡುವಾಗ ಎಚ್ಚರಿಕೆಯಿರಲಿ. ಹುಬ್ಬುಗಳಿಗೆ ಹೊಸ ಆಕಾರ ಕೊಡುವ ನೆಪದಲ್ಲಿ ಕತ್ತರಿ ಬಳಸುವಾಗ ತುಸು ಹೆಚ್ಚು ಕಡಿಮೆಯಾದರೂ ಹುಬ್ಬಿನ ಕೂದಲು ವಿರೂಪವಾಗಬಹುದು. ಹಾಗಾಗಿ ಟ್ರಿಮ್ ಮಾಡುವಾಗ, ಬ್ರಶ್ ಬಳಸುವಾಗ ಎಚ್ಚರಿಕೆ ವಹಿಸಿ.ನಿತ್ಯ ರಾತ್ರಿ ಮಲಗುವ ಮುನ್ನ ಹುಬ್ಬಿನ ಕೂದಲಿಗೆ ಹರಳೆಣ್ಣೆ ಹಚ್ಚಿ ಐದು ನಿಮಿಷ ಮಸಾಜ್ ಮಾಡಿ ಬೆಳಗೆದ್ದು ಮುಖ ತೊಳೆದರೆ ಹುಬ್ಬಿನ ಕೂದಲು ಉದುರುವುದಿಲ್ಲ ಮತ್ತು ಕಪ್ಪಾಗಿ ದಪ್ಪಗಾಗಿ ಬೆಳೆಯುತ್ತದೆ.




## ರಾಶಿ ಭವಿಷ್ಯ



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ–9964739507
www.jyotishyavaastu.com

**ಮೇಷ:** ಸ್ನೇಹಿತರಿಂದ ನಿಂದನೆ, ಪರರ ಧನ ಪ್ರಾಪ್ತಿ, ಉದ್ಯೋಗದಲ್ಲಿ ಬಡ್ತಿ, ಶತ್ರುನಾಶ, ಭಾಗ್ಯ ವೃದ್ಧಿ.

**ವೃಷಭ:** ಋಣ ಭಾದೆ, ದುಷ್ಟಬುದ್ಧಿ, ಮನಸ್ತಾಪ, ವ್ಯರ್ಥ ಧನ ಹಾನಿ, ಮೃತ್ಯು ಭಯ.

**ಮಿಥುನ:** ದಾಯಾದಿ ಕಲಹ, ಅಧಿಕ ಖರ್ಚು, ದೂರ ಪ್ರಯಾಣ, ಮನಶಾಂತಿ, ಸ್ವಲ್ಪ ಹಣ ಬಂದರೂ ಉಳಿಯುವುದಿಲ್ಲ.

**ಕಟಕ:** ಉತ್ತಮ ವ್ಯಾಪಾರ ವಹಿವಾಟು, ಸರ್ಕಾರಿ ಕೆಲಸಗಳಲ್ಲಿ ಪ್ರಗತಿ, ವಸ್ತ್ರ ಖರೀದಿ,

**ಸಿಂಹ:** ವಾಹನ ಖರೀದಿ, ಸಮಾಜದಲ್ಲಿ ಗೌರವ ಕೀರ್ತಿ, ವ್ಯಾಪಾರದಲ್ಲಿ ಧನ ಲಾಭ, ವಿದ್ಯಾಭ್ಯಾಸದಲ್ಲಿ ಪ್ರಗತಿ.

**ಕನ್ಯಾ:** ಮಾಡುವ ಕೆಲಸದಲ್ಲಿ ಜಯ, ಮಿತ್ರರ ಸಹಾಯ, ಮಾತಿನ ಚಕಮಕಿ, ವಿವಾಹಕ್ಕೆ ತೊಂದರೆ.

**ತುಲಾ:** ಗುರು ಹಿರಿಯರ ಭೇಟಿ, ಧನ ಲಾಭ, ಮಾತಿನಿಂದ ಅನರ್ಥ, ಮನಸ್ಸಿನಲ್ಲಿ ಕೆಟ್ಟ ಆಲೋಚನೆಗಳು

**ವೃಶ್ಚಿಕ:** ನಾನಾ ರೀತಿಯ ತೊಂದರೆಗಳು, ಕಾರ್ಯ ವಿಕಲ್ಪ, ಚಂಚಲ ಮನಸ್ಸು, ಆಸ್ತಿ ವಿಚಾರದಲ್ಲಿ ಕಲಹ, ಶತ್ರು ನಾಶ.

**ಧನಸ್ಸು:** ಯತ್ನ ಕಾರ್ಯಗಳಲ್ಲಿ ಜಯ, ಕುಟುಂಬ ಸೌಖ್ಯ, ವ್ಯಾಪಾರದಲ್ಲಿ ಲಾಭ, ಉದ್ಯೋಗದಲ್ಲಿ ಪ್ರಗತಿ

**ಮಕರ:** ಮಹಿಳೆಯರಿಗೆ ತೊಂದರೆ, ಅಧಿಕಾರಿಗಳಲ್ಲಿ ಕಲಹ, ದಾಂಪತ್ಯದಲ್ಲಿ ಸಮಸ್ಯೆ, ನಂಬಿದ ಜನರಿಂದ ಅಶಾಂತಿ.

**ಕುಂಭ:** ವಿರೋಧಿಗಳಿಂದ ಕುತಂತ್ರ, ಆದಾಯಕ್ಕಿಂತ ಖರ್ಚು ಜಾಸ್ತಿ, ವಾಹನ ರಿಪೇರಿ, ಆಲಸ್ಯ ಮನೋಭಾವ. ಅಶಾಂತಿ.

**ಮೀನ:** ಶೀತ ಸಂಬಂಧ ರೋಗ,ಭೂ ಲಾಭ, ಮಾತೃವಿನ ಆಶೀರ್ವಾದ, ಭೋಗ ವಸ್ತು ಪ್ರಾಪ್ತಿ, ಮನಶಾಂತಿ.

## ಜಂಬೂ ದಿನ



ಪ್ರತಿ ವರ್ಷ ಏಪ್ರಿಲ್ 9 ರಂದು ಜಂಬೂ ದಿನವನ್ನು ಆಚರಿಸಲಾಗುತ್ತದೆ. ಈ ದಿನವು ಜಂಬೋ ದಿ ಎಲಿಫೆಂಟ್ನ ಜೀವನವನ್ನು ಆಚರಿಸುತ್ತದೆ, ಇದನ್ನು ಜಂಬೋ ದಿ ಸರ್ಕಸ್ ಎಲಿಫೆಂಟ್ ಎಂದೂ ಕರೆಯುತ್ತಾರೆ, ಇದು 19 ನೇ ಶತಮಾನದ ಪುರುಷ ಆಫ್ರಿಕನ್ ಬುಷ್ ಆನೆಯಾಗಿದ್ದು ಮೂಲತಃ ಸುಡಾನ್ನಿಂದ. ಅವರನ್ನು ಆಫ್ರಿಕಾದಿಂದ ಪ್ಯಾರಿಸ್ನಲ್ಲಿರುವ ಫ್ರೆಂಚ್ ಮೃಗಾಲಯ ಜಾರ್ಡಿನ್ ಡೆಸ್ ಪ್ಲಾಂಟೆಸ್ಗೆ ವರ್ಗಾಯಿಸಲಾಯಿತು, ನಂತರ ಅವರನ್ನು ಇಂಗ್ಲೆಂಡ್ನ ಲಂಡನ್ ಮೃಗಾಲಯಕ್ಕೆ ವರ್ಗಾಯಿಸಲಾಯಿತು. ಇಲ್ಲಿಯೇ ಒಬ್ಬ ಅಮೇರಿಕನ್ ಉದ್ಯಮಿ ಮತ್ತು ಶೋಮ್ಯಾನ್ ಅವನನ್ನು ಖರೀದಿಸಿ ಗಖ ಗೆ ಕರೆತಂದರು ದುಃಖಕರವಾಗಿ, ಜಂಬೋ ಸೆಪ್ಟೆಂಬರ್ 15, 1885 ರಂದು ನಿಧನರಾದರು. ದೈತ್ಯ ಆನೆಯ ಹೆಸರು 'ಜಂಬೋ' ಎಂಬ ಸಾಮಾನ್ಯ ಪದವನ್ನು ಹುಟ್ಟುಹಾಕಿತು ಮತ್ತು ಜನಪ್ರಿಯ ಸಂಸ್ಕೃತಿಯ ಮೇಲೆ ತನ್ನ ಗುರುತು ಹಾಕಿತು.

ಜಂಬೋ ಎಲಿಫೆಂಟ್ ಡಿಸೆಂಬರ್ 25, 1860 ರಂದು ಸುಡಾನ್ನಲ್ಲಿ ಜನಿಸಿದರು. ಬೇಟೆಯಾಡುವ ಬೇಟೆಗಾರರು ಶಿಶುವಾಗಿದ್ದಾಗ ಅವರ ತಾಯಿಯನ್ನು ಕೊಂದರು. ಸುಡಾನ್ ಆನೆ ಬೇಟೆಗಾರ ತಾಹೆರ್ ಶೆರಿಫ್ ಮತ್ತು ಜರ್ಮನ್ ದೊಡ್ಡ-ಗೇಮ್ ಬೇಟೆಗಾರ ಜೋಹಾನ್ ಸ್ಮಿತ್ ಜಂಬೋವನ್ನು ವಶಪಡಿಸಿಕೊಂಡರು ಮತ್ತು ಇಟಾಲಿಯನ್ ಪ್ರಾಣಿ ವ್ಯಾಪಾರಿ ಮತ್ತು ಪರಿಶೋಧಕ ಲೊರೆಂಜೊ ಕ್ಯಾಸನೋವಾ ಅವರಿಗೆ ಮಾರಾಟ ಮಾಡಿದರು, ಅವರು ನಂತರ ಅವರು ಖರೀದಿಸಿದ ಪ್ರಾಣಿಗಳನ್ನು ಸುಡಾನ್ನಿಂದ ಸೂಯೆಜ್ಗೆ ಮತ್ತು ನಂತರ ಮೆಡಿಟರೇನಿಯನ್ ಸಮುದ್ರದ ಮೂಲಕ ಸಾಗಿಸಿದರು. ಟ್ರೈಸ್ಟೆ, ಇಟಲಿಯಲ್ಲಿ, ಗಾಟ್ಲೀಬ್ ಕ್ರಿಶ್ಚಿಯನ್ ಕ್ರೂಟ್ಜ್ಬರ್ಗ್ ಮೆನೇಜರೀ ಕ್ರೂಟ್ಜ್ಬರ್ಗ್, ಜರ್ಮನಿಯಲ್ಲಿ 19 ನೇ ಶತಮಾನದ ಪ್ರಯಾಣದ ಪ್ರಾಣಿ ಪ್ರದರ್ಶನ, ಕ್ಯಾಸನೋವಾ ಅವರ ಪ್ರಾಣಿಗಳ ಸಂಗ್ರಹವನ್ನು ಖರೀದಿಸಿತು. ಅದರ ನಂತರ, ಜಂಬೋವನ್ನು ಫ್ರಾನ್ಸ್, ಪ್ಯಾರಿಸ್ನಲ್ಲಿರುವ ಜಾರ್ಡಿನ್ ಡೆಸ್ ಪ್ಲಾಂಟೆಸ್ ಮೃಗಾಲಯಕ್ಕೆ ರಫ್ತು ಮಾಡಲಾಯಿತು. ಮತ್ತೆ, ಜೂನ್ 26 ರಂದು ಅವರನ್ನು ಲಂಡನ್ ಮೃಗಾಲಯಕ್ಕೆ ವರ್ಗಾಯಿಸಲಾಯಿತು. ಜಂಬೋ ಅವನ ಗಾತ್ರದ ಕಾರಣದಿಂದ ಜನಸಂದಣಿಯ ನೆಚ್ಚಿನವನಾದನು ಮತ್ತು ಮಕ್ಕಳು ಅವನ ಬೆನ್ನಿನ ಮೇಲೆ ಸವಾರಿ ಮಾಡುತ್ತಾರೆ, ವಿಕ್ಟೋರಿಯಾ ರಾಣಿ ಸೇರಿದಂತೆ. ಲಂಡನ್ನಲ್ಲಿರುವಾಗ, ಅವರು ಮ್ಯಾಥ್ಯೂ ಸ್ಕಾಟ್ನ ಮೇಲ್ವಿಚಾರಣೆಯಲ್ಲಿದ್ದರು (ಜಂಬೊ ಜೊತೆಗಿನ ಅವರ ಜೀವನವನ್ನು ವಿವರಿಸುವ 1885 ಆತ್ಮಚರಿತ್ರೆ ಬಿಡುಗಡೆ ಮಾಡಿದರು). ಜಂಬೂ ತನ್ನ ಎರಡೂ ದಂತಗಳನ್ನು ಮುರಿದನು, ಮತ್ತು ಅವು ಬೆಳೆದ ನಂತರವೂ ಅವನು ತನ್ನ ಆವರಣದ ಕಲ್ಲಿನ ಮೇಲೆ ಅವುಗಳನ್ನು ನೆಲಸಮಗೊಳಿಸಿದನು. 1882 ರಲ್ಲಿ, ಲಂಡನ್ ಮೃಗಾಲಯದ ಅಧೀಕ್ಷಕ ಅಬ್ರಹಾಂ ಬಾರ್ಟ್ಲೆಟ್ ಅವರು ಮುಖ್ಯಾಂಶಗಳನ್ನು ಮಾಡಿದರು ಮತ್ತು ಜಂಬೋವನ್ನು ಅಮೇರಿಕನ್ ಉದ್ಯಮಿ ಮತ್ತು ಶೋಮ್ಯಾನ್ಗೆ ನ 2,000 (ಯುಎಸ್ 10,000) ಗೆ ಮಾರಾಟ ಮಾಡುವ ಉದ್ದೇಶಿತ ನಿರ್ಧಾರವನ್ನು ಸಾರ್ವಜನಿಕರು ಹಿಡಿದಾಗ ವ್ಯಾಪಕ ವಿವಾದವನ್ನು ಹುಟ್ಟುಹಾಕಿದರು.

ಸಂಜೆ ಮುಗಿಲು
ಬುಧವಾರ
10.4.2024


## ಲೋಕಸಭಾ ಚುನಾವಣಾ ಪ್ರಚಾರದಿಂದ ಹಿಂದೆ ಸರಿದ ನಟಿ ಖುಷ್ಬು ಸುಂದರ್

**ಚೆನ್ನೈ:** ಬಿಜೆಪಿಯ ಪ್ರಮುಖ ಸದಸ್ಯರಲ್ಲಿ ಒಬ್ಬರಾಗಿರುವ ನಟಿ ಖುಷ್ಬು ಸುಂದರ್ ಅವರು ಆರೋಗ್ಯ ಸಮಸ್ಯೆಯ ಕಾರಣದಿಂದಾಗಿ ಲೋಕಸಭಾ ಚುನಾವಣಾ ಪ್ರಚಾರದಿಂದ ಹಿಂದೆ ಸರಿದಿದ್ದಾರೆ. ಈ ಸಂಬಂಧ ಖುಷ್ಬು ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ ನಡ್ಡಾ ಅವರಿಗೆ ಪತ್ರವೊಂದನ್ನು ಬರೆದಿದ್ದಾರೆ. ಪತ್ರದಲ್ಲಿ ತಮ್ಮ ನಿರ್ಧಾರವನ್ನು ತಿಳಿಸಿದ್ದಾರೆ. ಕೆಲವೊಮ್ಮೆ ಕಠಿಣ ನಿರ್ಧಾರಗಳನ್ನು ತೆಗೆದುಕೊಳ್ಳಬೇಕಾಗುತ್ತದೆ. ಆರೋಗ್ಯದ ಮೇಲೆ ಗಮನಹರಿಸಬೇಕು. ಹೀಗಾಗಿ ನಾನು ಇಂದು ಅಂತಹ ಸಂದಿಗ್ಧದಲ್ಲಿದ್ದೇನೆ ಎಂದಿದ್ದಾರೆ. 2019 ರಲ್ಲಿ ದೆಹಲಿಯಲ್ಲಿ ಸಂಭವಿಸಿದ ಅಪಘಾತದಿಂದ ಮೂಳೆ ಮುರಿದಿದೆ. ಕಳೆದ 5 ವರ್ಷಗಳಿಂದ ಆರೋಗ್ಯದ ಕುರಿತು ಮುನ್ನೆಚ್ಚರಿಕೆ ವಹಿಸುತ್ತಿದ್ದೇನೆ. ಆದರೂ ಸಮಸ್ಯೆ ನನ್ನನ್ನು ಕಾಡುತ್ತಿದೆ. ಹೀಗಾಗಿ ವೈದ್ಯರು ಚುನಾವಣಾ ಪ್ರಚಾರದಲ್ಲಿ ಭಾಗಿಯಾಗದಂತೆ ಸೂಚಿಸಿದ್ದಾರೆ ಎಂದು ಪತ್ರದಲ್ಲಿ ನಟಿ ತಿಳಿಸಿದ್ದಾರೆ.



## ಟೇಕ್ ಆಫ್ ವೇಳೆ ಚೂರ್ ಚೂರಾದ ವಿಮಾನದ ಎಂಜಿನ್ ಕವರ್

**ಲಾಸ್ ವೇಗಸ್:** ಟೇಕ್ ಆಫ್ ಆಗುತ್ತಿದ್ದಂತೆ ವಿಮಾನದ ಎಂಜಿನ್ ಕವರ್ ಚೂರ್ ಚೂರಾಗಿದ್ದು ವಿಮಾನ ತುರ್ತು ಭೂಸ್ಪರ್ಶ ಮಾಡಿದ ಘಟನೆ ಭಾನುವಾರ ಡೆನ್ವರ್ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ನಡೆದಿದೆ. ಲಾಸ್ ವೇಗಸ್ ಸೌತ್‌ವೆಸ್ಟ್ ಬೋಯಿಂಗ್ 737-800 ವಿಮಾನದಲ್ಲಿ ಈ ದುರ್ಘಟನೆ ನಡೆದಿದ್ದು, ವಿಮಾನ ಡೆನ್ವರ್ ನಿಲ್ದಾಣದಲ್ಲಿ ಟೇಕ್ ಆಫ್ ಆಗುತ್ತಿದ್ದಂತೆ ಎಂಜಿನ್ ಮೇಲಿನ ಕವರ್ ಚೂರಾಗಿ ಹಾರಾಡುತ್ತಿರುವುದು ಪ್ರಯಾಣಿಕರ ಗಮನಕ್ಕೆ ಬಂದಿದೆ. ವಿಮಾನ ಮೇಲೇರುತ್ತಿದ್ದಂತೆ ಸಂಪೂರ್ಣ ಕವರ್ ಕಿತ್ತು ರೆಕ್ಕೆಗೆ ಬಡಿದಿದೆ. ಈ ದೃಶ್ಯವನ್ನು ಕಂಡ ಪ್ರಯಾಣಿಕರು ತಕ್ಷಣ ವಿಮಾನ ಸಿಬ್ಬಂದಿಗೆ ಮಾಹಿತಿ ನೀಡಿದ್ದಾರೆ. ಎಂಜಿನ್‌ನ ಹಾನಿಯಾಗಿದ್ದನ್ನು ಗಮನಿಸಿದ ಪೈಲೆಟ್ ತಕ್ಷಣ ವಾಪಸ್ ಡೆನ್ವರ್ ವಿಮಾನ ನಿಲ್ದಾಣದಲ್ಲಿ ಸುರಕ್ಷಿತ ಲ್ಯಾಂಡ್ ಮಾಡಲಾಗಿದೆ ಎಂದು ಫೆಡರಲ್ ಏವಿಯೇಷನ್ ಆಡಳಿತ ಮಾಹಿತಿ ನೀಡಿದೆ. ಈ ವಿಮಾನ ಡೆನ್ವರ್‌ನಿಂದ ಹೌಸ್ಟನ್‌ಗೆ ತೆರಳುತ್ತಿದ್ದ ವೇಳೆ ದುರ್ಘಟನೆ ಸಂಭವಿಸಿದೆ. ಸದ್ಯ ಯಾವುದೇ ಅನಾಹುತ ನಡೆಯದೇ ವಿಮಾನ ಸುರಕ್ಷಿತವಾಗಿ ಭೂಸ್ಪರ್ಶ ಮಾಡಿದೆ. ಪ್ರಯಾಣಿಕರನ್ನು ಬೇರೆ ವಿಮಾನದಲ್ಲಿ ಕಳುಹಿಸಿಕೊಡಲಾಗಿದೆ.



## ಇಸ್ರೇಲ್ ನ ರಾಯಭಾರ ಕಚೇರಿಗಳು ಇನ್ನು ಮುಂದೆ ಸುರಕ್ಷಿತವಲ್ಲ:ಎಚ್ಚರಿಕೆ

ಇಸ್ರೇಲ್‌ನ ಯಾವುದೇ ದೂತಾವಾಸಗಳು ಇನ್ನು ಮುಂದೆ ಸುರಕ್ಷಿತವಾಗಿರುವುದಿಲ್ಲ ಎಂದು ಇರಾನ್‌ನ ಉನ್ನತ ರಕ್ಷಣಾ ಸಲಹೆಗಾರ ರಹೀಮ್ ಸಫಾವಿ ಎಚ್ಚರಿಕೆ ನೀಡಿದ್ದಾರೆ.

ಕಳೆದ ವಾರ ದಮಾಸ್ಕಸ್‌ನಲ್ಲಿ ಇರಾನ್ ದೂತಾವಾಸದ ಮೇಲೆ ನಡೆದ ದಾಳಿಯಲ್ಲಿ ಇರಾನ್ ರೆವೊಲ್ಯೂಷನರಿ ಗಾರ್ಡ್ಸ್‌ನ ಉನ್ನತ ಕಮಾಂಡರ್‌ಗಳ ಸಹಿತ 12 ಮಂದಿ ಸಾವನ್ನಪ್ಪಿದ್ದರು. ಈ ದಾಳಿಯನ್ನು ಇಸ್ರೇಲ್ ನಡೆಸಿದೆ ಎಂದು ದೂಷಿಸಿರುವ ಇರಾನ್, ಇದಕ್ಕೆ ಪ್ರತೀಕಾರ ಕ್ರಮ ಕೈಗೊಳ್ಳುವುದಾಗಿ ಎಚ್ಚರಿಕೆ ನೀಡಿತ್ತು.

ನಮಗೆ ಯಾರೆಲ್ಲಾ ಹಾನಿ ಮಾಡುತ್ತಾರೋ ಅಥವಾ ಹಾನಿ ಮಾಡಲು ಪ್ರಯತ್ನಿಸುತ್ತಾರೋ ಅವರಿಗೆ ನಾವು ಹಾನಿ ಮಾಡುತ್ತೇವೆ. ಈ ಸಿದ್ಧಾಂತವನ್ನು ನಾವು ಸದಾಕಾಲ ಪಾಲಿಸುತ್ತಿದ್ದೇವೆ' ಎಂದು ರಹೀಮ್ ಸಫಾವಿ ಹೇಳಿದ್ದಾರೆ.

ಭಾನುವಾರ ರವಿವಾರ ಟೆಹ್ರಾನ್‌ನಲ್ಲಿ ನಡೆದ ಸಂಪುಟ ಸಭೆಯಲ್ಲಿ ಅವರು ಮಾತನಾಡಿದರು. ಇರಾನ್‌ನ ಪರಮೋಚ್ಛ ಮುಖಂಡ ಆಯತುಲ್ಲಾ ಅಲಿ ಖಾಮಿನೈ ಅವರ ಮಿಲಿಟರಿ ಸಲಹೆಗಾರರಾಗಿರುವ ಸಫಾವಿ ಅವರ ಹೇಳಿಕೆಯು 'ಇರಾನ್‌ನ ದೂತಾವಾಸಕ್ಕೆ ನಡೆದ ದಾಳಿಗೆ ಅದೇ ರೀತಿಯಲ್ಲಿ ಉತ್ತರಿಸುವ' ಸೂಚನೆಯನ್ನು ನೀಡಿದೆ ಎಂದು ವಿಶ್ಲೇಷಿಸಲಾಗಿದೆ.

ಈ ಮಧ್ಯೆ, ಗಾಝಾದ ಖಾನ್ಯೂನಿಸ್ ನಗರದಿಂದ ತನ್ನ 98ನೇ ಪ್ಯಾರಾಟ್ರೂಪರ್ ಘಟಕವನ್ನು ಹಿಂದಕ್ಕೆ ಕರೆಸಿಕೊಳ್ಳುವುದಾಗಿ ಇಸ್ರೇಲ್ ಘೋಷಿಸಿತ್ತು. ಇರಾನ್ನ ಸಂಭಾವ್ಯ ಪ್ರತಿದಾಳಿಗೆ ನಡೆಸುತ್ತಿರುವ ಸನ್ನದ್ಧತೆಗೆ ಪೂರಕವಾಗಿ ಇಸ್ರೇಲ್ ಈ ಕ್ರಮ ಕೈಗೊಂಡಿರುವ ಸಾಧ್ಯತೆಯಿದೆ ಎಂದು ಮಾಧ್ಯಮಗಳು ವರದಿಯಲ್ಲಿ ಉಲ್ಲೇಖಿಸಿವೆ.

## ಕಾಲರಾ ಭಯದಿಂದ ವಲಸೆ ಹೋಗುವಾಗ ಹಡಗು ಮುಳುಗಡೆ

**ಮೊಜಾಂಬಿಕ್:** ಕಾಲರಾ ರೋಗದಿಂದ ಹೆದರಿ ಜೀವ ಉಳಿಸಿಕೊಳ್ಳುವ ಸಲುವಾಗಿ ವಲಸೆ ಹೊರಟ ಆಫ್ರಿಕಾದ ಜನರು ಹಡಗು ಮುಳುಗಡೆಗೊಂಡು 94 ಮಂದಿ ದಾರುಣವಾಗಿ ಸಾವನಪ್ಪಿದ್ದಾರೆ. ಈ ಘಟನೆ ಮೊಜಾಂಬಿಕ್ ದೇಶದಲ್ಲಿ ನಡೆದಿದೆ. ಮೊಜಾಂಬಿಕ್ ದೇಶದಲ್ಲಿ ಇತ್ತೀಚಿಗೆ ಕಾಲರಾ ರೋಗದ ಹಾವಳಿ ಹೆಚ್ಚಾಗಿದೆ. ಸಾಂಕ್ರಾಮಿಕ ರೋಗ ಹಲವಾರು ಜನರನ್ನು ಬಲಿ ಪಡೆದಿದ್ದು, ಸಾವಿನ ಸರಣಿಯಿಂದ ತಪ್ಪಿಸಿಕೊಳ್ಳಲು ಜನ ಊರಿಗೆ ಊರನ್ನೇ ಖಾಲಿ ಮಾಡಿಕೊಂಡು ವಲಸೆ ಹೊರಟಿದ್ದಾರೆ. ಮೀನುಗಾರರ ಹಡಗಿನಲ್ಲಿ ನೂರಾರು ಜನರು ಗುಳೆ ಹೋಗುವಾಗ ಹಡಗು ಮಗುಚಿ ಬಿದ್ದಿದೆ. ಮಕ್ಕಳು ಸೇರಿದಂತೆ 94 ಮಂದಿ ಸಾವನ್ನಪ್ಪಿದ್ದು, 26 ಮಂದಿ ನಾಪತ್ತೆಯಾಗಿದ್ದಾರೆ. ಅಗತ್ಯಕ್ಕಿಂತ ಹೆಚ್ಚು ಜನರನ್ನು ಹಡಗಿನಲ್ಲಿ ಹತ್ತುಕೊಂಡು ಹೋಗುತ್ತಾ ಇದ್ದಿದ್ದೇ ಈ ದುರಂತಕ್ಕೆ ಕಾರಣ ಎನ್ನಲಾಗಿದೆ. ಮೀನುಗಾರರು ಬಳಸುತ್ತಿದ್ದ ಹಡಗಿನಲ್ಲಿ ಅಗತ್ಯಕ್ಕಿಂತ ಹೆಚ್ಚು ಜನ ವಲಸೆ ಹೋಗುವಾಗ ದುರಂತಕ್ಕೀಡಾಗಿದೆ. ಮೊಜಾಂಬಿಕ್ ದೇಶದಲ್ಲಿ ಕಾಲರಾ ಬಂದಾಗ ಒಂದು ಪ್ರದೇಶದಿಂದ ಮತ್ತೊಂದು ಜಾಗಕ್ಕೆ ವಲಸೆ ಹೋಗುವುದು ಸಾಮಾನ್ಯವಾಗಿದೆ. ಆದರೆ ಒಂದೇ ಬಾರಿ ನೂರಾರು ಜನ ಪ್ರಾಣ ಬಿಟ್ಟಿರೋದು ಇದೇ ಮೊದಲ ಬಾರಿಯಾಗಿದ್ದು ಜನ ಬೆಚ್ಚಿಬಿದ್ದಿದ್ದಾರೆ.



## ಚುನಾವಣಾ ಆಯೋಗದ ಮೊರೆ ಹೋದ ಕಾಂಗ್ರೆಸ್!

**ನವದೆಹಲಿ:** ಪಕ್ಷದ ಪ್ರಣಾಳಿಕೆ ಬಗ್ಗೆ ಪ್ರಧಾನಿ ನರೇಂದ್ರ ಮೋದಿ ಟೀಕೆ ಮಾಡಿರುವುದರ ಬಗ್ಗೆ ಕಾಂಗ್ರೆಸ್ ಪಕ್ಷ ಚುನಾವಣಾ ಆಯೋಗದ ಮೊರೆ ಹೋಗಿದೆ. ಲೋಕಸಭಾ ಚುನಾವಣೆ 2024ಗೆ ಕಾಂಗ್ರೆಸ್ ಪ್ರಕಟಿಸಿರುವ ಪ್ರಣಾಳಿಕೆಯನ್ನು ಮೋದಿ ಮುಸ್ಲಿಂ ಲೀಗ್ ಪ್ರಣಾಳಿಕೆಗೆ ಹೋಲಿಕೆ ಮಾಡಿದ್ದರು.

ಕಾಂಗ್ರೆಸ್ ನಾಯಕರ ನಿಯೋಗ ಚುನಾವಣಾ ಅಧಿಕಾರಿಗಳನ್ನು ಭೇಟಿ ಮಾಡಿ ಹಲವು ವಿಷಯದ ಬಗ್ಗೆ ಅಪಸ್ವರವೆತ್ತಿದೆ. ಸರ್ಕಾರಿ ಕಟ್ಟಡಗಳಲ್ಲಿ, ಕಾಲೇಜುಗಳಲ್ಲಿ ಪ್ರಧಾನಿ ನರೇಂದ್ರ ಮೋದಿ ಅವರ ಬೃಹತ್ ಕಟೌಟ್ ಗಳು ಇರುವುದರ ಬಗ್ಗೆ ಕಾಂಗ್ರೆಸ್ ಆಕ್ಷೇಪಿಸಿದೆ ಮುಂಬರುವ ಸಂಸತ್ತಿನ ಚುನಾವಣೆಯಲ್ಲಿ ಸಮಬಲ ಸಾಧಿಸಲು ಅವುಗಳನ್ನು ತೆಗೆದುಹಾಕಬೇಕು ಎಂದು ಒತ್ತಾಯಿಸಿದರು.

ತನ್ನ ಪ್ರಣಾಳಿಕೆ ದೇಶವನ್ನು ವಿಭಜಿಸಲು ಮತ್ತು ಮುಸ್ಲಿಂ ಲೀಗ್‌ನ ಸ್ವಾತಂತ್ರ್ಯಪೂರ್ವ ಸಿದ್ಧಾಂತವನ್ನು ಹೇರಲು ಕಾಂಗ್ರೆಸ್ ಪ್ರಯತ್ನಿಸುತ್ತಿದೆ ಎಂದು ಆರೋಪಿಸಿ ಹೇಳಿಕೆ ನೀಡಿದ್ದಕ್ಕಾಗಿ ಮೋದಿ ವಿರುದ್ಧ ಪಕ್ಷ ದೂರು ದಾಖಲಿಸಿದೆ ಎಂದು ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಜೈರಾಮ್ ರಮೇಶ್ ಹೇಳಿದ್ದಾರೆ. ಕಾಂಗ್ರೆಸ್ ನ ಪ್ರಣಾಳಿಕೆಯ ಪ್ರತಿಯೊಂದು ಪುಟವೂ ಭಾರತವನ್ನು ತುಂಡು ತುಂಡಾಗಿ ಒಡೆಯುತ್ತದೆ. ಕಾಂಗ್ರೆಸ್ ಪ್ರಣಾಳಿಕೆ ಸ್ವಾತಂತ್ರ್ಯ ಚಳವಳಿಯ ಸಂದರ್ಭದಲ್ಲಿ ಮುಸ್ಲಿಂ ಲೀಗ್‌ನಲ್ಲಿ ಪ್ರಚಲಿತದಲ್ಲಿದ್ದ ಅದೇ ಚಿಂತನೆಯನ್ನು ಪ್ರತಿಬಿಂಬಿಸುತ್ತದೆ. ಇದು ಸಂಪೂರ್ಣವಾಗಿ ಮುಸ್ಲಿಂ ಲೀಗ್‌ನ ಮುದ್ರೆಯನ್ನು ಹೊಂದಿದೆ ಮತ್ತು ಉಳಿದಿರುವುದು ಸಂಪೂರ್ಣವಾಗಿ ಎಡಪಂಥೀಯರ ಪ್ರಾಬಲ್ಯವಾಗಿದೆ ಎಂದು ಮೋದಿ ಹೇಳಿದ್ದರು.



# 2 ವಾರದಲ್ಲಿ ಸಮಸ್ಯೆ ಬಗೆಹರಿಸುತ್ತೇವೆ ಸುಪ್ರೀಂಗೆ ಕೇಂದ್ರ ಸರ್ಕಾರ ಭರವಸೆ



**ನವದೆಹಲಿ/ಬೆಂಗಳೂರು:** ಬರ ಪರಿಹಾರ ಕೊಡಿಸುವಂತೆ ಕರ್ನಾಟಕ ಸರ್ಕಾರ ಸುಪ್ರೀಂಕೋರ್ಟ್‌ನಲ್ಲಿ ಅರ್ಜಿ ಸಲ್ಲಿಸಿದೆ. ಅರ್ಜಿ ವಿಚಾರಣೆ ನಡೆಸಿದ ನ್ಯಾಯಾಲಯ, ''ಎಲ್ಲ ವಿಚಾರಗಳಿಗೂ ರಾಜ್ಯಗಳು ಸುಪ್ರೀಂಕೋರ್ಟ್‌ಗೆ ಬರಬೇಕಾ?'' ಎಂದು ಕೇಂದ್ರ ಸರ್ಕಾರಕ್ಕೆ ಖಾರವಾಗಿ ಪ್ರಶ್ನಿಸಿತು. ಇದಕ್ಕೆ, ''ಎರಡು ವಾರದಲ್ಲಿ ಈ ಸಮಸ್ಯೆಯನ್ನು ಬಗೆಹರಿಸುತ್ತೇವೆ'' ಎಂದು ಕೇಂದ್ರ ಸರ್ಕಾರ ಪರವಾಗಿ ವಾದ ಮಂಡಿಸಿದ ವಕೀಲ ಎಸ್‌ಜಿ ಮೆಹ್ತಾ ಕೋರ್ಟ್ ತಿಳಿಸಿದರು.

ಬರ ಪರಿಹಾರ ಬಿಡುಗಡೆ ಮಾಡುವಂತೆ ಕೇಂದ್ರ ಸರ್ಕಾರಕ್ಕೆ ಕಳೆದ ವರ್ಷ ಡಿಸೆಂಬರ್‌ನಲ್ಲೇ ಕರ್ನಾಟಕ ಸರ್ಕಾರ ಮನವಿ ಮಾಡಿತ್ತು. ಆದರೆ ಕೇಂದ್ರ ಸರ್ಕಾರ ಪರಿಹಾರ ಬಿಡುಗಡೆ ಮಾಡಿಲ್ಲ. ಹೀಗಾಗಿ ಸುಪ್ರೀಂಕೋರ್ಟ್‌ನಲ್ಲಿ ಕರ್ನಾಟಕ ಸರ್ಕಾರ ಅರ್ಜಿ ಸಲ್ಲಿಸಿದೆ ಎಂದು ಹೇಳಿದರು.

ಎಲ್ಲ ವಿಚಾರಗಳಿಗೂ ರಾಜ್ಯಗಳು ಸುಪ್ರೀಂಕೋರ್ಟ್?ಗೆ ಬರಬೇಕಾ ಎಂದು ಸುಪ್ರೀಂಕೋರ್ಟ್ ಕೇಂದ್ರ ಸರ್ಕಾರವನ್ನು ಪ್ರಶ್ನೆ ಮಾಡಿತು.

ಕೇಂದ್ರ ಸರ್ಕಾರದ ಪರ ವಕೀಲರ ವಾದ: ಎರಡು ವಾರದಲ್ಲಿ ಸಮಸ್ಯೆ ಬಗೆಹರಿಸುತ್ತೇವೆ ಎಂದು ನ್ಯಾಯ ಪೀಠಕ್ಕೆ ತಿಳಿಸಿದರು.

ವಾದ ಬಗೆಹರಿಸುತ್ತೇವೆ ಎಂದು ಸುಪ್ರೀಂಕೋರ್ಟ್‌ನಲ್ಲಿ ಕೇಂದ್ರ ಸರ್ಕಾರ ಹೇಳಿದೆ. ಅಟಾರ್ನಿ ಜನರಲ್, ಸಾಲಿಸಿಟರ್ ಜನರಲ್ ಹಾಜರಾಗಿದ್ದರು. ಎರಡು ವಾರದಲ್ಲಿ ಪ್ರತಿಕ್ರಿಯೆ ನೀಡುತ್ತೇವೆ ಎಂದಿದ್ದಾರೆ. ನೋಟಿಸ್ ಕೊಡಬೇಡಿ ಅಂತ ಕೂಡ ಕೇಳಿಕೊಂಡಿದ್ದಾರೆ. ಎಲ್ಲಿ ಕೇಂದ್ರಕ್ಕೆ ಮುಜುಗರ ಆಗುತ್ತೋ ಎಂಬ ಆತಂಕವಿದೆ. ಹಾಗಾಗಿ ನೋಟಿಸ್ ಕೊಡಬೇಡಿ ಎಂದು ಕೇಂದ್ರ ಕೇಳಿದೆ ಎಂದು ದೆಹಲಿಯಲ್ಲಿ ಸಚಿವ ಕೃಷ್ಣಬೈರೇಗೌಡ ಹೇಳಿದರು.

ಅಮಿತ್ ಶಾ, ನಿರ್ಮಲಾ ಸೀತಾರಾಮನ್ ಮಹಾನ್ ಸುಳ್ಳುಗಾರರು. ಕರ್ನಾಟಕ ತಡವಾಗಿ ಅರ್ಜಿ ಸಲ್ಲಿಸಿತು ಅಂತ ಅಮಿತ್ ಶಾ ಹೇಳಿದರು. ಆ ವಾದವನ್ನು ಅಮಿತ್ ಶಾ ಕೋರ್ಟ್ ಮುಂದೆ ಮಂಡಿಸಬೇಕು. ಅಮಿತ್ ಶಾ ರಾಜ್ಯಕ್ಕೆ ಬಂದು ಭಾಷಣ ಮಾಡುವುದಲ್ಲ ಅಫಿಡವಿಟ್ ಸಲ್ಲಿಸಲಿ. ಕೇಂದ್ರ ಸಚಿವ ಅಮಿತ್ ಶಾ ಸತ್ಯ ಒಪ್ಪಿಕೊಂಡರೆ ಜನರು ಕ್ಷಮಿಸುತ್ತಾರೆ. ಇದೊಂದು ಮಲತಾಯಿ ಧೋರಣೆ ಅನ್ನೋದು ಜನರಿಗೆ ಗೊತ್ತಾಗಿದೆ. ಇಕ್ಕಟ್ಟಿನ ಪರಿಸ್ಥಿತಿಯಲ್ಲಿ ಆರ್.ಅಶೋಕ್, ಬಿಜೆಪಿಯವರು ಇದ್ದಾರೆ. ವಿರೋಧ ಪಕ್ಷದ ನಾಯಕ ಅಶೋಕ್‌ಗೆ ಜ್ಞಾನದ ಕೊರತೆ ಇದೆ. ಹೀಗೆ ಮಾತನಾಡಿದರೆ ವಿಪಕ್ಷ ಸ್ಥಾನಕ್ಕೂ ಮರ್ಯಾದೆ ಇರಲ್ಲ ಎಂದು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ವಾಗ್ದಾಳಿ ಮಾಡಿದರು.

## ಅಯೋಧ್ಯೆಯ ನವಮಂದಿರದಲ್ಲಿ ಮೊದಲ ರಾಮನವಮಿ

**ಅಯೋಧ್ಯೆ:** ಅಯೋಧ್ಯೆಯಲ್ಲಿ ಪುನರ್ನಿರ್ಮಾಣವಾದ ಮಂದಿರದಲ್ಲಿ ಮೊದಲ ರಾಮನವಮಿ ಆಚರಣೆಯಾಗಲಿದ್ದು, ಆ ದಿನ ರಾಮಲಲ್ಲಾನ ವಿಗ್ರಹಕ್ಕೆ ಸೂರ್ಯತಿಲಕವಿಡಲು ಸಕಲ ತಯಾರಿಗಳು ನಡೆದಿವೆ. ರಾಮನವಮಿಯಂದು ಸೂರ್ಯನ ಕಿರಣವು ನೇರವಾಗಿ ರಾಮನ ಹಣೆಗೆ ಬಿದ್ದು ತಿಲಕದಂತೆ ಕಂಗೊಳಿಸಲು ತಯಾರಿ ಮಾಡಲಾಗುತ್ತಿದೆ. ಇದಕ್ಕೆ ಅನುಕೂಲವಾಗುವಂತೆ ಗರ್ಭಗುಡಿಯ ವಿನ್ಯಾಸ ಮಾಡಲಾಗಿದೆ. ದೇವಾಲಯದ ನಿರ್ಮಾಣ ಕಾರ್ಯ ಇನ್ನೂ ಪೂರ್ಣಗೊಂಡಿರದೆ, ಶಿಖರದ ಕಾಮಗಾರಿ ಇನ್ನೂ ಬಾಕಿ ಇದೆ. ಹೀಗಿರುವಾಗ ಸೂರ್ಯತಿಲಕವನ್ನು ನೋಡಲು ಭಕ್ತರು ಇನ್ನೂ ಕೆಲ ವರ್ಷಗಳ ಕಾಲ ಕಾಯಬೇಕಾಗಿ ಬರುವ ಕಾರಣ ಅದಕ್ಕಾಗಿ ಪರ್ಯಾಯ ವ್ಯವಸ್ಥೆ ಮಾಡಲಾಗುತ್ತಿದೆ. ಈ ನಿಟ್ಟಿನಲ್ಲಿ ರೂರ್ಕಿಯ ವಿಜ್ಞಾನಿಗಳು ಕೆಲಸ ಮಾಡುತ್ತಿದ್ದಾರೆ. ರಾಮನವಮಿಯಂದು ಲಲ್ಲಾನ ದರ್ಶನ ಪಡೆಯಲು ಬರುವ ಭಕ್ತರಿಗೆ 20 ಗಂಟೆಗಳ ಕಾಲ ಅವಕಾಶ ನೀಡಲಾಗುತ್ತದೆ.



## ಟೇಕಾಫ್ ಆಗದ ರಾಹುಲ್ ಗಾಂಧಿ ಹೆಲಿಕಾಪ್ಟರ್, ಮಧ್ಯ ಪ್ರದೇಶದಲ್ಲೇ ರಾತ್ರಿ ವಾಸ್ತವ್ಯ

**ಶಹದೋಲ್:** ಪ್ರತಿಕೂಲ ಹವಾಮಾನದ ಹಿನ್ನೆಲೆಯಲ್ಲಿ ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರ ಹೆಲಿಕಾಪ್ಟರ್ ಟೇಕಾಫ್ ಆಗದ ಕಾರಣ ಅವರು ಸೋಮವಾರ ರಾತ್ರಿ ಮಧ್ಯಪ್ರದೇಶದ ಶಹದೋಲ್ ಜಿಲ್ಲೆಯಲ್ಲಿ ತಂಗಲಿದ್ದಾರೆ ಎಂದು ಪಕ್ಷದ ನಾಯಕರೊಬ್ಬರು ತಿಳಿಸಿದ್ದಾರೆ. ರಾಹುಲ್ ಗಾಂಧಿಯವರು ಇಂದು ಲೋಕಸಭಾ ಚುನಾವಣಾ ಪ್ರಚಾರಕ್ಕಾಗಿ ಮಧ್ಯ ಪ್ರದೇಶಕ್ಕೆ ತೆರಳಿದ್ದು, ಏಪ್ರಿಲ್ 26 ರಂದು ಮತದಾನ ನಡೆಯಲಿರುವ ಮಂಡ್ಲಾ ಮತ್ತು ಶಹದೋಲ್‌ನಲ್ಲಿ ಎರಡು ರ್ಯಾಲಿಗಳನ್ನು ಉದ್ದೇಶಿಸಿ ಮಾತನಾಡಿದರು. ಶಹದೋಲ್‌ನಲ್ಲಿ ಕೆಟ್ಟ ಹವಾಮಾನದಿಂದಾಗಿ ಅವರ ಹೆಲಿಕಾಪ್ಟರ್ ಟೇಕಾಫ್ ಆಗಲಿಲ್ಲ. ರಾಹುಲ್ ಗಾಂಧಿ ಅವರು ಜಬಲ್‌ಪುರಕ್ಕೆ ತೆರಳಬೇಕಿತ್ತು ಮತ್ತು ಅಲ್ಲಿಂದ ದೆಹಲಿಗೆ ತೆರಳಬೇಕಿತ್ತು ಎಂದು ಮಧ್ಯ ಪ್ರದೇಶ ಕಾಂಗ್ರೆಸ್ ಮುಖ್ಯಸ್ಥ ಜಿತು ಪಟ್ವಾರಿ ಅವರು ಪಿಟಿಐಗೆ ತಿಳಿಸಿದ್ದಾರೆ. ಈಗ, ಅವರು ರಾತ್ರಿ ಶಹದೋಲ್‌ನಲ್ಲಿರುವ ಹೋಟೆಲ್‌ನಲ್ಲಿ ತಂಗುತ್ತಾರೆ ಮತ್ತು ಮಂಗಳವಾರ ಬೆಳಗ್ಗೆ 6 ಗಂಟೆಗೆ ಹೊರಡುತ್ತಾರೆ ಎಂದು ಪಟ್ವಾರಿ ಮಾಹಿತಿ ನೀಡಿದ್ದಾರೆ.



## ಇಸ್ರೇಲ್ ತೊರೆದ ಮೆಕ್ಡೊನಾಲ್ಡ್

ಇಸ್ರೇಲ್ ಸೈನಿಕರಿಗೆ ಉಚಿತ ಊಟ ಒದಗಿಸಿದ ಕಾರಣಕ್ಕೆ ಇಂಡೋನೇಷಿಯಾ, ಫ್ರಾನ್ಸ್ ಹಾಗು ಕೆಲ ಮುಸ್ಲಿಂ ಪ್ರಾಬಲ್ಯವಿರುವ ದೇಶಗಳಲ್ಲಿ ಬಾಯ್ಕಾಟ್ ಭೀತಿ ಭೀಕರವಾಗುತ್ತಿದ್ದಂತೆ ಮೆಕ್ಡೊನಾಲ್ಡ್ ಇಸ್ರೇಲ್ನಲ್ಲಿರುವ ತನ್ನ ರೆಸ್ಟೋರೆಂಟ್ಗಳನ್ನು ಮರುಖರೀದಿಸಲು ಮುಂದಾಗಿದೆ.

ಈಗಾಗಲೇ ಅಲೋನ್ಯಾಲ್ ಎಂಬ ಫ್ರಾಂಚೈಸಿಯಿಂದ 225 ರೆಸ್ಟೋರೆಂಟ್ಗಳನ್ನು ಹಿಂಪಡೆಯಲಾಗಿದೆ ಎಂದು ಮೆಕ್ಡೊನಾಲ್ಡ್ಸ್ ಮಾಹಿತಿ ನೀಡಿದೆ. ಕುವೈತ್, ಮಾಲೇಷಿಯಾ, ಪಾಕಿಸ್ತಾನಗಳಂತಹ ಮುಸ್ಲಿಂ ಪ್ರಾಬಲ್ಯವುಳ್ಳ ದೇಶಗಳು ಮೆಕ್ಡೊನಾಲ್ಡ್ಸ್‌ನಿಂದ ಅಂತರ ಕಾಯ್ದುಕೊಂಡು ಖರೀದಿಯನ್ನು ನಿಲ್ಲಿಸಿದ್ದವು. ಈ ಬಹಿಷ್ಕಾರದಿಂದ ಮೆಕ್ಡೊನಾಲ್ಡ್ಸ್‌ಗೆ ಭಾರೀ ನಷ್ಟ ಉಂಟಾಗಿತ್ತು. ಮೆಕ್ಡೊನಾಲ್ಡ್ಸ್ ಯುದ್ಧಗ್ರಸ್ತ ಇಸ್ರೇಲ್ನಲ್ಲಿ ಸೈನಿಕರು, ಪೊಲೀಸರು, ಆಸ್ಪತ್ರೆಗಳು, ಸ್ಥಳೀಯರು ಹಾಗು ರಕ್ಷಣಾ ಪಡೆಗಳಿಗೆ ಉಚಿತ ಆಹಾರವನ್ನು ಒದಗಿಸಿತ್ತು.

## ವಿಚ್ಛೇದನಕ್ಕೆ ಅರ್ಜಿ ಸಲ್ಲಿಸಿದ ನಟ ಧನುಷ್ - ಐಶ್ವರ್ಯಾ

**ಚೆನ್ನೈ:** ಕಳೆದ ಕೆಲ ವರ್ಷಗಳಿಂದ ಪ್ರತ್ಯೇಕವಾಗಿ ವಾಸಿಸುತ್ತಿದ್ದ ನಟ ಧನುಷ್ ಹಾಗೂ ಐಶ್ವರ್ಯಾ ರಜನಿಕಾಂತ್ ಅವರು ವಿಚ್ಛೇದನಕ್ಕಾಗಿ ಅರ್ಜಿ ಸಲ್ಲಿಸಿದ್ದಾರೆ ಎಂದು ಮೂಲಗಳು ತಿಳಿಸಿದೆ. ನಿರ್ದೇಶಕಿ ಐಶ್ವರ್ಯಾ ರಜನಿಕಾಂತ್ ಮತ್ತು ನಟ-ನಿರ್ದೇಶಕ ಧನುಷ್ ಇತ್ತೀಚೆಗೆ ಚೆನ್ನೈನ ಕೌಟುಂಬಿಕ ನ್ಯಾಯಾಲಯದಲ್ಲಿ ವಿಚ್ಛೇದನಕ್ಕಾಗಿ ಅರ್ಜಿ ಸಲ್ಲಿಸಿದ್ದಾರೆ ಎಂದು ವರದಿ ತಿಳಿಸಿದೆ. ಪರಸ್ಪರ ಒಪ್ಪಿಗೆಯಿಂದ ವಿಚ್ಛೇದನ - ಸೆಕ್ಷನ್ 13 ಬಿ ಅಡಿಯಲ್ಲಿ ಅವರು ಅರ್ಜಿ ಸಲ್ಲಿಸಿದ್ದಾರೆ ಎಂದು ದಂಪತಿಗಳ ನಿಕಟ ಮೂಲಗಳು ಹೇಳಿರುವುದಾಗಿ ವರದಿಯಾಗಿದೆ. 2022ರ ಜನವರಿಯಲ್ಲಿ ಧನುಷ್ - ಐಶ್ವರ್ಯಾ ತಾವು ದೂರವಾಗುವುದಾಗಿ ಹೇಳಿದ್ದರು. 18 ವರ್ಷಗಳ ದಾಂಪತ್ಯ ಜೀವನದಿಂದ ಪ್ರತ್ಯೇಕವಾಗುವುದಾಗಿ ಸಾಮಾಜಿಕ ಜಾಲತಾಣದಲ್ಲಿ ವಿಚಾರವನ್ನು ಹಂಚಿಕೊಂಡಿದ್ದರು. ಇದೀಗ ಸುಮಾರು ಒಂದೂವರೆ ವರ್ಷದ ನಂತರ ಇಬ್ಬರೂ ಪರಸ್ಪರ ಒಪ್ಪಿಗೆಯಿಂದ ವಿಚ್ಛೇದನಕ್ಕೆ ಅರ್ಜಿ ಸಲ್ಲಿಸಿದ್ದಾರೆ. ಶೀಘ್ರದಲ್ಲೇ ಅವರ ಪ್ರಕರಣದ ವಿಚಾರಣೆ ನಡೆಯಲಿದೆ .

## ಮರಣದಂಡನೆಗೂ ಮುನ್ನ ಕೈದಿಯ ಕೊನೆ ಆಸೆ ಕೇಳಿ ಶಾಕ್ ಆದ ಅಧಿಕಾರಿಗಳು..!

ಚಲನಚಿತ್ರಗಳಲ್ಲಿ ನೀವು ನೋಡಿರುತ್ತೀರಿ, ಮರಣದಂಡನೆ ಶಿಕ್ಷೆಗೆ ಗುರಿಯಾಗಿರುವ ಕೈದಿಗಳನ್ನು ಗಲ್ಲಿಗೇರಿಸುವ ಮೊದಲು ಕೊನೆಯ ಆಸೆಯನ್ನು ಕೇಳುತ್ತಾರೆ. ಮತ್ತು ಅವರು ಅದನ್ನು ಪೂರೈಸುತ್ತಾರೆ ಸಾಮಾನ್ಯವಾಗಿ ಭೂಮಿಯ ಮೇಲಿನ ಅದೇ ದಿನವು ಅವರ ಕೊನೆಯ ದಿನವಾಗಿರುತ್ತದೆ. ಆದರೆ ಇತ್ತೀಚೆಗೆ, ಯುಎಸ್ ಜೈಲಿನಲ್ಲಿ (ಅಮೆರಿಕ) ಪ್ರಕರಣವೊಂದು ಅನಿರೀಕ್ಷಿತ ತಿರುವು ಪಡೆದುಕೊಂಡಿತು. ಯುನೈಟೆಡ್ ಸ್ಟೇಟ್ಸ್ ನ ಮಾಜಿ ಗ್ಯಾಂಗ್ ಸದಸ್ಯ ಮೈಕೆಲ್ ಡೆವೇನ್ ಸ್ಮಿತ್ ವಿರುದ್ಧ ಡಬಲ್ ಮರ್ಡರ್ ಆರೋಪವಿದೆ. 2002ರಲ್ಲಿ ಮಾದಕ ದ್ರವ್ಯದ ಅಮಲಿನಲ್ಲಿ ಇಬ್ಬರು ಮಹಿಳೆಯರನ್ನು ಗುಂಡಿಕ್ಕಿ ಕೊಂದು ಕ್ಷಮಿಸಲಾಗದ ಅಪರಾಧ ಎಸಗಿದ್ದ. ಎರಡು ದಶಕಗಳ ಕಾಲ ಜೈಲಿನಲ್ಲಿ ಕಳೆದ ನಂತರ, ಏಪ್ರಿಲ್ 4 ರಂದು ಸ್ಥಳೀಯ ಸಮಯ ಬೆಳಿಗ್ಗೆ 10:20 ಕ್ಕೆ ಅವರಿಗೆ ಮಾರಣಾಂತಿಕ ಚುಚ್ಚುಮದ್ದನ್ನು ನೀಡಲಾಯಿತು. ಮರಣದಂಡನೆಯ ಸಮಯದಲ್ಲಿ, ಮೈಕೆಲ್ ಗೆ ತನ್ನ ಕೊನೆಯ ಊಟವನ್ನು ಆಯ್ಕೆ ಮಾಡುವ ಅವಕಾಶವನ್ನು ನೀಡಲಾಯಿತು. ಅನೇಕ ಕೈದಿಗಳು ಸಂತೋಷದಾಯಕ ಪಾಕವಿಧಾನಗಳನ್ನು ಆರಿಸಿಕೊಂಡರು, ಆದರೆ ಮೈಕೆಲ್ ಎಲ್ಲರನ್ನೂ ಆಶ್ಚರ್ಯಗೊಳಿಸಿದರು. ಮೈಕೆಲ್ ಅದ್ದೂರಿ ಭೋಜನವನ್ನು ಕೇಳುವ ಬದಲು, ಜೈಲಿನ ಕ್ಯಾಂಟೀನ್ ನ ಉಳಿದ ಆಹಾರವನ್ನು ಕೇಳಿದನು. ಇದರಿಂದ ಜೈಲಿನ ಅಧಿಕಾರಿಗಳು ಕೂಡ ಶಾಕ್ ಆಗಿದ್ದಾರೆ.ಹಿಂದಿನ ಸಂದರ್ಶನವೊಂದರಲ್ಲಿ, ಅವರು ತಮ್ಮ ಸ್ವಂತ ನಿರಪರಾಧಿತ್ವದ ಬಗ್ಗೆ ವಿಶ್ವಾಸವನ್ನು ವ್ಯಕ್ತಪಡಿಸಿದರು, ಅವರು ಮಾಡದ ಅಪರಾಧಕ್ಕಾಗಿ ಸಾಯಲು ನಿರಾಕರಿಸಿದರು. ಆದರೆ, ಅವರು ತಪ್ಪಿತಸ್ಥರು ಎಂದು ಅಧಿಕಾರಿಗಳು ಸ್ಪಷ್ಟವಾಗಿ ಹೇಳುತ್ತಿದ್ದಾರೆ. ಆದಾರೆ, ಕೈದಿ ತನ್ನ ಕೊನೆಯ ಆಸೆಯನ್ನು ಕೇಳಿದಾಗ ತೆಗೆದುಕೊಂಡ ಈ ನಿರ್ಧಾರವು ಜೈಲು ಅಧಿಕಾರಿಗಳನ್ನು ಗೊಂದಲಕ್ಕೀಡು ಮಾಡಿದೆ. ಅವರು ಅಳಿದುಳಿದ ಆಹಾರವನ್ನು ಏಕೆ ಬಯಸಿದ್ದರು ಎಂದು ತಿಳಿದಿಲ್ಲ.

## ಪಾಕಿಸ್ತಾನದಲ್ಲಿ ನುಗ್ಗಿ ಭಯೋತ್ಪಾದಕರನ್ನು ಕೊಂದರೆ ಭಾರತಕ್ಕೆ ಹಾನಿ

ಇಸ್ಲಾಮಾಬಾದ (ಪಾಕಿಸ್ತಾನ) - ಭಾರತದ ರಕ್ಷಣಾ ಸಚಿವ ರಾಜನಾಥ ಸಿಂಹ ಅವರು ಏಪ್ರಿಲ್ 6 ರಂದು ಭಾರತವು ಪಾಕಿಸ್ತಾನದಲ್ಲಿರುವ ಭಯೋತ್ಪಾದಕರನ್ನು ಹುಡುಕಿ ಕೊಲ್ಲುವುದು ಎಂದು ಹೇಳಿಕೆ ನೀಡಿದ್ದರು. ಅವರ ಈ ಹೇಳಿಕೆಯಿಂದ ಪಾಕಿಸ್ತಾನಿ ಮಾಧ್ಯಮಗಳಲ್ಲಿ ಚರ್ಚೆ ಶುರುವಾಗಿದೆ. ಪಾಕಿಸ್ತಾನದ ವಿದೇಶಾಂಗ ವ್ಯವಹಾರ ತಜ್ಞ ಸಾಜಿದ್ ತರಾರ ಈ ಬಗ್ಗೆ ಮಹತ್ವಪೂರ್ಣ ಹೇಳಿಕೆ ನೀಡಿದ್ದಾರೆ. ಅವರು ಮಾತನಾಡಿ, ಪಾಕ್ ಗೆ ನುಗ್ಗಿ ಭಯೋತ್ಪಾದಕರನ್ನು ಕೊಂದರೆ ಭಾರತಕ್ಕೇ ಹಾನಿಯಾಗಲಿದೆ. ಪಾಕಿಸ್ತಾನಕ್ಕೆ ಏನೂ ಆಗುವುದಿಲ್ಲ. ಪಾಕಿಸ್ತಾನದ ಬಳಿ ನೀವು ನಷ್ಟ ಮಾಡುವಂತಹದ್ದು ಏನಿದೆ? ಭಾರತಕ್ಕೆ ವಿಶ್ವಸಂಸ್ಥೆ ಭದ್ರತಾ ಮಂಡಳಿಯಲ್ಲಿ ಸದಸ್ಯತ್ವ ಬೇಕಾಗಿದೆ. ಹಾಗಾಗಿ ಇಂತಹ ಕೃತ್ಯಗಳಿಂದ ನಿಮ್ಮದೇ ಹಾನಿಯಾಗುವುದು, ಎಂದರು. ಸಾಜಿದ್ ತರಾರ ತಮ್ಮ ಮಾತು ಮುಂದುವರಿಸಿ, ಭಾರತವು ಕಾಶ್ಮೀರದ ಅಭಿವೃದ್ಧಿಯ ಸಂಪೂರ್ಣ ಗುತ್ತಿಗೆಯನ್ನು ಸಂಯುಕ್ತ ಅರಬ್ ಎಮಿರಾಟ್ಸ್‌ಗೆ(ಯುಎಇ) ನೀಡಿದೆ. ಪಾಕಿಸ್ತಾನ ಸಂಯುಕ್ತ ಅರಬ ಎಮಿರಾಟ್ಸ ಬಳಿ ಹಣವನ್ನು ಬೇಡುತ್ತಿದೆ. ಈಗ ನಮ್ಮ ಪ್ರಧಾನಿ ಶಾಹಬಾಜ ಶರೀಫ ಸೌದಿ ಅರೇಬಿಯಾಕ್ಕೆ ಹೋಗಿದ್ದರೂ ಸಹ ಜಗತ್ತಿನ ರಾಷ್ಟ್ರಗಳು ನಮ್ಮೊಂದಿಗೆ ಸಂಬಂಧ ಇಟ್ಟುಕೊಳ್ಳಲು ಬಯಸುತ್ತಿಲ್ಲ. ಪಾಕಿಸ್ತಾನದ ಪ್ರಧಾನಮಂತ್ರಿ ಅಥವಾ ಸೇನಾ ಮುಖ್ಯಸ್ಥರು ತಮ್ಮ ಹುದ್ದೆಯನ್ನು ವಹಿಸಿಕೊಂಡ ಬಳಿಕ ಅವರ ಮೊದಲ ಭೇಟಿ ಸೌದಿ ಅರೇಬಿಯಾಕ್ಕೆ ಆಗಿರುತ್ತದೆ. ಇದು ಇಲ್ಲಿನ ಸಂಪ್ರದಾಯವಾಗಿದೆ. ಆದರೆ ಈಗ ಕಾಲ ಬದಲಾಗಿದೆ. ಸೌದಿ ಅರೇಬಿಯಾ ಈಗ ಪಾಕಿಸ್ತಾನಕ್ಕಿಂತ ಭಾರತದೊಂದಿಗೆ ಉತ್ತಮ ಸಂಬಂಧವನ್ನು ಹೊಂದಿದೆ; ಕಾರಣ ಅದು ಭಾರತವನ್ನು ಉದಯೋನ್ಮುಖ ಶಕ್ತಿಯಾಗಿ ನೋಡುತ್ತದೆ.

## ನೆಲ್ಸನ್ ಮಂಡೇಲಾಗೆ ಹೋಲಿಸಿಕೊಂಡ ಟ್ರಂಪ್

ಅಮೆರಿಕದ ಮಾಜಿ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಮತ್ತೊಮ್ಮೆ ತನ್ನನ್ನು ದಕ್ಷಿಣ ಆಫ್ರಿಕಾದ ವರ್ಣಭೇದ ನೀತಿ ವಿರೋಧಿ ಮುಖಂಡ ನೆಲ್ಸನ್ ಮಂಡೇಲಾಗೆ ಹೋಲಿಸಿಕೊಂಡಿದ್ದಾರೆ. 77 ವರ್ಷದ ಟ್ರಂಪ್ ವಿರುದ್ಧ 4 ವಿಭಿನ್ನ ಕ್ರಿಮಿನಲ್ ಪ್ರಕರಣಗಳಲ್ಲಿ ದೋಷಾರೋಪಣೆ ಮಾಡಲಾಗಿದ್ದು ಈ ಪ್ರಕರಣಗಳಲ್ಲಿ ಟ್ರಂಪ್ಗೆ ಜೈಲುಶಿಕ್ಷೆಯಾಗುವ ಸಾಧ್ಯತೆಯಿದೆ. ಇದರಲ್ಲಿ ಅಶ್ಲೀಲ ಚಿತ್ರಗಳ ನಟಿಯ ಜತೆಗಿನ ಸಂಬಂಧವನ್ನು ಗುಟ್ಟಾಗಿ ಇಡಲು ಆಕೆಗೆ ಹಣ ಪಾವತಿಸಿದ ಪ್ರಕರಣವೂ ಸೇರಿದ್ದು ಇದರ ವಿಚಾರಣೆ ಎಪ್ರಿಲ್ 15ರಿಂದ ಆರಂಭವಾಗಲಿದೆ. ಈ ಪ್ರಕರಣದ ವಿಚಾರಣೆ ಮುಗಿಯುವವರೆಗೆ ಪ್ರಕರಣದ ಬಗ್ಗೆ ಸಾರ್ವಜನಿಕ ಹೇಳಿಕೆ ನೀಡದಂತೆ ಟ್ರಂಪ್ಗೆ ನ್ಯಾಯಾಧೀಶ ಜುವಾನ್ ಮರ್ಚನ್ ಸೂಚಿಸಿದ್ದಾರೆ. ಈ ಬಗ್ಗೆ ಪ್ರತಿಕ್ರಿಯಿಸಿದ ಟ್ರಂಪ್, ನ್ಯಾಯಾಧೀಶ ಮರ್ಚನ್ ಅವರು ಅಭಿವ್ಯಕ್ತಿ ಸ್ವಾತಂತ್ರ್ಯ, ವಾಕ್ಸ್ವಾತಂತ್ರ್ಯ ಮತ್ತು ಕಾನೂನನ್ನು ಉಲ್ಲಂಘಿಸಿದ್ದಾರೆ ಎಂದು ಆರೋಪಿಸಿದ್ದಾರೆ. 'ಈ ಪಕ್ಷಪಾತದ ಅಧಿಕಾರಿ ಮುಕ್ತ ಮತ್ತು ಸ್ಪಷ್ಟವಾದ ಸತ್ಯವನ್ನು ಮಾತನಾಡಿದ್ದಕ್ಕೆ ನನ್ನನ್ನು ಜೈಲಿನಲ್ಲಿ ಇರಿಸಲು ಬಯಸಿದರೆ ನಾನು ಸಂತೋಷದಿಂದ ಆಧುನಿಕ ಯುಗದ ನೆಲ್ಸನ್ ಮಂಡೇಲಾ ಆಗುತ್ತೇನೆ. ಅದು ನನ್ನ ದೊಡ್ಡ ಗೌರವವಾಗಲಿದೆ' ಎಂದು ತನ್ನ ಸಾಮಾಜಿಕ ಮಾಧ್ಯಮ ಟ್ರುಥ್ ಸೋಶಿಯಲ್ನಲ್ಲಿ ಪೋಸ್ಟ್ ಮಾಡಿದ್ದಾರೆ. ಈ ಹಿಂದೆಯೂ ಟ್ರಂಪ್ ತನ್ನನ್ನು ಮಂಡೇಲಾ ಹಾಗೂ ಯೇಸು ಕ್ರಿಸ್ತರ ಜತೆ ಹೋಲಿಕೆ ಮಾಡಿಕೊಂಡಿದ್ದರು. ಟ್ರಂಪ್ ಹೇಳಿಕೆಯನ್ನು ಅಮೆರಿಕ ಅಧ್ಯಕ್ಷ ಜೋ ಬೈಡನ್ ಮತ್ತವರ ಚುನಾವಣಾ ಪ್ರಚಾರ ತಂಡ ಟೀಕಿಸಿದೆ.

## ಸಿಎಎ ಅನುಷ್ಠಾನದಿಂದ ಯಾರೂ ಪೌರತ್ವ ಕಳೆದುಕೊಳ್ಳುದಿಲ್ಲ: ರಾಜನಾಥ ಸಿಂಗ್

**ಚೆನ್ನೈ:** ಪೌರತ್ವ ತಿದ್ದುಪಡಿ ಕಾಯ್ದೆ(ಸಿಎಎ) ಅನುಷ್ಠಾನದಿಂದ ಯಾವೊಬ್ಬ ಭಾರತೀಯನು ಪೌರತ್ವ ಕಳೆದುಕೊಳ್ಳುವುದಿಲ್ಲ. ಈ ವಿಚಾರದಲ್ಲಿ ವಿರೋಧ ಪಕ್ಷಗಳು ಗೊಂದಲ ಮೂಡಿಸುತ್ತಿವೆ ಎಂದು ರಕ್ಷಣಾ ಸಚಿವ ರಾಜನಾಥ ಸಿಂಗ್ ಹೇಳಿದರು.



ಪಕ್ಷದ ಅಭ್ಯರ್ಥಿ ಪರ ತಮಿಳುನಾಡಿನ ನಾಮಕ್ಕಲ್ ಲೋಕಸಭಾಕ್ಷೇತ್ರದಲ್ಲಿ ರೋಡ್ ಶೋ ನಡೆಸಿದ ಅವರು, ರಾಮಮಂದಿರ ಸೇರಿದಂತೆ ಕಳೆದ ಚುನಾವಣೆಯಲ್ಲಿ ಜನರಿಗೆ ನೀಡಿದ ಭರವಸೆಗಳನ್ನು ಬಿಜೆಪಿ ಜಾರಿಗೆ ತಂದಿದೆ ಎಂದರು. 'ಸಿಎಎ ಜಾರಿಗೆ ತರುತ್ತೇವೆ ಎಂದು ಭರವಸೆ ನೀಡಿದ್ದೆವು. ಇದೀಗ ಜಾರಿ ಮಾಡಿದ್ದೇವೆ. ಯಾವುದೇ ಧರ್ಮದ ಹೆಣ್ಣು ಮಗಳು ನಮ್ಮ ಮನೆಯ ಹೆಣ್ಣು ಮಗಳಿದ್ದಂತೆ. ಅವಳಿಗಾಗುವ ನೋವು ನಮಗೂ ನೋವುಂಟು ಮಾಡುತ್ತದೆ. ಅದಕ್ಕಾಗಿಯೇ ತ್ರಿವಳಿ ತಲಾಖ್ ಅನ್ನು ರದ್ದುಗೊಳಿಸಿದೆವು. ಪೌರತ್ವ ಕಾಯ್ದೆ ಕುರಿತಂತೆ ಕಾಂಗ್ರೆಸ್-ಡಿಎಂಕೆ ಗೊಂದಲ ಸೃಷ್ಟಿಸುತ್ತಿವೆ. ಸಿಎಎಯಿಂದ ದೇಶದ ಪ್ರಜೆಯೊಬ್ಬ ಆತ ಹಿಂದು, ಮುಸ್ಲಿಂ, ಕ್ರೈಸ್ತ, ಜೈನ ಯಾವುದೇ ಆಗಿರಲಿ, ಪೌರತ್ವ ಕಳೆದುಕೊಳ್ಳುವುದಿಲ್ಲ. ಆದರೆ ಡಿಎಂಕೆ ಮತ್ತು ಕಾಂಗ್ರೆಸ್ ಈ ವಿಚಾರದಲ್ಲಿ ಗೊಂದಲ ಸೃಷ್ಟಿಸುತ್ತಿದೆ ಅಷ್ಟೆ. 'ಭಾರತವು ಇನ್ನು ಮುಂದೆ ದುರ್ಬಲ ರಾಷ್ಟ್ರವಲ್ಲ. ದೇಶದ ಸೇನೆ, ವಾಯುಪಡೆ ಮತ್ತು ನೌಕಾಪಡೆಯ ಮೇಲೆ ನಮಗೆ ಬಲವಾದ ವಿಶ್ವಾಸವಿದೆ. ಯಾರಾದರೂ ಕಣ್ಣು ರೆಪ್ಪೆ ಅಲ್ಲಾಡಿಸಿದರೆ, ನಮ್ಮ ಸೇನೆಯು ಅವರಿಗೆ ತಕ್ಕ ಉತ್ತರವನ್ನು ನೀಡಲು ಸಿದ್ಧವಾಗಿದೆ' ಎಂದು ಹೇಳಿದರು.

## ಟಿಡಿಪಿ ಕಚೇರಿ ಬೆಂಕಿಗಾಹುತಿ

ಆಂಧ್ರಪ್ರಧೇಶ: ತೆಲುಗು ದೇಶಂ ಪಕ್ಷದ (ಟಿಡಿಪಿ) ಕಚೇರಿ ಹೊತ್ತಿ ಉರಿದು ಭಸ್ಮವಾಗಿದೆ. ಈ ಆಂಧ್ರಪ್ರದೇಶದಲ್ಲಿ ನಡೆದಿದೆ.ಆಡಳಿತಾರೂಢ ವೈಎಸ್‌ಆರ್ ಕಾಂಗ್ರೆಸ್ ಪಕ್ಷ ಈ ರೀತಿಯಾಗಿ ಸೇಡು ತೀರಿಸಿಕೊಂಡಿದೆ ಎಂದು ಆರೋಪಿಸಿದೆ.

ಟಿಡಿಪಿ ಮುಖ್ಯಸ್ಥ ಮತ್ತು ಆಂಧ್ರಪ್ರದೇಶದ ಮಾಜಿ ಮುಖ್ಯಮಂತ್ರಿ ಎನ್ ಚಂದ್ರಬಾಬು ನಾಯ್ಡು ಅವರು ಪೆಡಕುರಪಾಡುದಲ್ಲಿ ಸಾರ್ವಜನಿಕ ಸಭೆಯನ್ನು ಮುಗಿಸಿದ ಕೂಡಲೇ ಈ ಘಟನೆ ಸಂಭವಿಸಿದೆ. ಕಚೇರಿ ಸಂಪೂರ್ಣ ಹೊತ್ತಿ ಉರಿಯುತ್ತಿರುವ ವಿಡಿಯೋಗಳು ವೈರಲ್ ಆಗಿವೆ. ಟಿಡಿಪಿ ಮುಖಂಡ ಮತ್ತು ಪೆದಕೂರಪಾಡು ವಿಧಾನಸಭಾ ಕ್ಷೇತ್ರದ ಉಸ್ತುವಾರಿ ಭಾಷ್ಯಂ ಪ್ರವೀಣ್, ಘಟನೆಯ ಮಾಹಿತಿ ತಿಳಿದು ಸ್ಥಳಕ್ಕೆ ಭೇಟಿ ನೀಡಿ ಈ ಕೃತ್ಯಕ್ಕೆ ಕಾರಣವಾದವರನ್ನು ಕೂಡಲೆ ಬಂಧಿಸಬೇಕೆಂದು ಆಗ್ರಹಿಸಿದ್ದಾರೆ.ರಾಜಕೀಯ ವಿಧ್ವಂಸಕ ಕೃತ್ಯದ ವಿರುದ್ಧ ಔಪಚಾರಿಕ ದೂರು ದಾಖಲಿಸಲಾಗುವುದು ಎಂದು ಭಾಷ್ಯಂ ಪ್ರವೀಣ್ ತಿಳಿಸಿದ್ದಾರೆ.



## ಮಾಲ್ಡೀವ್ಸ್ ಸಚಿವೆಯಿಂದ ಭಾರತದ ಧ್ವಜಕ್ಕೆ ಅವಮಾನ



ಮಾಲ್ಡೀವ್ಸ್: ಈ ಹಿಂದೆ ಸೋಷಿಯಲ್ ಮೀಡಿಯಾದಲ್ಲಿ ಭಾರತದ ಬಗ್ಗೆ, ಪ್ರಧಾನಿ ಮೋದಿ ಬಗ್ಗೆ ಅವಹೇಳನ ಮಾಡಿದ್ದ ಮಾಲ್ಡೀವ್ಸ್ ಸಚಿವೆ ಮರಿಯಂ ಶಿಯೂನ ಈಗ ತ್ರಿವರ್ಣ ಧ್ವಜಕ್ಕೆ ಅವಮಾನ ಮಾಡಿದ್ದಾರೆ.

ಮರಿಯಂ ಸೋಷಿಯಲ್ ಮೀಡಿಯಾದಲ್ಲಿ ಭಾರತದ ತ್ರಿವರ್ಣ ಧ್ವಜಕ್ಕೆ ಅವಮಾನ ಮಾಡುವಂತಹ ಪೋಸ್ಟ್ ಒಂದನ್ನು ಹಂಚಿಕೊಂಡಿದ್ದರು. ಈ ಹಿಂದೆ ಭಾರತದ ಬಗ್ಗೆ ಅವಹೇಳನ ಮಾಡಿದ್ದರಿಂದ ಉಭಯ ದೇಶಗಳ ನಡುವಿನ ಸಂಬಂಧವೇ ಹಳಸಿಹೋಗಿತ್ತು. ಇದೀಗ ಮತ್ತೆ ಭಾರತದ ತ್ರಿವರ್ಣ ಧ್ವಜ ಅವಹೇಳನ ಮಾಡಿದ ಪೋಸ್ಟ್ ಶೇರ್ ಮಾಡಿದ್ದಕ್ಕೆ ಎಲ್ಲರ ಕೆಂಗಣ್ಣಿಗೆ ಗುರಿಯಾಗಿದ್ದಾರೆ. ತಮ್ಮ ಪೋಸ್ಟ್ ಬಗ್ಗೆ ಆಕ್ರೋಶ ವ್ಯಕ್ತವಾಗುತ್ತಿದ್ದಂತೇ ಸೋಷಿಯಲ್ ಮೀಡಿಯಾದಿಂದ ಪೋಸ್ಟ್ ಡಿಲೀಟ್ ಮಾಡಿದ್ದಲ್ಲದೆ, ತಮ್ಮಿಂದಾಗಿ ನೋವಾಗಿದ್ದರೆ ಕ್ಷಮೆಯಿರಲಿ ಎಂದು ಕ್ಷಮೆ ಕೇಳಿದ್ದಾರೆ.

ನಾನು ಬಳಸಿದ ಚಿತ್ರ, ಭಾರತೀಯ ಧ್ವಜವನ್ನು ಹೋಲುತ್ತದೆ ಎಂದು ನಂತರ ನನಗೆ ತಿಳಿಯಿತು. ಇದು ಉದ್ದೇಶಪೂರ್ವಕವಾಗಿ ನಡೆದಿದ್ದಲ್ಲ. ಹೀಗಾಗಿ ಕ್ಷಮೆ ಕೋರುತ್ತಿದ್ದೇನೆ ಎಂದಿದ್ದಾರೆ.

ಸಂಜೆ ಮುಗಿಲು

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054



# ತಾಯಿಯಾದ ಅದಿತಿ ಪ್ರಭುದೇವ; ಹೆಣ್ಣು ಮಗುವಿನ ಫೋಟೋ ಹಂಚಿಕೊಂಡ ನಟಿ



ಕನ್ನಡ ಚಿತ್ರರಂಗದ ಖ್ಯಾತ ನಟಿ ಅದಿತಿ ಪ್ರಭುದೇವ ಅವರು ತಾಯಿಯಾಗಿದ್ದಾರೆ. ಹೆಣ್ಣು ಮಗುವಿಗೆ ಅವರು ಜನ್ಮ ನೀಡಿದ್ದಾರೆ. ಈ ವಿಚಾರವನ್ನು ಸ್ವತಃ ಅತಿದಿ ಪ್ರಭುದೇವ ಅವರು ಸೋಶಿಯಲ್ ಮೀಡಿಯಾದಲ್ಲಿ ಹಂಚಿಕೊಂಡಿದ್ದಾರೆ. ಅವರಿಗೆ ಎಲ್ಲರೂ ಅಭಿನಂದನೆ ಸಲ್ಲಿಸುತ್ತಿದ್ದಾರೆ. ಹೆಣ್ಣು ಮಗುವಿನ ಫೋಟೋವನ್ನು ಅದಿತಿ ಅವರು ಶೇರ್ ಮಾಡಿಕೊಂಡಿದ್ದಾರೆ. ಆದರೆ ಇದರಲ್ಲಿ ಅವರು ಮಗುವಿನ ಮುಖ ತೋರಿಸಿಲ್ಲ. ಯಶಸ್ ಪಾಟ್ಲಾ ಹಾಗೂ ಅದಿತಿ ಪ್ರಭುದೇವ ದಂಪತಿಗೆ ಅಭಿಮಾನಿಗಳು, ಆಪ್ತರು, ಸೆಲೆಬ್ರಿಟಿಗಳು ಶುಭಾಶಯ ಕೋರುತ್ತಿದ್ದಾರೆ.

2022ರ ನವೆಂಬರ್ ನಲ್ಲಿ ಅದಿತಿ ಪ್ರಭುದೇವ ಹಾಗೂ ಯಶಸ್ ಪಾಟ್ಲಾ ಅವರ ಮದುವೆ ನೆರವೇರಿತ್ತು. 2024ರ ಜನವರಿ 1ರಂದು ಅದಿತಿ ಪ್ರಭುದೇವ ಅವರು ಸಿಹಿ ಸುದ್ದಿ ನೀಡಿದ್ದರು. ತಾವು ತಾಯಿ ಆಗುತ್ತಿರುವ ವಿಷಯವನ್ನು ಅವರು ಬಹಿರಂಗ ಪಡಿಸಿದ್ದರು. ಈಗ ಅವರು ಹೆಣ್ಣು ಮಗುವಿನ ಆಗಮನದಿಂದ ಖುಷಿ ಆಗಿದ್ದಾರೆ. ಅವರ ಬಾಳಿನಲ್ಲಿ ಹೊಸ ಅಧ್ಯಾಯ ಪ್ರಾರಂಭ ಆದಂತಾಗಿದೆ. ಅದಿತಿ ಪ್ರಭುದೇವ ಅವರಿಗೆ ಏಪ್ರಿಲ್ 4ರಂದು ಹೆಣ್ಣು ಮಗು ಜನಿಸಿದೆ. '4.4.2024 ನಮ್ಮನೆ ಮಹಾಲಕ್ಷ್ಮಿ. ಎಲ್ಲರಿಗೂ ಯುಗಾದಿ ಹಬ್ಬದ ಶುಭಾಶಯಗಳು' ಎಂಬ ಕ್ಯಾಪ್ಷನ್ ನೊಂದಿಗೆ ಅದಿತಿ ಪ್ರಭುದೇವ ಅವರು ಖುಷಿಯ ಸಮಾಚಾರ ತಿಳಿಸಿದ್ದಾರೆ. 'ನನ್ನ ಜೀವದ ಗೆಳತಿ ಅದಿತಿ. ನಿನ್ನ ಹಾಗೆಯೇ ನಮ್ಮ ಮಗಳು' ಎಂದು ಯಶಸ್ ಪಾಟ್ಲಾ ಅವರು ಈ ಪೋಸ್ಟ್ ಗೆ ಕಮೆಂಟ್ ಮಾಡಿದ್ದಾರೆ.

ಅದಿತಿ ಪ್ರಭುದೇವ ಅವರು ಚಿತ್ರರಂಗಕ್ಕೆ ಕಾಲಿಟ್ಟು ಕೆಲವು ವರ್ಷಗಳು ಕಳೆದಿವೆ. 2017ರಲ್ಲಿ ಬಂದ 'ಧೈರ್ಯ' ಅವರು ನಟಿಸಿದ ಮೊದಲ ಸಿನಿಮಾ. ಆ ಬಳಿಕ ಸಾಲು ಸಾಲು ಸಿನಿಮಾಗಳಲ್ಲಿ ಅವರು ನಟಿಸಿದರು. ಇತ್ತೀಚೆಗೆ ಅವರು ಸಂಸಾರದ ಕಡೆಗೆ ಹೆಚ್ಚು ಗಮನ ಹರಿಸಿದ್ದಾರೆ. ಈಗ ಮಗುವಿನ ಆರೈಕೆಯಲ್ಲಿ ತೊಡಗಿಕೊಂಡಿದ್ದಾರೆ. ಮತ್ತೆ ಅವರು ಚಿತ್ರರಂಗದಲ್ಲಿ ಆ ಯಕ್ಟೀವ್ ಆಗಲಿ ಎಂದು ಅಭಿಮಾನಿಗಳು ಬಯಸಿದ್ದಾರೆ.

# 51 ಟೇಕ್ ತೆಗೆದುಕೊಂಡ ಅಲ್ಲು ಅರ್ಜುನ್



ನಟ ಅಲ್ಲು ಅರ್ಜುನ್ ಅವರ ಅಭಿಮಾನಿಗಳು 'ಪುಷ್ಪ 2' ಸಿನಿಮಾದ ಮೇಲೆ ಭಾರಿ ನಿರೀಕ್ಷೆ ಇಟ್ಟುಕೊಂಡಿದ್ದಾರೆ. ಈ ಸಿನಿಮಾಗೆ ಸುಕುಮಾರ್ ನಿರ್ದೇಶನ ಮಾಡುತ್ತಿದ್ದು, ಮೈತ್ರಿ ಮೂವೀ ಮೇಕರ್ಸ್ ಸಂಸ್ಥೆ ಬಂಡವಾಳ ಹೂಡುತ್ತಿದೆ. ದೊಡ್ಡ ಬಜೆಟ್ ನಲ್ಲಿ ಸಿನಿಮಾ ನಿರ್ಮಾಣ ಆಗುತ್ತಿದೆ. ಸೋಮವಾರ (ಏಪ್ರಿಲ್ 8) ಅಲ್ಲು ಅರ್ಜುನ್ ಅವರ ಜನ್ಮದಿನದ ಪ್ರಯುಕ್ತ 'ಪುಷ್ಪ 2' ಚಿತ್ರದ ಟೀಸರ್ ಬಿಡುಗಡೆ ಆಯಿತು. ಆ ಟೀಸರ್ ಚಿತ್ರೀಕರಣದ ವೇಳೆ ಅಲ್ಲು ಅರ್ಜುನ್ ಅವರು 50ಕ್ಕೂ ಹೆಚ್ಚು ಟೇಕ್ ತೆಗೆದುಕೊಂಡಿದ್ದರು ಎಂಬ ವಿಷಯ ಈಗ ಗೊತ್ತಾಗಿದೆ.

ಸಾಮಾನ್ಯವಾಗಿ ಹೊಸ ಕಲಾವಿದರು ಹೆಚ್ಚು ಟೇಕ್ ತೆಗೆದುಕೊಳ್ಳುತ್ತಾರೆ. ಆದರೆ ಅನುಭವಿ ಕಲಾವಿದರು ಒಂದು ಅಥವಾ ಎರಡು ಟೇಕ್ ನಲ್ಲಿ ಬೆಸ್ಟ್ ನಟನೆ ನೀಡುತ್ತಾರೆ. ಅಲ್ಲು ಅರ್ಜುನ್ ಕೂಡ ಟಾಲಿವುಡ್ ನಲ್ಲಿ ಅನುಭವಿ ನಟ. ಹಾಗಿದ್ದರೂ ಕೂಡ ಅವರು 'ಪುಷ್ಪ 2' ಸಿನಿಮಾದ ಟೀಸರ್ ಚಿತ್ರೀಕರಣದ ವೇಳೆ ಬರೋಬ್ಬರಿ 51 ಟೇಕ್ ತೆಗೆದುಕೊಂಡಿದ್ದರು. ಆ ಬಗ್ಗೆ ಮಾಧ್ಯಮಗಳಲ್ಲಿ ವರದಿ ಆಗಿದೆ.

ಮೊದಲೇ ಹೇಳಿದಂತೆ 'ಪುಷ್ಪ 2' ಮೇಲೆ ಜನರಿಗೆ ಇರುವ ನಿರೀಕ್ಷೆ ದೊಡ್ಡದು. ಆ ನಿರೀಕ್ಷೆಗೆ ತಕ್ಕಂತೆ ಸಿನಿಮಾ ಮೂಡಿಬರಬೇಕು ಎಂದರೆ ಎಲ್ಲವೂ ಪರ್ಫೆಕ್ಟ್ ಆಗಿರಬೇಕು. ಟೀಸರ್ ನಲ್ಲಿ ಅಲ್ಲು ಅರ್ಜುನ್ ಅವರು ಸ್ತ್ರೀ ವೇಷ ಧರಿಸಿದ್ದಾರೆ. ಅಲ್ಲದೇ ಮೈ ತುಂಬ ಆಭರಣಗಳನ್ನು ಹಾಕಿಕೊಂಡು ಅವರು ಫೈಟ್ ಮಾಡಿದ್ದಾರೆ. ಜಾತ್ರೆಯ ಈ ಸನ್ನಿವೇಶ ತುಂಬ ಚೆನ್ನಾಗಿ ಬರಬೇಕು ಎಂಬ ಕಾರಣಕ್ಕೆ ಅವರು 51 ಟೇಕ್ ತೆಗೆದುಕೊಂಡರು ಎಂದು ಹೇಳಲಾಗುತ್ತಿದೆ.

'ಪುಷ್ಪ 2' ಸಿನಿಮಾದ ಚಿತ್ರೀಕರಣ ಭರದಿಂದ ಸಾಗುತ್ತಿದೆ. ಆಗಸ್ಟ್ 15ರಂದು ವಿಶ್ವಾದ್ಯಂತ ಈ ಸಿನಿಮಾವನ್ನು ಬಿಡುಗಡೆ ಮಾಡುವ ಗುರಿ ಇಟ್ಟುಕೊಳ್ಳಲಾಗಿದೆ. ಅಲ್ಲು ಅರ್ಜುನ್ ಅವರಿಗೆ ಜೋಡಿಯಾಗಿ ರಶ್ಮಿಕಾ ಮಂದಣ್ಣ ನಟಿಸುತ್ತಿದ್ದಾರೆ. ಅವರ ಜನ್ಮದಿನದ ಪ್ರಯುಕ್ತ ಪೋಸ್ಟರ್ ರಿಲೀಸ್ ಆಗಿ ವೈರಲ್ ಆಯಿತು. ಫಹಾದ್ ಫಾಸಿಲ್ , ಡಾಲಿ ಧನಂಜಯ್ ಅವರು ಕೂಡ ಈ ಸಿನಿಮಾದ ಪಾತ್ರವರ್ಗದಲ್ಲಿದ್ದಾರೆ. ದೇವಿ ಶ್ರೀ ಪ್ರಸಾದ್ ಅವರು ಸಂಗೀತ ನೀಡುತ್ತಿದ್ದಾರೆ. ಸಿನಿಮಾದ ಬಗ್ಗೆ ಹಲವು ಬಗೆಯ ಸುದ್ದಿಗಳು ಹರಿದಾಡುತ್ತಿವೆ. ವಿದೇಶದಲ್ಲೂ 'ಪುಷ್ಪ 2' ಸಿನಿಮಾದ ಪ್ರಚಾರ ಮಾಡಲಾಗುತ್ತಿದೆ.



# ಯಕ್ಷಗಾನದ ವೇಷ ಧರಿಸಿದ ಪ್ರಜ್ವಲ್ ದೇವರಾಜ್



ಅನೇಕ ಸಿನಿಮಾ ತಂಡಗಳು ಯುಗಾದಿ ಹಬ್ಬದ ಪ್ರಯುಕ್ತ ಹೊಸ ಹೊಸ ಪೋಸ್ಟರ್ ಗಳನ್ನು ಬಿಡುಗಡೆ ಮಾಡುತ್ತಿವೆ. 'ಡೈನಾಮಿಕ್ ಪ್ರಿನ್ಸ್' ಪ್ರಜ್ವಲ್ ದೇವರಾಜ್ ಕೂಡ ನೂತನ ಅವತಾರದಲ್ಲಿ ಝಲಕ್ ನೀಡಿದ್ದಾರೆ. 'ಕರಾವಳಿ' ಸಿನಿಮಾದ ಹೊಸ ಪೋಸ್ಟರ್ ನಲ್ಲಿ ಅವರನ್ನು ನೋಡಿದರೆ ಗುರುತು ಹಿಡಿಯಲು ಸಾಧ್ಯವಿಲ್ಲ. ಇದೇ ಮೊದಲ ಬಾರಿ ಪ್ರಜ್ವಲ್ ದೇವರಾಜ್ ಅವರು ಯಕ್ಷಗಾನದ ವೇಷ ಧರಿಸಿದ್ದಾರೆ. 'ಕರಾವಳಿ' ಸಿನಿಮಾ ಚಿತ್ರೀಕರಣ ಪ್ರಗತಿಯಲ್ಲಿದೆ. ಗುರುದತ್ ಗಾಣಿಗ ಅವರ ನಿರ್ದೇಶನದಲ್ಲಿ ಈ ಸಿನಿಮಾ ಮೂಡಿಬರುತ್ತಿದೆ. ಬಿರುಸಿನ ಚಿತ್ರೀಕರಣದ ನಡುವೆ ಪ್ರಜ್ವಲ್ ದೇವರಾಜ್ ಅವರ ಹೊಸ ಲುಕ್ ಅನಾವರಣ ಮಾಡುವ ಮೂಲಕ ಅಭಿಮಾನಿಗಳ ನಿರೀಕ್ಷೆಯನ್ನು ಹೆಚ್ಚು ಮಾಡಲಾಗಿದೆ. ಮಂಗಳೂರಿನ ಸುತ್ತಮುತ್ತ ಈ ಚಿತ್ರದ ಶೂಟಿಂಗ್ ನಡೆಯುತ್ತಿದೆ.

'ಕರಾವಳಿ' ಚಿತ್ರತಂಡದಿಂದ ಈ ಮೊದಲು ಬಿಡುಗಡೆ ಆಗಿದ್ದ ಪೋಸ್ಟರ್ ಗಳು ಕೂಡ ಇದೇ ರೀತಿ ಕೌತುಕ ಮೂಡಿಸಿತ್ತು. ಟೀಸರ್ ಸಹ ಗಮನ ಸೆಳೆದಿತ್ತು. ಈ ಚಿತ್ರದಲ್ಲಿ ಪ್ರಜ್ವಲ್ ದೇವರಾಜ್ ಅವರು ಡಿಫರೆಂಟ್ ಪಾತ್ರದಲ್ಲಿ ಕಾಣಿಸಿಕೊಳ್ಳಲಿದ್ದಾರೆ. ಕಂಬಳದ ಜೊತೆಯಲ್ಲಿ ಯಕ್ಷಗಾನ ಸಹ 'ಕರಾವಳಿ' ಸಿನಿಮಾದ ಹೈಲೈಟ್ ಗಳಲ್ಲಿ ಒಂದಾಗಿರಲಿದೆ ಎಂಬುದು ಈ ಪೋಸ್ಟರ್ ನೋಡಿದರೆ ತಿಳಿಯುತ್ತದೆ.

ಪ್ರಜ್ವಲ್ ದೇವರಾಜ್ ಅವರ ಈ ಲುಕ್ ಹಿಂದೆ ವೃತ್ತಿಪರ ಯಕ್ಷಗಾನ ಕಲಾವಿದರೇ ಇದ್ದಾರೆ. ಯಕ್ಷಗಾನ ಭಾಗವತರಾದ ಪಲ್ಲವ ಗಾಣಿಗ ಅವರು ಈ ಲುಕ್ ವಿನ್ಯಾಸ ಮಾಡಿದ್ದಾರೆ. ಈ ಗೆಟಪ್ ನಲ್ಲಿ ಪ್ರಜ್ವಲ್ ಅವರು ಸಿದ್ಧವಾಗಲು ಅರ್ಧ ದಿನ ಸಮಯ ಹಿಡಿಯಿತು ಎಂದು ಚಿತ್ರತಂಡ ಮಾಹಿತಿ ಹಂಚಿಕೊಂಡಿದೆ. ಮನುಷ್ಯ ಮತ್ತು ಪ್ರಾಣಿಗಳ ಮಧ್ಯದ ಸಂಘರ್ಷದ ಕಥೆಯನ್ನು ಈ ಸಿನಿಮಾ ಹೊಂದಿರಲಿದೆ.

ಗ್ರಾಮೀಣ ಹಿನ್ನೆಲೆಯಲ್ಲಿ 'ಕರಾವಳಿ' ಸಿನಿಮಾದ ಕಥೆ ಸಾಗಲಿದೆ. ಅಭಿಮನ್ಯು ಸದಾನಂದ್ ಅವರು ಛಾಯಾಗ್ರಹಣ ಮಾಡುತ್ತಿದ್ದಾರೆ. ಸಚಿನ್ ಬಸ್ರೂರು ಸಂಗೀತ ನೀಡುತ್ತಿದ್ದಾರೆ. ಮಿತ್ರ, ಜಿ.ಜಿ. ನಿರಂಜನ್, ಟಿವಿ ಶ್ರೀಧರ್ ಮುಂತಾದವರು ಈ ಸಿನಿಮಾದಲ್ಲಿ ಅಭಿನಯಿಸುತ್ತಿದ್ದಾರೆ. ಗುರುದತ್ ಗಾಣಿಗ ಅವರು ನಿರ್ದೇಶನದ ಜೊತೆಗೆ ನಿರ್ಮಾಣ ಕೂಡ ಮಾಡುತ್ತಿದ್ದಾರೆ. 'ಗಾಣಿಗ ಫಿಲ್ಮ್ಸ್' ಹಾಗೂ 'ವಿಕೆ ಫಿಲ್ಮ್' ಜೊತೆಯಾಗಿ ನಿರ್ಮಾಣ ಮಾಡುತ್ತಿವೆ. ಈಗ ಶೇಕಡ 40ರಷ್ಟು ಶೂಟಿಂಗ್ ಮುಕ್ತಾಯ ಆಗಿದೆ. ಯುಗಾದಿ ಹಬ್ಬದ ನಂತರ 2ನೇ ಹಂತದ ಚಿತ್ರೀಕರಣ ನಡೆಯಲಿದೆ.

# ರಣರೋಚಕ ಹೋರಾಟದಲ್ಲಿ ಹೈದರಾಬಾದ್‌ಗೆ ರೋಚಕ ಜಯ



ಇಂಡಿಯನ್ ಪ್ರೀಮಿಯರ್ ಲೀಗ್‌ನ 23ನೇ ಪಂದ್ಯದಲ್ಲಿ ಪಂಜಾಬ್ ಕಿಂಗ್ಸ್ ವಿರುದ್ಧ ಸನ್ ರೈಸರ್ಸ್ ಹೈದರಾಬಾದ್ ಜಯ ಸಾಧಿಸಿದೆ. ಚಂಡೀಗಢದ ಮಹಾರಾಜ ಯದವೀಂದ್ರ ಸ್ಟೇಡಿಯಂನಲ್ಲಿ ನಡೆದ ಈ ಪಂದ್ಯದಲ್ಲಿ ಟಾಸ್ ಗೆದ್ದಿರುವ ಪಂಜಾಬ್ ಕಿಂಗ್ಸ್ ತಂಡದ ನಾಯಕ ಶಿಖರ್ ಧವನ್ ಬೌಲಿಂಗ್ ಆಯ್ದುಕೊಂಡಿದ್ದರು. ಅದರಂತೆ ಮೊದಲು ಬ್ಯಾಟ್ ಮಾಡಿದ ಸನ್ ರೈಸರ್ಸ್ ಹೈದರಾಬಾದ್ ತಂಡ ಉತ್ತಮ ಆರಂಭ ಪಡೆದಿರಲಿಲ್ಲ. ಆರಂಭಿಕರಾದ ಟ್ರಾವಿಸ್ ಹೆಡ್ (21) ಹಾಗೂ ಅಭಿಷೇಕ್ ಶರ್ಮಾ (16) ಬೇಗನೆ ಔಟಾದರು. ಇನ್ನು ಮೂರನೇ ಕ್ರಮಾಂಕದಲ್ಲಿ ಕಣಕ್ಕಿಳಿದ ಐಡೆನ್ ಮಾರ್ಕ್ರಾಮ್ (0) ಶೂನ್ಯಕ್ಕೆ ವಿಕೆಟ್ ಒಪ್ಪಿಸಿದರು. ಈ ಹಂತದಲ್ಲಿ ಕಣಕ್ಕಿಳಿದ ನಿತೀಶ್ ರೆಡ್ಡಿ ಅತ್ಯುತ್ತಮ ಬ್ಯಾಟಿಂಗ್ ಪ್ರದರ್ಶಿಸಿದರು. 37 ಎಸೆತಗಳನ್ನು ಎದುರಿಸಿದ ನಿತೀಶ್ 5 ಭರ್ಜರಿ ಸಿಕ್ಸ್ ಹಾಗೂ 4 ಫೋರ್ ಗಳೊಂದಿಗೆ 64 ರನ್ ಬಾರಿಸಿದರು. ಈ ಅರ್ಧಶತಕದ ನೆರವಿನಿಂದ ಸನ್ ರೈಸರ್ಸ್ ಹೈದರಾಬಾದ್ ತಂಡವು 20 ಓವರ್ ಗಳಲ್ಲಿ 9 ವಿಕೆಟ್ ಕಳೆದುಕೊಂಡು 182 ರನ್ ಕಲೆಹಾಕಿತು.

183 ರನ್ ಗಳ ಸ್ಪರ್ಧಾತ್ಮಕ ಗುರಿ ಪಡೆದ ಪಂಜಾಬ್ ಕಿಂಗ್ಸ್ ಉತ್ತಮ ಆರಂಭ ಪಡೆಯುವಲ್ಲಿ ವಿಫಲವಾಯಿತು. ಆರಂಭಿಕ ಆಟಗಾರ ಜಾನಿ ಬೈರ್ ಸ್ಟೋವ್ (0) ಶೂನ್ಯಕ್ಕೆ ಔಟಾದರೆ, ಆ ಬಳಿಕ ಪ್ರಭ್ ಸಿಮ್ರಾನ್ ಸಿಂಗ್ (4) ಕೂಡ ಬೇಗನೆ ನಿರ್ಗಮಿಸಿದರು. ಇನ್ನು ನಾಯಕ ಶಿಖರ್ ಧವನ್ 14 ರನ್ ಬಾರಿಸಿ ಪೆವಿಲಿಯನ್ ಗೆ ಹಿಂತಿರುಗಿದರು.

ಇದಾಗ್ಯೂ ಮಧ್ಯಮ ಕ್ರಮಾಂಕದಲ್ಲಿ ಕಣಕ್ಕಿಳಿದ ಸ್ಯಾಮ್ ಕರನ್ (29), ಸಿಕಂದರ್ ರಾಝ (28) ಉತ್ತಮ ಕೊಡುಗೆ ನೀಡಿದರು. ಇನ್ನು ಅಂತಿಮ ಹಂತದಲ್ಲಿ ಅಬ್ಬರಿಸಿದ ಶಶಾಂಕ್ ಸಿಂಗ್ ಹಾಗೂ ಅಶುತೋಷ್ ಶರ್ಮಾ ಪಂದ್ಯವನ್ನು ರಣರೋಚಕಘಟ್ಟದತ್ತ ಕೊಂಡೊಯ್ದರು.

ಕೊನೆಯ ಓವರ್ ನಲ್ಲಿ ಪಂಜಾಬ್ ಕಿಂಗ್ಸ್ ತಂಡ 29 ರನ್ ಗಳ ಗುರಿ ಪಡೆದಿತ್ತು. ಜಯದೇವ್ ಉನಾದ್ಕಟ್ ಎಸೆದ ಅಂತಿಮ ಓವರ್ ನ ಮೊದಲ ಎಸೆತದಲ್ಲೇ ಅಶುತೋಷ್ ಸಿಕ್ಸ್ ಬಾರಿಸಿದರು. ಇದಾದ ಬಳಿಕ 2 ವೈಡ್ ಮೂಡಿಬಂತು. ಇನ್ನು 2ನೇ ಎಸೆತದಲ್ಲಿ ಮತ್ತೊಂದು ಸಿಕ್ಸ್ ಸಿಡಿಸಿದರು.

3ನೇ ಮತ್ತು 4ನೇ ಎಸೆತಗಳಲ್ಲಿ ಎರಡೆರಡು ರನ್ ಓಡಿದರು. ಮತ್ತೊಂದು ವೈಡ್. 5ನೇ ಎಸೆತದಲ್ಲಿ 1 ರನ್. ಕೊನೆಯ ಎಸೆತದಲ್ಲಿ 9 ರನ್ ಬೇಕಿದ್ದಾಗ ಶಶಾಂಕ್ ಸಿಂಗ್ ಸಿಕ್ಸ್ ಸಿಡಿಸಿದರು. ಈ ಸಿಕ್ಸ್ ನ ಹೊರತಾಗಿಯೂ ಸನ್ ರೈಸರ್ಸ್ ಹೈದರಾಬಾದ್ ತಂಡವು 2 ರನ್ ಗಳ ರೋಚಕ ಜಯ ಸಾಧಿಸಿತು.

ಈ ರೋಚಕ ಪೈಪೋಟಿಯಲ್ಲಿ ವಿರೋಚಿತ ಹೋರಾಟ ಪ್ರದರ್ಶಿಸಿದ ಶಶಾಂಕ್ ಸಿಂಗ್ 25 ಎಸೆತಗಳಲ್ಲಿ 1 ಸಿಕ್ಸ್, 6 ಫೋರ್ ಗಳೊಂದಿಗೆ ಅಜೇಯ 46 ರನ್ ಬಾರಿಸಿದರೆ, ಅಶುತೋಷ್ ಶರ್ಮಾ 15 ಎಸೆತಗಳಲ್ಲಿ 2 ಸಿಕ್ಸ್ ಹಾಗೂ 3 ಫೋರ್ ಗಳೊಂದಿಗೆ ಅಜೇಯ 33 ರನ್ ಸಿಡಿಸಿ ಮಿಂಚಿದರು.

# ಟಿ20 ವಿಶ್ವಕಪ್ ನಲ್ಲಿ ಕಿಂಗ್ ಕೊಹ್ಲಿ ಕಣಕ್ಕಿಳಿಯುವುದು ಕನ್ಫರ್ಮ್



ಐಪಿಎಲ್ ಸೀಸನ್ 17 ರಲ್ಲಿ ಟಾಪ್ ರನ್ ಸ್ಕೋರರ್ ಆಗಿ ಮಿಂಚುತ್ತಿರುವ ವಿರಾಟ್ ಕೊಹ್ಲಿ (ಗಿಡಿಚಿಣ ಏಞಟ) ಮುಂಬರುವ ಟಿ20 ವಿಶ್ವಕಪ್ ತಂಡದಲ್ಲಿ ಸ್ಥಾನ ಪಡೆಯುವುದು ಖಚಿತವಾಗಿದೆ. ಉತ್ತಮ ಫಾರ್ಮ್ ನಲ್ಲಿರುವ ಕೊಹ್ಲಿಯನ್ನು ವಿಶ್ವಕಪ್ ತಂಡಕ್ಕೆ ಆಯ್ಕೆ ಮಾಡಲು ಬಿಸಿಸಿಐ ನಿರ್ಧರಿಸಿದೆ ಎಂದು ವರದಿಯಾಗಿದೆ.

ಈ ಹಿಂದೆ ಟಿ20 ವಿಶ್ವಕಪ್ ನಿಂದ ಹೊರಗುಳಿಯುವಂತೆ ವಿರಾಟ್ ಕೊಹ್ಲಿಯನ್ನು ಮನವೊಲಿಸಬೇಕೆಂದು ಆಯ್ಕೆ ಸಮಿತಿ ಅಧ್ಯಕ್ಷ ಅಜಿತ್ ಅಗರ್ಕರ್ ಅವರಿಗೆ ಬಿಸಿಸಿಐ ಕಾರ್ಯದರ್ಶಿ ಜಯ್ ಶಾ ಸೂಚಿಸಿದ್ದಾರೆ ಎಂದು ವರದಿಯಾಗಿತ್ತು. ಆದರೆ ಈ ಜವಾಬ್ದಾರಿಯಿಂದ ಅಗರ್ಕರ್ ಹಿಂದೆ ಸರಿದಿದ್ದರು. ಇದಾದ ಬಳಿಕ ರೋಹಿತ್ ಶರ್ಮಾ ಅವರಲ್ಲಿ ಜಯ್ ಶಾ ಈ ವಿಚಾರವನ್ನು ಪ್ರಸ್ತಾಪಿಸಿದ್ದರು ಎಂದು ಮಾಜಿ ಕ್ರಿಕೆಟಿಗ ಕೀರ್ತಿ ಆಝಾದ್ ಬಹಿರಂಗಪಡಿಸಿದ್ದರು.

ಆದರೆ ವಿರಾಟ್ ಕೊಹ್ಲಿ ತಂಡದಲ್ಲಿ ಇರಲೇಬೇಕೆಂದು ರೋಹಿತ್ ಶರ್ಮಾ ಬಿಸಿಸಿಐ ಕಾರ್ಯದರ್ಶಿಗೆ ಖಂಡತುಂಡವಾಗಿ ಹೇಳಿದ್ದಾರೆಂದು ಕೀರ್ತಿ ಆಝಾದ್ ತಿಳಿಸಿದ್ದರು. ಇದಾಗ್ಯೂ ಐಪಿಎಲ್ ನಲ್ಲಿ ವಿರಾಟ್ ಕೊಹ್ಲಿಯ ಪ್ರದರ್ಶನದ ಮೇಲೆ ಬಿಸಿಸಿಐ ಆಯ್ಕೆ ಸಮಿತಿ ಕಣ್ಣಿಟ್ಟಿದ್ದರು.

ಆದರೀಗ ಕೇವಲ 5 ಪಂದ್ಯಗಳ ಮೂಲಕ ವಿರಾಟ್ ಕೊಹ್ಲಿ 316 ರನ್ ಕಲೆಹಾಕಿದ್ದಾರೆ. ಈ ಮೂಲಕ ಈ ಬಾರಿಯ ಐಪಿಎಲ್ ನಲ್ಲಿ ಅತೀ ಹೆಚ್ಚು ರನ್ ಬಾರಿಸಿದ ಬ್ಯಾಟರ್ ಗಳ ಪಟ್ಟಿಯಲ್ಲಿ ಅಗ್ರಸ್ಥಾನದಲ್ಲಿದ್ದಾರೆ. ಇನ್ನುಳಿದ ಪಂದ್ಯಗಳಲ್ಲೂ ಕೊಹ್ಲಿ ಕಡೆಯಿಂದ ಉತ್ತಮ ಬ್ಯಾಟಿಂಗ್ ಅನ್ನು ನಿರೀಕ್ಷಿಸಬಹುದು.

ಹೀಗಾಗಿ ಮುಂಬರುವ ಟಿ20 ವಿಶ್ವಕಪ್ ಗೆ ವಿರಾಟ್ ಕೊಹ್ಲಿಯನ್ನು ಆಯ್ಕೆ ಮಾಡಲೇಬೇಕಾದ ಅನಿವಾರ್ಯತೆ ಬಿಸಿಸಿಐ ಎದುರಾಗಿದೆ. ಏಕೆಂದರೆ ಉತ್ತಮ ಬ್ಯಾಟಿಂಗ್ ಪ್ರದರ್ಶಿಸಿರುವ ಕೊಹ್ಲಿಯನ್ನು ಯಾವುದೇ ಕಾರಣದಿಂದಲೂ ತಂಡದಿಂದ ಕೈ ಬಿಡಲು ಸಾಧ್ಯವಾಗುವುದಿಲ್ಲ. ಹೀಗಾಗಿ ಅವರು ಟಿ20 ವಿಶ್ವಕಪ್ ಗೆ ಆಯ್ಕೆಯಾಗುವುದು ಖಚಿತ ಎಂದು ಬಿಸಿಸಿಐ ಮೂಲಗಳು ತಿಳಿಸಿವೆ ಎಂದು ಕ್ರಿಕ್ ಬಝ್ ವರದಿ ಮಾಡಿದೆ.

# ಬರಡಾಗುತ್ತಿರೋ ಕಾವೇರಿ ಒಡಲು, ಜನರಲ್ಲಿ ಆತಂಕ



**ಕೊಡಗು:** ನಾಡಿನ ಜೀವನದಿ ಕಾವೇರಿ ನಿರ್ಜೀವವಾಗಿದೆ. ಕೊಡಗು ಜಿಲ್ಲೆಯಲ್ಲಿ ತನ್ನ ಹರಿಯುವಿಕೆಯನ್ನೇ ನಿಲ್ಲಿಸಿದೆ. ಸಂಪೂರ್ಣ ಬತ್ತಿ ಬರಡಾಗಿರೋ ಕಾವೇರಿ ಒಡಲು ಮುಂದಿನ ದಿನಗಳಲ್ಲಿ ಮತ್ತಷ್ಟು ಭೀಕರ ಬರಗಾಲದ ಮುನ್ಸೂಚನೆ ನೀಡಿದೆ. ಕಾವೇರಿ ಬರಗಾಲದ ಬೆಂಗಾಡಲ್ಲಿ ಬೆಂದು ಅಕ್ಷರಶಃ ಬರಡಾಗಿ ಕುಳಿತಿದೆ. ಏಪ್ರಿಲ್, ಮೇ ತಿಂಗಳಲ್ಲಿ ಸಾಕಷ್ಟು ಸಮೃದ್ಧವಾಗಿಯೇ ಹರಿಯುತ್ತಿದ್ದ ಕಾವೇರಿ. ಈ ವರ್ಷ ನೀರೇ ಇಲ್ಲ. ಅಂತರ್ಜಲ ಕುಸಿತದ ಪರಿಣಾಮ ಕಾವೇರಿ ಹರಿಯುವಿಕೆ ನಿಂತು ಹೋಗಿದೆ. ಈ ನದಿಗೆ ಇದುವರೆಗೂ ಇಂತಹ ಸ್ಥಿತಿ ಬಂದಿರಲಿಲ್ಲ ಎನ್ನುತ್ತಾರೆ ಸ್ಥಳೀಯರು.

ಏಪ್ರಿಲ್, ಮೇ ತಿಂಗಳಲ್ಲಿ ನಿರಿನ ಹರಿವು ಕಡಿಯಾದಾಗ ಮೊಣಕಾಲುದ್ದದ ನೀರಿನಲ್ಲಿ ಜನರು ನಡೆದು ನದಿ ದಾಟುತ್ತಿದ್ದರು. ನದಿಯಲ್ಲಿ ಮಿಂದೆದ್ದು ಖುಷಿ ಪಡ್ತಾ ಇದ್ದರು. ಆದರೆ ಈ ವರ್ಷ ಮಾತ್ರ ನದಿಯಲ್ಲಿ ನೀರಿನ ಹರಿವು ಸಂಪೂರ್ಣ ನಿಂತು ಹೋಗಿದೆ. ಕೆಲವು ಕಡೆ ತಗ್ಗು ಪ್ರದೇಶಗಳಲ್ಲಿ ಮಾತ್ರ ನೀರು ನಿಂತಿದೆ. ಕುಶಾಲನಗರ ತಾಲ್ಲೂಕಿನ ರಂಗ ಸಮುದ್ರ, ತೆಪ್ಪದ ಕಂಡಿ, ದುಬಾರೆ ವ್ಯಾಪ್ತಿಯಲ್ಲಿ ಕಾವೇರಿ ಸ್ತಬ್ಧವಾಗಿದೆ.

ಈಗಿನ್ನೂ ಏಪ್ರಿಲ್ ತಿಂಗಳ ಮೊದಲವಾರ. ಈಗಲೇ ನದಿ ನೀರು ಸಂಪೂರ್ಣ ಬತ್ತಿಹೋಗಿದೆ. ಇನ್ನು ಮೇ ಅಂತ್ಯದವೇಳೆ ಸ್ಥಿತಿ ಏನು ಎಂಬುದು ಎಲ್ಲರ ಆತಂಕ. ಕಳೆದ ವರ್ಷ ಜಿಲ್ಲೆಯಲ್ಲಿ ಶೇಕಡಾ 60 ರಷ್ಟು ಮಳೆ ಕೊರತೆಯಾಗಿತ್ತು. ಹಾಗಾಗಿ ಅಂತರ್ಜಲ ಎಲ್ಲಿಯೂ ವೃದ್ಧಿಯಾಗಲಿಲ್ಲ. ಪರಿಣಾಮ ಬೇಸಗೆಗೆ ಮೊದಲೆ ಸಣ್ಣಪುಟ್ಟ ನದಿ ತೊರೆಗಳು, ನೀರಿನ ಸೆಲೆಗಳು ಬತ್ತಿಬಹೋದವು. ಅಲ್ಲದೆ ಸಾಮಾನ್ಯವಾಗಿ ಜನವರಿಯಿಂದ ಮೇ ವರೆಗೆ ಬೇಸಗೆಯಲ್ಲೂ ಒಂದಷ್ಟು ಮಳೆಯಾಗುತ್ತದೆ.

ಹಾಗಾಗಿ ನದಿಗಳು ಬತ್ತುವುದಿಲ್ಲ. ಆದರೆ ಈ ಬಾರಿ ಗಾಯದ ಮೇಲೆ ಬರೆ ಎಳೆದಂತೆ ಜನವರಿಯಿಂದ ಇದುವರೆಗೂ ಜಿಲ್ಲೆಯ ಬಹುತೇಕ ಕಡೆ ಮಳೆಯೇ ಆಗಿಲ್ಲ. ಹಾಗಾಗಿ ಕಾವೇರಿಯ ನೀರಿನ ಮೂಲಗಳಾದ ಸಣ್ಣಪುಟ್ಟ ನದಿತೊರೆಗಳು ನೀರಿನ ಸೆಲೆಗಳು ಬತ್ತಿಹೋದವು. ಇದರಿಂದಾಗಿಯೇ ಇಂದು ಕಾವೇರಿ ಈ ಸ್ಥಿತಿಗೆ ತಲುಪಿದೆ.

ಕಾವೇರಿ ನದಿ ಬತ್ತಿ ಹೋಗಿರುವುದರಿಂದ ನದಿಯನ್ನೇ ಅವಲಂಭಿಸಿರುವ ಕಾಫಿ ಕೃಷಿಕರು ಇತರ ರೈತರು ಇದೀಗ ಕಂಗಾಲಾಗಿದ್ದಾರೆ. ಈಗ ನೀರಿಲ್ಲದೇ ಇರುವುದರಿಂದ ಮುಂದಿನ ವರ್ಷ ಕಾಫಿ ಬೆಳೆ ಕೈಗೇ ಸಿಗುವುದಿಲ್ಲ. ಏಪ್ರಿಲ್ ತಿಂಗಳ ಆರಂಭದಲ್ಲೇ ಜೀವನ ಈ ಸ್ಥಿತಿಗೆ ತಲುಪಿದರೆ ಇನ್ನು ಏಪ್ರಿಲ್ ಅಂತ್ಯದವೇಳೆಗೆ ಸ್ಥಿತಿ ಏನಾಗಬಹುದು ಎಂಬುದು ಆತಂಕಕಾರಿಯಾಗಿದೆ. ಕಾವೇರಿ ಸಂಪೂರ್ಣ ಬತ್ತಿ ಹೋಗಿ ದುಬಾರೆ ಶಿಬಿರದ ಆನೆಗಳಿಗೆ ಒಂದು ಹನಿ ನೀರೂ ಇಲ್ಲದಾಗುವ ಪರಿಸ್ಥಿತಿ ಬರುವ ಆತಂಕ ಎದುರಾಗಿದೆ.

# ಜಾತಿ, ಧರ್ಮ ಬದಿಗೊತ್ತಿ ಬೇವು ಬೆಲ್ಲ ಸವಿದ ಗ್ರಾಮಸ್ಥರು



**ಯಾದಗಿರಿ:** ನಾಡಿನಾದ್ಯಂತ ಯುಗಾದಿ ಹಬ್ಬವನ್ನ ಅತ್ಯಂತ ಸಂಭ್ರಮದಿಂದ ಆಚರಿಸಲಾಗಿದೆ. ಯುಗಾದಿ ಹಬ್ಬವನ್ನ ಹಿಂದೂ ಧರ್ಮದ ಪ್ರಕಾರ ಹೊಸ ವರ್ಷ ಆರಂಭವಾಗುತ್ತೆ. ಇದೆ ಯುಗಾದಿ ಹಬ್ಬವನ್ನ ಆ ಪಟ್ಟಣದಲ್ಲಿ ವಿಶಿಷ್ಟ ರೀತಿಯಲ್ಲಿ ಆಚರಿಸಲಾಗುತ್ತೆ. ಹಿಂದೂ ಧರ್ಮದ ಹಬ್ಬವನ್ನ ಮುಸ್ಲಿಂರು ಸಹ ಆಚರಿಸುತ್ತಾರೆ. ಹಿಂದೂ-ಮುಸ್ಲಿಮರು ಸೇರಿ ಬೇವು ಬೆಲ್ಲವನ್ನ ಸವಿಯುವ ಮೂಲಕ ಸೌಹಾರ್ದತೆಯ ಸಂದೇಶವನ್ನ ಸಾರಲಾಗಿದೆ.

ನಾಡಿನಾದ್ಯಂತ ಇವತ್ತು ಅತ್ಯಂತ ಸಂಭ್ರಮ ಮತ್ತು ಸಡಗರದಿಂದ ಯುಗಾದಿ ಹಬ್ಬವನ್ನ ಆಚರಿಸಲಾಗಿದೆ. ಹಿಂದೂ ಧರ್ಮದ ಪ್ರಕಾರ ಇವತ್ತಿನಿಂದ ಹೊಸ ವರ್ಷ ಆರಂಭವಾಗುತ್ತೆ ಅಂತ ಹೇಳಲಾಗುತ್ತೆ. ಈ ಹಬ್ಬವನ್ನ ಹಿಂದೂಗಳು ಅತ್ಯಂತ ಸಂಭ್ರಮದಿಂದ ಆಚರಿಸುತ್ತಾರೆ. ಹೊಸ ಬಟ್ಟೆಗಳನ್ನ ತೊಟ್ಟು ಸಂಬಂಧಿಕರ ಮನೆಗಳಿಗೆ ಹೋಗಿ ಬೇವು ಬೆಲ್ಲವನ್ನ ಸವಿಯುತ್ತ ಸಂಬಂಧವನ್ನ ಗಟ್ಟಿಗೊಳಿಸುವ ಕೆಲಸ ಮಾಡುತ್ತಾರೆ. ಆದರೆ ಯಾದಗಿರಿ ಜಿಲ್ಲೆಯ ವಡಗೇರ ಪಟ್ಟಣದಲ್ಲಿ ಮಾತ್ರ ಈ ಹಬ್ಬ ವಿಶಿಷ್ಟ ರೀತಿಯಲ್ಲಿ ಆಚರಿಸಲಾಗುತ್ತೆ.

ಹಿಂದೂ ಧರ್ಮದ ಹಬ್ಬವಾದ ಯುಗಾದಿಯನ್ನ ಮುಸ್ಲಿಂರು ಕೂಡ ಆಚರಿಸುತ್ತಾರೆ. ಪಟ್ಟಣದ ಆಂಜನೇಯ ದೇವಸ್ಥಾನದಲ್ಲಿ ಪ್ರತಿ ವರ್ಷದಂತೆ ಈ ವರ್ಷವೂ ಕೂಡ ಯುವಕರ ಬಳಗದಿಂದ ಯುಗಾದಿ ಹಬ್ಬವನ್ನ ಆಚರಿಸಲಾಯ್ತು. ವಿಶೇಷ ಅಂದರೆ ಈ ಯುವಕರ ಬಳಗದಲ್ಲಿ ಹಿಂದೂ ಮತ್ತು ಮುಸ್ಲಿಂ ಸಮುದಾಯದ ಯುವಕರಿದ್ದಾರೆ. ಹೀಗಾಗಿ ಬೆಳಗ್ಗೆ ಎದ್ದು ಯುವಕರ ತಂಡ ಹಣವನ್ನ ಸಂಗ್ರಹ ಮಾಡಿ ಬೇವು ಬೆಲ್ಲವನ್ನ ತಯಾರಿಸಲು ಬೇಕಾದ ವಸ್ತುಗಳನ್ನ ಖರೀದಿ ಮಾಡುತ್ತಾರೆ. ಉದಾಹರಣೆಗೆ ಹಣ್ಣು, ಮಡಕೆ ಸೇರಿದಂತೆ ಬೇವು ಬೆಲ್ಲ ಮಾಡಲು ಬೇಕಾದ ವಸ್ತುಗಳನ್ನ ಖರೀದಿ ಮಾಡಿಕೊಂಡು ಬಂದು ಆಂಜನೇಯ ದೇವಸ್ಥಾನದಲ್ಲಿ ಸೇರುತ್ತಾರೆ. ಇಲ್ಲಿಗೆ ಬಂದು ಎಲ್ಲರೂ ಒಂದೆ ಕಡೆ ಕುಳಿತುಕೊಂಡು ಬೇವು ಬೆಲ್ಲವನ್ನ ತಯಾರಿಸುತ್ತಾರೆ.

ಇನ್ನು ಹಿಂದೂ-ಮುಸ್ಲಿಂ ಯುವಕರು ಸೇರಿ ಬೇವು ಬೆಲ್ಲವನ್ನ ಸಿದ್ದ ಪಡಿಸುತ್ತಾರೆ. ಬಳಿಕ ಗ್ರಾಮದ ಸರ್ವ ಧರ್ಮದವರನ್ನ ಆಹ್ವಾನ ನೀಡುತ್ತಾರೆ. ಜಾತಿ ಧರ್ಮವನ್ನ ಬದಿಗೊತ್ತಿ ಯುವಕರು ಮತ್ತು ಹಿರಿಯರು ಸೇರುತ್ತಾರೆ. ಬಳಿಕ ಮಡಿಕೆಯಲ್ಲಿ ಸಿದ್ದ ಪಡಿಸಿದ ಬೇವು ಬೆಲ್ಲವನ್ನ ಹಿಂದೂ ಧರ್ಮದವರು ಮುಸ್ಲಿಂ ಧರ್ಮದವರಿಗೆ ಕುಡಿಸಿದ್ರೆ, ಮುಸ್ಲಿಂ ಧರ್ಮವರು ಹಿಂದೂ ಧರ್ಮದವರಿಗೆ ಕುಡಿಸಿ ಭಾವೈಕ್ಯತೆಯನ್ನ ಸಾರುತ್ತಾರೆ. ಇದಕ್ಕೂ ಮೊದಲು ಇದೆ ದೇವಸ್ಥಾನದಲ್ಲಿ ಸೇರುವ ಪ್ರತಿಯೊಬ್ಬರು ಎಲ್ಲರೂ ಒಂದಾಗಿರಬೇಕು ಎನ್ನುವ ಸಂದೇಶ ಸಾರುವ ಮಾತುಗಳನ್ನ ಆಡುತ್ತಾರೆ.

ಯಾವುದೇ ಕಾರಣಕ್ಕೂ ಬರುವ ಯುಗಾದಿ ತನಕ ಯಾರು ಕೂಡ ಜಾತಿ, ಧರ್ಮ ಅಂತ ಕಚ್ಚಾಡದೆ ಹೀಗೆ ಒಂದೆ ತಾಯಿ ಮಕ್ಕಳಂತೆ ಇರಬೇಕು ಎನ್ನುವ ಸಂದೇಶ ಸಾರುವ ಮಾತುಗಳನ್ನ ಎರಡು ಧರ್ಮದ ಹಿರಿಯ ಕಡೆ ಬರುತ್ತವೆ. ಇದಾದ ಬಳಿಕ ಪ್ರತಿಯೊಬ್ಬರು ಬೇವು ಬೆಲ್ಲವನ್ನ ಸವಿಯುತ್ತಾರೆ. ಮುಸ್ಲಿಂ ನಮಾಜ್ ಟೈಮ್ ಆದ್ರು, ದೇವಸ್ಥಾನಕ್ಕೆ ಬಂದು ಬೇವು ಬೆಲ್ಲವನ್ನ ಸವಿದು ಮುಂದಿನ ಕೆಲಸವನ್ನ ಮಾಡುತ್ತಾರೆ. ಇನ್ನು ಈ ಗ್ರಾಮದಲ್ಲಿ ಕಳೆದ ಕೆಲ ವರ್ಷಗಳಿಂದ ಈ ಪದ್ದತಿ ನಡೆದುಕೊಂಡು ಬಂದಿದೆ. ಇನ್ನು ಮುಸ್ಲಿಂ ಧರ್ಮದ ಯಾವುದೇ ಹಬ್ಬಗಳು ಬಂದ್ರೆ ಇಡೀ ಪಟ್ಟಣದ ಜನ ಅತ್ಯಂತ ಸಂಭ್ರಮದಿಂದ ಆಚರಿಸುತ್ತಾರೆ. ಕೋಮು ಗಲಭೆ, ಜಾತಿ ಧರ್ಮಗಳ ನಡುವೆ ಜಗಳಕ್ಕೆ ನಾವು ಯಾವತ್ತೂ ಆಸ್ಪದ ಕೊಡಲ್ಲ ಅಂತಾರೆ.

ಜಾತಿ, ಧರ್ಮಗಳ ನಡುವೆ ಸಣ್ಣ ಸಣ್ಣ ಕಾರಣಕ್ಕೆ ಕೋಮು ಗಲಭೆಗಳು ನಡೆಯುವಂತ ಕಾಲದಲ್ಲೂ ನಾವೆಲ್ಲ ಒಂದೆ ಎನ್ನುವ ಸಂದೇಶವನ್ನ ವಡಗೇರ ಪಟ್ಟಣದ ಜನ ತೋರಿಸುತ್ತಿದ್ದಾರೆ. ಈ ಪಟ್ಟಣದ ಜನ ಯಾವತ್ತಿಗೂ ಹೀಗೆ ಒಂದೆ ತಾಯಿಯ ಮಕ್ಕಳಂತೆ ಸೌಹಾರ್ದತೆಯಿಂದ ಬಾಳಲಿ ಎನ್ನುವುದೆ ನಮ್ಮ ಆಶಯವಾಗಿದೆ.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com